ಸಂಪುಟ: 04 ಸಂಚಿಕೆ: 42 ಪುಟಗಳು: 08 ಶುಕ್ರವಾರ 26 ಏಪ್ರಿಲ್ 2024
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**
ಯಾವುದೇ ಯಶಸ್ಸು ಅಂತಿಮವಲ್ಲ. ಸೋಲು ಕೊನೆಯಲ್ಲ, ಇವೆರಡನ್ನೂ ಸರಿದೂಗಿಸಿಕೊಂಡು ಸಾಗುವ ಧೈರ್ಯವೇ ಬದುಕು

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ದಲಿತರ ಮೀಸಲಾತಿ ಕಿತ್ತು ಮುಸ್ಲಿಮರಿಗೆ ಕೊಡಲು ಹೊರಟಿರುವ ಕಾಂಗ್ರೆಸ್

• ಉದಯವಾಹಿನಿ, ಹುಬ್ಬಳ್ಳಿ

ಅಹಿಂದ, ದಲಿತ ಪರ ಎನ್ನುವ ಕಾಂಗ್ರೆಸ್ ಸರ್ಕಾರ ಈಗ ಒಬಿಸಿಯಲ್ಲಿ ದಲಿತರಿಗಿದ್ದ ಮೀಸಲಾತಿ ಕಿತ್ತುಕೊಂಡು ಮುಸ್ಲಿಮರಿಗೆ ಕೊಡಲು ಹೊರಟಿದೆ' ಎಂದು ಧಾರವಾಡ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಪ್ರಲ್ಹಾದ ಜೋಶಿ ಆರೋಪಿಸಿದರು. ನಗರದಲ್ಲಿ ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಮುಸ್ಲಿಮರ ಓಲೈಕೆಗಾಗಿ ದಲಿತರಿಗೆ ಅನ್ಯಾಯ ಮಾಡುತ್ತಿದ್ದಾರೆ. ಅಂಬೇಡ್ಕರ್, ಬಾಬು ಜಗಜೀವನ ರಾಮ್ ಅವರಿಗೆ ಅವಮಾನ ಮಾಡಿದ್ದು, ಅವಕಾಶವಾದಿ ರಾಜಕಾರಣ ಮಾಡುತ್ತಿದೆ ಎಂದು ಹೇಳಿದರು.

**ಕರ್ನಾಟಕಕ್ಕೆ ವಸೂಲಿಗೆ ಬರ್ತಾರೆ:** ಕಾಂಗ್ರೆಸ್ ನಾಯಕರು ಕರ್ನಾಟಕಕ್ಕೆ ವಸೂಲಿಗೆ ಬರುತ್ತಾರೆ. ಪ್ರಧಾನಿ ಮೋದಿ ಅವರ ಬಗ್ಗೆ, ಬಿಜೆಪಿ ಬಗ್ಗೆ ಮಾತನಾಡುವ ಯೋಗ್ಯತೆ ಇವರಿಗಿಲ್ಲ ಎಂದು ಜೋಶಿ ತಿರುಗೇಟು ನೀಡಿದರು. ಕರ್ನಾಟಕ, ತೆಲಂಗಾಣದಲ್ಲಿ ಮಾತ್ರ ಕಾಂಗ್ರೆಸ್ ಅಧಿಕಾರದಲ್ಲಿದ್ದು, ಹಿಮಾಚಲ ಪ್ರದೇಶದಲ್ಲಿ ಅವರ ಸರ್ಕಾರ ತೇಲಾಡುತ್ತಿದೆ. ದೇಶದ ಜನ ಕಾಂಗ್ರೆಸ್ಸಿಗರ ಡಬಲ್ ಸ್ಟ್ಯಾಂಡ್ ಅನ್ನು ನೋಡಿಬಿಟ್ಟಿದ್ದಾರೆ. ಹಾಗಾಗಿ ಈ ಸ್ಥಿತಿಗೆ ತಂದಿದ್ದಾರೆ ಎಂದು ಲೇವಡಿ ಮಾಡಿದರು.

## ಲೋಕಸಭೆ ಚುನಾವಣೆ 28 ಕ್ಷೇತ್ರಗಳಲಿ ಗೆಲ್ಲಲು ಪ್ರಯತ್ನ

• ಉದಯವಾಹಿನಿ, ಬೀದರ್

ವಾತಾವರಣ ನಮಗೆ ಪೂರಕವಾಗಿದೆ. ನೂರಕ್ಕೆ ನೂರು 28 ಕ್ಷೇತ್ರಗಳಲ್ಲಿ ಗೆಲ್ಲಲು ಪ್ರಯತ್ನ ಮಾಡುತ್ತಿದ್ದೇವೆ' ಎಂದು ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್. ಯಡಿಯೂರಪ್ಪ ಹೇಳಿದರು. ಜಿಲ್ಲೆಯ ಔರಾದ್‌ನಲ್ಲಿ ಏರ್ಪಡಿಸಿರುವ ಬಿಜೆಪಿ ಬಹಿರಂಗ ಪ್ರಚಾರ ಸಭೆಯಲ್ಲಿ ಪಾಲ್ಗೊಳ್ಳಲು ನಗರದ ವಿಮಾನ ನಿಲ್ದಾಣಕ್ಕೆ ವಿಶೇಷ ವಿಮಾನದಲ್ಲಿ ಗುರುವಾರ ಬಂದಿಳಿದ ಅವರು ಅಲ್ಲಿಗೆ ತೆರಳುವುದಕ್ಕೂ ಮುನ್ನ ಪತ್ರಕರ್ತರೊಂದಿಗೆ ಮಾತನಾಡಿದರು. ಎಲ್ಲಿಯೇ ಹೋದರೂ ಮೋದಿ ಮೋದಿ ಎಂಬ ಮಾತುಗಳು ಕೇಳಿ ಬರುತ್ತಿವೆ. ಕೇಂದ್ರ ಸಚಿವ ಭಗವಂತ ಖೂಬಾ ಕೂಡ ಎರಡೂವರೆ ಲಕ್ಷ ಮತಗಳ ಅಂತರದಿಂದ ಗೆದ್ದೇ ಗೆಲ್ಲುತ್ತಾರೆ ಎಂಬ ಭರವಸೆ ಇದೆ ಎಂದರು.

ಮೋದಿ ಮಹಾ ಸುಳ್ಳುಗಾರ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ ಎಂದು ಸುದ್ದಿಗಾರರು ಗಮನ ಸೆಳೆದಾಗ, ಅವರು ಏನು ಬೇಕಾದರೂ ಮಾತಾಡಲಿ ಅದಕ್ಕೆ ನಾನು ಉತ್ತರ ಕೊಡೊಲ್ಲ ಎಂದು ಹೇಳಿ ಹೊರಟರು. ಇತ್ತೀಚೆಗೆ ನಿಧನರಾದ ಬಿಜೆಪಿಯ ಮಾಜಿಶಾಸಕ ರಮೇಶಕುಮಾರ ಪಾಂಡೆ ಅವರ ಮನೆಗೆ ಯಡಿಯೂರಪ್ಪ ಭೇಟಿ ನೀಡಿದರು. ಕುಟುಂಬ ಸದಸ್ಯರಿಗೆ ಸಾಂತ್ವನ ಹೇಳಿದರು.

## ಯಾರ್ಯಾರೋ ಬರ್ತಾರೆ, ಬೆಡ್ ರೂಂ ವಿಡಿಯೋ ಮಾಡ್ತಾರೆ

• ಉದಯವಾಹಿನಿ, ಹುಬ್ಬಳ್ಳಿ

ವಿದ್ಯಾರ್ಥಿ ನೇಹಾ ಹತ್ಯೆ ಬಳಿಕ ಕುಟುಂಬದಲ್ಲಿ ಭಯದ ವಾತಾವರಣ ನಿರ್ಮಾಣವಾಗಿದ್ದು, ತಮಗೆ ರಕ್ಷಣೆ ಬೇಕು ಎಂದು ಕೊಲೆಯಾದ ನೇಹಾ ತಂದೆ ನಿರಂಜನ್ ಹಿರೇಮಠ ಆತಂಕ ವ್ಯಕ್ತಪಡಿಸಿದ್ದಾರೆ. ಮಾಧ್ಯಮದವರೊಂದಿಗೆ ಮಾತನಾಡಿದ ಅವರು , ಮಗಳು ಸಾವನ್ನಪ್ಪಿದ 5ನೇ ದಿನ ಸಂತಾಪ ಸೂಚಿಸುವ ನೆಪದಲ್ಲಿ ಬಂದ ಒಬ್ಬರು ಮನೆಯ ಬೆಡ್‌ರೂಂ ವಿಡಿಯೋ ಮಾಡಿಕೊಂಡು ಹೋಗಿದ್ದಾರೆ. ಯಾರು ಅಂತ ಕೇಳಿದರೆ ಯಾರದ್ದೋ ಜೊತೆ ಬಂದಿದ್ದಾಗಿ ಹೇಳುತ್ತಾರೆ. ಕೆಲವು ಅನುಮಾನಾಸ್ಪದ ವ್ಯಕ್ತಿಗಳು ನಮ್ಮ ಮನೆಯ ಸುತ್ತ ಓಡಾಡುತ್ತಿದ್ದಾರೆ , ಕೊಲೆಗೂ ಮುನ್ನ ಫಯಾಜ್ ಬಿಡ್ನಾಳದಲ್ಲಿ ಓಡಾಡುತ್ತಿದ್ದ ಎಂದು ಅಲ್ಲಿಯವರು ಮಾಹಿತಿ ನೀಡಿದ್ದಾರೆ' ಎಂದು ಕಾರ್ಪೊರೇಟರ್ ನಿರಂಜನ್ ಹಿರೇಮಠ ಮಾಹಿತಿ ನೀಡಿದ್ದಾರೆ. ಈ ಬಗ್ಗೆ ನಿರಂಜನ್ ಅವರು ಪೊಲೀಸರಿಗೆ ಮಾಹಿತಿ ನೀಡಿದ್ದು ಸದ್ಯ ಅವರ ಮನೆಗೆ ಬಿಗಿ ಭದ್ರತೆ ಒದಗಿಸಲಾಗಿದೆ. ಸಿಐಡಿ ಅಧಿಕಾರಿಗಳ ಭೇಟಿ ಬಗ್ಗೆ ಮಾತನಾಡಿದ ಅವರು ನಮ್ಮಿಂದ ಕೆಲವು ಮಾಹಿತಿ ಪಡೆದಿದ್ದು ಎಲ್ಲಾ ಆಯಾಮಗಳಲ್ಲಿ ತನಿಖೆ ನಡೆಸುತ್ತಿದ್ದಾರೆ ಸದ್ಯ ಯಾವ ಮಾಹಿತಿಯನ್ನೂ ಹೇಳದಂತೆ ಸೂಚನೆ ನೀಡಿದ್ದಾರೆ ಎಂದು ನಿರಂಜನ್ ಹೇಳಿದ್ದಾರೆ.

## ಕರ್ನಾಟಕಕ್ಕೆ ವಸೂಲಿಗೆ ಬಂದಿದ್ದ ರಣದೀಪ್ ಸುರ್ಜೇವಾಲ: ಜೋಶಿ

• ಉದಯವಾಹಿನಿ, ಧಾರವಾಡ

ಕರ್ನಾಟಕಕ್ಕೆ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲ ಅವರು ಭೇಟಿ ನೀಡಿದ್ದರು. ಭೇಟಿ ಬಗ್ಗೆ ಪ್ರತಿಕ್ರಿಯಿಸಿರುವ ಧಾರವಾಡದ ಬಿಜೆಪಿ ಅಭ್ಯರ್ಥಿ ಪ್ರಹ್ಲಾದ್ ಜೋಶಿಯವರು ವಸೂಲಿ ಆರೋಪ ಮಾಡಿದ್ದಾರೆ. ಇತ್ತೀಚೆಗೆ ಕರ್ನಾಟಕಕ್ಕೆ ರಣದೀಪ್ ಸುರ್ಜೆವಾಲಾ ಅವರು ಬಂದು ಹೋಗಿದ್ದರು. ಹುಬ್ಬಳ್ಳಿಯಲ್ಲಿ ಕೊಲೆಯಾದ ನೇಹಾ ಹಿರೇಮಠ ಅವರ ನಿವಾಸಕ್ಕೆ ಭೇಟಿಯಾಗಿ ಬಿಜೆಪಿ ವಿರುದ್ಧ ಗುಡುಗಿದ್ದರು. ಮಗಳ ಕಳೆದುಕೊಂಡ ನಿರಂಜನ್ ಹಿರೇಮಠ ಕುಟುಂಬಕ್ಕೆ ಸಾಂತ್ವನ ಹೇಳಿದ್ದರು.

# ಮತದಾನ ರಹಸ್ಯ ಚುನಾವಣಾ ಸ್ವಾರಸ್ಯ

- ಇಂದೇ ಮತದಾನ
- ನನ್ನೊಳಿತಿಗಾಗಿ ವೋಟು ಹಾಕಿ
- ಮತದಾನಕ್ಕೆ ಸಜ್ಜಾಯ್ತು ಬೆಂಗಳೂರು
- ಇಂದು ತಪ್ಪದೇ ವೋಟ್ ಮಾಡಿ



**247** ಮಂದಿ ಕಣದಲ್ಲಿ

**8984** ಒಟ್ಟು ಮತಗಟ್ಟೆಗಳ ಸ್ಥಾಪನೆ

1 ರಾಜ್ಯದ 14 ಕ್ಷೇತ್ರಗಳಿಗೆ ಇಂದು ನಡೆಯಲಿರುವ ಲೋಕಸಭೆ ಚುನಾವಣೆಗೆ ಅಂತಿಮ ಹಂತದ ಸಿದ್ಧತೆ

2 ಮಸ್ಟರಿಂಗ್ ಕೇಂದ್ರಗಳಲ್ಲಿ ಮತಯಂತ್ರ ಪಡೆದುಕೊಂಡು ನಿಗದಿಪಡಿಸಿದ ಮತಗಟ್ಟೆಗಳಿಗೆ ತೆರಳುತ್ತಿರುವ ಸಿಬ್ಬಂದಿ

3 ರಾಜ್ಯದಲ್ಲಿ ಒಟ್ಟು 1.4 ಲಕ್ಷ ಸಿಬ್ಬಂದಿ, ಭದ್ರತೆಗಾಗಿ 50 ಸಾವಿರಕ್ಕೂ ಅಧಿಕ ಪೊಲೀಸರ ನಿಯೋಜನೆ

4 ಕಳೆದ ಸಾರ್ವತ್ರಿಕ ಚುನಾವಣೆಯೂ ಎರಡು ಹಂತದಲ್ಲಿ ನಡೆದಿತ್ತು

5 ಬೆಂಗಳೂರು ನಗರ ವ್ಯಾಪ್ತಿಯ ಮೂರು ಕ್ಷೇತ್ರಗಳಲ್ಲಿ ನೀರಸ ಮತದಾನ, ಮಂಡ್ಯದಲ್ಲಿ ಅತಿಹೆಚ್ಚು ಮತದಾನ



• ಉದಯವಾಹಿನಿ, ಬೆಂಗಳೂರು

ರಾಜ್ಯದ 14 ಲೋಕಸಭಾ ಕ್ಷೇತ್ರಗಳಿಗೆ ಮೊದಲ ಹಂತದ ಮತದಾನ ಇಂದು ನಡೆಯಲಿದ್ದು, ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆಗೆ ಚುನಾವಣಾ ಆಯೋಗ ಸರ್ವ ಸಿದ್ಧತೆ ಮಾಡಿಕೊಂಡಿದ್ದು, ಶಾಂತಿಯುತ ಮತದಾನಕ್ಕೆ ಎಲ್ಲಾ ವ್ಯವಸ್ಥೆಗಳನ್ನು ಮಾಡಲಾಗಿದೆ. ಇಂದು ನಡೆಯಲಿರುವ ಚುನಾವಣೆಯಲ್ಲಿ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ, ಮೈಸೂರು ರಾಜವಂಶಸ್ಥ ಯದುವೀರ ದತ್ತ ಒಡೆಯರ್, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಹೋದರ ಡಿ.ಕೆ. ಸುರೇಶ್, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಸೇರಿದಂತೆ ಒಟ್ಟು 14 ಕ್ಷೇತ್ರಗಳಲ್ಲಿ 247 ಮಂದಿ ಅಭ್ಯರ್ಥಿಗಳು ಕಣದಲ್ಲಿದ್ದು, ಇವರುಗಳ ರಾಜಕೀಯ ಭವಿಷ್ಯಕ್ಕೆ ಮತದಾರರು ನಾಳೆ ಮುದ್ರೆ ಒತ್ತಲಿದ್ದಾರೆ. ಇಂದು ನಡೆಯಲಿರುವ ಮತದಾನಕ್ಕೆ ಒಟ್ಟು 30,402 ಮತ ಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ಒಟ್ಟಾರೆ 2, 88, 19, 342 ಮತದಾರರು ಮತ ಚಲಾಯಿಸುವ ಅರ್ಹತೆ ಹೊಂದಿದ್ದಾರೆ. ಈ ಪೈಕಿ 1,44, 28099 ಪುರುಷರು, 1, 43, 88, 176 ಮಹಿಳೆಯರು ಮತ್ತು 3067 ತೃತೀಯ ಲಿಂಗಿಗಳಿದ್ದಾರೆ.

**ನಗರದ 28 ವಿಧಾನಸಭಾ ಕ್ಷೇತ್ರದಲ್ಲಿ ಮಸ್ಟರಿಂಗ್ ಕೇಂದ್ರಗಳನ್ನು ತೆರೆಯಲಾಗಿದೆ. ಬಿಬಿಎಂಪಿ ವ್ಯಾಪ್ತಿಯಲ್ಲಿ 8984 ಮತಗಟ್ಟೆಗಳು ಇದ್ದು, 2003 ಮತಗಟ್ಟೆಗಳು ಸೂಕ್ಷ್ಮ ಹಾಗೂ 253 ಅತಿಸೂಕ್ಷ್ಮ ಮತಗಟ್ಟೆಗಳು ಅಂತ ಘೋಷಣೆ ಮಾಡಲಾಗಿದೆ. ಇನ್ನು ಈ ಮತಗಟ್ಟೆಗಳಿಗೆ ಹೆಚ್ಚಿನ ಭದ್ರತೆ ನೀಡಲಾಗಿದೆ. ಒಟ್ಟು 305 ಮೈಕ್ರೋ ಅಬ್ಸರ್ವರ್‌ಗಳನ್ನು ನೇಮಿಸಲಾಗಿದೆ.**

ನಾಳೆ ಮತದಾನ ಶಾಂತಿಯುತವಾಗಿ, ಸುಗಮವಾಗಿ ನಡೆಯಲು ಚುನಾವಣಾ ಆಯೋಗ ಎಲ್ಲಾ ತಯಾರಿ ಮಾಡಿದ್ದು, ಮತಗಟ್ಟೆ ಕೆಲಸಕ್ಕಾಗಿ ಸುಮಾರು 1 ಲಕ್ಷ 40 ಸಾವಿರ ಸಿಬ್ಬಂದಿಗಳನ್ನು ಚುನಾವಣಾ ಕಾರ್ಯಕ್ಕೆ ನಿಯೋಜಿಸಲಾಗಿದೆ. ಇಂದು ರಾಜ್ಯದ ಉಡುಪಿ-ಚಿಕ್ಕಮಗಳೂರು, ಹಾಸನ, ದಕ್ಷಿಣಕನ್ನಡ, ಚಿತ್ರದುರ್ಗ, ತುಮಕೂರು, ಮಂಡ್ಯ, ಮೈಸೂರು, ಚಾಮರಾಜನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ಉತ್ತರ, ಬೆಂಗಳೂರು ಕೇಂದ್ರ, ಬೆಂಗಳೂರು ದಕ್ಷಿಣ, ಚಿಕ್ಕಬಳ್ಳಾಪುರ ಮತ್ತು ಕೋಲಾರ ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ. ಮತದಾನ ಬೆಳಿಗ್ಗೆ 7 ರಿಂದ ಸಂಜೆ 6 ರವರೆಗೂ ನಡೆಯಲಿದ್ದು, ಮತದಾರರು ತಮ್ಮ ಮತಗಟ್ಟೆಗಳನ್ನು ತಿಳಿದುಕೊಳ್ಳಲು ಚುನಾವಣಾ ಆಪ್‌ನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ. ಈ ಆಪ್‌ನಲ್ಲಿ ಮತದಾರರಿಗೆ ಅವರ ಮತಗಟ್ಟೆ ಯಾವುದು ಮತ್ತು ವಾಹನಗಳನ್ನು ಎಲ್ಲಿ ನಿಲ್ಲಿಸಬೇಕು, ಅವರ ಮತದಾನ ಗುರುತಿನ ಚೀಟಿ ಎಲ್ಲವೂ ಸಿಗಲಿದೆ.

ಮತದಾನ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆಯಾಗದಂತೆ ಕಟ್ಟೆಚ್ಚರ ವಹಿಸಿ ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದ್ದು, ಬಂದೋಬಸ್ತ್‌ಗಾಗಿ ಸುಮಾರು 50 ಸಾವಿರ ಸಿಬ್ಬಂದಿ ಹಾಗೂ 65 ಅರೆಸೇನಾ ಪಡೆಗಳನ್ನು ನಿಯೋಜಿಸಲಾಗಿದೆ. ಇಂದು ಮತದಾನ ನಡೆಯಲಿರುವ ಮತಗಟ್ಟೆಗಳ ಪೈಕಿ ಸುಮಾರು 19701 ಮತಗಟ್ಟೆಗಳಲ್ಲಿ ವೆಬ್ ಕಾಸ್ಟಿಂಗ್ ಸಿದ್ಧತೆ ಮಾಡಲಾಗಿದ್ದು, 1370 ಬೂತ್‌ಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಸೂಕ್ಷ್ಮ ಹಾಗೂ ಅತಿಸೂಕ್ಷ್ಮ ಮತಗಟ್ಟೆಗಳಿಗೆ ಹೆಚ್ಚಿನ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಲಾಗಿದೆ.

### ಘಟಾನುಘಟಿಗಳ ಭವಿಷ್ಯ ನಿರ್ಧಾರ










ಇಂದು ನಡೆಯಲಿರುವ ಚುನಾವಣೆಯಲ್ಲಿ ಮಂಡ್ಯ ಕ್ಷೇತ್ರದಿಂದ ಕಣಕ್ಕಿಳಿದಿರುವ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ, ಮೈಸೂರಿನ ರಾಜವಂಶಸ್ಥ ಯದುವೀರ ದತ್ತ ಒಡೆಯರ್, ತುಮಕೂರಿನಿಂದ ಮಾಜಿ ಸಚಿವ ವಿ. ಸೋಮಣ್ಣ, ಬೆಂಗಳೂರು ಉತ್ತರದಿಂದ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಬೆಂಗಳೂರು ಗ್ರಾಮಾಂತರ ಕ್ಷೇತ್ರದಿಂದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಹೋದರ ಡಿ.ಕೆ. ಸುರೇಶ್, ಖ್ಯಾತ ಹೃದಯ ತಜ್ಞ ಹಾಗೂ ಮಾಜಿ ಪ್ರಧಾನಿ ದೇವೇಗೌಡರ ಅಳಿಯ ಡಾ. ಮಂಜುನಾಥ್, ಹಾಸನದಿಂದ ಮಾಜಿ ಪ್ರಧಾನಿ ದೇವೇಗೌಡರ ಮೊಮ್ಮಗ ಪ್ರಜ್ವಲ್ ರೇವಣ್ಣ, ಬೆಂಗಳೂರು ದಕ್ಷಿಣ ಕ್ಷೇತ್ರದಿಂದ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಪುತ್ರಿ ಸೌಮ್ಯಾರೆಡ್ಡಿ, ತೇಜಸ್ವಿಸೂರ್ಯ, ಮುದ್ದಹನುಮೇಗೌಡ, ರಾಜುಗೌಡ, ವೆಂಕಟರಮಣೇಗೌಡ, ಬಿ.ಎನ್. ಚಂದ್ರಪ್ಪ, ಜಯಪ್ರಕಾಶ್‌ಹೆಗಡೆ, ಎಂ. ಲಕ್ಷ್ಮಣ್, ಹಮಾನುಲ್ಲಾಖಾನ್, ಗೋವಿಂದಕಾರಜೋಳ ಸೇರಿದಂತೆ ಬೆಂಗಳೂರು ಕೇಂದ್ರದಿಂದ ಪಿ.ಸಿ. ಮೋಹನ್, ಚಿಕ್ಕಬಳ್ಳಾಪುರದಿಂದ ಮಾಜಿ ಸಚಿವ ಡಾ.ಕೆ. ಸುಧಾಕರ್, ಕಾಂಗ್ರೆಸ್‌ನ ರಕ್ಷಾ ರಾಮಯ್ಯ ಸೇರಿದಂತೆ ಹಲವು ಘಟಾನುಘಟಿ ನಾಯಕರುಗಳ ರಾಜಕೀಯ ಭವಿಷ್ಯ ನಿರ್ಧಾರವಾಗಲಿದೆ.

### ಮತಗಟ್ಟೆಗಳತ್ತ ಚುನಾವಣಾ ಸಿಬ್ಬಂದಿ

ಮತದಾನ ನಡೆಯಲಿರುವ ದಕ್ಷಿಣ ಕರ್ನಾಟಕದ 14 ವಿಧಾನಸಭಾ ಕ್ಷೇತ್ರಗಳ ಮತಗಟ್ಟೆಗಳಿಗೆ ಚುನಾವಣಾ ಸಿಬ್ಬಂದಿ ಹಾಗೂ ಭದ್ರತಾ ಸಿಬ್ಬಂದಿ ಇಂದು ಮಧ್ಯಾಹ್ನ ತೆರಳಿದರು. ಇಂದು ಬೆಳಿಗ್ಗೆ ಆಯಾ ಲೋಕಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಮಸ್ಟರಿಂಗ್ ಕೇಂದ್ರಗಳಲ್ಲಿ ಚುನಾವಣಾ ಸಿಬ್ಬಂದಿ ಸಮಾವೇಶಗೊಂಡು ನಿಗದಿಪಡಿಸಿದ ಮತಗಟ್ಟೆಗಳಿಗೆ ಮತಯಂತ್ರ ಹಾಗೂ ಇತರ ಸಾಮಗ್ರಿಗಳೊಂದಿಗೆ ತೆರಳಿದರು.ಉಡುಪಿ-ಚಿಕ್ಕಮಗಳೂರು, ಹಾಸನ, ದಕ್ಷಿಣ ಕನ್ನಡ, ಚಿತ್ರದುರ್ಗ, ತುಮಕೂರು, ಮಂಡ್ಯ, ಮೈಸೂರು, ಚಾಮರಾಜನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ಉತ್ತರ, ಬೆಂಗಳೂರು ಕೇಂದ್ರ, ಬೆಂಗಳೂರು ದಕ್ಷಿಣ, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಕ್ಷೇತ್ರಗಳಲ್ಲಿ ಒಟ್ಟು 30,602 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಮತಗಟ್ಟೆಯ 200 ಮೀಟರ್ ದೂರದಲ್ಲಿ ಅಭ್ಯರ್ಥಿಗಳ ತಾತ್ಕಾಲಿಕ ಕಚೇರಿಗಳನ್ನು ಸ್ಥಾಪಿಸಲು ಅಭ್ಯರ್ಥಿಗಳಿಗೆ ಚುನಾವಣಾ ಆಯೋಗ ಅವಕಾಶ ಮಾಡಿಕೊಟ್ಟಿದೆ.

**2,88,19,342** ಮತದಾರರು

**30,602** ಮತಗಟ್ಟೆಗಳು

**1,40,000** ಸಿಬ್ಬಂದಿ ನಿಯೋಜನೆ

**50000** ಪೊಲೀಸರು

**65** ಅರೆ ಸೇನಾ ಪಡೆ

ಕಾಂಗ್ರೆಸ್ ಪಕ್ಷ 14 ಅಭ್ಯರ್ಥಿ

ಬಿಜೆಪಿ 11 ಅಭ್ಯರ್ಥಿ

ಜೆಡಿಎಸ್ 3 ಅಭ್ಯರ್ಥಿ

### ಅಂಚೆ ಮತದಾನದ ವ್ಯವಸ್ಥೆ

ಉಡುಪಿ ಚಿಕ್ಕಮಗಳೂರು, ಹಾಸನ, ದಕ್ಷಿಣ ಕನ್ನಡ, ಚಿತ್ರದುರ್ಗ, ತುಮಕೂರು, ಮಂಡ್ಯ, ಮೈಸೂರು, ಚಾಮರಾಜನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ದಕ್ಷಿಣ, ಬೆಂಗಳೂರು ಉತ್ತರ, ಬೆಂಗಳೂರು ಸೆಂಟ್ರಲ್, ಚಿಕ್ಕಬಳ್ಳಾಪುರ, ಕೋಲಾರ ಒಟ್ಟು 14 ಕ್ಷೇತ್ರಗಳಲ್ಲಿ ಶುಕ್ರವಾರದಂದು ಮತದಾನ ನಡೆಯಲಿದ್ದು ಸಕಲ ಸಿದ್ಧತೆಗಳನ್ನು ಮಾಡಲಾಗಿದೆ. ಅಂಗವಿಕಲರಿಗೆ, ವೃದ್ಧರಿಗೆ, ಮತಗಟ್ಟೆ ಸಿಬ್ಬಂದಿ ಸೇರಿದಂತೆ ಅನೇಕ ಕರ್ತವ್ಯ ನಿರತರಿಗೆ ಅಂಚೆ ಮತದಾನದ ವ್ಯವಸ್ಥೆ ಮಾಡಲಾಗಿತ್ತು.

## ಶ್ರುತಿ ವಿರುದ್ಧ ಮಹಿಳಾ ಆಯೋಗಕ್ಕೆ ದೂರು ನೀಡಲಿರುವ ಕಾಂಗ್ರೆಸ್

• ಉದಯವಾಹಿನಿ, ಬೆಂಗಳೂರು

ಸ್ಯಾಂಡಲ್ ವುಡ್ ಹಿರಿಯ ನಟಿ, ಬಿಜೆಪಿ ನಾಯಕಿ ಶ್ರುತಿ ಕೃಷ್ಣ ವಿರುದ್ಧ ಕಾಂಗ್ರೆಸ್ ಮಹಿಳಾ ಆಯೋಗಕ್ಕೆ ದೂರು ನೀಡಲು ಮುಂದಾಗಿದೆ. ಬಿಜೆಪಿ ಸಮಾವೇಶವೊಂದರಲ್ಲಿ ಶ್ರುತಿ ಮಾಡಿದ ಭಾಷಣ ಮಹಿಳೆಯರನ್ನು ಅವಮಾನಿಸುವ ರೀತಿಯಿದೆ ಎಂಬ ಕಾರಣಕ್ಕೆ ಕಾಂಗ್ರೆಸ್ ಮಹಿಳಾ ಆಯೋಗಕ್ಕೆ ದೂರು ನೀಡಲು ಮುಂದಾಗಿದೆ. ಈ ಬಗ್ಗೆ ಗುರುವಾರ ಸಂಜೆ 4.15 ಕ್ಕೆ ಕಾಂಗ್ರೆಸ್ ನಿಯೋಗ ಕಾವೇರಿ ಭವನದಲ್ಲಿರುವ ಮಹಿಳಾ ಆಯೋಗದ ಕಚೇರಿಗೆ ಭೇಟಿ ನೀಡಲಿದೆ. ನಟಿ ಶ್ರುತಿ ಕಾಂಗ್ರೆಸ್‌ನ ಗ್ಯಾರಂಟಿ ಯೋಜನೆಗಳನ್ನು ಟೀಕಿಸುವಾಗ ಆಕ್ಷೇಪಾರ್ಹ ಹೇಳಿಕೆ ನೀಡಿದ್ದಾರೆ ಎನ್ನುವುದು ಅವರ ಮೇಲಿನ ಆರೋಪವಾಗಿದೆ. ಕಾಂಗ್ರೆಸ್ ಸರ್ಕಾರ ಬಸ್ ಟಿಕೆಟ್ ಫ್ರೀ ಮಾಡಿದ ಮೇಲೆ ಮಹಿಳೆಯರು ಎಲ್ಲೆಲ್ಲೋ ತಿರುಗಾಡುತ್ತಿದ್ದಾರೆ. ಮನೆಯಲ್ಲಿ ಗಂಡ, ಮಕ್ಕಳು ಅಳುತ್ತಿದ್ದಾರೆ ಎಂದು ಶ್ರುತಿ ಹೇಳಿದ್ದರು. ಅವರ ಈ ಹೇಳಿಕೆ ವೈರಲ್ ಆಗಿತ್ತು.

ಇದರ ಬಗ್ಗೆ ಇದೀಗ ಕಾಂಗ್ರೆಸ್ ಸಾಕ್ಷಿ ಸಮೇತ ಮಹಿಳಾ ಆಯೋಗಕ್ಕೆ ದೂರು ನೀಡುತ್ತಿದೆ. ಶ್ರುತಿ ನೀಡಿರುವ ಹೇಳಿಕೆ ಕೇವಲ ಕಾಂಗ್ರೆಸ್ ನ ಯೋಜನೆ ಟೀಕಿಸಿರುವುದು ಮಾತ್ರವಲ್ಲ, ಇದು ಇಡೀ ಮಹಿಳಾ ಸಮುದಾಯಕ್ಕೇ ಮಾಡಿದ ಅವಮಾನ ಎಂದು ಕಾಂಗ್ರೆಸ್ ಆಕ್ಷೇಪಿಸಿದೆ. ಈ ಬಗ್ಗೆ ಶ್ರುತಿ ಸೋಷಿಯಲ್ ಮೀಡಿಯಾದಲ್ಲೂ ಸಾಕಷ್ಟು ಪರ-ವಿರೋಧ ಕಾಮೆಂಟ್‌ಗಳು ಬಂದಿದ್ದವು.

## ಅಮೂಲ್ಯ ಮಾವನ ಮನೆ ಮೇಲೆ ದಾಳಿ ಹಿಂದೆ ಕೈ ಹುನ್ನಾರ

• ಉದಯವಾಹಿನಿ, ಬೆಂಗಳೂರು

ಸ್ಯಾಂಡಲ್ ವುಡ್ ನಟಿ ಅಮೂಲ್ಯ ಅವರ ಮಾವ, ಬಿಜೆಪಿ ಮುಖಂಡ ರಾಮಚಂದ್ರ, ಅವರ ರಾಜರಾಜೇಶ್ವರಿನಗರದ ಮನೆ ಮೇಲೆ ಚುನಾವಣಾ ಅಧಿಕಾರಿಗಳು ನಿನ್ನೆ ತಡರಾತ್ರಿ ದಾಳಿ ನಡೆಸಿದ್ದಾರೆ. ಇದು ಚುನಾವಣಾ ಪ್ರಚಾರದಲ್ಲಿ ಪಾಲ್ಗೊಳ್ಳದಂತೆ ತಡೆಯುವ ಹುನ್ನಾರ ಎಂದು ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಡಾ.ಮಂಜುನಾಥ್ ಹೇಳಿದರು.



ರಾಜರಾಜೇಶ್ವರಿನಗರದ ರಾಮಚಂದ್ರ ಅವರ ನಿವಾಸದ ಮೇಲೆ ನಿನ್ನೆ ರಾತ್ರಿ 10 ಗಂಟೆ ಸುಮಾರಿಗೆ ದಾಳಿ ನಡೆದಿದ್ದು, ಮುಂಜಾನೆಯವರೆಗೂ ಪರಿಶೀ ಲನೆ ನಡೆಸಿದ್ದಾರೆ. ನಮ್ಮ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ರಾಜರಾಜೇಶ್ವರಿ ನಗರದಲ್ಲಿ ನಮ್ಮ ಪಕ್ಷದ ಸದಸ್ಯರು ಹಾಗೂ ಮಾಜಿ ನಗರಸಭಾ ಸದಸ್ಯರಾದ ಶ್ರೀ ಜಿ.ಹೆಚ್. ರಾಮಚಂದ್ರ ಅವರು, ಜಗದೀಶ್ ಆರ್ ಚಂದ್ರ ಅವರು ಚುನಾವಣಾ ಪ್ರಚಾರ ಕಾರ್ಯದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವುದನ್ನು ತಡೆಯುವ ದುರುದ್ದೇಶದಿಂದ ಅಧಿಕಾರ ದುರ್ಬಳಕೆ ಮಾಡಿಕೊಂಡು, ಅವರ ಮನೆಯ ಮೇಲೆ ರೇಡ್ ಮಾಡಿರುವುದನ್ನು ಖಂಡಿಸುತ್ತೇನೆ. ಜಿ.ಹೆಚ್. ರಾಮಚಂದ್ರ ಅವರ ಬಳಿ ಖುದ್ದು ಮಾತನಾಡಿದಾಗ ಸುಮಾರು ವಾರಗಳಿಂದ ಅನೇಕ ರೀತಿಯಲ್ಲಿ ಆಮಿಷಗಳನ್ನು ಒಡ್ಡಿ, ಚುನಾವಣೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳದಂತೆ ಮಾಡಲು ಪ್ರಯತ್ನ ನಡೆಸಿದ್ದರು ಎಂದು ತಿಳಿಸಿದರು.

**ದಬ್ಬಾಳಿಕೆಯ ವಿರುದ್ಧ ಕ್ರಮ ಕೈಗೊಳ್ಳಿ**

ಇಂತಹ ಆಧಾರ ರಹಿತ ರೇಡ್‌ಗಳ ಮೂಲಕ ನಮ್ಮ ಪಕ್ಷದ ಕಾರ್ಯಕರ್ತರ ಸಮಯ ವ್ಯರ್ಥ ಮಾಡುವ ಜತೆ ಚುನಾವಣೆಯಲ್ಲಿ ತೊಡಗಿಕೊಳ್ಳದಂತೆ ತಡೆಯಲು ತಮ್ಮ ಅಧಿಕಾರ ದುರ್ಬಳಕೆ ಮಾಡಿಕೊಳ್ಳುತ್ತಿರುವುದನ್ನು ಚುನಾವಣಾ ಆಯೋಗ ಗಂಭೀರವಾಗಿ ಪರಿಗಣಿಸಬೇಕು, ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಸೂಕ್ಷ್ಮತೆಯನ್ನು ಗಮನ ದಲ್ಲಿಟ್ಟು ಇಂತಹ ದಬ್ಬಾಳಿಕೆಯ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ನನ್ನ ಆಗ್ರಹ

## ಮುಸ್ಲಿಮರು ಹೆಚ್ಚು ಬಲಿದಾನ ಮಾಡಿದ್ದಾರೆ ಅಂತೆ

• ಉದಯವಾಹಿನಿ, ಚಿತ್ರದುರ್ಗ

ಮುಸ್ಲಿಮರಿಗೆ ಭಾಜಪದ ಮಾನಸಿಕತೆ ತೊಂದರೆ ನೀಡುತ್ತಿದೆ ಎಂದು ಕಾಂಗ್ರೆಸ್ಸಿನ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಇತ್ತೀಚೆಗೆ ಹೇಳಿಕೆ ನೀಡಿದ್ದರು. ಈ ಹೇಳಿಕೆಯನ್ನು ಮಾಜಿ ಸಚಿವ ಮತ್ತು ಕಾಂಗ್ರೆಸ್ಸಿನ ಹಿರಿಯ ನಾಯಕ ಎಚ್. ಆಂಜನೇಯ ಇವರು ಚಿತ್ರದುರ್ಗದಲ್ಲಿ ಬೆಂಬಲಿಸಿದರು.

ಅವರು ಮಾತನಾಡಿ, ಯಾರು ಎಷ್ಟೇ ತೊಂದರೆ ಕೊಟ್ಟರೂ ದೇಶದಲ್ಲಿ ವಾಸಿಸುತ್ತಿರುವವರು ದೇಶವನ್ನು ತೊರೆಯುವ ಪ್ರಶ್ನೆಯೇ ಉದ್ಭವಿಸುವುದಿಲ್ಲ. ಇಲ್ಲಿ ವಾಸಿಸುವ ಎಲ್ಲರೂ ಒಂದೇ ತಾಯಿಯ ಮಕ್ಕಳಾಗಿದ್ದಾ ರೆ. ಮುಸಲ್ಮಾನರು ಕೂಡ ಸ್ವಾತಂತ್ರ್ಯ ಚಳವಳಿಯಲ್ಲಿ ಭಾಗವ ಹಿಸಿದ್ದರು. ಬ್ರಿಟಿಷರು ಗುಂಡು ಹಾರಿಸುತ್ತಿದ್ದಾಗ ಮುಸಲ್ಮಾನ, ಸಿಖ್ಖ, ಲಿಂಗಾಯತರು, ಬ್ರಾಹ್ಮಣರು ಏಕೆ ಹೇಳುತ್ತಿದ್ದರೇ ಬ್ರಿಟಿಷರನ್ನು ದೇಶಬಿಟ್ಟು ಓಡಿಸುವಾಗ ಮುಸ್ಲಿಮರೇ ಹೆಚ್ಚು ಬಲಿದಾನ ಮಾಡಿದ್ದಾರೆ ಎಂದು ಹೇಳಿದರು.

# ಯಾರೂ ಕೂಡಾ ಪ್ರಧಾನಿ ಪಟ್ಟವನ್ನು ಇಂತಹ ಕೀಳು ಮಟ್ಟಕ್ಕೆ ಇಳಿಸಿಲ್ಲ

## ಮೀಸಲಾತಿ ಅಸ್ತ್ರ ಪ್ರಯೋಗಿಸಿದ ಮೋದಿಗೆ ಬಿಜೆಪಿಯ ಹೊಸ ಸಂಗಾತಿಯನ್ನ ಕೇಳಿ ಎಂದು ಟಾಂಗ್ ಕೊಟ್ಟ ಸಿದ್ದರಾಮಯ್ಯ

• ಉದಯವಾಹಿನಿ, ಬೆಂಗಳೂರು

ಲೋಕಸಭಾ ಚುನಾವಣಾ ಹಿನ್ನೆಲೆ ಅಬ್ಬರ ಪ್ರಚಾರ ನಡೆಸುತ್ತಿರುವ ಹೊತ್ತಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಮೀಸಲಾತಿ ಅಸ್ತ್ರ ಪ್ರಯೋಗಿಸಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿರುಗೇಟು ನೀಡಿದ್ದಾರೆ.

ಈ ಕುರಿತು ಸರಣಿ ಟ್ವೀಟ್ ಮಾಡಿರುವ ಸಿದ್ದರಾಮಯ್ಯ, ಮುಸ್ಲಿಮ್ ಮೀಸಲಾತಿಯನ್ನು ವಿರೋಧಿಸುತ್ತಿರುವ ಪ್ರಧಾನಿ ನರೇಂದ್ರ ಮೋದಿ ಹೇಳಿಕೆ ಬಗ್ಗೆ ಮೋದಿಯವರ ಆಪ್ತಮಿತ್ರ ಮತ್ತು ಬಿಜೆಪಿಯ ಹೊಸ ಸಂಗಾತಿಯಾಗಿರುವ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಪ್ರತಿಕ್ರಿಯೆ ಏನು ಎನ್ನುವುದನ್ನು ನಾನು ತಿಳಿದುಕೊಳ್ಳಬಯಸುತ್ತೇನೆ ಎಂದು ಟಾಂಗ್ ನೀಡಿದ್ದಾರೆ.

ಹಿಂದುಳಿದ ಜಾತಿ ಮತ್ತು ದಲಿತರ ಮೀಸಲಾತಿಯನ್ನು ಕಿತ್ತು ಮುಸ್ಲಿಮರಿಗೆ ನೀಡಲು ಕಾಂಗ್ರೆಸ್ ಹೊರಟಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಹೇಳುತ್ತಿರುವ ಹಸಿ ಸುಳ್ಳು ಅವರ ಅಜ್ಞಾನವನ್ನಷ್ಟೇ ಅಲ್ಲ ಸೋಲಿನ ಭೀತಿಯಲ್ಲಿರುವ ಅವರ ಹತಾಶೆಯನ್ನೂ ಸೂಚಿಸುತ್ತದೆ.

ದೇಶದಲ್ಲಿ ಇಲ್ಲಿಯ ವರೆಗಿನ ಯಾರೂ ಕೂಡಾ ಪ್ರ ಧಾನಿ ಪಟ್ಟವನ್ನು ಇಂತಹ ಕೀಳು ಮಟ್ಟಕ್ಕೆ ಇಳಿಸಿಲ್ಲ. ಜವಾಬ್ದಾರಿ ಸ್ಥಾನದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರು ಒಂದೋ ಈ ಬೇಜವಾಬ್ದಾರಿತನದ ಆ ರೋಪವನ್ನು ಆಧಾರಗಳನ್ನು ನೀಡಿ ಸಾಬೀತು ಪಡಿಸಬೇಕು ಇಲ್ಲದೆ ಇದ್ದರೆ ದೇಶ ದ ಜನರ ಕ್ಷಮೆ ಕೇಳಬೇಕು. ಹಿಂದುಳಿದ ಜಾತಿ, ಎಸ್‌ಸಿ, ಎಸ್‌ಟಿ ಮೀಸಲಾತಿಯನ್ನು ಕಿತ್ತು ಮುಸ್ಲಿಮರಿಗೆ ನೀಡುವುದಾಗಿ ಕಾಂಗ್ರೆಸ್ ಎಲ್ಲಿ ಹೇಳಿದೆ? ಯಾವ ರಾಜ್ಯದ ಕಾಂಗ್ರೆಸ್ ಸರ್ಕಾರ ಮಾಡಿದೆ? ಅದಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶದ ಪತ್ರ ಇದೆಯೇ? ಈ ಎಲ್ಲಾ ವಿವರವನ್ನು ಪ್ರಧಾನಿಯವರು ದೇಶದ ಮುಂದೆ ಇಡಬೇಕು. ಸಂವಿಧಾನದತ್ತವಾದ ಮೀಸಲಾತಿಯನ್ನು ಮನಬಂದಂತೆ ಬದಲಾವಣೆ ಮಾಡಲು ಸಾಧ್ಯ ಇಲ್ಲ. ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆಯ ವರದಿ ಆಧಾರದಲ್ಲಿ ಮಾತ್ರ ಮೀಸಲಾತಿಯ ಪರಿಷ್ಕರಣೆ ಸಾಧ್ಯ. ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಮೀಸಲಾತಿಯನ್ನು ಪರಿಷ್ಕರಿಸುವ ಅಧಿಕಾರ ರಾಜ್ಯ ಸರ್ಕಾರದ ಕೈಯಲ್ಲಿಯೂ ಇಲ್ಲ.

ಇದಕ್ಕಾಗಿ ಸಂಸತ್‌ನ ಉಭಯ ಸದನಗಳ ಒಪ್ಪಿಗೆಯೊಂದಿಗೆ ಸಂವಿಧಾನ ತಿದ್ದುಪಡಿ ಮಾಡಬೇಕಾಗುತ್ತದೆ. ಇಂತಹದ್ದೊಂದು ಕನಿಷ್ಠ ಜ್ಞಾನ ಒಬ್ಬ ಪ್ರಧಾನಮಂತ್ರಿಗೆ ಇಲ್ಲದಿರುವುದು ಈ ದೇಶದ ದುರಂತವೇ ಸರಿ.



> ಕಳೆದ ವಿಧಾನಸಭಾ ಚುನಾವಣೆಯ ಪೂರ್ವದಲ್ಲಿ ಧರ್ಮದ ಆಧಾರದಲ್ಲಿ ಮತವಿಭಜನೆಯ ಏಕೈಕ ದುರುದ್ದೇಶದಿಂದ ಬಸವರಾಜ ಬೊಮ್ಮಾಯಿ ಸರ್ಕಾರ ಮೀಸಲಾತಿಯನ್ನು ಅಡ್ಡಾದಿಡ್ಡಿಯಾಗಿ ಪರಿಷ್ಕರಿಸಲು ಹೊರಟು ಸುಪ್ರೀಂ ಕೋರ್ಟಿನಿಂದ ಛೀಮಾರಿಗೆ ಗುರಿಯಾಗಿರುವುದನ್ನು ಪ್ರಧಾನಿ ನರೇಂದ್ರ ಮೋದಿ ಅವರು ಮರೆತಂತೆ ಕಾಣುತ್ತಿದೆ. ಮುಸ್ಲಿಮರಿಗೆ ಇದ್ದ ಶೇಕಡಾ ನಾಲ್ಕರ ಮೀಸಲಾತಿಯನ್ನು ರದ್ದು ಮಾಡಿ ಅದನ್ನು ಒಕ್ಕಲಿಗ ಮತ್ತು ಲಿಂಗಾಯತರಿಗೆ ಹಂಚಿರುವ ತೀರ್ಮಾನಕ್ಕೆ ಸುಪ್ರೀಂ ಕೋರ್ಟ್ ತಡೆ ನೀಡಿದ್ದು ಮುಂದಿನ ಆದೇಶದ ವರೆಗೆ ಪರಿಷ್ಕೃತ ಮೀಸಲಾತಿಯನ್ನು ಜಾರಿಗೊಳಿಸಬಾರದೆಂದು ಆದೇಶ ನೀಡಿದೆ. ಇಂತಹದ್ದೊಂದು ಪ್ರಮುಖ ಮಾಹಿತಿ ಕೂಡಾ ಪ್ರಧಾನಮಂತ್ರಿಯವರ ಗಮನದಲ್ಲಿ ಇಲ್ಲದೆ ಇರುವುದು ವಿಷಾದನೀಯ
>
> -ಸಿದ್ದರಾಮಯ್ಯ, ಮುಖ್ಯಮಂತ್ರಿ

**ನ್ಯಾಯಾಲಯದಲ್ಲೂ ಪ್ರಶ್ನಿಸಿಲ್ಲ**

ಕರ್ನಾಟಕದಲ್ಲಿ ರಾಜ್ಯ ಸರ್ಕಾರ ಸ್ಥಾಪಿಸಿದ ಚಿನ್ನಪ್ಪ ರೆಡ್ಡಿ ಆಯೋಗದ ವರದಿ ಆಧಾರದಲ್ಲಿ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿಯನ್ನು ಗಮನಕ್ಕೆ ತೆಗೆದುಕೊಂಡು ಮುಸ್ಲಿಮರನ್ನು ಹಿಂದುಳಿದ ಜಾತಿಗಳ 2ಬಿ ವರ್ಗಕ್ಕೆ ಸೇರಿಸಲಾಗಿರುವುದು ನಿಜ. ಕಳೆದ ಮೂರು ದಶಕಗಳಿಂದ ರಾಜ್ಯದಲ್ಲಿ ಈ ಮೀಸಲಾತಿ ಜಾರಿಯಲ್ಲಿದೆ. ಕೇಂದ್ರದಲ್ಲಿ ಹಿಂದೆ ಅಧಿಕಾರದಲ್ಲಿದ್ದ ಬಿಜೆಪಿ ಸರ್ಕಾರವಾಗಲಿ, ಕಳೆದ ಹತ್ತು ವರ್ಷಗಳಿಂದ ಅಧಿಕಾರದಲ್ಲಿರುವ ನರೇಂದ್ರ ಮೋದಿ ನೇತೃತ್ವದ ಸರ್ಕಾರವಾಗಲಿ ಇಲ್ಲಿಯ ವರೆಗೆ ಈ ಮೀಸಲಾತಿಯನ್ನು ಪ್ರಶ್ನಿಸಿಲ್ಲ. ಬಿಜೆಪಿಯೂ ಸೇರಿದಂತೆ ಯಾರೂ ಕೂಡಾ ಇದನ್ನು ನ್ಯಾಯಾಲಯದಲ್ಲೂ ಪ್ರಶ್ನಿಸಿಲ್ಲ.

**ಈ ದಿನದ ದರ** | ಪೆಟ್ರೋಲ್: 99.84 ₹/L | ಡೀಸೆಲ್ : 85.93 ₹/L | ಬಂಗಾರ: ₹7,277 /Gram(24ct) ₹6,625 /Gram(22ct) | ಬೆಳ್ಳಿ: ₹83.50 /Gram



ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

## ಮತದಾನ

ಇಂದು ರಾಜ್ಯದ ಉತ್ತರ ಭಾಗದಲ್ಲಿ ಲೋಕಸಭೆಗೆ ಚುನಾವಣೆ ನಡೆಯುತ್ತದೆ. ಬೆಳಿಗ್ಗೆ ಏಳು ಘಂಟೆಯಿಂದ ಸಂಜೆ ಆರು ಘಂಟೆಯವರೆಗೆ ಮತದಾನ ನಡೆಯಲಿದ್ದು ಇದಕ್ಕೂ ಮುನ್ನ ಬೆಳಿಗ್ಗೆ ಐದೂಮೂವತ್ತರಿಂದ ಏಳು ಘಂಟೆಯವರೆಗೆ ಚುನಾವಣಾ ಅಭ್ಯರ್ಥಿಗಳ ಎಜೆಂಟರ ಸಮ್ಮುಖದಲ್ಲಿ ಅಣಕು ಮತದಾನ ನಡೆಯುವುದು. ಬ್ಯಾಲೆಟ್ ಯುನಿಟ್, ಕಂಟ್ರೋಲ್ ಯೂನಿಟ್, ವಿವಿ ಪ್ಯಾಟ್ ಮತಯಂತ್ರಗಳು ಪ್ರಾಮಾಣಿಕ ಕಾರ್ಯಕ್ಷಮತೆ ಹೊಂದಿವೆ ಎಂಬುದನ್ನು ಈ ಅಣಕು ಮತದಾನ ಸಾಬೀತುಗೊಳಿಸುತ್ತದೆ. ನಮ್ಮನ್ನು ನಾವು ಆಳಿಕೊಳ್ಳಲು ಉತ್ತಮ ಅಭ್ಯರ್ಥಿಯನ್ನು ಆಯ್ಕೆ ಮಾಡಿಕೊಳ್ಳಲು ಇರುವ ಏಕೈಕ ಪ್ರಬಲ ಸಾಧನ ಮತದಾನ. ಹಣಕ್ಕಾಗಿ ಜಾತಿಗಾಗಿ ತಾತ್ಕಾಲಿಕ ಲಾಭಕ್ಕಾಗಿ ಅವಕಾಶವಾದಿಗಳಿಗೆ ಮತ ಹಾಕಿದರೆ ಸೇವೆ ಮಾಡುವವರ ಬದಲಾಗಿ ಸೇವನೆಮಾಡುವವರು ಆಯ್ಕೆಯಾಗಿ ದೇಶವನ್ನು ಸಾಲದ ಅಂಚಿಗೆ, ಸಮಾಜವನ್ನು ಅರಾಜತೆಗೆ ತಳ್ಳುವುದರಲ್ಲಿ ಸಂದೇಹವಿಲ್ಲ. ಈ ದಿನ ಮತದಾರರು ಆಲಸ್ಯ ತೋರದೇ ಶ್ರದ್ಧಾ ಭಕ್ತಿಯಿಂದ ಅರ್ಹರಿಗೆ ಮತದಾನ ಮಾಡುವುದನ್ನು ಮರೆಯಬೇಡಿ.

## ಪಿತ್ರೊಡಾ ಹೇಳಿಕೆಗೂ ಕಾಂಗ್ರೆಸ್ ಪಕ್ಷಕ್ಕೂ ಸಂಬಂಧವಿಲ್ಲ

■ ಸ್ಯಾಮ್ ಪಿತ್ರೊಡಾ ಹೇಳಿಕೆ ವೈಯಕ್ತಿಕ ■ ಅದಕ್ಕೂ ಕಾಂಗ್ರೆಸ್ ಪಕ್ಷಕ್ಕೂ ಸಂಬಂಧವಿಲ್ಲ ■ ಡಿಸಿಎಂ ಹೇಳಿಕೆ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ ಡೆತ್ ಟ್ಯಾಕ್ಸ್ ಹಾಕಲ್ಲ, ಬರ್ತ್ ಟ್ಯಾಕ್ಸ್ ಹಾಕಲ್ಲ. ಸ್ಯಾಮ್ ಪಿತ್ರೊಡಾ ಅವರ ಹೇಳಿಕೆ ವೈಯಕ್ತಿಕ, ಅದಕ್ಕೂ ಕಾಂಗ್ರೆಸ್ ಪಕ್ಷಕ್ಕೂ ಸಂಬಂಧವಿಲ್ಲ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದ್ದಾರೆ.

ಈ ವೇಳೆ ಪಿತ್ರಾರ್ಜಿತ ಆಸ್ತಿಯಲ್ಲಿ 50% ಸರ್ಕಾರ ಪಡೆಯಬೇಕು ಎಂಬ ಪಿತ್ರೊಡಾ ಅವರ ಹೇಳಿಕೆ ಬಗ್ಗೆ ಕೇಳಿದಾಗ, ಇದು ಭಾರತ. ಈ ಬಗ್ಗೆ ಜೈರಾಮ್ ರಮೇಶ್ ಅವರು ನಮ್ಮ ಪಕ್ಷದ ಪರವಾಗಿ ಸ್ಪಷ್ಟನೆ ನೀಡಿದ್ದಾರೆ. ಯಾವುದೇ ಡೆತ್ ಟ್ಯಾಕ್ಸ್, ಬರ್ತ್ ಟ್ಯಾಕ್ಸ್ ಇಲ್ಲ. ಈ ದೇಶದ ಪರಂಪರೆ, ಪದ್ಧತಿ ಮುಂದುವರಿಯಲಿದೆ. ಯಾವುದೂ ಕೂಡ ನಮ್ಮ ಪಕ್ಷದಲ್ಲಿ ತೀರ್ಮಾನ ಆಗಿಲ್ಲ. ಅದು ಸುಳ್ಳು, ಅದಕ್ಕೆ ನಾವು ಅವಕಾಶ ನೀಡುವುದಿಲ್ಲ. ನಮ್ಮ ದೇಶದಲ್ಲಿ ರಾಜಕಾರಣದಲ್ಲಿ ತಂದೆ ಪೂರ್ವಜರ ಹೆಸರಿನಲ್ಲಿ ಚುನಾವಣೆ ಮಾಡುತ್ತಿರುವಾಗ ಅವರ ಆಸ್ತಿ ವರ್ಗಾವಣೆಗೆ ಅವಕಾಶ ನೀಡುತ್ತಾರಾ ದೇಶದ ಸಂಪತ್ತನ್ನು ನಗದೀಕರಣ ಮಾಡಲು ಬಿಜೆಪಿ ಮುಂದಾಗಿದೆ ಎಂಬ ಮಾಧ್ಯಮ ವರದಿ ಓದಿದ್ದ ನೆನಪು ನನಗೆ. ನಮ್ಮ ಪ್ರನಾಳಿಕೆಯಲ್ಲಿರುವ ಅಂಶಗಳು ಮಾತ್ರ ಪಕ್ಷದ ನಿಲುವು. ಅದರಿಂದಾಚೆಗಿನ ಅಂಶ ಗಳಿಗೆ ಪಕ್ಷಕ್ಕೆ ಸಂಬಂಧವಿಲ್ಲ. ಪಿತ್ರೋಡಾ ಅವರದು ವೈಯಕ್ತಿಕ ಅಭಿಪ್ರಾಯವೇ ಹೊರತು ಪಕ್ಷದ ಅಭಿಪ್ರಾಯ ಅಲ್ಲ. ಇಂತಹ ಚರ್ಚೆ ಪಕ್ಷದಲ್ಲಿ ಆಗಿಲ್ಲ. ಇಂತಹ ಹೇಳಿಕೆಗಳನ್ನು ನಾವು ಒಪ್ಪುವುದಿಲ್ಲ ಎಂದು ತಿಳಿಸಿದರು. ಪ್ರಧಾನಮಂತ್ರಿಗಳು ದೇಶದೆಲ್ಲೆಡೆ ಪ್ರಚಾರ ಮಾಡುತ್ತಾ ಕರ್ನಾಟಕ ಹಾಗು ಕಾಂಗ್ರೆಸ್ ಪಕ್ಷದ ಬಗ್ಗೆ ದಾಳಿ ಮಾಡುತ್ತಿರುವ ಬಗ್ಗೆ ಕೇಳಿದಾಗ, ಪ್ರಧಾನಮಂತ್ರಿಗಳು ಹತಾಶೆ ಹೇಳಿಕೆ ನೀಡುತ್ತಿದ್ದಾರೆ. ತಮಿಳುನಾಡು, ಕೇರಳ, ಆಂಧ್ರ ಪ್ರದೇಶ, ತೆಲಂಗಾಣ ದಲ್ಲಿ ಅವರ ಪಕ್ಷದ ನೆಲೆ ಇಲ್ಲ. ಹೀಗಾಗಿ ಆಂಧ್ರದಲ್ಲಿ ಟಿಡಿಪಿ ಜತೆ ಮೈತ್ರಿ ಮಾಡಿಕೊಂಡಿದ್ದಾರೆ. ಕರ್ನಾಟಕದಲ್ಲಿ ಅವರ ಸರ್ಕಾರ ಇಲ್ಲ. ಕರ್ನಾಟಕದಲ್ಲೂ ಅವರು ಎರಡಂಕಿ ಸ್ಥಾನ ಪಡೆಯಲ್ಲ. ಹೀಗಾಗಿ ಹತಾಶೆಯಿಂದ ಮಂಗಳಸೂತ್ರದ ಬಗ್ಗೆ ಮಾತನಾಡುತ್ತಿದ್ದಾರೆ. ಮೋದಿ ಅವರು ಪ್ರಧಾನಿ ಆದಾಗ 2,800 ರೂಪಾಯಿ ಇದ್ದ ಒಂದು ಗ್ರಾಂ ಚಿನ್ನ ಈಗ 7,500 ಆಗಿದೆ. ನಮ್ಮ ಮಹಿಳೆಯರು ಮಂಗಳಸೂತ್ರ ಹಾಕಲಾಗದಂತೆ ಬಿಜೆಪಿಯವರು ಬೆಲೆ ಏರಿಕೆ ಮಾಡಿದ್ದಾರೆ. ಈ ವಿಚಾರವಾಗಿ ನಾನು ನಮ್ಮ ಪಕ್ಷಕ್ಕೆ ಒಂದು ಸಲಹೆ ನೀಡುತ್ತಿದ್ದೇನೆ. ನಮ್ಮ ದೇಶ, ಧರ್ಮ ಕಾಪಾಡಿಕೊಳ್ಳಬೇಕು.

> ಮೊದಲ ಹಂತದ ಚುನಾವಣೆ ನಂತರ ಇಂತಹ ಹೇಳಿಕೆಗಳು ಹೆಚ್ಚಾಗ್ಗಿರುವ ಬಗ್ಗೆ ಕೇಳಿದಾಗ, ತಮಿಳುನಾಡಿನ ನಮ್ಮ ಸ್ನೇಹಿತರು ನನ್ನ ಭೇಟಿಗೆ ಬಂದಿದ್ದರು. 40ಕ್ಕೆ 40 ಸೀಟು ಕಾಂಗ್ರೆಸ್ ಬೆಂಬಲಿತ ಮೈತ್ರಿಗೆ ಸಿಗಲಿದೆ. ಕೇರಳದಲ್ಲೂ ಇದೇ ವಾತಾವರಣ ಇದೆ ಎಂದು ತಿಳಿಸಿದರು.
> -ಡಿಸಿಎಂ ಡಿ.ಕೆ ಶಿವಕುಮಾರ್

ಡಿ.ಕೆ ಶಿವಕುಮಾರ್ ಸ್ಪಷ್ಟನೆ



**10 ವರ್ಷ ಅವಕಾಶ ಕೂಡಿ**

ಪ್ರಿಯಾಂಕ ಗಾಂಧಿ ಅವರು ಬೆಂಗಳೂರಿನಲ್ಲಿ ನನ್ನ ತಾಯಿ ದೇಶಕ್ಕಾಗಿ ತನ್ನ ಮಾಂಗಲ್ಯಸೂತ್ರ ತ್ಯಾಗ ಮಾಡಿದ್ದಾರೆ ಎಂದು ನೋವಿನಿಂದ ಹೇಳಿದ್ದಾರೆ. ಇದನ್ನು ಮೋದಿ ಅವರು ಅರಿತುಕೊಳ್ಳಬೇಕು. ಅವರ ಸ್ಥಾನದ ಬಗ್ಗೆ ನಮಗೆ ಗೌರವವಿದೆ. ಜನ ಅವರಿಗೆ ಹತ್ತು ವರ್ಷಗಳ ಕಾಲ ಅವಕಾಶ ಮಾಡಿಕೊಟ್ಟಿದ್ದಾರೆ. ಜನ ಕೊಟ್ಟಿರುವ ಗೌರವವನ್ನು ಕಾಪಾಡಿಕೊಳ್ಳಬೇಕು.

> ಈ ರೀತಿ ದೇಶಕ್ಕೆ ಅಪಮಾನ ಮಾಡಬಾರದು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಎರಡಂಕಿ ಸ್ಥಾನ ಪಡೆಯಲಿದೆ. ಹೀಗಾಗಿ ಬಿಜೆಪಿ ಅವರು ಸುಳ್ಳಿನ ಕಾರ್ಖಾನೆ ಮೂಲಕ ಅಪಪ್ರಚಾರ ಮಾಡುತ್ತಿದ್ದಾರೆ. ಅವರಿಗೆ ನಮ್ಮ ಪ್ರಣಾಳಿಕೆ ಬಗ್ಗೆ ಗೊತ್ತಿಲ್ಲ. ಎಂದು ತಿಳಿಸಿದರು.
> -ಡಿಸಿಎಂ ಡಿ.ಕೆ ಶಿವಕುಮಾರ್

## ನಿಯೋಜಿತ ಪೊಲೀಸ್ ಅಧಿಕಾರಿ, ಸಿಬ್ಬಂದಿಗಳಿಗೆ ಚುನಾವಣಾ ಭತ್ಯೆ ಪಾವತಿಗೆ ಆದೇಶ

• ಉದಯವಾಹಿನಿ, ಬೆಂಗಳೂರು

2024ರ ಲೋಕಸಭಾ ಚುನಾವಣೆಯ ಕರ್ತವ್ಯಗಳಿಗೆ ನಿಯೋಜಿಸಲಾಗಿರುವ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಚುನಾವಣಾ ಭತ್ಯೆಯನ್ನು ಪಾವತಿಸುವಂತೆ ಆದೇಶವನ್ನು ರಾಜ್ಯ ಸರ್ಕಾರ ಹೊರಡಿಸಿದೆ. ಈ ಕುರಿತಂತೆ ಸಹಾಯಕ ಆರಕ್ಷಕ ಮಹಾ ನಿರೀಕ್ಷಕರು ಅವರು ಆದೇಶ ಮಾಡಿದ್ದು, 2024ರ ಲೋಕಸಭಾ ಚುನಾವಣೆಗೆ ನೇಮಿಸಲ್ಪಟ್ಟ ವಿವಿಧ ಹುದ್ದೆಯ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಚುನಾವಣಾ ಭತ್ಯೆಯನ್ನು ಪಾವತಿಸಲು ಉಲ್ಲೇಖ(3) ರ ಸರ್ಕಾರದ ಸುತ್ತೋಲೆಯಂತೆ ಎ.ಸಿ ಬಿಲ್ಲಿನ ಮೇಲೆ ಚುನಾವಣ ಸಂಬಂಧಿತ ವೆಚ್ಚಗಳಿಗೆ ಸೆಳೆದು ಪಾವತಿಸಲು ಯಾವುದೇ ಮಿತಿಯಿಲ್ಲದಿರುವುದರಿಂದ ಸದರಿ ಸುತ್ತೋಲೆಯನ್ವಯ ಕೂಡಲೇ ಕ್ರಮವನ್ನು ಕೈಗೊಳ್ಳುವಂತೆ ನಿರ್ದೇಶಿಸಿದ್ದಾರೆ. 2024ರ ಲೋಕಸಭಾ ಚುನಾವಣೆ ಕರ್ತವ್ಯಕ್ಕೆ ನೇಮಿಸಲ್ಪಟ್ಟ ವಿವಿಧ ಹುದ್ದೆಯ ಅಧಿಕಾರಿ/ಸಿಬ್ಬಂದಿಯವರುಗಳಿಗೆ ಈ ಕೆಳಕಂಡಂತೆ ಸಂಭಾವನೆ/ಚುನಾವಣಾ ಭತ್ಯೆಯನ್ನು ನೀಡಲು ಕ್ರಮವನ್ನು ಕೈಗೊಳ್ಳಲು ತಿಳಿಸಲಾಗಿದೆ ಎಂದು ಹೇಳಿದ್ದಾರೆ.

## ಜೆಡಿಎಸ್ ಜೊತೆ ಕೆಲವು ಬಿಜೆಪಿ ನಾಯಕರು ಸಹಕಾರ ನೀಡುತ್ತಿಲ್ಲ

• ಉದಯವಾಹಿನಿ, ಬೆಂಗಳೂರು

ಏಪ್ರಿಲ್ 26 ರಂದು ಕರ್ನಾಟಕದಲ್ಲಿ ಲೋಕಸಭಾ ಚುನಾವಣೆಗೆ ಕೆಲವೇ ಗಂಟೆಗಳ ಮೊದಲು, ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಂಡಿರುವ ಪ್ರಾದೇಶಿಕ ಪಕ್ಷಕ್ಕೆ ರಾಜ್ಯದ ಬಿಜೆಪಿ ಕಾರ್ಯಕರ್ತರ ಒಂದು ವಿಭಾಗ ದಿಂದ ಬೆಂಬಲ ಸಿಗುತ್ತಿಲ್ಲ ಎಂದು ಜೆಡಿಎಸ್ ವರಿಷ್ಠ ಮತ್ತು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಆರೋಪಿಸಿದ್ದಾರೆ.



ಹಾಸನ, ಮಂಡ್ಯ ಮತ್ತು ಕೋಲಾರ ಲೋಕಸಭಾ ಕ್ಷೇತ್ರಗಳಲ್ಲಿ ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಂಡು ಜೆಡಿಎಸ್ ಸ್ಪರ್ಧಿಸುತ್ತಿದೆ. ಹಾಸನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಾಸನದಲ್ಲಿ ಕೆಲವು ಬಿಜೆಪಿ ನಾಯಕರು ಸಹಕಾರ ನೀಡುತ್ತಿಲ್ಲ. ಮಂಡ್ಯದಲ್ಲಿ ಹಾಲಿ ಸಂಸದೆ ಸುಮಲತಾ ಅವರು ಕುಮಾರಸ್ವಾಮಿ ಅವರಿಗೆ ಸಹಕಾರ ನೀಡುತ್ತಿಲ್ಲ. ದೇವೇಗೌಡರ ಮೊಮ್ಮಗ ಪ್ರಜ್ವಲ್ ರೇವಣ್ಣ ಹಾಸನ ಲೋಕಸಭಾ ಕ್ಷೇತ್ರದಿಂದ ಎರಡನೇ ಬಾರಿಗೆ ಸ್ಪರ್ಧಿಸುತ್ತಿದ್ದರೆ, ಜೆಡಿಎಸ್ ರಾಜ್ಯಾಧ್ಯಕ್ಷ ಹಾಗೂ ದೇವೇಗೌಡರ ಪುತ್ರ ಎಚ್.ಡಿ.ಕುಮಾರಸ್ವಾಮಿ ಅವರು ಮಂಡ್ಯ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸುತ್ತಿದ್ದಾರೆ. ಸುಮಲತಾ ಅವರು ಕುಮಾರಸ್ವಾಮಿ ಅವರಿಗೆ ಸಹಕಾರ ನೀಡದಿದ್ದರೂ ಜೆಡಿಎಸ್ ಅಭ್ಯರ್ಥಿಗಳ ಭವಿಷ್ಯದ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ ಎಂದು ದೇವೇಗೌಡರು ಹೇಳಿದರು. ಹಾಸನದಲ್ಲಿ ರೇವಣ್ಣ ಅವರ ಉಮೇದುವಾರಿಕೆಯನ್ನು ರಾಜ್ಯ ಬಿಜೆಪಿ ಘಟಕದ ಪ್ರಧಾನ ಕಾರ್ಯದರ್ಶಿ ಪ್ರೀತಂ ಗೌಡ ನೇತೃತ್ವದ ಬಿಜೆಪಿ ನಾಯಕರು ವಿರೋಧಿಸಿದರು. 2019 ರಲ್ಲಿ ಮಂಡ್ಯದಿಂದ ಸ್ವತಂತ್ರ ಸಂಸದರಾಗಿ ಆಯ್ಕೆಯಾದ ಸುಮಲತಾ ಅವರು ತಮ್ಮ ಸ್ಥಾನವನ್ನು ಕುಮಾರಸ್ವಾಮಿಗೆ ಬಿಟ್ಟುಕೊಟ್ಟು ಬಿಜೆಪಿ ಸೇರಲು ನಿರ್ಧರಿಸಿದ್ದಾರೆ.

> ಈ ವಿಷಯದ ಬಗ್ಗೆ ಪ್ರಶ್ನೆಗೆ ಉತ್ತರಿಸಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಅಸಹಕಾರವನ್ನು 'ಊಹಾಪೋಹ' ಎಂದು ತಳ್ಳಿಹಾಕಿದರು. ಇದು ಕಾಂಗ್ರೆಸ್ನ ರಾಜಕೀಯ ತಂತ್ರ ಎಂದು ಅವರು ಹೇಳಿದರು. ಹಾಸನ, ಮಂಡ್ಯ ಮತ್ತು ಕೋಲಾರದಲ್ಲಿ ಜೆಡಿಎಸ್ ಅಭ್ಯರ್ಥಿಗಳ ಗೆಲುವಿಗಾಗಿ ಬಿಜೆಪಿ ಕಾರ್ಯಕರ್ತರು ಕೆಲಸ ಮಾಡುತ್ತಿದ್ದರೆ, ರಾಜ್ಯದ ಇತರ ಕ್ಷೇತ್ರಗಳಲ್ಲಿ ಜೆಡಿಎಸ್ ಕಾರ್ಯಕರ್ತರು ನಮ್ಮೊಂದಿಗೆ ಸಹಕರಿಸುತ್ತಿದ್ದಾರೆ ಎಂದು ಹೇಳಿದರು.
> ವಿಜಯೇಂದ್ರ

## ಬ್ಯಾಂಕುಗಳ ಹಗರಣ ಧ್ವನಿ ಎತ್ತುವಂತೆ ಪ್ರಿಯಾಂಕ್‌ಗೆ ಮನವಿ

• ಉದಯವಾಹಿನಿ, ಬೆಂಗಳೂರು

ಶ್ರೀ ಗುರುರಾಘವೇಂದ್ರ ಸಹಕಾರಿ ಬ್ಯಾಂಕ್, ಗುರು ಸಾರ್ವಭೌಮ ಬ್ಯಾಂಕ್, ವಸಿಷ್ಠ ಸಹಕಾರಿ ಬ್ಯಾಂಕುಗಳ ಠೇವಣಿದಾರರು, ಕಾಂಗ್ರೆಸ್ ಮುಖಂಡರಾದ ಡಾ.ಶಂಕರ್ ಗುಹಾ ಹಾಗೂ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಸೌಮ್ಯ ರೆಡ್ಡಿ ರವರ ನೇತೃತ್ವದಲ್ಲಿ ಬುಧವಾರ ಎಐಸಿಸಿ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕ ಗಾಂಧಿ ಅವರನ್ನು ಭೇಟಿಯಾಗಿ ತಮಗಾಗಿರುವ ಅನ್ಯಾಯದ ಬಗ್ಗೆ ರಾಷ್ಟ್ರಮಟ್ಟದಲ್ಲಿ ಧ್ವನಿ ಎತ್ತುವಂತೆ ಮನವಿ ಮಾಡಿದರು.

ಈ ಪ್ರಕರಣವನ್ನು 6 ತಿಂಗಳುಗಳ ಹಿಂದೆಯೇ ಸಿಬಿಐ ತನಿಖೆಗೆ ವಹಿಸಲಾಗಿದ್ದರೂ ಸಹ, ಬಿಜೆಪಿಯ ಸಂಸದ ಹಾಗೂ ಶಾಸಕರು ತನಿಖಾಧಿಕಾರಿಯನ್ನೇ ನೇಮಿಸದಂತೆ ತಮ್ಮ ಪ್ರಭಾವ ಬಳಸಿ ತಡೆಹಿಡಿದ್ದಿದ್ದಾರೆ. ಈ ಪ್ರಕರಣಕ್ಕೆ ವಿಶೇಷ ತನಿಖಾ ದಳ ನೇಮಿಸಿ ನಮಗೆ ನ್ಯಾಯ ಒದಗಿಸಬೇಕೆಂದು ಮನವಿ ಮಾಡಿದರು.

ಈ ಬ್ಯಾಂಕ್ ಗಳ ಹಗರಣದಿಂದ ಠೇವಣಿದಾರರು ಲಕ್ಷಾಂತರ ರೂ.ಕಳೆದುಕೊಂಡಿದ್ದಾರೆ. ಬಿಜೆಪಿಯವರೇ ಕೆಲ ಜನಪ್ರತಿನಿಧಿಗಳೇ ಈ ಹಗರಣದಲ್ಲಿ ಶಾಮೀಲಾಗಿದ್ದು, ಅವರ ವಿರುದ್ಧ ಕ್ರಮಕೈಗೊಂಡು ಠೇವಣಿದಾರರ ಹಣ ಮರಳಿಸುವಂತಾಗಬೇಕು ಎಂದು ಕೋರಿದರು. ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ ಪ್ರಿಯಾಂಕ ಗಾಂಧಿಯವರು ಚುನಾವಣೆ ಸಮಯದಲ್ಲಿ ಸಂತ್ರಸ್ತರು ಸಂಸದ ತೇಜಸ್ವಿ ಸೂರ್ಯ ಅವರ ವಿರುದ್ಧ ತಿರುಗಿಬಿದ್ದು ಕೂಗಾಡುತ್ತಿರುವ ವಿಡಿಯೋ ನೋಡಿದ್ದೇನೆ. ಸಿಬಿಐ ನಿಮಗೆ ನ್ಯಾಯ ಒದಗಿಸದಿದ್ದರೆ, ರಾಜ್ಯ ಸರ್ಕಾರವೇ ವಿಶೇಷ ತನಿಖಾ ತಂಡವನ್ನು ರಚಿಸಿ ನ್ಯಾಯ ಒದಗಿಸುವಂತೆ ಮುಖ್ಯಮಂತ್ರಿ ಅವರಲ್ಲಿ ತಿಳಿಸುತ್ತೇನೆ . ಚುನಾವಣೆ ನಂತರ ಈ ಬಗ್ಗೆ ತೀರ್ಮಾನ ಮಾಡಿ ಸಂತ್ರಸ್ತರಿಗೆ ನ್ಯಾಯ ಒದಗಿಸಲಾಗುವುದು ಎಂದು ಭರವಸೆ ನೀಡಿರುತ್ತಾರೆ.

ಉದಯವಾಹಿನಿ ಚಿತ್ರ



## ವಿಜಯೇಂದ್ರ ವಿರುದ್ಧ ಚುನಾವಣಾ ಆಯೋಗಕ್ಕೆ ಕಾಂಗ್ರೆಸ್ ದೂರು

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಯೋಜನೆಗಳ ಬಗ್ಗೆ ತೀವ್ರ ಟೀಕೆಯಲ್ಲಿ ನಿರತರಾಗಿರುವಂತ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಹಾಗೂ ಮಾಜಿ ಸಿಎಂ ಹೆಚ್.ಡಿ ಕುಮಾರಸ್ವಾಮಿ ವಿರುದ್ಧ ಚುನಾವಣಾ ಆಯೋಗಕ್ಕೆ ಕಾಂಗ್ರೆಸ್ ಪಕ್ಷದಿಂದ ದೂರು ನೀಡಲಾಗಿದೆ.ಇಂದು ರಾಜ್ಯ ಚುನಾವಣಾ ಆಯೋಗದ ಮುಖ್ಯ ಕಚೇರಿಗೆ ತೆರಳಿದಂತ ಕಾಂಗ್ರೆಸ್ ಪಕ್ಷದ ಸಂವಹನ ವಿಭಾಗದ ಅಧ್ಯಕ್ಷ ರಮೇಶ್ ಬಾಬು ಅವರು, ರಾಜ್ಯ ಸರ್ಕಾರದ ಗ್ಯಾರಂಟಿಗಳನ್ನು ವಿಪಕ್ಷದ ನಾಯಕರು ಅಪಪ್ರಚಾರ ಮಾಡುತ್ತಿದ್ದಾರೆ.ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಮನವಿ ಮಾಡಲಾಗಿದೆ.ಕಾಂಗ್ರೆಸ್ ಪಕ್ಷದಿಂದ ನೀಡಿರುವಂತ ದೂರಿನಲ್ಲಿ ಮಾಜಿ ಸಿಎಂ ಹೆಚ್.ಡಿ ಕುಮಾರಸ್ವಾಮಿ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಚುನಾವಣಾ ಆಯೋಗಕ್ಕೆ ನೀಡಿರುವಂತ ದೂರಿನಲ್ಲಿ ಕೋರಲಾಗಿದೆ.

## ಪ್ರಣಾಳಿಕೆಯೇ ನನಗೆ ಭಗವದ್ಗೀತೆ: ಡಾ.ಕೆ.ಸುಧಾಕರ್

• ಉದಯವಾಹಿನಿ, ಹೊಸಕೋಟೆ

ನರೇಂದ್ರ ಮೋದಿ ಅವರು ಪ್ರಧಾನಿಯಾದರೆ ಮಾತ್ರ ಈ ದೇಶ ಸುರಕ್ಷಿತವಾಗಿರಲು ಸಾಧ್ಯ. ಆದ್ದರಿಂದ ಶುಕ್ರವಾರ ನಡೆಯುವ ಚುನಾವಣೆಯಲ್ಲಿ ಬಿಜೆಪಿ ಪಕ್ಷಕ್ಕೆ ಮತ ನೀಡಬೇಕು ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ಕೆ.ಸುಧಾಕರ್ ಅವರು ಮನವಿ ಮಾಡಿದರು.

ದೇಶದ ಸಮಗ್ರ ಏಳಿಗೆಗೆ ಬಿಜೆಪಿಯಿಂದ ಅದ್ಭುತ ಪ್ರಣಾಳಿಕೆ ನೀಡಿದೆ. ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರಕ್ಕೆ ವೈಜ್ಞಾನಿಕವಾಗಿ ಪ್ರತ್ಯೇಕ ಪ್ರಣಾಳಿಕೆ ನೀಡಿದ್ದೇನೆ. ಆ ಪ್ರಣಾಳಿಕೆಯೇ ನನಗೆ ಭಗವದ್ಗೀತೆಯಿದ್ದಂತೆ. ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಅಭಿವೃದ್ಧಿಗೆ ನಾನು ಹಾಕಿಕೊಂಡಿರುವ ಯೋಜನೆಗಳನ್ನು ಚಾಚೂ ತಪ್ಪದೆ ಜಾರಿಗೆ ತರುತ್ತೇನೆ. ಕ್ಷೇತ್ರದ ಅಭಿವೃದ್ಧಿ ದೃಷ್ಟಿಯಲ್ಲಾದರೂ ಬಿಜೆಪಿ ಪಕ್ಷವನ್ನು ಬೆಂಬಲಿಸಬೇಕಿದೆ' ಪತ್ರಿಕಾಗೋಷ್ಠಿಯಲ್ಲಿ ಕೋರಿದರು. ಅಪಪ್ರಚಾರ, ಸುಳ್ಳು ಆರೋಪ, ಚಾರಿತ್ರ್ಯವಧೆ ಮಾಡುವಲ್ಲಿ ಕಾಂಗ್ರೆಸ್ ಮುಖಂಡರು ನಿಸ್ಸೀಮರು. ಚುನಾವಣಾ ತಂತ್ರ ರೂಪಿಸುವಲ್ಲು ಅನುಭವಿಗಳು, ಆದ್ದರಿಂದ ಹೇಗಾದರೂ ಮಾಡಿ ಗೆಲ್ಲಲೇ ಬೇಕು ಎಂಬ ಉದ್ದೇಶದಿಂದ ನನ್ನ ಮೇಲೆ ಇಲ್ಲಸಲ್ಲದ ಆಪಾದನೆ ಮಾಡಿ ತೇಜೋವಧೆ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಉದಯವಾಹಿನಿ ಚಿತ್ರ



> ಈ ಚುನಾವಣೆ ದೇಶದ ಚುನಾವಣೆ, ಆಡಳಿತ ನಡೆಸಲು ಸಮರ್ಥ ನಾಯಕನನ್ನು ಆಯ್ಕೆ ಮಾಡುವ ಚುನಾವಣೆ, ಆ ನಾಯಕತ್ವ ಗುಣ ಇರುವುದು ಕೇವಲ ಮೋದಿ ಅವರಿಗೆ ಮಾತ್ರ. ಆದ್ದರಿಂದ ಬಿಜೆಪಿ ಪಕ್ಷವನ್ನು ಗೆಲ್ಲಿಸಬೇಕಿದೆ ಎಂದು ಹೇಳಿದರು.
> ಎಂಟಿಬಿ ನಾಗರಾಜ್

## ಲೋಕಸಭೆ ಚುನಾವಣೆಗೆ ಇಂದು ಮತದಾನ
### ರಾಜ್ಯದಲ್ಲಿ ಏನಿರುತ್ತೆ ಏನಿರಲ್ಲ

**ಇಂದು ರಾಜ್ಯದ ಈ ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ**

- ಉಡುಪಿ-ಚಿಕ್ಕಮಗಳೂರು
- ಹಾಸನ
- ದಕ್ಷಿಣ ಕನ್ನಡ
- ಚಿತ್ರದುರ್ಗ
- ತುಮಕೂರು
- ಮಂಡ್ಯ
- ಮೈಸೂರು
- ಚಾಮರಾಜನಗರ
- ಬೆಂಗಳೂರು ಗ್ರಾಮಾಂತರ
- ಬೆಂಗಳೂರು ಉತ್ತರ
- ಬೆಂಗಳೂರು ಕೇಂದ್ರ, ಬೆಂಗಳೂರು ದಕ್ಷಿಣ
- ಚಿಕ್ಕಬಳ್ಳಾಪುರ
- ಕೋಲಾರ ಲೋಕಸಭಾ ಕ್ಷೇತ್ರದಲ್ಲಿ ಮೊದಲ ಹಂತಕ್ಕೆ ಮತದಾನ ನಡೆಯಲಿದೆ.



**ಏನಿರುತ್ತೆ**

ಸಾರ್ವಜನಿಕ ಸಾರಿಗೆಯಂತಹ ಅಗತ್ಯ ಸೇವೆಗಳು (ಬಿಎಂಟಿಸಿ, ಬಿಎಂಆರ್‌ಸಿಎಲ್) ಆಸ್ಪತ್ರೆಗಳು ಮತ್ತು ಆರೋಗ್ಯ ಸೌಲಭ್ಯಗಳು ಎಂದಿನಂತೆ ಕಾರ್ಯನಿರ್ವಹಿಸುತ್ತವೆ ಅರ್ಹ ಉದ್ಯೋಗಿಗಳಿಗೆ ಚುನಾವಣಾ ದಿನದಂದು ಮುಂಚಿತವಾಗಿ ಮತ ಚಲಾಯಿಸಲು ವಾಣಿಜ್ಯ ಸಂಸ್ಥೆಗಳು ಅವಕಾಶ (ಬಹುಶಃ ವಿಳಂಬವಾದ ಪ್ರಾರಂಭದೊಂದಿಗೆ)

**ನಾಳೆ ಮತದಾನದ ಹಿನ್ನೆಲೆ ಏನಿರಲ್ಲ**

ಶಾಲೆಗಳು, ಕಾಲೇಜುಗಳು ಮತ್ತು ಅಂತಹುದೇ ಶಿಕ್ಷಣ ಸಂಸ್ಥೆಗಳು ಬಂದ್ ಅನಿವಾರ್ಯವಲ್ಲದ ಸರ್ಕಾರಿ ಸೇವೆಗಳು ಬಂದ್ ಕರ್ನಾಟಕ ಹೈಕೋರ್ಟ್ ಪೀಠಗಳು (ಏಪ್ರಿಲ್ 26 ಮತ್ತು ಮೇ 7) ಬ್ಯಾಂಕುಗಳು ಮದ್ಯ ಮಾರಾಟ (ಏಪ್ರಿಲ್ 24, ಸಂಜೆ 5 - ಏಪ್ರಿಲ್ 26, ಮಧ್ಯರಾತ್ರಿ) ಏಪ್ರಿಲ್ 24 ರ ಸಂಜೆ 6 ಗಂಟೆಯಿಂದ ಏಪ್ರಿಲ್ 26 ರ ಮಧ್ಯರಾತ್ರಿಯವರೆಗೆ ಸಿಆರ್‌ಪಿಸಿಯ ಸೆಕ್ಷನ್ 144 ರ ಅಡಿಯಲ್ಲಿ ನಿಷೇಧಾಜ್ಞೆ ಜಾರಿಯಲ್ಲಿದೆ. ಐದು ವ್ಯಕ್ತಿಗಳಿಗಿಂತ ಹೆಚ್ಚು ಗುಂಪುಗಳು, ರ್‍ಯಾಲಿಗಳು, ಸಾರ್ವಜನಿಕ ಸಭೆಗಳು, ಮಾರಕಾಸ್ತ್ರಗಳು ಮತ್ತು ಸ್ಫೋಟಕಗಳನ್ನು ಹೊಂದಿರುವುದು, ಪ್ರತಿಕೃತಿಗಳನ್ನು ಪ್ರದರ್ಶಿಸುವುದು ಮತ್ತು ಸುಡುವುದು, ಪ್ರಚೋದನಕಾರಿ ಭಾಷಣಗಳನ್ನು ಮಾಡುವುದು ಮತ್ತು ರಾಜಕೀಯ ಘೋಷಣೆಗಳನ್ನು ಸಾರ್ವಜನಿಕವಾಗಿ ಪಠಿಸುವುದನ್ನು ಈ ಆದೇಶವು ನಿಷೇಧಿಸುತ್ತದೆ.

• ಉದಯವಾಹಿನಿ, ಬೆಂಗಳೂರು

ಲೋಕಸಭಾ ಚುನಾವಣೆ 2024 ರ ಎರಡನೇ ಹಂತದಲ್ಲಿ ಕರ್ನಾಟಕದ 14 ಸ್ಥಾನಗಳಿಗೆ ಶುಕ್ರವಾರ ಮತದಾನ ನಡೆಯಲಿದೆ. ಇದರ ಪರಿಣಾಮವಾಗಿ, ಚುನಾವಣೆ ನಡೆಯುವ ಕ್ಷೇತ್ರಗಳಲ್ಲಿ ಹಲವಾರು ಸಂಸ್ಥೆಗಳು, ಕಚೇರಿಗಳು ಮತ್ತು ಸೇವೆಗಳು ಮುಚ್ಚಲ್ಪಡುತ್ತವೆ.

## ರೈಲಿಗೆ ಸಿಲುಕಿ ಮೂವರು ಯುವಕರು ದುರ್ಮರಣ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಚಲಿಸುತ್ತಿದ್ದಂತ ರೈಲಿಗೆ ಸಿಲುಕಿದಂತ ಮೂವರು ಸ್ಥಳದಲ್ಲೇ ದುರ್ಮರಣ ಹೊಂದಿರುವಂತ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ಬೆಂಗಳೂರಿನ ಬೈಯ್ಯಪ್ಪನಹಳ್ಳಿಯ ಬಳಿಯಲ್ಲಿ ರೈಲುಗೆ ಸಿಲುಕಿ ಮೂವರು ದುರ್ಮರಣ ಹೊಂದಿರೋದಾಗಿ ತಿಳಿದು ಬಂದಿದೆ. ಸಾವನ್ನಪ್ಪಿದಂತ ಮೂವರನ್ನು ಆಂಧ್ರಪ್ರದೇಶದ ಚಿತ್ತೂರು ಮೂಲದವರೆಂದು ಶಂಕಿಸಲಾಗಿದೆ. ಮೃತರೆಲ್ಲರೂ 25 ವರ್ಷ ವಯಸ್ಸಿನ ಯುವಕರು ಎಂಬುದಾಗಿ ಹೇಳಲಾಗುತ್ತಿದೆ. ರೈಲುಗೆ ಸಿಲುಕಿ ಮೂವರು ದುರ್ಮರಣ ಹೊಂದಿರುವಂತ ವಿಷಯ ತಿಳಿದಂತ ಬೈಯ್ಯಪ್ಪನಹಳ್ಳಿ ಠಾಣೆಯ ಪೊಲೀಸರು, ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

## ಡಿ.ಕ್ರಾಸ್ ಸಮೀಪದ ಅರಣ್ಯಕ್ಕೆ ಬೆಂಕಿ

• ಉದಯವಾಹಿನಿ, ದೊಡ್ಡಬಳ್ಳಾಪುರ

ನಗರದ ಡಿ.ಕ್ರಾಸ್ ಸಮೀಪದ ಹಿಂದೂಪುರ-ಬೆಂಗಳೂರು ರಾಜ್ಯದ ಹೆದ್ದಾರಿ ಬದಿಯಲ್ಲಿನ ಬೆಸ್ಕಾಂ ವಿದ್ಯುತ್ ವಿತರಣ ಕೇಂದ್ರದ ಸಮೀಪದ ಅರಣ್ಯ ಪ್ರದೇಶದಲ್ಲಿ ಬುಧವಾರ ರಾತ್ರಿ, ಬೆಂಕಿ ಆವರಿಸಿದ್ದರಿಂದ ರಸ್ತೆಯಲ್ಲಿ ಹೋಗುವ ವಾಹನ ಸವಾರು ಪರದಾಡಿದರು.ಬೆಂಕಿ ಆವರಿಸಿರುವ ಪ್ರದೇಶದ ರಸ್ತೆಯುದ್ದಕ್ಕೂ ತಾಲ್ಲೂಕಿನ ಪ್ರಮುಖ ವಿದ್ಯುತ್ ವಿತರಣಾ ಕೇಂದ್ರ, ನಗರ ಪೊಲೀಸ್ ಠಾಣೆ,ಕೃಷಿ ಇಲಾಖೆ ಹಾಗೂ ತಾಯಿ ಮಕ್ಕಳ ತಾಲ್ಲೂಕು ಆಸ್ಪತ್ರೆಯು ಸಹ ಇದ್ದು ಜನರಲ್ಲಿ ಆತಂಕವನ್ನು ಉಂಟು ಮಾಡಿತ್ತು.

ಬಿಸಿಲಿನ ತಾಪಕ್ಕೆ ಒಣಗಿದ ಹುಲ್ಲಿನ ಕಾರಣ ಬೆಂಕಿ ವೇಗವಾಗಿ ಹರಡಿದ್ದು,ಬೆಂಕಿ ನಂದಿಸಲು ಅಗ್ನಿ ಶಾಮಕ ಸಿಬ್ಬಂದಿ ಹರಸಾಹಸ ಪಟ್ಟರು.

## ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶ ಶಿಕ್ಷಣ ಇಲಾಖೆಯಿಂದ ಅಪ್ ಡೇಟ್

• ಉದಯವಾಹಿನಿ, ಬೆಂಗಳೂರು

ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆದಿರುವಂತ ವಿದ್ಯಾರ್ಥಿಗಳು ಫಲಿತಾಂಶ ಯಾವಾಗ ಅನ್ನೋ ತೀವ್ರ ಕುತೂಹಲದಲ್ಲಿ ಇದ್ದೀರಿ. ಪರೀಕ್ಷೆ ಮುಗಿದ ಬೆನ್ನಲ್ಲೇ ಉತ್ತರ ಪತ್ರಿಕೆಗಳ ಮೌಲ್ಯ ಮಾಪನ ಕಾರ್ಯ ಕೂಡ ನಡೆಸಲಾಗುತ್ತಿದೆ. ಇನ್ನೇನು ಫಲಿತಾಂಶ ಪ್ರಕಟಿಸೋದು ಮಾತ್ರವೇ ಬಾಕಿ ಉಳಿದಿದೆ. ಎಸ್ ಎಸ್ ಎಲ್ ಸಿ ಪರೀಕ್ಷೆ ಫಲಿತಾಂಶದ ಬಗ್ಗೆ ಶಾಲಾ ಶಿಕ್ಷಣ ಇಲಾಖೆಯಿಂದ ಮಹತ್ವದ ಮಾಹಿತಿ ಹಂಚಿಕೊಳ್ಳಲಾಗಿದೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಬಳಿಕ ಉತ್ತರ ಪತ್ರಿಕೆಗಳ ಮೌಲ್ಯ ಮಾಪನ ಕಾರ್ಯ ನಡೆಯುತ್ತಿದೆ. ಇನ್ನೂ ಕೆಲವೇ ಕೆಲವು ವಿಷಯಗಳ ಉತ್ತರ ಪತ್ರಿಕೆಗಳ ಮೌಲ್ಯ ಮಾಪನ ಬಾಕಿ ಉಳಿದಿದೆ ಎಂದು ತಿಳಿಸಿದೆ. ಬಾಕಿ ಇರುವಂತ ಎಸ್ ಎಸ್ ಎಲ್ ಸಿ ಪರೀಕ್ಷೆಯ ಕೆಲ ವಿಷಯಗಳ ಉತ್ತರ ಪತ್ರಿಕೆಗಳ ಮೌಲ್ಯ ಮಾಪನ ಕಾರ್ಯ ನಡೆಯುತ್ತಿದೆ. ಇವುಗಳ ಮೌಲ್ಯ ಮಾಪನ ಕಾರ್ಯವು ಮುಗಿದ ಬಳಿಕ ಶೀಘ್ರದಲ್ಲೇ ಫಲಿತಾಂಶ ಘೋಷಣೆಯ ದಿನಾಂಕವನ್ನು ಪ್ರಕಟಿಸುವುದಾಗಿ ಶಾಲಾ ಶಿಕ್ಷಣ ಇಲಾಖೆಯ ನಿರ್ದೇಶಕರು ತಿಳಿಸಿದ್ದಾರೆ.

## ಮತಗಟ್ಟೆಗಳು,ಎಲ್ಲೆಲ್ಲಿ ಇಲ್ಲಿದೆ ಮಾಹಿತಿ

• ಉದಯವಾಹಿನಿ, ಬೆಂಗಳೂರು

(ಏ.26) ರಂದು ಬೆಂಗಳೂರು ಸೇರಿ ಕರ್ನಾಟಕದ 14 ಲೋಕಸಭಾ ಕ್ಷೇತ್ರಗಳಲ್ಲಿ ಮೊದಲ ಹಂತದ ಮತದಾನ ನಡೆಯಲಿದ್ದು , ಮತಗಟ್ಟೆಗಳಲ್ಲಿ ಸಕಲ ಸಿದ್ಧತೆಗಳು ನಡೆಯುತ್ತಿವೆ. ಬೆಂಗಳೂರು ನಗರದಲ್ಲಿ ಒಟ್ಟೂ ಮೂರು ಲೋಕಸಭಾ ಕ್ಷೇತ್ರಗಳಿದ್ದು ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ ಹಾಗೂ ಬೆಂಗಳೂರು ಸೆಂಟ್ರಲ್ ಕ್ಷೇತ್ರಗಳಲ್ಲಿ ಸ್ಪರ್ಧಿಗಳ ಮಧ್ಯೆ ಭಾರಿ ಪೈಪೋಟಿ ನಡೆದಿದೆ. ಇನ್ನು ಪ್ರತಿ ಕ್ಷೇತ್ರಗಳಲ್ಲೂ ಸಖಿ ಮತಗಟ್ಟೆ, ಯುವ ಮತಗಟ್ಟೆ, ವಿಶೇಷ ಚೇತನರ ಮತಗಟ್ಟೆಗಳಿದ್ದು ಬೆಂಗಳೂರು ಸೆಂಟ್ರಲ್ ಲೋಕಸಭಾ ಕ್ಷೇತ್ರ ವ್ಯಾಪ್ತಿಯ 7 ನಗರಗಳು, ಬೆಂಗಳೂರು ದಕ್ಷಿಣ ಕ್ಷೇತ್ರಗಳಲ್ಲಿನ 7 ನಗರಗಳು, ಹಾಗೇ ಉತ್ತರ ಕ್ಷೇತ್ರದಲ್ಲಿ 7 ನಗರಗಳು ಬರಲಿದ್ದು ಪ್ರತಿ ಲೋಕಸಭಾ ಕ್ಷೇತ್ರದಲ್ಲಿ ತಲಾ 35 ಸಖಿ ಮತಗಟ್ಟೆಗಳನ್ನು ನಿರ್ಮಾಣ ಮಾಡಲಾಗಿದ್ದು , ತಲಾ 7 ಮತಗಟ್ಟೆಗಳನ್ನು ವಿಶೇಷ ಚೇತನ ಮತದಾರರಿಗೆ ಮೀಸಲಿಡಲಾಗಿದೆ, ಹಾಗೇ ತಲಾ 7 ಯುವ ಮತಗಟ್ಟೆಗಳನ್ನು ನಿರ್ಮಿಸಲಾಗಿದ್ದು , ವಿವಿಧ ಥೀಮ್‌ಗಳಲ್ಲಿ 7 ಮತಗಟ್ಟೆಗಳನ್ನು ನಿರ್ಮಾಣ ಮಾಡಲಾಗಿದೆ. ನೀರಿನ ಸಂರಕ್ಷಣೆ, ಬೆಂಗಳೂರು ಕರಗ, ಯಕ್ಷಗಾನ ಥೀಮ್, ಸಾಂಸ್ಕೃತಿಕ ಥೀಮ್, ಆಯುರ್ವೇದಿಕ್ ಥೀಮ್, ಅರಣ್ಯ ಥೀಮ್‌ಗಳ ಮತಗಟ್ಟೆಗಳನ್ನು ಈ ಬಾರಿ ನೋಡಬಹುದಾಗಿದೆ.

## ಉಚಿತ ಪ್ರಯಾಣಕ್ಕೆ ಕೆಎಸ್‌ಆರ್‌ಟಿಸಿ, ಬಿಎಂಟಿಸಿ ಅವಕಾಶ

■ ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳಿಗೆ ಪೂರಕ ಪರೀಕ್ಷೆಗಳು ಪ್ರಾರಂಭ, ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅನುಮತಿ

• ಉದಯವಾಹಿನಿ, ಬೆಂಗಳೂರು

ಏಪ್ರಿಲ್.29ರಿಂದ ದ್ವಿತೀಯ ಪಿಯುಸಿ ಪರೀಕ್ಷೆ-2 ಆರಂಭಗೊಳ್ಳಲಿದೆ. ಈ ಪರೀಕ್ಷೆಗೆ ಹಾಜರಾಗೋ ವಿದ್ಯಾರ್ಥಿಗಳಿಗೆ ಗುಡ್ ನ್ಯೂಸ್ ಎನ್ನುವಂತೆ ಕೆ ಎಸ್ ಆರ್ ಟಿಸಿ ಹಾಗೂ ಬಿಎಂಟಿಸಿ ತನ್ನ ಸಾರಿಗೆ ಬಸ್ಸುಗಳಲ್ಲಿ ಉಚಿತ ಪ್ರಯಾಣಕ್ಕೆ ಅವಕಾಶ ನೀಡಿವೆ.

ಈ ಕುರಿತಂತೆ ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ಹಂಚಿಕೊಂಡಿರುವಂತ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು, ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ದಿನಾಂಕ: 29.04.2024 ರಿಂದ ಕರ್ನಾಟಕದ ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳಿಗೆ ಪೂರಕ ಪರೀಕ್ಷೆಗಳು ಪ್ರಾರಂಭವಾಗಲಿವೆ.

ಈ ಸಂಬಂಧ ವಿದ್ಯಾರ್ಥಿಗಳಿಗೆ ಅವರ ವಿದ್ಯಾಸಂಸ್ಥೆಯ ಹೊರತಾಗಿ ಇತರೆ ವಿದ್ಯಾಸಂಸ್ಥೆಗಳಿಗೆ ಪರೀಕ್ಷಾ ಕೇಂದ್ರಗಳ ನಿಯೋಜನೆಯಾಗಿರುವುದರಿಂದ, ಪರೀಕ್ಷಾ ಅವಧಿಯಲ್ಲಿ ವಿದ್ಯಾರ್ಥಿಗಳಿಗೆ ವಾಸಸ್ಥಳದಿಂದ ಪರೀಕ್ಷಾ ಕೇಂದ್ರಗಳವರೆಗೆ ನಿಗಮದ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅನುಮತಿಸುವಂತೆ ಉಲ್ಲೇಖಿತ-1 ರ ಪತ್ರದಲ್ಲಿ ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿ ರವರು ಕೋರಿರುತ್ತಾರೆ ಎಂದು ಹೇಳಿದೆ.

ಅದರನ್ವಯ ಕ.ರಾ.ರ.ಸಾ.ನಿಗಮವು, ದ್ವಿತೀಯ ಪಿಯುಸಿ ಪರೀಕ್ಷೆ-2 ನಡೆಯುವ ದಿನಾಂಕಗಳಂದು ಅಂದರೆ, ದಿನಾಂಕ 29.04.2024 ರಿಂದ 16.05.2024 ರವರೆಗೆ, ಪರೀಕ್ಷೆಗೆ ಹಾಜರಾಗುವ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು ತಮ್ಮ ವಾಸಸ್ಥಳದಿಂದ ನಿಯೋಜಿತ ಪರೀಕ್ಷಾ ಕೇಂದ್ರದವರೆಗೆ ಹೋಗುವಾಗ ಮತ್ತು ಹಿಂದಿರುಗುವಾಗ ದ್ವಿತೀಯ ಪಿಯುಸಿ ಪರೀಕ್ಷಾ ಪ್ರವೇಶ ಪತ್ರವನ್ನು ತೋರಿಸಿ, ನಿಗಮದ ನಗರ, ಹೊರವಲಯ, ಸಾಮಾನ್ಯ ಹಾಗೂ ವೇಗದೂತ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದೆ. ಈ ಸಂಬಂಧ, ನಿಗಮದ ಎಲ್ಲಾ ಚಾಲಕರು ಹಾಗೂ ನಿರ್ವಾಹಕರುಗಳಿಗೆ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಪರೀಕ್ಷಾ ಅವಧಿಯಲ್ಲಿ ನಿಯೋಜಿತ ಪರೀಕ್ಷಾ ಕೇಂದ್ರಗಳಿಗೆ ತೆರಳಲು ಹಾಗೂ ವಾಸಸ್ಥಳಕ್ಕೆ ಮರಳಲು ಪರೀಕ್ಷಾ ಪ್ರವೇಶ ಪತ್ರದೊಂದಿಗೆ ಪ್ರಯಾಣಿಸಲು ಅನುಮತಿಸಲು ಸೂಕ್ತ ತಿಳುವಳಿಕೆ ನೀಡಲು ಸೂಚಿಸಲಾಗಿದೆ. ಚಾಲನಾ ಸಿಬ್ಬಂದಿಗಳು ಮೇಲ್ಕಂಡ ನಿರ್ದೇಶನಗಳನ್ನು ತಪ್ಪದೇ ಪಾಲಿಸುವಂತೆ ತಿಳಿಸುವುದು. ಈ ವಿಷಯವನ್ನು ಎಲ್ಲಾ ಘಟಕ ಮತ್ತು ಬಸ್ ನಿಲ್ದಾಣಗಳ ಸೂಚನಾ ಫಲಕಗಳಲ್ಲಿ ಪ್ರದರ್ಶಿಸಿ ಮೇಲ್ಕಂಡ ನಿರ್ದೇಶನಗಳನ್ನು ಜಾರಿಗೊಳಿಸಲು ಕ್ರಮ ವಹಿಸುವಂತೆ ತಿಳಿಸಲಾಗಿದೆ ಎಂದು ಹೇಳಿದೆ.



ಉದಯವಾಹಿನಿ ಚಿತ್ರ

> ಹೆಚ್ಚುವರಿ ಸುತ್ತುವಳಗಳ ಕಾರ್ಯಾಚರಣೆಯ ಅಗತ್ಯತೆ ಕಂಡುಬಂದಲ್ಲಿ ಕಾರ್ಯಾಚರಣೆ ಮಾಡುವುದು. ಪರೀಕ್ಷಾ ಕೇಂದ್ರಗಳ ಬಳಿ ವಿದ್ಯಾರ್ಥಿಗಳು/ಪೋಷಕರು ಕೋರಿಕೆ ನಿಲುಗಡೆ ಕೋರಿದಲ್ಲಿ, ಬಸ್ ನಿಲುಗಡೆಯನ್ನು ನೀಡಲು ಚಾಲನಾ ಸಿಬ್ಬಂದಿಗಳಿಗೆ ತಿಳಿಸುವುದು. ಚಾಲನಾ ಸಿಬ್ಬಂದಿಗಳು ವಿದ್ಯಾರ್ಥಿಗಳೊಂದಿಗೆ ಸೌಜನ್ಯಯುತವಾಗಿ ವರ್ತಿಸುವಂತೆ ಸೂಚಿಸಿದೆ.

> ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳಿಗೆ ದಿನಾಂಕ 29.04.2024 ರಿಂದ 16.05.2024 ರವರೆಗೆ ಪರೀಕ್ಷೆಗಳು ನಡೆಯುವ ದಿನಾಂಕಗಳಂದು ಪರೀಕ್ಷೆಗೆ ಹಾಜರಾಗಲು ವಾಸಸ್ಥಳ ದಿಂದ ನಿಯೋಜಿತ ಪರೀಕ್ಷಾ ಕೇಂದ್ರದವರೆಗೆ ಹೋಗುವಾಗ ಮತ್ತು ಹಿಂದಿರುಗುವಾಗ ಸಂಸ್ಥೆಯ ಸಾಮಾನ್ಯ ಸೇವೆಗಳಲ್ಲಿ ದ್ವಿತೀಯ ಪಿಯುಸಿ ಪರೀಕ್ಷಾ ಪ್ರವೇಶ ಪತ್ರವನ್ನು ತೋಲಿಸಿ, ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ. ದ್ವಿತೀಯ ಪಿಯುಸಿ ಪರೀಕ್ಷಾ ದಿನಾಂಕಗಳಂದು ಪರೀಕ್ಷಾ ಕೇಂದ್ರಗಳ ಮಾರ್ಗಗಳಲ್ಲಿ ಕಡ್ಡಾಯವಾಗಿ ಎಲ್ಲಾ ಮಾರ್ಗಗಳನ್ನು, ಸುತ್ತುವಳಗಳನ್ನು ಕಾರ್ಯಾಚರಣೆ ಗೊಳಿಸುವುದು ಎಂದು ಹೇಳಿದೆ.

ಸೌಜನ್ಯಯುತವಾಗಿ ವರ್ತಿಸುವಂತೆ ಸೂಚನೆ

> ಇನ್ನೂ ಬಿಎಂಟಿಸಿ ಕೂಡ ಆದೇಶ ಹೊರಡಿಸಿದ್ದು, ಅದರಲ್ಲಿ ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ದಿನಾಂಕ 29.04.2024 ರಿಂದ 15.05.2024 ರವರೆಗೆ ದ್ವಿತೀಯ ಪಿ.ಯು.ಸಿ ಪರೀಕ್ಷೆ 02 ನಡೆಯಲಿದ್ದು. ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಅವರ ಕಾಲೇಜು ಹೊರತಾಗಿ ಇತರೆ ಕಾಲೇಜಿನ ಪರೀಕ್ಷಾ ಕೇಂದ್ರಗಳ ನಿಯೋಜನೆಯಾಗಿರುವುದರಿಂದ ಪರೀಕ್ಷಾ ಅವಧಿಯಲ್ಲಿ ವಿದ್ಯಾರ್ಥಿಗಳಿಗೆ ಅವರ ವಾಸಸ್ಥಳದಿಂದ ಪರೀಕ್ಷಾ ಕೇಂದ್ರಗಳವರೆಗೆ ಸಂಸ್ಥೆಯ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅನುಮತಿಸುವಂತೆ ಉಲ್ಲೇಖಿತ ಪತ್ರದಲ್ಲಿ ಕೋರಲಾಗಿದೆ ಎಂದಿದೆ.

ಉದಯವಾಹಿನಿ

ಪ್ರಾದೇಶಿಕ

ಶುಕ್ರವಾರ
26 ಏಪ್ರಿಲ್ 2024



# ಬಹಿರಂಗ ಪ್ರಚಾರ ಅಂತ್ಯ, ಮನೆ ಮನೆ ಭೇಟಿ

## ತಾಲ್ಲೂಕು ಕೇಂದ್ರಗಳಲ್ಲಿ ಮಸ್ಟರಿಂಗ್ ಮತ್ತು ಡಿ ಮಸ್ಟರಿಂಗ್ ಕಾರ್ಯಕ್ಕೆ ತಲಾ ಒಂದೊಂದು ಕೇಂದ್ರ ತೆರೆಯಲಾಗಿದೆ

• ಉದಯವಾಹಿನಿ ಚಾಮರಾಜನಗರ

ಶುಕ್ರವಾರ (ಏ.26) ನಡೆಯಲಿರುವ ಮತದಾನಕ್ಕೆ ಜಿಲ್ಲಾಡಳಿತ ಕೊನೆ ಕ್ಷಣದ ಸಿದ್ಧತೆಯಲ್ಲಿ ತೊಡಗಿದ್ದು, ಬುಧವಾರ ಸಂಜೆ 6 ಗಂಟೆಗೆ ಬಹಿರಂಗ ಪ್ರಚಾರ ಅಂತ್ಯಗೊಂಡಿದೆ. ಜಿಲ್ಲೆಯ ವ್ಯಾಪ್ತಿಯಲ್ಲಿ ರಾಜಕೀಯ ಪಕ್ಷಗಳ ಮುಖಂಡರು ಬೆಳಿಗ್ಗೆಯಿಂದಲೇ ಬಹಿರಂಗ ಪ್ರಚಾರದಲ್ಲಿ ತೊಡಗಲಿಲ್ಲ. ಮನೆ ಮನೆ ಭೇಟಿ ಮಾಡಿ ತಮ್ಮ ಅಭ್ಯರ್ಥಿ ಪರವಾಗಿ ಪ್ರಚಾರ ನಡೆಸಿದರು.

ಅಭ್ಯರ್ಥಿಗಳ ಹೆಸರು ಘೋಷಣೆಯಾದ ಬಳಿಕ ನಿರಂತರವಾಗಿ ಬಿರು ಬಿಸಿಲಿನಲ್ಲಿ ಕ್ಷೇತ್ರದಾದ್ಯಂತ ಸುತ್ತಾಡಿದ್ದ ಮುಖಂಡರು ಬುಧವಾರ ಕೊಂಚ ಸಾವರಿಸಿಕೊಂಡರು. ಬಿಜೆಪಿ, ಕಾಂಗ್ರೆಸ್ ಮುಖಂಡರು ಸುದ್ದಿಗೋಷ್ಠಿ ನಡೆಸಿ ಪ್ರಚಾರದ ಬಗ್ಗೆ ವಿವರಗಳನ್ನು ನೀಡಿ, ಮತದಾರರು ಬೆಂಬಲ ನೀಡಬೇಕು ಮಾಧ್ಯಮಗಳ ಮೂಲಕ ಮನವಿ ಮಾಡಿದರು.

### ಭದ್ರತಾ ವ್ಯವಸ್ಥೆ

**ನಗರದ ಹೊರವಲಯದ ಬೇಡರಪುರದ ಸರ್ಕಾರಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ಮತದಾನದ ಬಳಿಕ ಇವಿಎಂಗಳನ್ನು ಇಡಲು ಸ್ಟ್ರಾಂಗ್ ರೂಂಗಳನ್ನು ತೆರೆಯಲಾದ್ದು, ಜಿಲ್ಲಾಡಳಿತ ಅಲ್ಲಿ ಎಲ್ಲಾ ರೀತಿಯ ಭದ್ರತಾ ವ್ಯವಸ್ಥೆ ಮಾಡಿದೆ. ಜೂನ್ 4ರಂದು ಅಲ್ಲಿಯೇ ಮತ ಎಣಿಕೆ ಕಾರ್ಯ ನಡೆಯಲಿದೆ.**

**ಮತದಾರರ ಸೆಳೆಯಲು ತಂತ್ರ:** ಮತದಾನಕ್ಕೆ ಇನ್ನು ಒಂದೇ ದಿನ ಬಾಕಿ ಇರುವಂತೆಯೇ ಮುಖಂಡರು ಮತದಾರರನ್ನು ಸೆಳೆಯಲು ಕಾರ್ಯ ತಂತ್ರ ಹೆಣೆಯುತ್ತಿದ್ದಾರೆ. ಆಯಾ ಸಮಾಜದ ಮುಖಂಡರು, ಯಜಮಾನರ ಮೂಲಕ ದೂರವಾಣಿ ಕರೆ ಮಾಡಿಸುವುದು, ಪಕ್ಷದ ಮುಖಂಡರು ಮನೆಗಳಿಗೇ ನೇರವಾಗಿ ತೆರಳಿ ಬೆಂಬಲ ನೀಡುವಂತೆ ಮನವಿ



ಉದಯವಾಹಿನಿ ಚಿತ್ರ

ಮಾಡುವುದು, ವಿರೋಧ ಪಕ್ಷದ ಪ್ರಭಾವಿ ಮುಖಂಡರನ್ನು ಸೆಳೆಯುವುದು ಅಥವಾ ತಟಸ್ಥರಾಗುವಂತೆ ನೋಡಿಕೊಳ್ಳುವುದು ಸೇರಿದಂತೆ ವಿವಿಧ ಪ್ರಯತ್ನಗಳನ್ನು ಮಾಡುತ್ತಿದ್ದಾರೆ.

**ಮಸ್ಟರಿಂಗ್ ಇಂದು:** ಮತದಾನಕ್ಕೆ ಸಂಬಂಧಿಸಿದಂತೆ ಮಸ್ಟರಿಂಗ್ ಕಾರ್ಯ ಗುರುವಾರ ನಡೆಯಲಿದೆ. ಜಿಲ್ಲೆ ನಾಲ್ಕೂ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ತಾಲ್ಲೂಕು ಕೇಂದ್ರಗಳಲ್ಲಿ ಮಸ್ಟರಿಂಗ್ ಮತ್ತು ಡಿ ಮಸ್ಟರಿಂಗ್ ಕಾರ್ಯಕ್ಕೆ ತಲಾ ಒಂದೊಂದು

ಮತದಾನಕ್ಕೆ ಜಿಲ್ಲಾಡಳಿತ ಸಿದ್ಧತೆ

**ಈ ಮಧ್ಯೆ ಶುಕ್ರವಾರ ಬೆಳಿಗ್ಗೆ 7 ರಿಂದ ಸಂಜೆ 6 ಗಂಟೆಯವರೆಗೆ ಮತದಾನ ನಡೆಯಲಿದ್ದು ಬೇಸಿಗೆ ಬಿಸಿಲಿನ ತಾಪದಿಂದ ಅತಿಯಾದ ಶಾಖ ಹಾಗೂ ಶಾಖ ತರಂಗದಿಂದ ಹೀಟ್ ಸ್ಟ್ರೋಕ್ ನಂತಹ ಆರೋಗದ್ಯ ಸಮಸ್ಯೆ ಉಂಟಾಗದಂತೆ ತಡೆಯಲು ಸಾರ್ವಜನಿಕರು ಮುಂಜಾಗ್ರತಾ ಕ್ರಮ ವಹಿಸುವಂತೆ ಆರೋಗ್ಯ ಇಲಾಖೆ ತಿಳಿಸಿದೆ. 'ಮತದಾನ ಮಾಡಲು ಬರುವ ಸಾರ್ವಜನಿಕರು ಬಿಸಿಲಿನಿಂದ ರಕ್ಷಣೆ ಪಡೆಯಲು ಟೋಪಿ ಛತ್ರಿಗಳ ಸಹಾಯ ಪಡೆಯಬೇಕು. ಹೆಚ್ಚಾಗಿ ದ್ರವ ರೂಪದ ಆಹಾರ ಹಣ್ಣುಗಳನ್ನು ಸೇವಿಸಬೇಕು. ಹೆಚ್ಚಾಗಿ ನೀರು ಕುಡಿಯಬೇಕು ಹಾಗೂ ಮತಗಟ್ಟೆ ಬಳಿ ನಿತ್ರಾಣ ಆದಲ್ಲಿ ಮತಗಟ್ಟೆಗೆ ನಿಯೋಜಿಸಿರುವ ವೈದ್ಯಕೀಯ ತಂಡದ ಬಳಿ ತಿಳಿಸಬೇಕು. ಹೆಚ್ಚಿನ ಚಿಕಿತ್ಸೆ ಅವಶ್ಯಕವಿದ್ದಲ್ಲಿ ಆಂಬುಲೆನ್ಸ್ ಮೂಲಕ ಆಸ್ಪತ್ರೆಗೆ ಕರೆದೊಯ್ಯಲು ಆರೋಗ್ಯ ಸಿಬ್ಬಂದಿಯ ಸಹಾಯ ಪಡೆಯಬೇಕು**

**-ಡಾ.ಚಿದಂಬರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ**

ಕೇಂದ್ರ ತೆರೆಯಲಾಗಿದೆ. ಹನೂರಿನ ಕ್ರಿಸ್ತರಾಜ ಎಜುಕೇಷನ್ ಟ್ರಸ್ಟ್, ಕೊಳ್ಳೇಗಾಲದ ಮಹದೇಶ್ವರ ಪ್ರಥಮ ದರ್ಜೆ ಕಾಲೇಜು, ಚಾಮರಾಜನಗರದ ಕರಿನಂಜನಪುರ ರಸ್ತೆಯಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಗುಂಡ್ಲುಪೇಟೆಯ ಊಟಿ ರಸ್ತೆಯಲ್ಲಿರುವ ಸೆಂಟ್ ಜಾನ್ಸ್ ಇಂಗ್ಲಿಷ್ ಮಾಧ್ಯಮ ಶಾಲೆಯಲ್ಲಿ ಮಸ್ಟರಿಂಗ್ ಮತ್ತು ಡಿಮಸ್ಟರಿಂಗ್ ನಡೆಯಲಿದೆ. ಮತಗಟ್ಟೆ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಮಸ್ಟರಿಂಗ್ ಕೇಂದ್ರಕ್ಕೆ ತಲುಪಲು ಮತ್ತು ಅಲ್ಲಿಂದ ನಿಗದಿತ ಮತಗಟ್ಟೆಗಳಿಗೆ ತಲುಪಲು ಕೆಎಸ್ಆರ್‌ಟಿಸಿ ಬಸ್ ವ್ಯವಸ್ಥೆಯನ್ನು ಜಿಲ್ಲಾಡಳಿತ ಮಾಡಿದೆ.

## ಮಿನಿ ನ್ಯೂಸ್

### ಶಾಸಕ ಎ.ಆರ್.ಕೃಷ್ಣಮೂರ್ತಿ ಕಾರು ಅಪಘಾತ; ಶಾಸಕರು ಅಪಾಯದಿಂದ ಪಾರು

• ಉದಯವಾಹಿನಿ ಮೈಸೂರು

ಕೋಲಾರ ಜಿಲ್ಲೆ ಕೊಳ್ಳೆಗಾಲ ಶಾಸಕ ಎ.ಆರ್.ಕೃಷ್ಣಮೂರ್ತಿ ಪ್ರಯಾಣಿಸುತ್ತಿದ್ದ ಕಾರು ಭೀಕರ ಅಪಘಾತಕ್ಕೀಡಾಗಿರುವ ಘಟನೆ ಮೈಸೂರು ಬಳಿ ನಡೆದಿದೆ. ಮೈಸೂರಿನ ನಾಡನಹಳ್ಳಿ ಬಳಿ ಈ ಅಪಘಾತ ಸಂಭವಿಸಿದೆ. ಚುನಾವಣಾ ಪ್ರಚಾರ ಮುಗಿಸಿ ವಾಪಾಸ್ ಆಗುತ್ತಿದ್ದಾಗ ತಡ ರಾತ್ರಿ, ಶಾಸಕರ ಕಾರಿನ ಟೈರ್ ಸ್ಫೋಟಗೊಂಡು ಅಪಘಾತ ಸಂಭವಿಸಿದೆ. ಅದೃಷ್ಟವಶಾತ್ ಶಾಸಕ ಎ.ಆರ್.ಕೃಷ್ಣಮೂರ್ತಿ ಅಪಾಯದಿಂದ ಪಾರಾಗಿದ್ದಾರೆ. ಘಟನಾ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

### ಸರ್ಕಾರಿ ನೌಕರ ಸಸ್ಪೆಂಡ್; ದಾಖಲೆ ಇಲ್ಲದ 33,19,540 ರೂ ನಗದು ಜಪ್ತಿ

• ಉದಯವಾಹಿನಿ ಚಿಕ್ಕಬಳ್ಳಾಪುರ

ಚಿಕ್ಕಬಳ್ಳಾಪುರ ಜಿಲೆಯಲ್ಲಿ ಈವರೆಗೆ 37 ನೀತಿ ಸಂಹಿತೆ ಕೇಸ್‌ಗಳು ದಾಖಲಾಗಿದ್ದು, ಓರ್ವ ಸರ್ಕಾರಿ ನೌಕರನನ್ನು ಅಮಾನತು ಮಾಡಲಾಗಿದೆ. ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ನೀತಿ ಸಂಹಿತೆ ಜಾರಿಯಾದಾಗಿನಿಂದ ಈವರೆಗೆ ಚಿಕ್ಕಬಳ್ಳಾಪುರದಲ್ಲಿ ದಾಖಲೆ ಇಲ್ಲದೇಸಾಗಿಸುತ್ತಿದ್ದ 33, 19, 540ರೂ ನಗದು ಹಣ ಜಪ್ತಿ ಮಾಡಲಾಗಿದೆ. 11 ಕೋಟಿ 13 ಲಕ್ಷದ 59,364 ಮೌಲ್ಯದ ಅಕ್ರಮ ಮದ್ಯ ವಶಕ್ಕೆ ಪಡೆಯಲಾಗಿದೆ. ದಾಖಲೆ ಇಲ್ಲದ 26,45,644 ಅಕ್ರಮ ವಸ್ತುಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಮಾಹಿತಿ ನೀಡಿದ್ದಾರೆ.

## ಲೋಕ ಚುನಾವಣೆ, ಜಿಲ್ಲೆಯಾದ್ಯಂತ ಬಿಗಿ ಬಂದೂಬಸ್ತ್: ಎಸ್ಪಿ ಕಾರ್ತಿಕ್ ರೆಡ್ಡಿ

• ಉದಯವಾಹಿನಿ ರಾಮನಗರ

ರಾಮನಗರ ಜಿಲ್ಲೆಯಾದ್ಯಂತ ಮತದಾನ ಸುಸೂತ್ರವಾಗಿ ನಡೆಯಲು ಪೊಲೀಸ್ ಇಲಾಖೆ ವತಿಯಿಂದ 2300 ಜನ ಪೊಲೀಸರು, ಕೆಎಸ್ಆರ್‌ಪಿಯಿಂದ 5 ತುಕಡಿಗಳು, 94 ಜನ ಸೆಕ್ಟರ್ ಅಧಿಕಾರಿಗಳು, 63 ಜನ ತುಕಡಿಗಳು, 1041 ಸಿವಿಲ್ ಪೊಲೀಸರು, 824 ಗೃಹ ರಕ್ಷಕರನ್ನು ನೇಮಕ ಮಾಡಲಾಗಿದೆ. ಯಾವುದೇ ಆಮಿಷಗಳಿಗೆ ಒಳಪಡದೆ ಮತದಾನ ಮಾಡುವಂತೆ ಹಾಗೂ ಯಾವುದೇ ದೂರುಗಳಿದ್ದಲ್ಲಿ ಟೋಲ್ ಫ್ರೀ ಸಂಖ್ಯೆ: 1950ಗೆ ಮಾಹಿತಿ ನೀಡಿದ್ದಲ್ಲಿ, ಇಲಾಖೆಯ ಸಿಬ್ಬಂದಿಗಳು ಕ್ರಮ ವಹಿಸುವರು. ಮತಗಟ್ಟೆಯಿಂದ 200 ಮೀಟರ್ ಅಂತರದಲ್ಲಿ ಮತಯಾಚನೆ ಮಾಡಬಾರದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಾರ್ತಿಕ್ ರೆಡ್ಡಿ ಅವರು ಮಾಹಿತಿ ನೀಡಿದರು.

**ಪೂರ್ವ ಪ್ರಮಾಣೀಕರಣ ಅನುಮತಿ:** ಚುನಾವಣಾ ಆಯೋಗದ ನಿರ್ದೇಶನದಂತೆ ಮುದ್ರಣ ಮಾಧ್ಯಮದಲ್ಲಿ ಯಾವುದೇ ಪ್ರಚೋದಕ, ತಪ್ಪು ದಾರಿಗೆಳೆಯುವ ಅಥವಾ ದ್ವೇಷದ ಜಾಹೀರಾತುಗಳಿಂದ ಯಾವುದೇ ಅಹಿತಕರ ಘಟನೆ ನಡೆಯದಂತೆ ಖಚಿತಪಡಿಸಿಕೊಳ್ಳಲು, ಯಾವುದೇ ರಾಜಕೀಯ ಪಕ್ಷಗಳು, ಅಭ್ಯರ್ಥಿಗಳು, ಯಾವುದೇ ಇತರ ಸಂಸ್ಥೆಗಳು ಅಥವಾ ವ್ಯಕ್ತಿಗಳು ರಾಜಕೀಯ ಜಾಹೀರಾತುಗಳನ್ನು ಮತದಾನದ ದಿನ ಹಾಗೂ ಮತದಾನದ ಮುನ್ನ ದಿನದಂದ (ಏಪ್ರಿಲ್ 25 ಹಾಗೂ ಏಪ್ರಿಲ್ 26) ಮುದ್ರಣ ಮಾಧ್ಯಮದಲ್ಲಿ ಪ್ರಕಟಿಸಲು ಜಿಲ್ಲಾ ಮಟ್ಟದ ಎಂ.ಸಿ.ಎಂ.ಸಿ ಸಮಿತಿಯಿಂದ ಪೂರ್ವ-ಪ್ರಮಾಣೀಕರಣ ಅನುಮತಿಯನ್ನು ಕಡ್ಡಾಯವಾಗಿ ಪಡೆಯಬೇಕು ಎಂದರು.

### ಪ್ರಕರಣಗಳ ವಿವರ

**ಎಂಸಿಸಿ, ಎಸ್‌ಎಫ್‌ಟಿ, ಅಬಕಾರಿ ಇಲಾಖೆ ಜಂಟಿ ಕಾರ್ಯಾಚರಣೆಯಲ್ಲಿ 5 ಕೋಟಿ 71 ಲಕ್ಷ ನಗದು, 1 ಕೋಟಿ 70 ಲಕ್ಷ ಮೌಲ್ಯದ 54324 ಲೀಟರ್ ಮದ್ಯ, 2.50 ಲಕ್ಷ ಮೌಲ್ಯದ 2.50 ಕೆ.ಜಿ ಗಾಂಜ, 26 ಕೋಟಿ 81 ಲಕ್ಷ ರೂ. ಮೌಲ್ಯದ ಸೀರೆ, ಕುಕ್ಕರ್, ಬಂಗಾರ, ವಿವಿಧ ಮಾದರಿಯ ವಾಹನಗಳನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಲಾಗಿದೆ.**

**ಮತದಾನ ದಿನದಂದು ವೇತನ ಸಹಿತ ರಜೆ:** ಏಪ್ರಿಲ್ 26 ರಂದು ಮತದಾನ ನಡೆಯಲಿದ್ದು, ಮತದಾನ ದಿನದಂದು ಮತ ಚಲಾಯಿಸಲು ಅನುಕೂಲವಾಗುವಂತೆ ಅರ್ಹ ಮತದಾರರಾಗಿರುವ ಎಲ್ಲಾ ವ್ಯವಹಾರಿಕಾ ಸಂಸ್ಥೆಗಳು, ಔದ್ಯಮಿಕ ಸಂಸ್ಥೆಗಳು ಮತ್ತು ಇನ್ನಿತರೆ ಸಂಸ್ಥೆಗಳಲ್ಲಿ ಖಾಯಂ ಆಗಿ ಅಥವಾ ದಿನಗೂಲಿ ಮೇಲೆ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ ಮತದಾನ ಮಾಡಲು ಅನುಕೂಲವಾಗುವಂತೆ ಪ್ರಜಾಪ್ರತಿನಿಧಿ ಕಾಯ್ದೆ - 1951 ಅಡಿಯಲ್ಲಿ ಎಲ್ಲಾ ಉಪಬಂಧಗಳಿಗೆ ಒಳಪಟ್ಟು ವೇತನ ಸಹಿತ ರಜೆ ನೀಡಲಾಗುವುದು ಎಂದರು. ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಹಿನ್ನೆಲೆಯಲ್ಲಿ ಕಾನೂನು ಸುವ್ಯವಸ್ಥೆ ಮತ್ತು ಸಾರ್ವಜನಿಕ ಶಾಂತಿ ಕಾಪಾಡುವ ದೃಷ್ಠಿಯಿಂದ ಏ. 24ರ ಸಂಜೆ 6 ಗಂಟೆಯಿಂದ ಏ. 26ರ ಮಧ್ಯರಾತ್ರಿ 12 ಗಂಟೆಯವರೆಗೆ ಅಪರಾಧ ದಂಡ ಪ್ರಕ್ರಿಯಾ ಸಂಹಿತೆ-1973ರ ಕಲಂ 144 ರಡಿ ಜಿಲ್ಲೆಯಾದ್ಯಂತ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ ಎಂದರು.

## ನೀರಿನ ನ್ಯಾಯ ಕೊಡದಿದ್ದರೆ ಮತ್ತೆ ಮತ ಕೇಳಲ್ಲ

• ಉದಯವಾಹಿನಿ ಮಂಡ್ಯ

ಮುಂದಿನ ಐದು ವರ್ಷಗಳಲ್ಲಿ ಕಾವೇರಿ, ಮೇಕೆದಾಟು, ಕೃಷ್ಣ, ಭದ್ರ, ಮೇಲ್ದಂಡೆ ಯೋಜನೆಗಳಿಗೆ ಸಂಬಂಧಿಸಿ ರಾಜ್ಯದ ಜನರಿಗೆ ನ್ಯಾಯ ನೀಡಲು ನನ್ನಿಂದ ಸಾಧ್ಯವಾಗದಿದ್ದರೆ ಮತ್ತೆಂದೂ ಮತ ಕೇಳಲು ಬರುವುದಿಲ್ಲ' ಎಂದು ಜೆಡಿಎಸ್- ಬಿಜೆಪಿ ಮೈತ್ರಿ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಬುಧವಾರ ಪ್ರತಿಪಾದಿಸಿದರು.



ಚುನಾವಣಾ ರ್‍ಯಾಲಿ ವೇಳೆ ಮಾತನಾಡಿ, 'ನಾನು ಲೋಕಸಭಾ ಅಭ್ಯರ್ಥಿಯಾಗಿ ಸ್ಪರ್ಧಿಸಿಲ್ಲ, ಮಂಡ್ಯ ಕ್ಷೇತ್ರದ ಪ್ರತಿ ಮನೆಯ ಮಗನಾಗಿ ಕಣಕ್ಕೆ ಬಂದಿದ್ದೇನೆ. ಕಾಂಗ್ರೆಸ್ ದುರಾಡಳಿತದಲ್ಲಿ ರಾಜ್ಯದ ಜನರ ಬದುಕು ಸರಿಪಡಿಸುವ, ಕಣ್ಣೀರು ಒರೆಸುವ ಕೆಲಸ ಮಾಡುತ್ತೇನೆ' ಎಂದರು. 2018ರ ಚುನಾವಣೆ ವೇಳೆ ನಮ್ಮನ್ನು ಬಿಜೆಪಿ ಬಿ ಟೀಂ ಎಂದಿದ್ದಿರಿ, ಆದರೂ ನಮ್ಮ ಮನೆ ಬಾಗಿಲಿಗೆ ಬಂದಿರಿ. ಮಲ್ಲಿಕಾರ್ಜುನ ಖರ್ಗೆ ಅವರನ್ನು ಮುಖ್ಯಮಂತ್ರಿ ಮಾಡಿ ಎಂದು ಎಚ್.ಡಿ.ದೇವೇಗೌಡರು ಹೇಳಿದ್ದರು. ಆದರೆ ಕಾಂಗ್ರೆಸ್ ನಾಯಕರು ಬಲವಂತವಾಗಿ ನನಗೆ ಮುಖ್ಯಮಂತ್ರಿ ಪಟ್ಟ ಕಟ್ಟಿದರು, ನಂತರ ಕಿರುಕುಳ ಕೊಟ್ಟು ಕೆಳಗಿಳಿಸಿದರು' ಎಂದರು.

ಮೇಕೆದಾಟು ಯೋಜನೆ ಮಾಡಲು ಬಿಡುವುದಿಲ್ಲ ಎಂದು ತಮಿಳುನಾಡಿನ ಡಿಎಂಕೆ ಪಕ್ಷ ಪ್ರಣಾಳಿಕೆಯಲ್ಲಿ ಘೋಷಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಮಿಳುನಾಡಿಗೆ ಹೋಗಿ ಆ ಘೋಷಣೆಯನ್ನು ತೆಗೆಸಿದರೆ ಪ್ರಧಾನಿ ಮೋದಿ ಅವರ ಮನವೊಲಿಸಿ ಕೇವಲ 5 ನಿಮಿಷದಲ್ಲಿ ಮೇಕೆದಾಟು ಯೋಜನೆಗೆ ಶಂಕುಸ್ಥಾಪನೆ ನೆರವೇರಿಸುತ್ತೇವೆ' ಎಂದರು.

### ದೇಶ ವಿಭಜನೆಗೆ ಹೊರಟ ಕಾಂಗ್ರೆಸ್

• ಉದಯವಾಹಿನಿ ಚಾಮರಾಜನಗರ



ಸಂಪತ್ತಿನ ಹಂಚಿಕೆಯಲ್ಲಿ ಅಲ್ಪಸಂಖ್ಯಾತರಿಗೆ ಮೊದಲ ಆದ್ಯತೆ ನೀಡುವುದಾಗಿ ಹೇಳುವ ಮೂಲಕ ಕಾಂಗ್ರೆಸ್ ಈ ದೇಶವನ್ನು ಮತ್ತೆ ವಿಭಜನೆ ಮಾಡಲು ಹೊರಟಿದೆ. ಅಲ್ಲದೇ ಸಂವಿಧಾನಕ್ಕೆ ವಿರುದ್ಧವಾಗಿ ಮುಸ್ಲಿಮರಿಗೆ ಮೀಸಲಾತಿ ಕಲ್ಪಿಸಲು ಮುಂದಾಗಿದೆ' ಎಂದು ಬಿಜೆಪಿ ಮುಖಂಡ, ವಿಧಾನ ಪರಿಷತ್ ಮಾಜಿ ಸದಸ್ಯ ಗೋ. ಮಧುಸೂದನ್ ದೂರಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಸಂವಿಧಾನ ಶಿಲ್ಪಿ ಅಂಬೇಡ್ಕರ್ ಸಿದ್ಧಾಂತಕ್ಕೆ ವಿರುದ್ಧವಾಗಿ ಕಾಂಗ್ರೆಸ್ ನಡೆದುಕೊಳ್ಳುತ್ತಿದೆ. ಮೀಸಲಾತಿ ನೀತಿಗೆ ಅದು ಕೈ ಹಾಕಿದೆ. ತನ್ನ ಚುನಾವಣಾ ಪ್ರಣಾಳಿಕೆಯಲ್ಲಿ ಮುಸ್ಲಿಮರಿಗೆ ಮೀಸಲಾತಿ ಕೊಡುವ ಬಗ್ಗೆ ಪ್ರಸ್ತಾಪಿಸಿದೆ. ಹುಟ್ಟಿನಿಂದ ಅಸ್ಪೃಶ್ಯರಾದವರಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲಾತಿ ನೀಡಬೇಕು ಎಂದು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರು ಸಂವಿಧಾನ ರಚನಾ ಸಭೆಯಲ್ಲಿ ಹೇಳಿದ್ದರು. ಹಾಗಾಗಿ, ಪರಿಶಿಷ್ಟ ಜಾತಿ ಮತ್ತು ಪಂಗಡದವರಿಗೆ ಮೀಸಲಾತಿ ನೀಡಲಾಗಿದೆ. ಇತರ ಹಿಂದುಳಿದ ವರ್ಗಗಳಿಗೂ ಮೀಸಲಾತಿ ಕಲ್ಪಿಸಬಹುದು ಎಂದೂ ಅವರು ಹೇಳಿದ್ದಾರೆ. ಹಾಗಾಗಿ, ಎಸ್‌ಸಿ, ಎಸ್‌ಟಿಗಳಿಗೆ ಶೇ 24ರಷ್ಟು ಮತ್ತು ಉಳಿದ ಶೇ 26ರಷ್ಟು ಮೀಸಲಾತಿ ಇತರೆ ಹಿಂದುಳಿದ ವರ್ಗಗಳಿಗೆ ಮೀಸಲಾಗಿದೆ' ಎಂದರು.

## ಮಾತನಾಡುವವರು ಬೇಕೋ, ಮೌನಿಗಳು ಬೇಕೋ

• ಉದಯವಾಹಿನಿ ಮಡಿಕೇರಿ



ಇಲ್ಲಿನ ಪ್ರತಾಪಸಿಂಹ ಅವರಿಗೆ ಟಿಕೆಟ್ ಸಿಗುವುದಿಲ್ಲ ಎಂಬ ಮಾಹಿತಿ ಮೊದಲೆ ಇತ್ತು. ನಾನೂ ಮೈಸೂರು- ಕೊಡಗು ಕ್ಷೇತ್ರದ ಆಕಾಂಕ್ಷಿಯಾಗಿದ್ದೆ. ಆದರೆ, ನನಗೆ ನೀಡದೇ ರಾಜವಂಶಸ್ಥರಿಗೆ ನೀಡಿದರು' ಎಂದು ಕೆಪಿಸಿಸಿ ವಕ್ತಾರೆ ತೇಜಸ್ವಿನಿಗೌಡ ಅಸಮಾಧಾನ ವ್ಯಕ್ತಪಡಿಸಿದರು.

ರಾಜವಂಶಸ್ಥರು ನಮ್ಮ ಸಂಸ್ಕೃತಿಯ ಭಾಗ. ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರಿಗೆ ನಾವು ಗೌರವ ಕೊಡುತ್ತೇವೆ. ಅವರನ್ನು ಬಿಜೆಪಿ ರಾಜ್ಯಸಭಾ ಸದಸ್ಯರನ್ನಾಗಿ ನೇಮಕ ಮಾಡಬಹುದಿತ್ತು. ಆದರೆ, ಹಾಗೆ ಮಾಡಲಿಲ್ಲ' ಎಂದು ಅವರು ಇಲ್ಲಿ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ಪ್ರತಾಪಸಿಂಹ ಅವರ ಬೆಂಬಲಕ್ಕೆ ನಿಂತಿದ್ದ ವರಿಷ್ಠರು ಈಗ ಏಕೆ ಟಿಕೆಟ್ ನೀಡಲಿಲ್ಲ, ಇಲ್ಲಿನ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಅವರಿಗೆ ಏಕೆ ಭಾರತರತ್ನ ಕೊಡಲಿಲ್ಲ, ಬಿ.ಎಸ್.ಯಡಿಯೂರಪ್ಪ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಇಳಿಸಿದ್ದು ಏಕೆ ಎಂಬುದಕ್ಕೆ ಬಿಜೆಪಿ ಉತ್ತರ ಕೊಡಬೇಕು ಎಂದು ಒತ್ತಾಯಿಸಿದರು.

ಈಗ ಬಿಜೆಪಿ ಬದಲಾಗಿದೆ. ಬಿಜೆಪಿಗೆ ಉತ್ತಮ ಸಂಸದೀಯ ಪಟುಗಳು ಬೇಕಿಲ್ಲ. ಭ್ರಷ್ಟರು ಮತ್ತು ಕಾಳಸಂತೆಕೋರರೇ ಬೇಕಾಗಿದ್ದಾರೆ ಎಂದು ಕಿಡಿಕಾರಿದರು. ಸಂಸತ್ತಿನಲ್ಲಿ ಮಾತನಾಡದೇ ಇರುವವರು ಬೇಕೋ, ಕೊಡಗಿನ ಸಮಸ್ಯೆಗಳನ್ನು ಸಮರ್ಥವಾಗಿ ಪ್ರಸ್ತಾಪಿಸಿ ಮಾತನಾಡುವವರೋ ಬೇಕೋ ಎಂಬುದನ್ನು ಮತದಾರರೇ ನಿರ್ಧರಿಸಬೇಕು' ಎಂದು ಹೇಳಿದರು. ಕೆಪಿಸಿಸಿ ಮಹಿಳಾ ಘಟಕದ ಅಧ್ಯಕ್ಷೆ ಪುಷ್ಪಾ ಅಮರನಾಥ್ ಮಾತನಾಡಿ, ಇನ್ನು ಮುಂದೆ ಸುಳ್ಳಿನ ವಿಚಾರಗಳಿಗೆ ಜನರು ಮನ್ನಣೆ ಕೊಡುವುದಿಲ್ಲ' ಎಂದು ತಿಳಿಸಿದರು.

## ನಿರ್ಭೀತಿಯಿಂದ ತಪ್ಪದೇ ಎಲ್ಲರೂ ಮತದಾನ ಮಾಡಿ : ಡಾ. ಅವಿನಾಶ್ ಮೆನನ್

• ಉದಯವಾಹಿನಿ ರಾಮನಗರ

ಬೆಂಗಳೂರು ಗ್ರಾಮಾಂತರ ಲೋಕಸಭಾ ಚುನಾವಣೆ-2024ರ ಮತದಾನವು ಏ. 26ರ ಶುಕ್ರವಾರ ಬೆಳಿಗ್ಗೆ 7 ರಿಂದ ಸಂಜೆ 6 ಗಂಟೆಯಸವರೆಗೆ ನಡೆಯಲಿದ್ದು, ಮತದಾನಕ್ಕೆ ಜಿಲ್ಲಾಡಳಿತದ ವತಿಯಿಂದ ಸಿದ್ದತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಹಾ ಗೂ ಚುನಾವಣಾಧಿಕಾರಿ ಡಾ. ಅವಿನಾಶ್ ಮೆನನ್ ರಾಜೇಂದ್ರನ್ ಅವರು ತಿಳಿಸಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ಬೆಂಗಳೂರು ಗ್ರಾಮಾಂತರ ಲೋಕ ಸಭಾ ಕ್ಷೇತ್ರದಲ್ಲಿ ಒಟ್ಟು 15 ಜನ ಅಭ್ಯರ್ಥಿಗಳು ಕಣದಲ್ಲಿದ್ದು, ಒಂದು ನೋಟಾ ಆಯ್ಕೆ ಇರುತ್ತದೆ. ಮತಗಟ್ಟೆಗಳ ವಿವರಗಳನ್ನು ಚುನಾವಣಾ ವೆಬ್ ಸೈಟ್‌ನಲ್ಲಿ ಪಡೆಯಬಹುದಾಗಿದೆ. ಮತದಾನ ಮಾಡುವ ಸಂದರ್ಭದಲ್ಲಿ ಅರ್ಹ ಗುರುತಿನ ಚೀಟಿಯನ್ನು


ಉದಯವಾಹಿನಿ ಚಿತ್ರ

ಸಲ್ಲಿಸಿ ಮತದಾನ ಮಾಡಬಹುದಾಗಿದೆ. ಬಿಸಿಲಿನ ತಾಪಮಾನ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಆರೋಗ್ಯದ ದೃಷ್ಟಿಯಿಂದ ಮತಗಟ್ಟೆಗಳಿಗೆ ಮಕ್ಕಳನ್ನು ಕರೆತರಬಾರದು ಹಾಗೂ ಮತಗಟ್ಟೆಗಳಲ್ಲಿ ಸಂಪೂರ್ಣವಾಗಿ ಮೊಬೈಲ್‌ಗಳನ್ನು ನಿಷೇಧಿಸಲಾಗಿದೆ ಎಂದರು.

ಮತಗಟ್ಟೆಗಳಲ್ಲಿ ಮೊಬೈಲ್ ನಿಷೇಧ

**ಮತದಾರರ ವಿವರ:** ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ 1424685 ಪುರುಷ ಮತದಾರರು, 1377570 ಮಹಿಳಾ ಮತದಾರರು ಹಾಗೂ 325 ತೃತೀಯ ಲಿಂಗ ಮತದಾರರಿದ್ದು, ಒಟ್ಟಾರೆ 2802580 ಮತದಾರರಿದ್ದಾರೆ. ಕುಣಿಗಲ್ ತಾಲ್ಲೂಕಿನಲ್ಲಿ 203228, ರಾಜರಾಜೇಶ್ವರಿನಗರದಲ್ಲಿ 504617, ಬೆಂಗಳೂರು ದಕ್ಷಿಣದಲ್ಲಿ 750785, ಆನೇಕಲ್‌ನಲ್ಲಿ 423844, ಮಾಗಡಿಯಲ್ಲಿ 236483, ರಾಮನಗರದಲ್ಲಿ 221098, ಕನಕಪುರದಲ್ಲಿ 231262, ಚನ್ನಪಟ್ಟಣದಲ್ಲಿ 231263 ಮತದಾರರಿದ್ದಾರೆ.

ಮತಗಟ್ಟೆಗಳ ವಿವರ: ಒಟ್ಟಾರೆ 2829 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ ಎಂದರು. 233 ಸೂಕ್ಷ್ಮ ಮತಗಟ್ಟೆಗಳಿಗೆ 400 ಜನ ಮೈಕ್ರೋ ವೀಕ್ಷಕರನ್ನು ನೇಮಿಸಲಾಗಿದೆ.

ವಿಶೇಷ ಮತಗಟ್ಟೆ ಸ್ಥಾಪನೆ: ಪ್ರತಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 5 ಸಖೀ ಮತಗಟ್ಟೆಗಳು, 1 ವಿಕಲಚೇತನರ ನಿರ್ವಹಣೆ ಮತಗಟ್ಟೆ, 1 ಯುವಜನ ನಿರ್ವಹಣೆಯ ಮತಗಟ್ಟೆ, 1 ಧ್ಯೇಯ ಆಧಾರಿತ ಮತಗಟ್ಟೆ, 1 ಸಾಂಪ್ರದಾಯಿಕ ಮತಗಟ್ಟೆಯನ್ನು ಸ್ಥಾಪಿಸಲಾಗಿದೆ.

## ಸುದ್ದಿಯ ನಿಖರತೆಯನ್ನು ಅರಿತು ವರದಿ ಪ್ರಕಟಿಸಿ: ಡಾ ಸಂಜಯ್ ಮಾಲಗತ್ತಿ

• ಉದಯವಾಹಿನಿ ತುಮಕೂರು

ಪತ್ರಕರ್ತರಿಗೆಯಾವುದೇ ಮಾಹಿತಿ ಸಿಕ್ಕರೂ ಪ್ರಕಟಿಸುವ ಮುನ್ನ ಸುದ್ದಿಯ ನಿಖರತೆಯನ್ನುಖಚಿತಪಡಿಸಿಕೊಳ್ಳುವುದುಅವಶ್ಯ. ಹೆಚ್ಚಾಗಿ ಕಾರ್ಯಕ್ರಮ ವರದಿಗಳಿಗೆ ಮಾತ್ರ ಸೀಮಿತವಾಗಿರದೆ, ಸಮಾಜದಲ್ಲಿನ ಸಾಮಾಜಿಕ ಸಮಸ್ಯೆಗಳ ಬಗ್ಗೆ ಕಾಳಜಿ ವಹಿಸಬೇಕು ಎಂದುಕರ್ನಾಟಕ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ವಿಭಾಗದ ಸಹ ಪ್ರಾಧ್ಯಾಪಕರಾದಡಾ.ಸಂಜಯ್ ಮಾಲಗತ್ತಿಕರೆ ನೀಡಿದರು.

ನಗರದಎಸ್ಎಸ್ಐಟಿಕ್ಯಾಂಪಸ್‌ನಲ್ಲಿರುವ ಶ್ರೀ ಸಿದ್ಧಾರ್ಥ ಮಾಧ್ಯಮಅಧ್ಯಯನಕೇಂದ್ರದಿಂದ ಪ್ರಕಟಿಸಲಾಗುತ್ತಿರುವ ಪ್ರಾಯೋಗಿಕ ಪತ್ರಿಕೆ 'ಸಿದ್ಧಾರ್ಥ ಸಂಪದ' ಬಿಡುಗಡೆ ಮಾಡಿ, ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು,ಇಂದು ಮಾಧ್ಯಮ ಕ್ಷೇತ್ರದಲ್ಲಿಯೂ ಪೈಪೋಟಿಇದೆ. ಆ ಸವಾಲನ್ನು ಮೆಟ್ಟಿನಿಲ್ಲಬೇಕಾದರೆ ವಿದ್ಯಾರ್ಥಿಯಾಗಿದ್ದಾಗಲೇ ಮಾಧ್ಯಮ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸಲು ಬೇಕಾದ ಎಲ್ಲಾ ರೀತಿಯ ಅನುಭವಗಳನ್ನು ಪಡೆದುಕೊಳ್ಳುವುದು ಸೂಕ್ತ ಎಂದು ಸಲಹೆ ನೀಡಿದರು.


ಉದಯವಾಹಿನಿ ಚಿತ್ರ

**ಮಾಧ್ಯಮಕ್ಕೆ ಸಂಬಂಧಿಸಿದಂತೆ ಪ್ರಾಯೋಗಿಕ ಕಾರ್ಯಗಳನ್ನು ಅಧ್ಯಯನದ ವೇಳೆ ಕಲಿತರೆ ಮುಂದಿನ ಭವಿಷ್ಯದಕಾಯಕಕ್ಕೆ ನೆರವಾಗಲಿದೆ. ಆ ಮೂಲಕ ನಿಮ್ಮಜೀವನವನ್ನುಉತ್ತಮವಾಗಿ ರೂಪಿಸಿಕೊಳ್ಳಿರಿ**

**-ಡಾ.ಬಿ.ಟಿ.ಮುದ್ದೇಶ, ನಿರ್ದೇಶಕ**

ಪತ್ರಕರ್ತರಾಗಿ ಬೆಳೆಯಲು ಇಂದು ಡಿಜಿಟಲ್ ಮಾಧ್ಯಮದ ಬಾಗಿಲು ತೆರೆದಿದೆ. ಈ ಕ್ಷೇತ್ರ ನಿಮ್ಮ ಜೀವನದದಾರಿಯನ್ನು ಬದಲಾಯಿಸುವ ಮಾರ್ಗವಾಗಿದೆ. ಕಾರ್ಯತತ್ಪರತೆ ಮತ್ತು ಬದ್ಧತೆಯನ್ನು ಮೈಗೂಡಿಸಿಕೊಂಡಾಗ ಪತ್ರಿಕೋದ್ಯಮದಲ್ಲಿ ಭವಿಷ್ಯ ಕಂಡುಕೊಳ್ಳಲು ಸಾಧ್ಯಎಂದುಅವರು ಹೇಳಿದರು.

ಇದೇ ಸಂದರ್ಭದಲ್ಲಿಇನ್ನೋರ್ವಸಂಪನ್ಮೂಲ ವ್ಯಕ್ತಿ ಕುವೆಂಪು ವಿಶ್ವವಿದ್ಯಾಲಯದ ಪತ್ರಿಕೋದ್ಯಮ ವಿಭಾ ಗದ ಸಹ ಪ್ರಾಧ್ಯಾಪಕರಾದಡಾ. ಎಂ.ಆರ್. ಸತ್ಯಪ್ರಕಾಶ್ ಮಾತನಾಡಿ, ಪತ್ರಿಕೋದ್ಯಮ ಕಲಿಕೆಯಲ್ಲಿ ಕಲಿಕೆಯ ಹಸಿವಿರಬೇಕು. ಆಗ ಮಾತ್ರಪತ್ರಕರ್ತರಾಗಲು ಸಾಧ್ಯ..ಬರವಣಿಗೆ ಮತ್ತುತಾಂತ್ರಿಕ ನೈಪುಣ್ಯತೆಯನ್ನು ಕಲಿತಾಗ ಮಾಧ್ಯಮಕ್ಷೇತ್ರದಲ್ಲಿ ಸಾಧನೆ ಮಾಡಬಹುದು ಎಂದರು.

ಡಿಜಿಟಲ್‌ಯುಗದಲ್ಲಿತಾಂತ್ರಿಕ ನಿಪುಣತೆ ಜತೆಗೆ ಅಯಾ ಕಾಲಘಟ್ಟಕ್ಕೆ ಒಗ್ಗುವ ಬರಹಗಳನ್ನು ಮತ್ತು ಪ್ರವೃತ್ತಿಗಳನ್ನು ಅಳವಡಿಸಿಕೊಳ್ಳಬೇಕು. ನಿರಂತರ ಅಭ್ಯಾಸದಿಂದ ವಿದ್ಯಾರ್ಥಿಗಳು ಕಲಿಕೆಗೆ ಹೆಚ್ಚು ಒತ್ತು ನೀಡಬೇಕುಎಂದುಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಹಾಯಕ ಪ್ರಾಧ್ಯಾಪಕರಾದಜ್ಯೋತಿಸಿ,ಶ್ವೇತಾಎಂ.ಪಿ, ನವೀನ್‌ಎನ್.ಜಿ., ಶರತ್,ತಾಂತ್ರಿಕ ಸಹಾಯಕರಾದ ಶಿವಕುಮಾರ್ ಹಾಗೂ ಮಾಧ್ಯಮ ವಿದ್ಯಾರ್ಥಿಗಳು ಭಾಗಿಯಾಗಿದ್ದರು.

## ಮತದಾನಕ್ಕೆ ಪ್ರಜಾಪ್ರಭುತ್ವದ ಹಬ್ಬದ ವಾತಾವರಣ

• ಉದಯವಾಹಿನಿ, ಬಂಗಾರಪೇಟೆ

ಮತದಾನಕ್ಕೆ ಪ್ರಜಾಪ್ರಭುತ್ವದ ಹಬ್ಬದ ವಾತಾವರಣ ಚುನಾವಣೆಯಲ್ಲಿ ಮತ ಚಲಾಯಿಸಬೇಕು ಎಂದು ಸಹಾಯಕ ಚುನಾವಣಾ ಅಧಿಕಾರಿ ಶಿವಕುಮಾರ್ ಅಭಿಪ್ರಾಯಪಟ್ಟರು. ಪಟ್ಟಣದ ಜೂನಿಯರ್ ಕಾಲೇಜು ಆವರಣದಲ್ಲಿ ಆಯೋಜಿಸಲಾಗಿದ್ದ ಚುನಾವಣಾ ಸಿಬ್ಬಂದಿಗಳನ್ನು ವಿವಿಧ ಮತಗಟ್ಟೆಗಳಿಗೆ ಕಳುಹಿಸುವ ಸಂದರ್ಭದಲ್ಲಿ ಮಾತನಾಡಿದ ಅವರು, ಈಗಾಗಲೇ ಚುನಾವಣಾ ಸಿಬ್ಬಂದಿಗಳಿಗೆ ಸೂಕ್ತ ತರಭೇತಿ ಮತ್ತು ಮಾರ್ಗದರ್ಶ ನವನ್ನು ನೀಡಲಾಗಿದ್ದು, ಮತಗಟ್ಟೆಗಳಿಗೆ ಕಳುಹಿ ಸಿಕೊಡ ಲಾಗುತ್ತಿದೆ. ಕೋಲಾರ ತಾಲ್ಲೂಕಿನ ಹುತ್ತೂರು ಹೋಬಳಿಯನ್ನು ಸೇರಿಕೊಂಡಂತೆ ಒಟ್ಟು 253 ಮತಗಟ್ಟೆಗಳಿದ್ದು, 2ಲಕ್ಷ 10ಸಾವಿರ ಮತದಾರರು ನೋಂದಣಿ ಮಾಡಿಕೊಂಡಿದ್ದಾರೆ. ವಿಶೇಷವಾಗಿ 40ಸಾವಿರ ಯುವ ಮತದಾರರು ನೋಂದಣಿ ಮಾಡಿಕೊಂಡಿದ್ದು, ಖಡ್ಡಾಯವಾಗಿ ಮತದಾನ ಮಾಡುತ್ತಾರೆಂಬ ವಿಶ್ವಾಸವಿದೆ. ಅ ಮೂಲಕ ಶೇ100. ಮತದಾನದ ಗುರಿ ಹೊಂದಲಾಗಿದೆ ಎಂದರು.

**4ವರ್ಗಗಳಲ್ಲಿ ಕಾರ್ಯನಿರ್ವಹಣೆ:** ಪ್ರಜಾಪ್ರಭುತ್ವದ ಬೂನಾದಿ ಮತದಾನವಾಗಿದ್ದು, ಪ್ರತಿಯೊಬ್ಬನಾಗರೀಕನು ಅದರಲ್ಲಿ ಭಾಗವಹಿಸುವ ಹಕ್ಕು ಮತ್ತು ಜವಾಬ್ದಾರಿಯಿದೆ. ಇದನ್ನು ಸಕ್ರಿಯಗೊಳಿಸಲು 4ವರ್ಗಗಳಲ್ಲಿ ಕಾರ್ಯರೂಪಿಸಲಾಗಿದೆ. ಕ್ಷೇತ್ರದಲ್ಲಿ 5ಸಖಿ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ವಿಶೇಷ ಚೇತನರಿಗೆ ರ್‍ಯಾಂಪ್‌ಸಹಿತ ವಿಶೇಷ ಸೌಲಭ್ಯಗಳನ್ನು ಒದಗಿಸಲಾಗಿದೆ. ಯುವ ಸಮುದಾಯವನ್ನು ಆಕರ್ಷಿಸಲು ಜೂನಿಯರ್ ಕಾಲೇಜಿನಲ್ಲಿ ಯುವ ಮತಗಟ್ಟೆಯನ್ನು ತೆರೆಯಲಾಗಿದೆ. ಪ್ರತಿ ಬೂತಿನಲ್ಲಿ ಪಿಆರ್‌ಓ, ಎಪಿಆರ್‌ಓ, ಪೊಲಿಂಗ್-1 ಪೊಲಿಂಗ್-2, ಸಿಬ್ಬಂದಿಗಳನ್ನು ನೇಮಿಸಲಾಗಿದೆ. ಎಲ್ಲಾ ಮತಗಟ್ಟೆಗಳಲ್ಲಿ ಕುಡಿಯುವ ನೀರು, ಶೌಚಾಲಯ, ವಿಶೇಷ ಚೇತನರಿಗೆ ರ್‍ಯಾಂಪ್ ಮತ್ತು ವೀಲ್‌ಚೇರ್, ಪೆಂಡಾಲ್, ಕುರ್ಚಿಗಳನ್ನು ಒದಗಿಸಲಾಗಿದೆ.

ಒಟ್ಟಾರೆಯಾಗಿ ಸಾರ್ವಜನಿಕರು ತಮ್ಮ ಮತದಾನದ ಮೂಲಕ ಪ್ರಜಾಪ್ರಭುತ್ವ ಹಬ್ಬವನ್ನು ಯಶಸ್ವಿಗೊಳಿಸಲು ಎಲ್ಲಾ ಕಾರ್ಯಗಳನ್ನು ಕೈಗೊಳ್ಳಲಾಗಿದೆ. ಸಾರ್ವಜನಿಕರು ಯಾವುದೇ ಆತಂಕಕ್ಕೆ ಒಳಗಾಗದೇ ನಿರ್ಭಿತಿಯಿಂದ ಮತಗಟ್ಟೆಗೆ ಹೋಗಿ ಮತಚಾಲಾಯಿಸುವಂತೆ ಮನವಿ ಮಾಡಿದರು.


ಉದಯವಾಹಿನಿ ಚಿತ್ರ

### ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಮತಗಟ್ಟೆಗಳಲ್ಲಿ ಬಿಗಿಭದ್ರತೆ

**ತಾಲ್ಲೂಕಿನಲ್ಲಿ 39 ಸೂಕ್ಷ್ಮ ಮತ್ತು 11 ಅತಿಸೂಕ್ಷ್ಮ ಮತಗಟ್ಟೆಗಳಿದ್ದು, ಯಾವುದೇ ಅಹಿತರ ಘಟನೆಗಳು ನಡೆಯದಂತೆ ಪೊಲೀಸ್ ವರಿಷ್ಠಾಧಿಕಾರಿಗಳ ನೇತೃತ್ವದಲ್ಲಿ ಸ್ಥಳೀಯರೊಂದಿಗೆ ಶಾಂತಿ ಸಭೆಗಳನ್ನು ಏರ್ಪಡಿಸಲಾಗಿದ್ದು, ಬಿಗಿಭದ್ರತೆಯನ್ನು ಒದಗಿಸಲಾಗಿರುತ್ತದೆ.**

# ಮತದಾನಕ್ಕೆ ಕೊಡಗು ಜಿಲ್ಲಾಡಳಿತ ಸರ್ವಸನ್ನದ್ಧ

## ಎರಡೂ ಕ್ಷೇತ್ರಗಳಲ್ಲಿ 2,30,568 ಪುರುಷ ಮತದಾರರು, 2,40,182 ಮಹಿಳಾ ಮತದಾರರು ಹಾಗೂ 16 ತೃತೀಯ ಲಿಂಗಿ ಮತದಾರರು

• ಉದಯವಾಹಿನಿ ಮಡಿಕೇರಿ

ಕೊಡಗು ಜಿಲ್ಲೆಯ ಎಲ್ಲ 546 ಮತಗಟ್ಟೆಗಳಲ್ಲಿ ಏ. 26ರಂದು ಬೆಳಿಗ್ಗೆ 7 ಗಂಟೆಯಿಂದ 6 ಗಂಟೆಯವರೆಗೂ ಮತದಾನ ನಡೆಯಲಿದ್ದು, ಇದಕ್ಕಾಗಿ ಸಕಲ ಸಿದ್ಧತೆಗಳು ಪೂರ್ಣಗೊಂಡಿವೆ.

ಎರಡೂ ಕ್ಷೇತ್ರಗಳಲ್ಲಿ 2,30,568 ಪುರುಷ ಮತದಾರರು, 2,40,182 ಮಹಿಳಾ ಮತದಾರರು ಹಾಗೂ 16 ತೃತೀಯ ಲಿಂಗಿ ಮತದಾರರು ಇದ್ದಾರೆ. ಇವರೆಲ್ಲರೂ ನಿರ್ಭೀತಿಯಿಂದ ಮತದಾನ ಮಾಡಲು ಸಕಲ ಸೌಲಭ್ಯಗಳನ್ನೂ ಒದಗಿಸಲಾಗಿದೆ' ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ಇಲ್ಲಿ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

546 ಮತಗಟ್ಟೆಗಳಲ್ಲಿ 2,416 ಮಂದಿ ಚುನಾವಣಾ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಸೂಕ್ಷ್ಮ, ಅತಿ ಸೂಕ್ಷ್ಮ ಎಂದು ಗುರುತಿಸಲಾದ ಮತಗಟ್ಟೆಗಳಲ್ಲಿ ವೆಬ್‌ಕ್ಯಾಸ್ಟಿಂಗ್ ಸೌಲಭ್ಯ, ಸೂಕ್ಷ್ಮ ವೀಕ್ಷಕರು ಹಾಗೂ ಸಿಎಪಿಎಫ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ' ಎಂದು ಹೇಳಿದರು.

ಸಿಎಪಿಎಫ್ ಸಿಬ್ಬಂದಿ ನಿಯೋಜನೆ

ಬುಧವಾರ ಸಂಜೆ 6 ಗಂಟೆಗೆ ಬಹಿರಂಗ ಪ್ರಚಾರ ಮುಗಿಯಲಿದೆ. ನಂತರ, ಮನೆಮನೆ ಪ್ರಚಾರ ನಡೆಸಲು ಮಾತ್ರವೇ ಅವಕಾಶ ಇದೆ. ಅಬ್ಬರದ ಬಹಿರಂಗ ಪ್ರಚಾರಕ್ಕೆ ಅವಕಾಶ ಇಲ್ಲ ಎಂದು ತಿಳಿಸಿದರು.

ಮತಗಟ್ಟೆ ಅಧಿಕಾರಿಗಳು ಹಾಗೂ ಸಿಬ್ಬಂದಿಯ ಪ್ರಯಾಣಕ್ಕೆ 80 ಕೆಎಸ್‌ಆರ್‌ಟಿಸಿ ಬಸ್‌ಗಳು, 47 ಮಿನಿ ಬಸ್‌ಗಳು, 74 ಜೀಪುಗಳು ಹಾಗೂ 13 ಮ್ಯಾಕ್ಸಿಕ್ಯಾಬ್‌ಗಳನ್ನು ನಿಯೋಜಿಸಲಾಗಿದೆ ಎಂದರು.

**200 ಮೀಟರ್ ಒಳಗೆ ಪ್ರಚಾರಕ್ಕೆ ಅವಕಾಶ ಇಲ್ಲ:** ಮತಗಟ್ಟೆಯ 200 ಮೀಟರ್ ಒಳಗೆ ಯಾವುದೇ ರಾಜಕೀಯ ಪಕ್ಷಗಳಿಗೆ ಅಥವಾ ಯಾವುದೇ ಅಭ್ಯರ್ಥಿಯ ಪರ ಹಾಗೂ ವಿರೋಧವಾಗಿ ಪ್ರಚಾರ ಮಾಡಲು ಅವಕಾಶ ಇಲ್ಲವೇ ಇಲ್ಲ. ಇದನ್ನು ಅತ್ಯಂತ ಕರಾರುವಕ್ಕಾಗಿ ಪಾಲಿಸಲಾಗುವುದು. ಎಲ್ಲರೂ ಈ ಸೂಚನೆಯನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಹೇಳಿದರು.


ಉದಯವಾಹಿನಿ ಚಿತ್ರ

200 ಮೀಟರ್ ನಂತರವೂ ದೊಡ್ಡದಾದ ಶಾಮಿಯಾನ ಹಾಕಲು ಅವಕಾಶ ಇಲ್ಲ. ಕೇವಲ 2 ಕುರ್ಚಿ ಹಾಗೂ 1 ಟೇಬಲ್ ಹಾಕಿಕೊಳ್ಳುವುದು, ಅದಕ್ಕೆ ಸೀಮಿತವಾಗುವಂತೆ ಮಾತ್ರ ನೆರಳಿನ ವ್ಯವಸ್ಥೆ ಮಾಡಿಕೊಳ್ಳಲು ಅವಕಾಶ ಇದೆ. ಈ ನಿಯಮವನ್ನು ಯಾರೂ ಉಲ್ಲಂಘಿಸಬಾರದು ಎಂದು ಮನವಿ ಮಾಡಿದರು.

ಒಂದು ವೇಳೆ ಈ ನಿಯಮಗಳನ್ನು ಉಲ್ಲಂಘಿಸಿದರೆ ಪ್ರಕರಣ ದಾಖಲಿಸುವ ಮೂಲಕ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಇದಕ್ಕೆ ಉದಾಹರಣೆಯಾಗಿ ಅವರು ಕಳೆದ ವಿಧಾನಸಭಾ ಚುನಾವಣೆಯ ವೇಳೆ ನಡೆದ ಘಟನೆಗಳನ್ನು ಪ್ರಸ್ತಾಪಿಸಿದರು. ಗುಜರಾತ್ ಕಲಬುರಗಿ ಹಾಗೂ ಗದಗದಿಂದ ಬಂದಿರುವ ಪೊಲೀಸರು ವಿಶೇಷವಾಗಿ ಈ ಸಂಗತಿಯನ್ನು ನೆನಪಿನಲ್ಲಿಡಬೇಕು.

### ಸಹಾಯಬೇಕಿದ್ದರೆ ಮತಗಟ್ಟೆ ಅಧಿಕಾರಿಗಳಿಗೆ ಮಾಹಿತಿ

**ಯಾವುದೇ ಕಾರಣಕ್ಕೂ ಪೊಲೀಸರಿಂದಲೇ ಸಮಸ್ಯೆಯಾಗದಂತೆ ಎಚ್ಚರ ವಹಿಸಬೇಕು ಎಂದರು. ಒಂದು ವೇಳೆ ಯಾರಿಗಾದರೂ ಸಹಾಯಬೇಕಿದ್ದರೆ ಮತಗಟ್ಟೆ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು. ನೇರವಾಗಿ ಮತದಾರರೊಂದಿಗೆ ಮತಗಟ್ಟೆ ಪ್ರವೇಶಿಸಬಾರದು. ಕೆಲವೊಂದು ಸೂಕ್ಷ್ಮತೆಗಳನ್ನು ಅರಿತು ಕರ್ತವ್ಯ ನಿಭಾಯಿಸಬೇಕು ಎಂದರು. ಒಂದು ವೇಳೆ ಯಾರಿಗಾದರೂ ತೀರಾ ತುರ್ತು ಸಂದರ್ಭಗಳಿದ್ದರೆ ಅಂತಹವರಿಗೆ ರಜೆ ಕೊಡಲು ಸಿದ್ಧ. ಆದರೆ ನಿಯೋಜಿಸಿರುವ ಸಿಬ್ಬಂದಿ ಕಡ್ಡಾಯವಾಗಿ ತಮಗೆ ಸೂಚಿಸಿದ ಸ್ಥಳಗಳಲ್ಲಿ ಕರ್ತವ್ಯ ನಿರ್ವಹಿಸುವುದು ಕಡ್ಡಾಯ. ತಪ್ಪಿದ್ದಲ್ಲಿ ಶಿಸ್ತು ಕ್ರಮ ಅನಿವಾರ್ಯ ಎಂದೂ ಎಚ್ಚರಿಸಿದರು.**

**ಕೊಡಗು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಅವರು ಮತದಾನದ ದಿನ ಜಿಲ್ಲೆಯ ಜನರೊಂದಿಗೆ ಸೌಜನ್ಯದಿಂದ ವರ್ತಿಸುವಂತೆ ಪೊಲೀಸರಿಗೆ ಕಿವಿಮಾತು ಹೇಳಿದರು. ಇಲ್ಲಿನ ಪೊಲೀಸ್ ಕವಾಯತು ಮೈದಾನದಲ್ಲಿ ಚುನಾವಣಾ ಕಾರ್ಯಕ್ಕೆ ನಿಯೋಜಿಸಿರುವ ಪೊಲೀಸರನ್ನು ಉದ್ದೇಶಿಸಿ ಬುಧವಾರ ಅವರು ಮಾತನಾಡಿದರು. ಕೊಡಗು ಜಿಲ್ಲೆಯ ಜನರು ಹೆಚ್ಚು ಪ್ರಜ್ಞಾವಂತರು. ಬೇರೆ ಜಿಲ್ಲೆಯ ಜನರಿಗೆ ಹೋಲಿಸಿದರೆ ನಿಯಮ ಪಾಲನೆಯಲ್ಲಿ ಮುಂದಿದ್ದಾರೆ. ಇಂತಹ ಶಿಸ್ತುಬದ್ಧವಾದ ಜೀವನ ನಡೆಸುವ ಜನರೊಂದಿಗೆ ವರ್ತಿಸುವಾಗ ಮಾತನಾಡುವಾಗ ಸೌಜನ್ಯದ ಎಲ್ಲೆಯನ್ನು ಮೀರಬಾರದು ಎಂದು ಅವರು ಹೇಳಿದರು. -ಕೆ.ರಾಮರಾಜನ್**

### ಹೆಚ್‌ಎಲ್ ಕ್ರೆಡಿಟ್‌ಗೆ ಕಿತ್ತಾಟ: ಕುಂಚಿಟಗರ ಅವಮಾನಿಸಿದ್ರಾ ಬಸವರಾಜು?

• ಉದಯವಾಹಿನಿ, ತುಮಕೂರು



ಬಿಜೆಪಿ ಸಂಸದ ಜಿ.ಎಸ್ ಬಸವರಾಜು ಮೇಲೆ ಕುಂಚಿಟಿಗರನ್ನು ಅವಮಾನಿಸಿದ ಆರೋಪ ಕೇಳಿ ಬಂದಿದ್ದು ಹೆಚ್‌ಎಲ್ ಕ್ರೆಡಿಟ್ ವಿಚಾರದಲ್ಲಿ ಮುಖಂಡನ ಮೇಲೆ ಸಂಸದರು ರೇಗಾಡಿದ ಆಡಿಯೋ ವೈರಲ್ ಆಗಿದೆ. ನಾಗೇಶ್ ಎಂಬ ಮುಖಂಡ ಪತ್ರಿಕೆಯೊಂದಕ್ಕೆ ಹೆಚ್‌ಎಲ್ ಮುದ್ದಹನುಮೇಗೌಡ ಕೊಡುಗೆ ಎಂದು ಹೇಳಿಕೆ ನೀಡಿದ್ದು ಸಂಸದ ಜಿ.ಎಸ್ ಬಸವರಾಜು ಸಿಟ್ಟಿಗೆ ಕಾರಣವಾಗಿದೆ. ಈ ವಿಚಾರವಾಗಿ ನಾಗೇಶ್‌ಗೆ ಕರೆ ಮಾಡಿದ್ದ ಅವರು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದು,' ಹೆಚ್‌ಎಲ್ ತಂದವನು ನಾನು, ಮುದ್ದಹನುಮೇಗೌಡ ಒಂದು ಅರ್ಜಿನೂ ಬರೆದಿಲ್ಲ. ಹೆಚ್‌ಎಲ್ ಕಾರ್ಯಕ್ರಮದ ದಿನ ನನ್ನನ್ನ ಬೇಕು ಅಂತಲೇ ಬಿಸಿಲಲ್ಲಿ ಕೂರಿಸಿದ್ದರು ನಾಯಿ ಕೂತ ಹಾಗೆ ಕೂತಿದ್ದೆ ನಾನು ಹೆಚ್‌ಎಲ್ ತಗೊಂಡು ಬಂದವನು ನಾನು ಯಾವತ್ತೂ ಈತರ ಹೇಳಬೇಡ ಎಂದು ..' ತಾಕೀತು ಮಾಡಿದ್ದಾರೆ.

ಯಡಿಯೂರಪ್ಪ ಕೂಡ ಏನೂ ಮಾಡಿಲ್ಲ, ಮಾಧುಸ್ವಾಮಿ ಕ್ರಿಮಿನಲ್ ಕೇಸ್ ಹಾಕಿದ್ದ ನನ್ನ ಮೇಲೆ ಎಷ್ಟು ಆಟ ಆಡಿರಬೇಡ ನಾನು ..ನನ್ನ ಮಕ್ಕಳಾ ಕುಂಚಿಟಿಗರ ಬುದ್ದಿ ಬಿಡ್ರೋ, ಹೊಲಗೇರಿ ಬುದ್ದಿನಾ ಬಿಡ್ರೋ ಹುಷಾರಾಗಿರಿ ಎಂದು ಎಚ್ಚರಿಕೆ ನೀಡಿದ್ದಾರೆ.

ಸಂಸದ ಜಿ.ಎಸ್ ಬಸವರಾಜು ಈ ಮಾತಿಗೆ ಸಾಕಷ್ಟು ವಿರೋಧ ವ್ಯಕ್ತವಾಗಿದ್ದು, ಈ ಆಡಿಯೋ ಎಲ್ಲೆಡೆ ವೈರಲ್ ಆಗಿದೆ.

ಅಂತರಾಳದಿಂದ... EDITORIAL

# ರೈಲ್ವೇ ಇಲಾಖೆಯ ಸುಧಾರಣೆ ಕ್ರಮಗಳು ಪ್ರಶಂಸಾರ್ಹ


ಉದಯವಾಹಿನಿ ಚಿತ್ರ

ಪ್ರಧಾನಿ ನರೇಂದ್ರ ಮೋದಿ ಅವರು ಎಲ್ಲಾ ಇಲಾಖೆಗಳಲ್ಲೂ ಬದಲಾವಣೆ, ಹೊಸತನ ತರುತ್ತಿದ್ದಾರೆ. ಹೆದ್ದಾರಿ ಸಾರಿಗೆಯಲ್ಲಿ ನಿತಿನ್ ಗಡ್ಕರಿ ಅವರ ನೇತೃತ್ವದಲ್ಲಿ ಆಗಿರುವ ಸಾಧನೆಯೇ ಇದಕ್ಕೆ ಸಾಕ್ಷಿ. ಇದೇ ರೀತಿ ರೈಲ್ವೆಯಲ್ಲೂ ಆಗಬೇಕಿದೆ.

ಕಳೆದ 10 ವರ್ಷಗಳಲ್ಲಿ ದೇಶದ ರೈಲ್ವೇ ವ್ಯವಸ್ಥೆಯನ್ನು ಸಾಕಷ್ಟು ಆಧುನೀಕರಣಗೊಳಿಸಲಾಗಿದೆ. ರೈಲು ನಿಲ್ದಾಣಗಳನ್ನು ಮೇಲ್ದರ್ಜೆಗೆ ಏರಿಸಲಾಗುತ್ತಿದೆ. ವಂದೇ ಭಾರತ್‌ನಂತಹ ಅತ್ಯಾಧುನಿಕ ರೈಲುಗಳನ್ನು ಪರಿಚಯಿಸಲಾಗಿದೆ. ದೇಶಾದ್ಯಂತ ರೈಲ್ವೆ ಪ್ರಯಾಣಿಕರಿಗೆ ಹೊಸ ಸೌಲಭ್ಯ, ಮೂಲ ಸೌಕರ್ಯಗಳನ್ನು ಒದಗಿಸಲು ಕೇಂದ್ರ ಪ್ರಯತ್ನಪಡುತ್ತಿದೆ. ಅದೇ ರೀತಿ ಪ್ರಯಾಣಿಕರು ಸುಲಭವಾಗಿ ಹಾಗೂ ಕ್ಷಿಪ್ರವಾಗಿ ರೈಲು ಟಿಕೆಟ್‌ಗಳನ್ನು ಪಡೆಯುವಂತೆ ಮಾಡುವುದು ಮೊದಲ ಆದ್ಯತೆ. ಇದಕ್ಕಾಗಿ ಇನ್ನಷ್ಟು ರೈಲುಗಳ ಓಡಾಟ, ದೇಶಾದ್ಯಂತ ರೈಲುಗಳ ವಿಸ್ತರಣೆ, ರೈಲ್ವೆ ಲೇನ್‌ಗಳನ್ನು ವಿಸ್ತರಿಸುವುದು ಕೇಂದ್ರ ಸರ್ಕಾರದ ಗುರಿಯಾಗಿದೆ. 2014ರಿಂದ 2024ರ ಅವಧಿಯಲ್ಲಿ ದೇಶಾದ್ಯಂತ 31 ಸಾವಿರ ಹೊಸ ಟ್ರ್ಯಾಕ್‌ಗಳನ್ನು ಅಳವಡಿಸಲಾಗಿದೆ. 2004ರಿಂದ 2014ರ ಅವಧಿಯಲ್ಲಿ 5 ಸಾವಿರ ಕಿಲೋಮೀಟರ್ ರೈಲು ಮಾರ್ಗ ವಿದ್ಯುದ್ದೀಕರಣವಾಗಿದ್ದರೆ, 2014ರಿಂದೀಚೆಗೆ ವಿದ್ಯುದ್ದೀಕರಣದ ಪ್ರಮಾಣವು 44 ಸಾವಿರ ಕಿಲೋಮೀಟರ್‌ಗೆ ಏರಿಕೆಯಾಗಿದೆ. ಕಳೆದ 10 ವರ್ಷದಲ್ಲಿ 54 ಸಾವಿರ ಬೋಗಿಗಳನ್ನು ತಯಾರಿಸಲಾಗಿದೆ.

> **ಮುಂದಿನ 5 ವರ್ಷಗಳಲ್ಲಿ ದೇಶದ ಪ್ರತಿಯೊಬ್ಬ ಪ್ರಯಾಣಿಕರಿಗೂ ಕನ್ಫರ್ಮ್ಡ್ ಟಿಕೆಟ್ ಸಿಗಲಿವೆ. ಇದು ಪ್ರಧಾನಿ ನರೇಂದ್ರ ಮೋದಿ ಅವರ ಗ್ಯಾರಂಟಿ- ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ದೇಶಾದ್ಯಂತ ರೈಲುಗಳನ್ನು ಹೆಚ್ಚಿಸಿ, ಪ್ರತಿಯೊಬ್ಬ ಪ್ರಯಾಣಿಕರಿಗೆ ಕನ್ಫರ್ಮ್ಡ್ ಟಿಕೆಟ್ ಸಿಗುವಂತೆ ಮಾಡಲಾಗುತ್ತದೆ. ಇದರಿಂದ ಪ್ರಯಾಣಿಕರು ವೇಟಿಂಗ್ ಲಿಸ್ಟ್ ನೋಡುತ್ತ ಕಾಯುವುದು ತಪ್ಪುತ್ತದೆ. ಎಲ್ಲಾರಿಗೂ ಸುಲಭವಾಗಿ ರೈಲು ಟಿಕೆಟ್ ಕೊಡುವಂತೆ ಮಾಡುವುದು ನಮ್ಮ ಆದ್ಯತೆ ಎಂದಿದ್ದಾರೆ ಸಚಿವರು. ಇದು ದೇಶದ ರೈಲ್ವೇ ವ್ಯವಸ್ಥೆಯ ಸುಧಾರಣೆಗಳಲ್ಲಿ ಒಂದು ವಿಚಾರ ಮಾತ್ರ.**

ಕಳೆದ ಫೆಬ್ರವರಿಯಲ್ಲಿ ಪ್ರಧಾನಿ ಮೋದಿಯವರು 41 ಸಾವಿರ ಕೋಟಿ ರೂ. ವೆಚ್ಚದ 2000 ರೈಲ್ವೆ ಪ್ರಾಜೆಕ್ಟ್‌ಗಳನ್ನು ದೇಶಾದ್ಯಂತ ಲೋಕಾರ್ಪಣೆ ಮಾಡಿದ್ದರು. ಈ ಮೊದಲು ರೈಲ್ವೆ ಇಲಾಖೆ ಎಂದರೆ ನಷ್ಟ ಎಂದು ಹೇಳಲಾಗುತ್ತಿತ್ತು. ಆದರೆ, ಈಗ ಅದೇ ರೈಲ್ವೆಯು ಪರಿವರ್ತನೆಯ ಬಹುದೊಡ್ಡ ಶಕ್ತಿಯಾಗಿ ಬದಲಾಗಿದೆ. ಬುಲೆಟ್ ರೈಲು ಯೋಜನೆಯ ಕಾಮಗಾರಿ ಭರದಿಂದ ಸಾಗುತ್ತಿದ್ದು, ಬುಲೆಟ್ ರೈಲು ಯೋಜನೆಯು ಸಂಪರ್ಕ ಕ್ರಾಂತಿ ಜತೆಗೆ ಆರ್ಥಿಕ ಚಟುವಟಿಕೆಗಳ ಉತ್ತೇಜನಕ್ಕೆ ಸಹಕಾರಿಯಾಗಲಿದೆ. ಬುಲೆಟ್ ರೈಲು ಸಂಚರಿಸುವ ಮುಂಬೈ, ವಾಪಿ, ಬರೋಡಾ, ಸೂರತ್, ಆನಂದ್ ಹಾಗೂ ಅಹಮದಾಬಾದ್ ನಗರಗಳು ಆರ್ಥಿಕ ನಗರಗಳಾಗಿ ಬದಲಾಗಲಿವೆ. ಈ ನಗರಗಳಲ್ಲಿ ಪ್ರತ್ಯೇಕ ಆರ್ಥಿಕತೆಯೇ ಸೃಷ್ಟಿಯಾಗಲಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದರು. ಮೊದಲ ಬುಲೆಟ್ ರೈಲು ಯೋಜನೆಗೆ 1.08 ಲಕ್ಷ ಕೋಟಿ ರೂ. ವ್ಯಯಿಸಲಾಗುತ್ತಿದೆ. ಇದಕ್ಕೆ ಜಪಾನ್ ಸರ್ಕಾರ ಕೇವಲ 0.1ರ ಬಡ್ಡಿದರದಲ್ಲಿ ಸಾಲ ನೀಡಿದೆ.

ಸಣ್ಣಪುಟ್ಟ ಸಂಗತಿಗಳಲ್ಲೂ ರೈಲ್ವೇ ಇಲಾಖೆ ಸುಧಾರಣೆ ತರುತ್ತಿದೆ. ಉದಾಹರಣೆಗೆ, ಐಆರ್‌ಟಿಸಿ ವೆಬ್‌ಸೈಟ್‌ನಿಂದ ಕಾಯ್ದಿರಿಸಿದ ಆರ್‌ಎಸಿ ಟಿಕೆಟ್‌ಗಳನ್ನು ರದ್ದುಗೊಳಿಸಲು ಕನಿಷ್ಠ ಶುಲ್ಕವನ್ನು (60 ರೂ. ಮಾತ್ರ) ವಿಧಿಸಲು ರೈಲ್ವೇ ಇಲಾಖೆ ನಿರ್ಧರಿಸಿದೆ. ಅಂದರೆ ಈ ಮೊದಲಿನ ಅನಿಯಂತ್ರಿತ ಶುಲ್ಕ ಇನ್ನು ಇರುವುದಿಲ್ಲ. ಕಳೆದ ಮೂರು ವರ್ಷಗಳಲ್ಲಿ ರೈಲ್ವೇಯು ವೈಟಿಂಗ್ ಟಿಕೆಟ್‌ಗಳ ರದ್ದತಿಯಿಂದ ಬರೋಬ್ಬರಿ 1,230 ಕೋಟಿ ರೂ. ಆದಾಯ ಗಳಿಸಿದೆ. ಈ ಹಣದುಬ್ಬರದ ಕಾಲದಲ್ಲೂ ಕನಿಷ್ಠ ಪ್ರಯಾಣಿಕ ಹಾಗೂ ಸರಕು ಸಾಗಣೆ ಶುಲ್ಕವನ್ನು ರೈಲ್ವೇಯು ಹೊಂದಿರುವುದರಿಂದ, ಸಾರ್ವಜನಿಕ ಸೇವೆಯ ಮಾಧ್ಯಮವೂ ಆಗಿದೆ. ಹೀಗಾಗಿ ರೈಲ್ವೆಯಲ್ಲಿ ಆಗುವ ಸುಧಾರಣೆಯು ಇನ್ನೊಂದು ರೀತಿಯಲ್ಲಿ ಬಡ- ಮಧ್ಯಮ- ಕೆಳವರ್ಗದ ಜನತೆಗೆ ಕಡಿಮೆ ವೆಚ್ಚದಲ್ಲಿ ಹೆಚ್ಚಿನ ಸೌಲಭ್ಯವನ್ನು ನೀಡುವ ಉಪಕ್ರಮವಾಗುತ್ತದೆ. ಪ್ರಧಾನಿ ನರೇಂದ್ರ ಮೋದಿ ಅವರು ಎಲ್ಲಾ ಇಲಾಖೆಗಳಲ್ಲೂ ಬದಲಾವಣೆ, ಹೊಸತನ ತರುತ್ತಿದ್ದಾರೆ. ಹೆದ್ದಾರಿ ಸಾರಿಗೆಯಲ್ಲಿ ನಿತಿನ್ ಗಡ್ಕರಿ ಅವರ ನೇತೃತ್ವದಲ್ಲಿ ಆಗಿರುವ ಸಾಧನೆಯೇ ಇದಕ್ಕೆ ಸಾಕ್ಷಿ. ಇದೇ ರೀತಿ ರೈಲ್ವೆಯಲ್ಲೂ ಆಗಬೇಕಿದೆ.

# ಲೋಕಸಭಾ ಚುನಾವಣೆಯಲ್ಲಿ ಅರ್ಹತೆ ಇರುವ ಅಭ್ಯರ್ಥಿಗಳಿಗೆ ಮತದಾರರು ತಪ್ಪದೇ ಮತದಾನ ಮಾಡಿ

• ಉದಯವಾಹಿನಿ, ವಿಶೇಷ


ಕಲಾ ಸಾಹಿತ್ಯ
ಕೃಷ್ಣಪ್ಪ
ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

ಲೋಕಸಭೆಯ 543 ಸಂಸತ್ ಸದಸ್ಯರ ಸ್ಥಾನಕ್ಕೆ ಇಡೀ ದೇಶದಲ್ಲಿ ಚುನಾವಣೆ ಒಟ್ಟು ಏಳು ಹಂತದಲ್ಲಿ ನಡೆಯುತ್ತದೆ ಎಂದು ಚುನಾವಣೆ ಆಯೋಗ ಅಧಿಕೃತವಾಗಿ ಪ್ರಕಟಿಸಿದೆ.

ಅದರಲ್ಲಿ ಕರ್ನಾಟಕ ರಾಜ್ಯದ 28 ಲೋಕಸಭೆಯ ಸಂಸತ್ ಸದಸ್ಯರ ಸ್ಥಾನಗಳಿಗೆ ಎರಡು ಹಂತದಲ್ಲಿ ಅಂದರೆ ದಿನಾಂಕ 26-04-2024 ಮತ್ತು ದಿನಾಂಕ 07-05-2024 ರಂದು ಚುನಾವಣೆ ನಡೆಯುತ್ತದೆ.

ಈ ವರ್ಷದ ಚುನಾವಣೆ ಎರಡು (INDIA & NDA) ಪ್ರಭಲ ರಾಜಕೀಯ ಪಕ್ಷಗಳಿಗೆ ಬಹಳ ಪ್ರತಿಷ್ಠೆಯ ಪ್ರಶ್ನೆಯಾಗಿದೆ. ಇಡೀ ದೇಶವು ಕರ್ನಾಟಕದ ಚುನಾವಣೆಯ ಫಲಿತಾಂಶವನ್ನು ಎದುರು ನೋಡುತ್ತಿದೆ. ಎಲ್ಲಾ ರಾಜಕೀಯ ಪಕ್ಷಗಳೂ ಸಹ ಅಧಿಕಾರ ಗದ್ದುಗೆಯನ್ನು ಏರಿ ಅಧಿಕಾರ ಚುಕ್ಕಾಣಿಯನ್ನು ಹಿಡಿಯಲು ಬಹಳ ಸತತ ಪ್ರಯತ್ನ ಹಾಗೂ ವಿವಿಧ ಬಗೆಯ ಹರಸಾಹಸ ಮಾಡುತ್ತಿವೆ. ಆದರೆ ಪ್ರಜ್ಞಾವಂತ ಮತದಾರರು ಯಾರನ್ನ ಆಯ್ಕೆ ಮಾಡಬೇಕೆಂದು ಬಹಳ ಎಚ್ಚರಿಕೆಯಿಂದ ನಿರ್ಧರಿಸಬೇಕು.

ಇಲ್ಲಿ ಪಕ್ಷ ಮುಖ್ಯವಲ್ಲ ವ್ಯಕ್ತಿ, ವ್ಯಕ್ತಿಯ ವ್ಯಕ್ತಿತ್ವ, ಆದರ್ಶ ಹಾಗೂ ಅಭ್ಯರ್ಥಿಯ ಅರ್ಹತೆ, ದಕ್ಷತೆ ಹಾಗೂ ಪ್ರಮಾಣಿಕತೆ ಅತಿ ಮುಖ್ಯವಾಗಿರುತ್ತದೆ.

ಕರ್ನಾಟಕದಲ್ಲಿ ಏಳು ಕೋಟಿ ಜನ ಸಂಖ್ಯೆಗಳ ಪೈಕಿ ಮತದಾನ ಮಾಡುವ ಅರ್ಹತೆ ಇರುವ ಸುಮಾರು 5 ಕೋಟಿ 37 ಲಕ್ಷ ಮತದಾರರು ಕೇವಲ 28 ಅರ್ಹ ಅಭ್ಯರ್ಥಿಗಳನ್ನು ಆರಿಸಿ ಲೋಕಸಭೆಗೆ ಕಳುಹಿಸಿಕೊಡಬೇಕು.




ಅಲ್ಲಿಗೆ ಆಯಾಯ ಲೋಕಸಭಾ ಕ್ಷೇತ್ರಗಳಲ್ಲಿ ಸುಮಾರು 15 ಲಕ್ಷಕ್ಕೂ ಹೆಚ್ಚು ಮತದಾರರು ಒಬ್ಬೊಬ್ಬ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಬೇಕು. ಆಯ್ಕೆಯಾದ ಒಬ್ಬ ಲೋಕಸಭೆಯ ಸಂಸತ್ ಸದಸ್ಯರು 15 ಲಕ್ಷಕ್ಕೂ ಹೆಚ್ಚು ಮತದಾರರಿಗೆ ಪ್ರತಿನಿಧಿಯಾಗಿ ಐದು ವರ್ಷಗಳ ಕಾಲ ಅವರು ಜನಪ್ರತಿನಿಧಿಗಳಾಗಿ ಸಂಸತ್ತಿಗೆ ಪ್ರವೇಶ ಮಾಡುತ್ತಾರೆ. ಆಯಾಯ ಕ್ಷೇತ್ರಗಳಲ್ಲಿ 15 ಲಕ್ಷಕ್ಕೂ ಹೆಚ್ಚು ಮತದಾರರು ನೆಲೆಸಿದ್ದಾರೆ ಅವರಲ್ಲಿ ಸಾಮಾನ್ಯ ಮತದಾರರ ಜೊತೆಗೆ ಕಾರ್ಮಿಕರು, ರೈತರು, ನೌಕರರು, ಯುವಕ ಯುವತಿಯರು, ಹೆಣ್ಣು ಮಕ್ಕಳು, ವಿದ್ಯಾರ್ಥಿಗಳು ಹಾಗೂ ಇತರೆ ಖುಸುಬುಳ್ಳವರು ಇತ್ಯಾದಿ.

ಮಿಗಿಲಾಗಿ ಜ್ಞಾನವಂತರು, ಪ್ರಜ್ಞಾವಂತರು ಪ್ರತಿಭಾವಂತರು, ವಿದ್ಯಾವಂತರು, ಮೇಧಾವಿಗಳು, ದಾರ್ಶನಿಕರು, ಪಂಡಿತರು, ವಿಜ್ಞಾನಿಗಳು,ವೈದ್ಯರು, ಶಿಕ್ಷಣ ತಜ್ಞರು, ಶಿಕ್ಷಕರು, ಸಾಹಿತಿಗಳು, ನ್ಯಾಯವಾದಿಗಳು ಹಾಗೂ ಇತರೆ ಕ್ಷೇತ್ರದಲ್ಲಿ ನೆಲೆವೂರಿರುವುದನ್ನು ನಾವು ಕಾಣಬಹುದು. ಆದರೆ ಅಭ್ಯರ್ಥಿ ಸಮಾಜಮುಖಿಯಾಗಿ, ಸೇವಾ ಮನೋಭಾವ ಉಳ್ಳವರಾಗಿ, ಸ್ವಾರ್ಥ ಮರೆತು ನಿಸ್ವಾರ್ಥ ಸೇವೆಉಳ್ಳವರಾಗಿ, ಪಾರದರ್ಶಕ ಆಡಳಿತ ಹಾಗೂ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿ ಮಾಡುವ ಅಭ್ಯರ್ಥಿಯಾಗಿರಬೇಕು. ಎಂಬುದನ್ನ ಮತದಾರರು ಮನಗಂಡು ಬಹಳ ಆಳವಾಗಿ ಅಭ್ಯರ್ಥಿಗಳ ಬಗ್ಗೆ ಅರ್ಥಮಾಡಿಕೊಂಡು ಪೂರ್ವಾಪರ ಯೋಚಿಸಿ ಅಧ್ಯಯನ ಮಾಡಿ ಬಹಳ ಎಚ್ಚರಿಕೆಯಿಂದ ಮತದಾನ ಮಾಡುವ ಮೂಲಕ ಅರ್ಹ ಅಭ್ಯರ್ಥಿಯನ್ನು ಆರಿಸಿಕೊಳ್ಳಬೇಕು. ಪ್ರಜಾಪ್ರಭುತ್ವವುಳ್ಳ ರಾಷ್ಟ್ರದಲ್ಲಿ ಮತದಾನ ಮಾಡದೇ ಮಾತನಾಡಿ ಮನೆ ಸೇರಿಕೊಂಡರೆ ಯೋಗ್ಯರಾದ ನಮ್ಮನ್ನ ಅಯೋಗ್ಯರು ಆಳುತ್ತಾರೆ. ಮತದಾನ ಮಾಡದೇ ನಂತರ ಪಶ್ಚಾತಾಪಪಟ್ಟು ಪರಿತಪಿಸಿದರೆ ಸತತ ಐದು ವರ್ಷಗಳ ಕಾಲ ನಮ್ಮ ಹಕ್ಕಿನ ಹಾಗೂ ಮೂಲಭೂತ ಸೌಕರ್ಯಗಳ ಬಗ್ಗೆ ಜನಪ್ರತಿನಿಧಿಗಳಲ್ಲಿ ಪ್ರಶ್ನೆ ಕೇಳಲು ನೈತಿಕ ಹಕ್ಕಿಲ್ಲ ಹಾಗೂ ನಮಗೆ ಧೈರ್ಯ ಬರುವುದಿಲ್ಲ ಮಿಗಿಲಾಗಿ ಆತ್ಮಕ್ಕೆ ವಂಚನೆ ಮಾಡಿಕೊಳ್ಳಬೇಕಾಗುತ್ತದೆ.

ಮತದಾನ ನಮ್ಮ ಹಕ್ಕು, ಮತದಾನ ಮಾಡುವುದು ನಮ್ಮ ಹಕ್ಕು, ಅರ್ಹ ಅಭ್ಯರ್ಥಿಯನ್ನು ಆಯ್ಕೆ ಮಾಡುವುದು ನಮ್ಮ ಹಕ್ಕು, ಗುಪ್ತ ಮತದಾನ ಮಾಡುವುದು ನಮ್ಮ ಹಕ್ಕು ಈ ಹಕ್ಕನ್ನ ಸಂವಿಧಾನ ನೀಡಿದೆ.

> **ಸೂಚನೆ**
> **ಪ್ರಚಲಿತ ರಾಜಕೀಯ ವಿದ್ಯುನ್ಮಾನಗಳು, ವಾಸ್ತವಿಕ ಸತ್ಯಾಂಶಗಳು, ಸಕಾರಾತ್ಮಕ ಸಾಧಕ ಭಾಧಕಗಳು, ಜಾತ್ಯಾತೀತ ನಿಲುವುಗಳು, ತತ್ವ ಸಿದ್ಧಾಂತಗಳು, ಪ್ರಜಾಪ್ರಭುತ್ವ ಮತ್ತು ಸಂವಿಧಾನ ಇವುಗಳ ಮಹತ್ವವು ಎಲ್ಲಾರಿಗೂ ತಿಳಿದಿದೆ ಆದರೂ ಮತದಾನ ಮಾಡುವ ಮುಂಚೆ ಪೂರ್ವಾಪರ ಯೋಚಿಸಿ ಸ್ವತಃ ನಿರ್ಧಾರ ಹಾಗೂ ವಿವೇಚನ ಶಕ್ತಿಯಿಂದ ಅವುಗಳ ಮಹತ್ವವನ್ನು ತಿಳಿದು ಮತದಾನ ಮಾಡಿ.**

ಯಾವುದೇ ಕಾರಣಕ್ಕೂ ಸಹ ಮತದಾರರು ಯಾವುದೇ ತರಹದ ಆಮೀಷಗಳಿಗೆ ಇಷ್ಟಪಡಬೇಡಿ. ಇಷ್ಟಪಟ್ಟರೆ ಹೆತ್ತ ತಾಯಿಗೆ ಮತ್ತು ಹೊತ್ತ ನಾಡಿಗೆ ದ್ರೋಹ ಮಾಡಿದಂತೆ ಆಗುತ್ತದೆ ಕಾರಣ ತಮ್ಮ ಒಂದು ಮತ ಅತ್ಯಮೂಲ್ಯವಾದದ್ದು ಅದು ಎಷ್ಟೇ ಕೋಟಿಗೂ ಕೂಡ ಸಮವಿಲ್ಲ ಎಂಬ ಸಾಮಾನ್ಯ ಅರಿವಿನ ಜ್ಞಾನ ಇರಲಿ.

ಆದ್ದರಿಂದ ಪ್ರಜ್ಞಾವಂತ ಎಲ್ಲಾ ಅರ್ಹ ಮತದಾರರು ತಪ್ಪದೇ ಮತದಾನ ಮಾಡುವ ಮೂಲಕ ಅರ್ಹ,ಯೋಗ್ಯ ಅಭ್ಯರ್ಥಿಯನ್ನು ಆರಿಸುವ ಜವಾಬ್ದಾರಿ, ಹೊಣೆಗಾರಿಕೆ, ಕರ್ತವ್ಯ ಸಂವಿಧಾನ ನೀಡಿರುವುದನ್ನು ಮರೆಯಬೇಡಿ ಮರೆತು ನಿರಾಶರಾಗಬೇಡಿ.

# ಅಭಿಮಾನಿಗಳ ಮನದಲ್ಲಿ ಇನ್ನೂ ಉಳಿದಿರುವ ಡಾ. ರಾಜಕುಮಾರ್ ಪಡೆದಂತಹ ಪ್ರಶಸ್ತಿಗಳೆಂದರೆ



• ಉದಯವಾಹಿನಿ, ವಿಶೇಷ

- **ಪದ್ಮಭೂಷಣ (ಭಾರತ ಸರ್ಕಾರದಿಂದ) ಪಡೆದು ಇತರರಿಗೆ ಮಾರ್ಗದರ್ಶಿಯಾದವರು.**
- **ದಾದಾ ಸಾಹೇಬ್ ಫಾಲ್ಕೆ ಪ್ರಶಸ್ತಿ (1995ರಲ್ಲಿ ಭಾರತ ಸರ್ಕಾರದಿಂದ) ಸರ್ಕಾರದ ಗಮನವನ್ನು ಸೆಳೆದು ಪಡೆದವರು**
- **ಕರ್ನಾಟಕ ರತ್ನ (ಕರ್ನಾಟಕ ಸರ್ಕಾರ) ಇದು ಸಹ ಅವರ ಅಭಿನಯವನ್ನು ಕಂಡು ಕನ್ನಡದ ಪ್ರೇಮವನ್ನ ಕಂಡು ಕನ್ನಡದ ಕೆಲಸಗಳನ್ನು ಕಂಡು ನೀಡಿದ ಪ್ರಶಸ್ತಿಯಾಗಿದೆ**
- **ರಾಷ್ಟ್ರಪ್ರಶಸ್ತಿ (ಜೀವನ ಚೈತ್ರ ಚಿತ್ರದಲ್ಲಿನ 'ನಾದಮಯ ಈ ಲೋಕವೆಲ್ಲಾ' ಹಾಡಿನ ಗಾಯನಕ್ಕೆ) ಇವರ ಕನ್ನಡ ಸೇವೆ ಅಷ್ಟೇ ಅಲ್ಲ ಇವರ ಗಾಯನವನ್ನು ಮೆಚ್ಚಿ ರಾಷ್ಟ್ರ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.**
- **ಅತ್ಯುತ್ತಮ ನಟ - ಫಿಲ್ಮ್‌ಫೇರ್ ಪ್ರಶಸ್ತಿ (ಹತ್ತು ಬಾರಿ) ಹತ್ತು ಬಾರಿ ಎಂದರೆ ಕಡಿಮೆಯೇನು ಹೇಳಿ. ಎಷ್ಟರಮಟ್ಟಿಗೆ ಮೆಚ್ಚಿರಬಹುದು ಜನರು ಅದಕ್ಕಾಗಿ ಇವರಿಗೆ ಲೆಕ್ಕವಿಲ್ಲದಷ್ಟು ಪ್ರಶಸ್ತಿಗಳು ಅವರ ಪಾಲಿಗೆ ಒದಗಿಬಂದದ್ದು.**
- **ಅತ್ಯುತ್ತಮ ನಟ - ರಾಜ್ಯಪ್ರಶಸ್ತಿ (ಒಂಭತ್ತು ಬಾರಿ) ಅತ್ಯುತ್ತಮ ನಟ ರಾಜ್ಯ ಪ್ರಶಸ್ತಿಯನ್ನು ಪಡೆದವರು**


ಸಾಮಾಜಿಕ ಕಳಕಳಿ
ಹೆಚ್.ಎಸ್. ಪ್ರತಿಮಾ
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ ಶಿಕ್ಷಕಿ, ಹಾಸನ

**ಇವರು ಇವರ ನಟನಿಗೆ ಮಾರುಹೋಗದ ಜನರೇ ಇಲ್ಲ. ಇವರ ನಟನೆಯಿಂದ ಆಕರ್ಷಿಸಿದ್ದು ಲೆಕ್ಕವನು ಮಾಡಲಾಗದಷ್ಟು ಅಭಿಮಾನಿಗಳ ಬಳಗವನ್ನು ಪಡೆದಿದ್ದಾರೆ.**

- **ಕೆಂಟಕಿ ಕರ್ನಲ್ (ಅಮೆರಿಕದ ಕೆಂಟಕಿ ರಾಜ್ಯದ ಗವರ್ನರ್ 1985ರಲ್ಲಿ ಬೆಂಗಳೂರಲ್ಲಿ ನೀಡಿದರು) ಬೆಂಗಳೂರಿನಲ್ಲಿ ಪ್ರಶಸ್ತಿಯನ್ನು ಪಡೆದದ್ದು ಕನ್ನಡಿಗರೇಗೆ ಹೆಮ್ಮೆಯ ವಿಷಯ.**
- **ನಾಡೋಜ ಪ್ರಶಸ್ತಿ (ಕನ್ನಡ ವಿಶ್ವವಿದ್ಯಾಲಯ, ಹಂಪಿ) ಅಭಿಮಾನ ಬಳಗ ವಿಶ್ವವಿದ್ಯಾನಲಯವು ಅವರನ್ನ ಗುರುತಿಸಿ ಈ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿದೆ.**
- **ಗುಬ್ಬಿ ವೀರಣ್ಣ ಪ್ರಶಸ್ತಿ (ಕರ್ನಾಟಕ ಸರ್ಕಾರ) ಕರ್ನಾಟಕದ ಸರ್ಕಾರವನ್ನು ಗಮನಸೆಳೆದು ಹಲವಾರು ಪ್ರಶಸ್ತಿಗಳನ್ನು ಬಾಚಿಕೊಂಡಿದ್ದಾರೆ ಅದರಲ್ಲಿ ಇದು ಒಂದಾಗಿದೆ.**

ಕಲಾ ಕೌಸ್ತುಭ (ವೃತ್ತಿ ರಂಗಭೂಮಿಗೆ ಸಲ್ಲಿಸಿದ ಸೇವೆಗೆ, ಕರ್ನಾಟಕ ಸರ್ಕಾರದಿಂದ) ತಮ್ಮದೇ ಆದ ಅಭಿಮಾನಿ ಬಳಗವನ್ನು ಹೊಂದಿದವರು ಅಭಿಮಾನಿಗಳಿಂದ ಹಲವಾರು ಪದವಿಗಳನ್ನು ಪಡೆದವರು. ಗೌರವ ಡಾಕ್ಟರೇಟ್(ಮೈಸೂರು ವಿಶ್ವವಿದ್ಯಾಲಯ), ಅದೇ ರೀತಿ ಬಿರುದುಗಳನ್ನು ಪಡೆದವರು ನಟ ಸಾರ್ವಭೌಮ (100ನೆಯ ಚಿತ್ರದ ಸಂದರ್ಭದಲ್ಲಿ), ಪ್ರತಿಯೊಬ್ಬರಿಗೂ ಮನೋರಂಜನೆಯನ್ನು ನೀಡಿ ಪಡೆದವರು. ಗಾನಗಂಧರ್ವ (ಅಭಿಮಾನಿ ಸಂಘಗಳಿಂದ). ಅಭಿಮಾನಿಗಳನ್ನು ಒಳಗೊಂಡಂತೆ ಸಂಘ-ಸಂಸ್ಥೆಗಳು ಅವರ ಹೆಸರಿನಲ್ಲಿ ಹುಟ್ಟಿಕೊಂಡವು. ನಂತರ ಅಭಿಮಾನ ಬಳಗವು ನೀಡಿದ ಬಿರುದು ಇದು.ವರನಟ (ಪತ್ರಕರ್ತರು, ಅಭಿಮಾನಿಗಳು), ಅಭಿಮಾನ ಬಳಗ ಅವಸ್ಥೆಯಲ್ಲ ಪತ್ರಕರ್ತರು ಸಹ ಇವರನ್ನು ಬಿರುದು ನೀಡಿ ಗೌರವಿಸಿರುವುದು ಶ್ಲಾಘನೀಯ. ಅಣ್ಣಾವ್ರು (ಅಭಿಮಾನಿಗಳಿಂದ),ರಸಿಕರ ರಾಜ (ಅಭಿಮಾನಿಗಳಿಂದ),ಕನ್ನಡದ ಕಣ್ಮಣಿ (ಅಭಿಮಾನಿಗಳಿಂದ),ಮೇರು ನಟ (ಅಭಿಮಾನಿಗಳಿಂದ) ಇಷ್ಟು ಅಭಿಮಾನಿಗಳಿಂದ ಹೆಸರನ್ನು ಪಡೆದ ನಂತರದಲ್ಲಿ ಅವರದೇ ಹೆಸರಿನ ಡಾ.ರಾಜಕುಮಾರ್ ರಸ್ತೆ ಎಂಬುದು ಬೆಂಗಳೂರಿನಲ್ಲಿ ಪ್ರಸಿದ್ಧಿಯನ್ನು ಪಡೆದಿದೆ ಕರ್ನಾಟಕದ ರಾಜಧಾನಿ ಬೆಂಗಳೂರಿನಲ್ಲಿ, ಯಶವಂತಪುರ ಮೇಲ್ಸೇತುವೆಯಿಂದ ಪ್ರಸನ್ನ ಚಿತ್ರಮಂದಿರದವರೆಗೆ ರಾಜಾಜಿನಗರದ ಮೂಲಕ ಹಾದುಹೋಗುವ ಮುಖ್ಯರಸ್ತೆಗೆ ಡಾ.ರಾಜ್‌ಕುಮಾರ್ ರಸ್ತೆ ಎಂದು ಹೆಸರಿಸಲಾಗಿದೆ. ಮುಂದೆ ಇಂತಹ ಮಹಾನ್ ಪುರುಷನು ಹುಟ್ಟಲೆಂದು ಆಶಿಸುತ್ತಾ ರಾಜಕುಮಾರ್ ಜನ್ಮ ನನ್ನ ಈ ಅಂಕಣಕ್ಕೆ ವಿರಾಮವನ್ನು ಹಾಕುತ್ತಿದ್ದೇನೆ . ಧನ್ಯವಾದಗಳು, ಜೈ ಹಿಂದ್ ಜೈ ಭಾರತ್ ಮಾತೆ.

# ವಿದ್ಯಾರ್ಥಿಗಳು ಉತ್ತಮ ಸಂಸ್ಕಾರ ಪಡೆಯಲಿ

## ಲೌಕಿಕ ಶಿಕ್ಷಣದ ಜೊತೆಗೆ ಆಧ್ಯಾತ್ಮಿಕ ಶಿಕ್ಷಣ ಅತ್ಯಗತ್ಯ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ವ್ಯಾಸರಾಜ ಮಠಾಧೀಶರಾದ ಪರಮಪೂಜ್ಯ ಶ್ರೀ ಶ್ರೀ ವಿದ್ಯಾಶ್ರೀಶತೀರ್ಥ ಶ್ರೀಪಾದಂಗಳವರ ಆದೇಶದ ಮೇರೆಗೆ ಶ್ರೀವ್ಯಾಸರಾಜ ಮಠ ಹಾಗೂ ಶ್ರೀವ್ಯಾಸತೀರ್ಥ ವಿದ್ಯಾಪೀಠದ ವತಿಯಿಂದ ಸೋಸಲೆಯ ವ್ಯಾಸರಾಜ ಮಠದಲ್ಲಿ 16-4-24 ರಿಂದ ಒಂಬತ್ತು ದಿನಗಳ ಕಾಲ ನಡೆದ ನಡೆದ ಶ್ರೀವ್ಯಾಸ-ಶ್ರೀಶ ಧಾರ್ಮಿಕ ಶಿಬಿರದ ಸಮಾರೋಪ ಸಮಾರಂಭವು 24-04-24 ರಂದು ಶ್ರೀಪಾದಂಗಳವರ ಅಧ್ಯಕ್ಷತೆಯಲ್ಲಿ ಜರುಗಿತು

**ಗುರುಕುಲ ಮಾದರಿ ಜೀವನ**

ಧಾರ್ಮಿಕ ಶಿಬಿರದ ಅಧ್ಯಕ್ಷತೆಯನ್ನು ವಹಿಸಿ ಆಶೀರ್ವಚನವನ್ನು ನೀಡಿದ ಶ್ರೀಪಾದರು ವಿದ್ಯಾರ್ಥಿಗಳಿಗೆ ಲೌಕಿಕ ಶಿಕ್ಷಣದ ಜೊತೆಗೆ ಆಧ್ಯಾತ್ಮಿಕ ಶಿಕ್ಷಣವು ಅತ್ಯಗತ್ಯ. ಧಾರ್ಮಿಕ ಶಿಕ್ಷಣದಿಂದ ವಿದ್ಯಾರ್ಥಿಗಳು ಉತ್ತಮ ಸಂಸ್ಕಾರವನ್ನು ಪಡೆದು ಸಮಾಜದಲ್ಲಿ ಒಳ್ಳೆಯ ಪ್ರಭಾವವನ್ನು ಉಂಟು ಮಾಡುವರು. ವಿದ್ಯಾರ್ಥಿಗಳು ಈ ಶಿಬಿರದಲ್ಲಿ ಕಲಿತ ವಿದ್ಯೆಯನ್ನು ಪಾಲಕರು ಮನೆಯಲ್ಲೂ ಕೂಡ ಮುಂದುವರಿಸಿಕೊಂಡು ಹೋಗುವ ಜವಾಬ್ದಾರಿಯನ್ನು ಹೊಂದಿರುತ್ತಾರೆ ಎಂದು ಶಿಬಿರದ ಮಹತ್ವ ವ್ಯಾಪ್ತಿ ಮತ್ತು ಪಾಲಕರ ಜವಾಬ್ದಾರಿಯನ್ನು ತಮ್ಮ ಪ್ರವಚನದಲ್ಲಿ ತಿಳಿಸಿಕೊಟ್ಟರು.

ನಿರೂಪಣೆಯನ್ನು ನಡೆಸಿಕೊಟ್ಟ ಶ್ರೀ ವ್ಯಾಸತೀರ್ಥ ವಿದ್ಯಾಪೀಠದ ಪ್ರಾಂಶುಪಾಲರಾದ ಶ್ರೀನಿಧಿ ಪ್ಯಾಟಿ ಆಚಾರ್ಯರು ಶ್ರೀಪಾದಂಗಳವರು ವ್ಯಾಸರಾಜ ಮಠದ ಪೀಠಾಧಿಪತಿಗಳಾದ ನಂತರ ಕೈಗೊಂಡ ಅಭಿವೃದ್ಧಿ ಕಾರ್ಯಗಳ ಫಲವಾಗಿ ನವೀಕರಣಗೊಂಡ ಸೋಸಲೆಯ ಮಠದಲ್ಲಿ ಈ ರೀತಿಯಾದ ಶಿಬಿರವನ್ನು ನಡೆಸಲು ಸಾಧ್ಯವಾಯಿತು ಎಂದು ಶ್ರೀಪಾದಂಗಳವರ ದೂರದೃಷ್ಟಿಯನ್ನು ವಿವರಿಸಿದರು .

ಗುರುಕುಲ ಮಾದರಿ ಜೀವನ ಪದ್ಧತಿಯನ್ನು ಪರಿಚಯಿಸುವ ನಿಟ್ಟಿನಲ್ಲಿ ವಿಶಿಷ್ಟ ರೀತಿಯಲ್ಲಿ ಆಯೋಜನೆಗೊಂಡಿದ್ದ ಈ ಶಿಬಿರದಲ್ಲಿ 30 ವಿದ್ಯಾರ್ಥಿಗಳು ಭಾಗವಹಿಸಿದ್ದರು. ಅವರೆಲ್ಲರಿಗೂ ಶ್ರೀಪಾದರು ಪ್ರಮಾಣಪತ್ರ ಹಾಗೂ ಅನುಗ್ರಹ ಮಂತ್ರಾಕ್ಷತೆಯನ್ನು ನೀಡಿ ಆಶೀರ್ವದಿಸಿದರು. ಶಿಬಿರದ ಆಯೋಜನೆಗೆ ಸಕಲವಿಧಲಾದ ವ್ಯವಸ್ಥೆಯನ್ನು ಕಲ್ಪಿಸಿ ಶಿಬಿರವನ್ನು ಯಶಸ್ವಿಯಾಗಿಸಿದ ಶ್ರೀ ವ್ಯಾಸತೀರ್ಥ ವಿದ್ಯಾಪೀಠದ ಗೌ.ಕಾರ್ಯದರ್ಶಿಗಳಾದ ಡಾ.ಡೀ.ಪಿ.ಮಧುಸೂಧನಾಚಾರ್ಯರಿಗೆ ವಂದನೆಗಳನ್ನು ಸಲ್ಲಿಸಿದರು. ಮಠದ ವ್ಯವಸ್ಥಾಪಕರಾದ ಶ್ರೀಧರ ಹಾಗೂ ಸಿಬ್ಬಂದಿಗಳ ಹಾಗೂ ಶ್ರೀ ವ್ಯಾಸತೀರ್ಥ ವಿದ್ಯಾಪೀಠದ ವಿದ್ಯಾರ್ಥಿಗಳ ಹಾಗೂ ಅಧ್ಯಾಪಕರ ಸಹಕಾರವನ್ನು ಸ್ಮರಿಸಿದರು.

# ಮಹಾಭಾರತ

## ಭೀಷ್ಮಪರ್ವ



• ಹಿಂದಿನ ಸಂಚಿಕೆಯಿಂದ

ವೀರರೆಲ್ಲ ಮಲಗಿಕೊಂಡಿದ್ದರು. ಎಲ್ಲಾರೂ ರಾಧೇಯನ ಬಗ್ಗೆಯೇ ಯೋಚಿಸುತ್ತಿದ್ದರು. ರಾತ್ರಿ ಎಷ್ಟೋ ಹೊತ್ತಾದ ಮೇಲೆ ರಾಧೇಯನು ದುರ್ಯೋಧನನ ಡೇರೆಗೆ ಹೋದನು. ಮಾರನೆಯ ಬೆಳಗ್ಗೆ ಮಾಡಬೇಕಾದುದನ್ನು ಯೋಚಿಸತೊಡಗಿದರು. ರಾಜನು ತನ್ನೊಬ್ಬನ ಮೇಲೆಯೇ ಅವಲಂಬಿಸಿರುವನೆಂದು ರಾಧೇಯನಿಗೆಗೊತ್ತು. ಆದರೆ ಏಕೋ ಅವನಿಗೆ ಇದು ರಾಜನೊಂದಿಗೆ ತಾನು ಕಳೆಯಲಿರುವ ಕೊನೆಯ ರಾತ್ರಿ ಎನ್ನಿಸಿಬಿಟ್ಟಿತ್ತು. ಅವನು, ''ದುರ್ಯೋಧನ, ನಾಳೆ ನಾನು ಅರ್ಜುನನೊಡನೆ ಹೋರಾಡುತ್ತೇನೆ, ಹೋರಾಡಲೇಬೇಕು. ಇಬ್ಬರಲ್ಲಿ ಒಬ್ಬರು ಸಾಯುತ್ತೇವೆ. ಇದಾಗದ ಹೊರತು ನಾನು ಪಾಳೆಯಕ್ಕೆ ಹಿಂದಿರುಗುವುದಿಲ್ಲ. ಮಹಾರಾಜ, ನಾವೀಗ ನಮ್ಮಿಬ್ಬರ ಪ್ರೌಢಿಮೆಯನ್ನು ನೋಡೋಣ. ನಾನು ಅರ್ಜುನನಿಗಿಂತ ತುಂಬ ಮೇಲ್ಮಟ್ಟದವನು; ಕೃಪನೆನ್ನುವಂತೆ ನಾನು ಬೊಗಳೆಗಾಗಿ ಹೇಳುತ್ತಿಲ್ಲ, ನಿಜವಾದ ಸಂಗತಿಯೇ ಇದು. ಇಬ್ಬರಲ್ಲಿಯೂ ದಿವ್ಯಾಸ್ತ್ರಗಳಿವೆ. ಶಕ್ತಿಯಲ್ಲಿಯೂ ಉದಾತ್ತತೆಯಲ್ಲಿಯೂ ನಾನು ಅರ್ಜುನನಿಗಿಂತ ಮೇಲು. ಗಾಂಡೀವಕ್ಕಿಂತ ಉತ್ತಮವಾದ, ಭಾರ್ಗವನಿಂದ ಕೊಡಲ್ಪಟ್ಟ ವಿಜಯವೆಂಬ ಧನಸ್ಸು ನನ್ನಲ್ಲಿದೆ. ಇದನ್ನು ವಿಶ್ವಕರ್ಮನು ಇಂದ್ರನಿಗಾಗಿ ತಯಾರಿಸಿದನು; ಇಂದ್ರನು ಭಾರ್ಗವನಿಗೆ ಕೊಟ್ಟನು. ನಾಳೆ ನಾನು ಅರ್ಜುನನನ್ನು ಕೊಂದು ಲೋಕವನ್ನೇ ನಿನ್ನ ಪದತಲದಲ್ಲಿರಿಸುತ್ತೇನೆ. ಆ ಮೂಲಕ ನಾನು ನೋಡಿದ ಅತ್ಯುತ್ತಮ ಸಾಮ್ರಾಟನ ಪ್ರೇಮವನ್ನು ಅಭಿನಂದಿಸುತ್ತೇನೆ. ''ಈಗ ಅರ್ಜುನ ನನಗಿಂತ ಹೇಗೆ ಮೇಲೆಂದು ಹೇಳುವೆನು ಕೇಳು. ಅವನ ಗಾಂಡೀವ ದೈವದತ್ತವಾದದ್ದು, ಬತ್ತಳಿಕೆ ಅಕ್ಷಯವಾದದ್ದು; ರಥ ಕುದುರೆಗಳೂ ದೈವಿಕವಾದವುಗಳು. ಅವನ ಧ್ವಜದಲ್ಲಿ ಸಾಕ್ಷಾತ್ ಹನುಮಂತನೇ ನೆಲೆಸಿರುವನು. ಜಗದ್ರಕ್ಷಕನಾದ ಕೃಷ್ಣನೇ ಕುದುರೆಗಳ ನಿಯಂತ್ರಕನಾಗಿರುವನು. ಈ ಮೂರು ಸಂಗತಿಗಳು ಅವನನ್ನು ಉತ್ತಮನ್ನಾಗಿಸುವುವು. ನಾನು ಅವನಿಗಿಂತ ಶೌರ್ಯದಲ್ಲಿ ಮೇಲಾಗಿದ್ದರೂ, ನನಗೊಬ್ಬ ಉತ್ತಮ ಸಾರಥಿಯಿಲ್ಲ. ಶಲ್ಯನು ನನ್ನ ಸಾರಥಿಯಾಗುವುದಾದರೆ, ನಾನು ಗೆಲ್ಲುವುದು ಖಂಡಿತ. ಶಲ್ಯನು ಕೃಷ್ಣನಂತೆಯೇ ಮಹಾತ್ಮನು; ಕೃಷ್ಣನಿಗಿಂತ ಮಿಗಿಲೆಂದೇ ಹೇಳಬಹುದು. ಯುದ್ಧದಲ್ಲಿ ನನ್ನನ್ನು ಹೇಗೋ ಹಾಗೆ ಸಾರಥ್ಯದಲ್ಲಿ ಶಲ್ಯನನ್ನು ಮೀರಿಸಿದವರಿಲ್ಲ. ಶಲ್ಯನನ್ನು ಒಪ್ಪಿಸುವುದು ನಿನಗೆ ಬಿಟ್ಟಿದ್ದು. ಅದು ಸುಲಭವೇನಲ್ಲ. ನೀನು ಮನಸ್ಸುಮಾಡಿದರೆ ಯಾರಿಂದ ಏನು ಬೇಕಾದರೂ ಮಾಡಿಸಬಲ್ಲೆ. ಆ ಸಾಮರ್ಥ್ಯ ನಿನಗೆ ದೈವದತ್ತವಾದದ್ದು, ದುರ್ಯೋಧನ! ಎಂದನು. ರಾಧೇಯನು ಸುಂದರವಾಗಿ ನಕ್ಕನು. ಅವನ ನಗೆಯಲ್ಲಿ ದಿವ್ಯತೆ ರಾರಾಜಿಸುತ್ತಿತ್ತು. ದುರ್ಯೋಧನನು ಅವನನ್ನು ಪ್ರೀತಿಯಿಂದ ಆಲಿಂಗಿಸಿಕೊಂಡನು. ಅದೇ ಅವರು ಒಟ್ಟಿಗೆ ಕಲೆಯಲಿರುವ ಕೊನೆಯ ರಾತ್ರಿಯಾಗಿತ್ತು. ಆದರೆ ರಾಜನಿಗದು ಗೊತ್ತಿರಲಿಲ್ಲ. ರಾಧೇಯನಿಗೆ ನಾಳೆ ತನ್ನ ಅವಸಾನವೆಂಬುದು ತಿಳಿದಿತ್ತು; ಅದಕ್ಕೆ ಸಿದ್ಧನಾಗಿಯೇ ಇದ್ದನು. ದುರ್ಯೋಧನನು, ''ನಾನು ಶಲ್ಯನನ್ನು ಒಪ್ಪಿಸುತ್ತೇನೆ, ರಾಧೇಯ. ಅವನು ನನ್ನ ಮಾತನ್ನು ತೆಗೆದುಹಾಕುವವನಲ್ಲ.

**ಮುಂದುವರಿಯುವುದು...**

# ನಂದಿಬೆಟ್ಟದ ಕಡೆ ಹೊರಡುವ ಪ್ರವಾಸಿಗರೇ ಇಲ್ಲಿ ಗಮನಿಸಿ

• ಉದಯವಾಹಿನಿ, ಬೆಂಗಳೂರು

ಲೋಕಸಭೆ ಚುನಾವಣೆ ಹಿನ್ನೆಲೆ ಏಪ್ರಿಲ್ 25ರಿಂದ ಅಂದರೆ ಇಂದು ಸಂಜೆಯಿಂದಲೇ ಚಿಕ್ಕಬಳ್ಳಾಪುರ ಜಿಲ್ಲೆಯ ಪ್ರಸಿದ್ಧ ಪ್ರವಾಸಿ ತಾಣ ನಂದಿಗಿರಿಧಾಮಕ್ಕೆ ಪ್ರವಾಸಿಗೆ ಪ್ರವೇಶಕ್ಕೆ ನಿರ್ಬಂಧ ಹೇರಿ ಜಿಲ್ಲಾಧಿಕಾರಿ ಆದೇಶ ಹೊರಡಿಸಿದ್ದಾರೆ. ಹಾಗಾದರೆ ಎಷ್ಟು ಗಂಟೆಗಳ ಕಾಲ ನಿರ್ಬಂಧ ಹೇರಲಾಗುತ್ತದೆ ಎನ್ನುವ ಮಾಹಿತಿಯನ್ನು ಇಲ್ಲಿ ತಿಳಿಯಿರಿ. ಸಾಮಾನ್ಯ ದಿನಗಳಲ್ಲೇ ಬೆಂಗಳೂರಿನ ಸಮೀಪವಿರುವ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿನ ಪ್ರಸಿದ್ಧ ಪ್ರವಾಸಿ ತಾಣಕ್ಕೆ ಸಾವಿರಾರು ಪ್ರವಾಸಿಗರು ಭೇಟಿ ನೀಡುತ್ತಲೇ ಇರುತ್ತಾರೆ. ಇನ್ನೂ ವೀಕೆಂಡ್ ದಿನಗಳಲ್ಲಿ ಇದಕ್ಕೂ ಮೂರ್ನಾಲ್ಕು ಪಟ್ಟು ಪ್ರವಾಸಿಗರು ಭೇಟಿ ನೀಡುತ್ತಿರುತ್ತಾರೆ. ಇದೀಗ ಏಪ್ರಿಲ್ 26 ಅಂದರೆ ವೀಕೆಂಡ್ ಆಗಿರುವುದರಿಂದ ಇತ್ತ ಪ್ರಯಾಣಿಸಲಿ ಪ್ಲಾನ್ ಮಾಡಿಕೊಂಡಿದ್ದರೆ, ಈ ಸುದ್ದಿಯನ್ನು ನೀವು ಓದಲೇ ಬೇಕಿದೆ. ರಾಜ್ಯದಲ್ಲಿ ಏಪ್ರಿಲ್ ಬೆಳಗ್ಗೆ 7 ಗಂಟೆಯಿಂದಲೇ 14 ಲೋಕಸಭಾ ಕ್ಷೇತ್ರಗಳಿಗೆ ಮೊದಲ ಮತದಾನ ನಡೆಯಲಿದ್ದು, ಈ ಹಿನ್ನೆಲೆ ಚಿಕ್ಕಬಳ್ಳಾಪುರ ಜಿಲ್ಲೆಯ ಪ್ರಸಿದ್ಧ ಪ್ರವಾಸಿ ತಾಣವಾದ ನಂದಿಗಿರಿಧಾಮ ಪ್ರವಾಸಿಗರ ಪ್ರವೇಶಕ್ಕೆ ನಿರ್ಬಂಧ ಹೇರಲಾಗಿದೆ. ಏ. 25ರ ಸಂಜೆ 6 ಗಂಟೆಯಿಂದ ಏ. 26ರ ರಾತ್ರಿ 8 ಗಂಟೆಯವರೆಗೆ ಸಾರ್ವಜನಿಕರ ಪ್ರವೇಶಕ್ಕೆ ನಿಷೇಧ ಹೇರಲಾಗಿದೆ. ಏಪ್ರಿಲ್ 26ರಂದು ನಡೆಯಲಿರುವ ಮತದಾನದಲ್ಲಿ ಎಲ್ಲಾ ಮತದಾರರು ಕಡ್ಡಾಯವಾಗಿ ಮತ ಚಲಾಯಿಸಬೇಕೆಂಬ ಉದ್ದೇಶದಿಂದ ಈ ಆದೇಶವನ್ನು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಹೊರಡಿಸಿದ್ದಾರೆ.

ಉದಯವಾಹಿನಿ ಚಿತ್ರ


# ಜಿಲ್ಲಾ ಚುನಾವಣಾಧಿಕಾರಿ, ಮುಖ್ಯ ಆಯುಕ್ತರಿಂದ ಮಸ್ಟರಿಂಗ್ ಕೇಂದ್ರಗಳ ಭೇಟಿ, ಪರಿಶೀಲನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಸಾರ್ವತ್ರಿಕ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಮುಖ್ಯ ಆಯುಕ್ತರಾದ ಶ್ರೀ ತುಷಾರ್ ಗಿರಿ ನಾಥ್ ರವರು ಇಂದು ವಿವಿಧ ಮಸ್ಟರಿಂಗ್ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ನಗರದ 3 ಲೊಕಸಭಾ ಕ್ಷೇತ್ರ ಚುನಾವಣಾಧಿಕಾರಿ ವ್ಯಾಪ್ತಿಯಲ್ಲಿರುವ ಮಸ್ಟರಿಂಗ್ ಕೇಂದ್ರಗಳಿಗೆ ಎಲ್ಲಾ ಮತಗಟ್ಟೆ ಅಧಿಕಾರಿಗಳು ಬಂದು ಮತಗಟ್ಟೆಗಳಿಗೆ ಅಗತ್ಯವಿರುವ ಇವಿಎಂ, ಬ್ಯಾಲೆಟ್ ಯುನಿಟ್, ಕಂಟ್ರೋಲ್ ಯುನಿಟ್, ವಿವಿ ಪ್ಯಾಟ್ ಸೇರಿದಂತೆ ಎಲ್ಲಾ ಮತಗಟ್ಟೆ ಸಾಮಗ್ರಿಗಳನ್ನು ತೆಗೆದುಕೊಂಡು ಬಿ.ಎಂ.ಟಿ.ಸಿ, ಕೆ.ಎಸ್.ಆರ್.ಟಿ.ಸಿ, ಇತರೆ ವಾಹನಗಳ ಮೂಲಕ ಮತಗಟ್ಟೆಗಳಿಗೆ ಪೊಲೀಸ್ ಬಂದೋಬಸ್ತ್ ಮೂಲಕ ತೆರಳಲಿದ್ದಾರೆ. ಎಲ್ಲಾ ಮತಗಟ್ಟೆಗಳಲ್ಲೂ ವಸತಿ, ನೀರಿನ ವ್ಯವಸ್ಥೆ ಸೇರಿದಂತೆ ಎಲ್ಲಾ ರೀತಿಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಇಂದು ಏಪ್ರಿಲ್ 26ರಂದು ಬೆಳಗ್ಗೆ 7.00 ರಿಂದ ಸಂಜೆ 6.00 ಗಂಟೆಯವರೆಗೆ ಮತದಾನ ನಡೆಯಲಿದ್ದು, ಅದಕ್ಕಿಂತ ಮುಂಚಿತವಾಗಿ ಬೆಳಗ್ಗೆ 5.30ಕ್ಕೆ ಅಣುಕು ಮತದಾನ ಪ್ರಾರಂಭವಾಗಲಿದ್ದು, 7.00 ಗಂಟೆಯೊಳಗಾಗಿ ಪೂರ್ಣಗೊಳ್ಳಲಿದೆ. ಮತಗಟ್ಟೆಗಳಲ್ಲಿ ಮತದಾರರಿಗೆ ಯಾವುದೇ ಸಮಸ್ಯೆ ಆಗದಂತೆ ಎಲ್ಲಾ ರೀತಿಯ ಮೂಲಭೂತ ಸೌಕರ್ಯಗಳ ವ್ಯವಸ್ಥೆ ಮಾಡಲಾಗಿದೆ ಎಂದರು.

> **ಮತಗಟ್ಟೆ ಅಧಿಕಾರಿಗಳಿಗೆ ಕಿಟ್ ವಿತರಣೆ**
> **ನಗರದ 28 ವಿಧಾನಸಭಾ ಕ್ಷೇತ್ರಗಳ ಮಸ್ಟರಿಂಗ್ ಕೇಂದ್ರಗಳಿಂದ ಮತಗಟ್ಟೆ ಅಧಿಕಾರಿಗಳು, ಇವಿಎಂ, ಸಿಯು, ವಿವಿ ಪ್ಯಾಟ್, ಮತದಾನದ ದಿನ ಅಗತ್ಯವಿರುವ ಚೆಕ್ ಲಿಸ್ಟ್ ಪ್ರಕಾರ ಎಲ್ಲಾ ರೀತಿಯ ಸಾಮಗ್ರಿ ಗಳು, ಮತಗಟ್ಟೆಗಳಲ್ಲಿ ರಾತ್ರಿ ಉಳಿಯಲು ಮತಗಟ್ಟೆ ಅಧಿಕಾರಿಗಳಿಗೆ ಬೇಕಾದಂತಹ ವ್ಯವಸ್ಥೆ ಮಾಡಲಾಗಿದೆ.**

**ಭೇಟಿ ನೀಡಿದ ಮಸ್ಟರಿಂಗ್ ಕೇಂದ್ರಗಳ ವಿವರ**

- **ಶೇಷಾದ್ರಿಪುರಂ ಕಾಲೇಜು, ಯಲಹಂಕ.**
- **ಬಿಇಎಲ್ ಹೈ ಸ್ಕೂಲ್, ಬ್ಯಾಟರಾಯನಪುರ.**
- **ಕ್ರೈಸ್ಟ್ ಯೂನಿವರ್ಸಿಟಿ, ದಾಸರಹಳ್ಳಿ.**

ಎಲ್ಲಾ ಮಸ್ಟರಿಂಗ್ ಕೇಂದ್ರಗಳಿಂದ ಬ್ಯಾಲೆಟ್ ಯುನಿಟ್(ಇವಿಎಂ), ಕಂಟ್ರೋಲ್ ಯುನಿಟ್(ಸಿಯು), ವಿವಿ ಪ್ಯಾಟ್ ಗಳನ್ನು ಮತಗಟ್ಟೆಗಳಿಗೆ ತಲುಪಿಸಲು ಈಗಾಗಲೇ ರೂಟ್ ಸಿದ್ದಪಡಿಸಿಕೊಳ್ಳಲಾಗಿದೆ. ಆ ಪ್ರಕಾರ ಒಂದು ಬಸ್ ನಲ್ಲಿ 5 ರಿಂದ 6 ಮಟಗಟ್ಟೆಗಳ ಅಧಿಕಾರಿಗಳು ತೆರಳಲಿದ್ದಾರೆ. ಇಂದು ಮಧ್ಯಾಹ್ನ ನಂತರ ಮತಗಟ್ಟೆಗಳಿಗೆ ತೆರಳಲಿದ್ದಾರೆ ಎಂದು ಹೇಳಿದರು. ಅಣುಕು ಮತದಾನದ ವೇಳೆ ಇವಿಎಂ ನಲ್ಲಿ ಲೋಪದೋಷಗಳು ಕಂಡುಬಂದರೆ ಸೆಕ್ಟರ್ ಅಧಿಕಾರಿ ಮೂಲಕ ಕನಿಷ್ಠ 10 ಮತಗಟ್ಟೆಗಳಿಗೆ ನಿಯೋಜನೆ ಮಾಡಿರುವಂತಹ ಮಾರ್ಗ ಅಧಿಕಾರಿಯು(Route Officer) ಪರ್ಯಾಯ ವ್ಯವಸ್ಥೆ ಮಾಡಲಿದ್ದಾರೆ. ಪರಿಶೀಲನೆಯ ವೇಳೆ ವಲಯ ಜಂಟಿ ಆಯುಕ್ತರುಗಳಾದ ಮೊಹ್ಮದ್ ನಯೀಮ್ ಮೊಮಿನ್, ಬಾಲಶೇಖರ್, ಸಹಾಯಕ ಚುನಾವಣಾಧಿಕಾರಿಗಳಾದ ಸುರೇಶ್, ಪ್ರಮೋದ್ ಪಾಟೀಲ್, ಬಾಲಪ್ಪ ಹಂದಿಗುಂದ, ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಕುಸಿದ ಈರುಳ್ಳಿ ಬೆಲೆ ಉಚಿತವಾಗಿ ಹಂಚಿ ರೈತರ ಪ್ರತಿಭಟನೆ

## ಈರುಳ್ಳಿ ಬೆಲೆ ಕುಸಿದಿದ್ದು, ರೈತರು ಕಂಗಾಲು, ತಕ್ಷಣ ನೆರವಿಗೆ ಬರಬೇಕಾದ ಕೇಂದ್ರ ಸರ್ಕಾರ ರೈತರನ್ನು ಮರೆತಿದೆ

• **ಉದಯವಾಹಿನಿ, ಹೊಸಪೇಟೆ**

ಈರುಳ್ಳಿ ಬೆಲೆ ತೀವ್ರವಾಗಿ ಕುಸಿದಿದ್ದು, ರೈತರು ಕಂಗಾಲಾಗಿದ್ದಾರೆ. ತಕ್ಷಣ ನೆರವಿಗೆ ಬರಬೇಕಾದ ಕೇಂದ್ರ ಸರ್ಕಾರ ರೈತರನ್ನು ಮರೆತಿದೆ ಎಂದು ಆರೋಪಿಸಿದ ರೈತರು, ಗುರುವಾರ ಇಲ್ಲಿ ಉಚಿತವಾಗಿ ಈರುಳ್ಳಿ ಹಂಚಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಕಾರ್ಯಾಧ್ಯಕ್ಷ ಜೆ.ಎಂ.ವೀರಸಂಗಯ್ಯ ಅವರ ನೇತೃತ್ವದಲ್ಲಿ ಇಲ್ಲಿನ ಪುನೀತ್ ರಾಜ್‌ಕುಮಾರ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದ ಈ ರುಳ್ಳಿ ಬೆಳೆಗಾರ ರೈತರು, ಇತರ ರೈತ ಮುಖಂಡರು, ಕೇಂದ್ರ ಸರ್ಕಾರದ ರೈತ ವಿರೋಧಿ ಧೋರಣೆಯನ್ನು ಕಟುವಾಗಿ ಖಂಡಿಸಿದರು.

ಈರುಳ್ಳಿ ಬೆಳೆದ ರೈತರು ಇಂದು ಬೆಲೆ ಇಲ್ಲದೆ ಕಣ್ಣೀರು ಹಾಕುತ್ತಿದ್ದರೂ ಕೇಂದ್ರ ಸರ್ಕಾರ ಅದಕ್ಕೆ ಸ್ಪಂದಿಸುತ್ತಲೇ ಇಲ್ಲ. ಈರುಳ್ಳಿ ಬೆಲೆ ಹೆಚ್ಚಾದಾಗ ತಕ್ಷಣ ಬೇರೆ ದೇಶಗಳಿಂದ ಈರುಳ್ಳಿ ತರಿಸಲು ಮುಂದಾಗುವ ಸರ್ಕಾರ, ಬೆಲೆ ಕುಸಿದಾಗ ರೈತರ ನೆರವಿಗೆ ಏಕೆ


ಉದಯವಾಹಿನಿ ಚಿತ್ರ

**ರೈತರು ಬೆಲೆ ಇಲ್ಲದೆ ಕಣ್ಣೀರು**

ಬರುತ್ತಿಲ್ಲ?' ಎಂದು ವೀ ರಸಂಗಯ್ಯ ಪ್ರಶ್ನಿಸಿದರು. ರೈತ ಸಂ ಘದ ಜಿಲ್ಲಾ ಕಾರ್ಯದರ್ಶಿಯೂ ಆ ಗಿರುವ ಈರುಳ್ಳಿ ಕೃಷಿಕ ಗೋಣಿಬಸಪ್ಪ ಮಾ ತನಾಡಿ, 'ಹೊಸಪೇಟೆ ಎಪಿಎಂಸಿಯಲ್ಲಿ ಮೂರು ಮೂಟೆ ಈರುಳ್ಳಿ ತಂದು ಇಟ್ಟರೂ ಇದುವರೆಗೂ ಖರೀದಿಯೇ ಆಗಿಲ್ಲ. ಒಂದು ಎಕರೆಗೆ ಈರುಳ್ಳಿ ಬೆಳೆಯಲು 80 ಸಾವಿರ ಖರ್ಚು ಬರುತ್ತದೆ. ಆದರೆ ಇದೀಗ ಕ್ವಿಂಟಲ್‌ಗೆ 600 ಸಹ ಸಿಗುತ್ತಿಲ್ಲ. ಹೀಗಾಗಿ ಈರುಳ್ಳಿಯನ್ನು ಚರಂಡಿಗೆ ಎಸೆದು ಪ್ರತಿಭ ಟಿಸಲು ನಿರ್ಧರಿಸಿದ್ದೆ. ತಿನ್ನುವ ಈರುಳ್ಳಿಯನ್ನು ಎಸೆಯುವುದು ಬೇಡ ಎಂಬ ಕಾರಣಕ್ಕೆ ಅದನ್ನು ಉಚಿತವಾಗಿ ಹಂಚುವ ಮೂಲಕ ಸರ್ಕಾರದ ಧೋರಣೆಯನ್ನು ಖಂಡಿಸುತ್ತಿದ್ದೇನೆ' ಎಂದರು. ಮೂರು ಚೀಲಗಳಲ್ಲಿ ತುಂಬಿದ್ದ ಈರುಳ್ಳಿಯನ್ನು ಹತ್ತಾರು ಮಂದಿಗೆ ಉಚಿತವಾಗಿ ಹಂಚಲಾಯಿತು.

> ಇದಕ್ಕೆ ಮೊದಲು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಜೆ.ಎಂ. ವೀರಸಂಗಯ್ಯ, ಕಳೆದ ಹತ್ತು ವರ್ಷಗಳಲ್ಲಿ ಕೇಂದ್ರ ಸರ್ಕಾರ ರೈತ ವಿರೋಧಿ ನೀತಿಗಳನ್ನೇ ಅನುಸರಿಸಿಕೊಂಡು ಬಂದಿದೆ. ಕೇಂದ್ರದ ಕೃಷಿ ನೀತಿಯಿಂದ ರೈತರು ಅಪಾಯದಲ್ಲಿರುವುದು ಮಾತ್ರವಲ್ಲ, ಒಕ್ಕಲುತನವೇ ಅಪಾಯದಲ್ಲಿದೆ. ಕೃಷಿಯನ್ನು ಕಂಪನಿಗಳ ಕೈಗೆ ವರ್ಗಾಯಿಸಲು ಕೇಂದ್ರ ತೀರ್ಮಾನಿಸಿದೆ. ಹೀಗಾಗಿ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ರೈತರು ಎನ್‌ಡಿಎ ವಿರುದ್ಧ ಮತ ಚಲಾಯಿಸಬೇಕು
> – ಜೆ.ಎಂ.ವೀರಸಂಗಯ್ಯ, ಕಾರ್ಯಾಧ್ಯಕ್ಷ

### ರೈತರಲ್ಲಿ ಒಡಕಿಗೆ ಯತ್ನ

ನರಗುಂದದ ಗೋಲಿಬಾರ್ ಪ್ರಕರಣ ನಡೆದ ಬಳಿಕವೂ ರೈತರಲ್ಲಿ ಒಡಕು ಮೂಡಿಸುವ ಯತ್ನ ನಡೆದಿತ್ತು. ಆದರೆ ರೈತರು ಮನಸ್ಸು ಮಾಡಿದರೆ ಸರ್ಕಾರವನ್ನು ಬದಲಿಸಬಲ್ಲರು ಎಂಬುದಕ್ಕೆ 1983ರಲ್ಲಿ ಗುಂಡೂರಾವ್ ಸರ್ಕಾರ ಪತನವಾಗಿದ್ದೇ ಸಾಕ್ಷಿ ಇದೆ. ಮತ್ತೊಮ್ಮೆ ರೈತರು ಒಗ್ಗಟ್ಟಾಗಿ ನಿಂತರೆ ಕೇಂದ್ರದ ಮೋದಿ ಸರ್ಕಾರವನ್ನು ಸಹ ಇಳಿಸುವುದು ಕಷ್ಟವಲ್ಲ, ಮತದಾನಕ್ಕೆ ಮೊದಲು ತಮಗಾಗಿರುವ ಸಂಕಷ್ಟದ ಬಗ್ಗೆ ಮತ್ತು ಮೋದಿ ಸರ್ಕಾರದಿಂದ ಯಾವುದೇ ಪ್ರಯೋಜನವೂ ಸಿಗದ ಕುರಿತು ರೈತರು ಒಮ್ಮೆ ಯೋಚಿಸಬೇಕು' ಎಂದು ಅವರು ಕೇಳಿಕೊಂಡರು.

ರೈತ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸಿದ್ದನಗೌಡ, ಬಳ್ಳಾರಿ ಜಿಲ್ಲಾ ಘಟಕದ ಅಧ್ಯಕ್ಷ ಎಂ.ಎಲ್.ಕೆ.ನಾಯ್ಡು, ಹೊಸಪೇಟೆ ತಾಲ್ಲೂಕು ಘಟಕದ ಅಧ್ಯಕ್ಷ ಗಂಟೆ ಸೋಮಶೇಖರ್, ಎಸ್.ಬಾಷಾ, ಹರ್ಟಿ ಕಾಳಪ್ಪ, ಯಶೋದಾ ಇತರರು ಇದ್ದರು. 'ಅದಾನಿ, ಅಂಬಾನಿ, ಗೋದ್ರೇಜ್ ಮುಂತಾದವರು ಅನೇಕ ಅಗ್ರೋ ಕಂಪನಿಗಳನ್ನು ಪ್ರಾರಂಭಿಸಿದ್ದಾರೆ.

ಈಗಾಗಲೇ ಬೃಹತ್ ಗೋದಾಮುಗಳನ್ನು ನಿರ್ಮಿಸುತ್ತಿದ್ದಾರೆ. ಸರ್ಕಾರಿ ಗೋದಾಮುಗಳನ್ನೂ ಗುತ್ತಿಗೆ ಹೆಸರಲ್ಲಿ ತಮ್ಮದಾಗಿಸುತ್ತಿದ್ದಾರೆ.

ರಾಜಕಾರಣಿಗಳಿಗೆ ನೂರಾರು ಕೋಟಿ ಕಮಿಷನ್ ಕೊಟ್ಟು ಭೂಮಿ ಕಾಯ್ದೆ ಮತ್ತು ಎಪಿಎಂಸಿ ಕಾಯ್ದೆಯಲ್ಲಿ ಬದಲಾವಣೆ ಮಾಡಿಸಿದ್ದಾರೆ. ರೈತರು ಕೃಷಿ ತೊರೆಯುವಂತೆ ಮಾಡುವ ಉದ್ದೇಶದಿಂದ ಸರ್ಕಾರದಿಂದ ರೈತರಿಗೆ ನೀಡಲಾಗುತ್ತಿದ್ದ ಸವಲತ್ತುಗಳನ್ನು ನಿಲ್ಲಿಸಬೇಕೆಂದು ಮವವೊಲಿಸುತ್ತಿದ್ದಾರೆ. ಈ ಎಲ್ಲ ಕಾರಣಗಳಿಂದ ಮತ ಚಲಾಯಿಸುವ ಮೊದಲಾಗಿ ರೈತರು ಸರಿಯಾಗಿ ಯೋಚಿಸಿ, ಬಿಜೆಪಿ, ಜೆಡಿಎಸ್ ಮೈತ್ರಿಯನ್ನು ಸೋಲಿಸಬೇಕು ಎಂದು ಅವರು ಕೇಳಿಕೊಂಡರು.

# ಮತದಾನ ಕಾರ್ಯಕ್ಕೆ ತೆರಳಿದ ಅಧಿಕಾರಿ, ಸಿಬ್ಬಂದಿ

• **ಉದಯವಾಹಿನಿ, ಚಿತ್ರದುರ್ಗ**

ಲೋಕಸಭಾ ಸಾರ್ವತ್ರಿಕ ಚುನಾವಣೆಯ 2ನೇ ಹಂತದ ಮತದಾನಕ್ಕೆ ಕ್ಷಣಗಣನೆ ಆರಂಭವಾಗಿದೆ. ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಚುನಾವಣೆಗೆ ಏಪ್ರಿಲ್ 26 ತಾರೀಖು, ಶುಕ್ರವಾರ ಬೆಳಿಗ್ಗೆ 7 ರಿಂದ ಸಂಜೆ 6 ಗಂಟೆಯ ವರೆಗೆ ಮತಾದನ ಜರುಗಲಿದೆ.

ಚಿತ್ರದುರ್ಗ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಮತಗಟ್ಟೆಗಳಿಗೆ ಮತದಾನ ಕಾರ್ಯಕ್ಕೆ ಅಧಿಕಾರಿಗಳು ಹಾಗೂ ಸಿಬ್ಬಂದಿ ನಿಯೋಜನೆ ಮಾಡುವ ಮಸ್ಟರಿಂಗ್ ಕಾರ್ಯ ನಗರದ ಸರ್ಕಾರಿ ಕಲಾ ಕಾಲೇಜಿನ ಹೊಸ ಕಟ್ಟಡದಲ್ಲಿ ಗುರುವಾರ ಜರುಗಿತು. ಸಹಾಯಕ ಚುನಾವಣಾಧಿಕಾರಿ ಹಾಗೂ ಉಪವಿಭಾಗಧಿಕಾರಿ ಎಂ.ಕಾರ್ತಿಕ್ ಮಸ್ಟರಿಂಗ್ ಕಾರ್ಯದ ಉಸ್ತುವಾರಿ ವಹಿಸಿದ್ದರು.

**288 ಮತಗಟ್ಟೆ 1320 ಅಧಿಕಾರಿ ಹಾಗೂ ಸಿಬ್ಬಂದಿ ನೇಮಕ:** ಚಿತ್ರದುರ್ಗ ವಿಧಾನ ಸಭಾ ಕ್ಷೇತ್ರದಲ್ಲಿ ಒಟ್ಟು 288 ಮತಗಟ್ಟೆಗಳು ಇವೆ. ಶೇ.20 ರಷ್ಟು ಹೆಚ್ಚುವರಿ ಸಿಬ್ಬಂದಿ ಸೇರಿಸಿ, 330 ಪಿ.ಆರ್.ಓ, 330 ಎ.ಪಿ.ಆರ್.ಓ ಹಾಗೂ 660 ಪಿ.ಓ.ಗಳಿಗೆ ಎರೆಡು ಹಂತದ ಮತದಾನ ತರಬೇತಿಯನ್ನು


ಉದಯವಾಹಿನಿ ಚಿತ್ರ

ನೀಡಲಾಗಿದೆ. ಪ್ರತಿ ಮತಗಟ್ಟೆ ಓರ್ವ ಪಿ.ಆರ್.ಓ, ಎ.ಪಿ.ಆರ್.ಓ ಹಾಗೂ ಇಬ್ಬರು ಪಿ.ಓಗಳು ಮತದಾನದ ಕಾರ್ಯನಿರ್ವಹಿಸಲಿದ್ದಾರೆ.

**ಜಿಲ್ಲಾ ಚುನಾವಣಾಧಿಕಾರಿ, ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಭೇಟಿ ಪರಿಶೀಲನೆ:** ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಸ್ಟರಿಂಗ್ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಚುನಾವಣೆ ಆಯೋಗ ಕೈಪಿಡಿಯಲ್ಲಿನ ಚೆಕ್ ಲೀಸ್ಟ್‌ನಂತಯೇ ಮತಗಟ್ಟೆಗಳಿಗೆ ತೆರಳುವ ಅಧಿಕಾರಿ ಹಾಗೂ ಸಿಬ್ಬಂದಿಗೆ ವಿದ್ಯುನ್ಮಾನ ಮ ತಯಂತ್ರ, ಮತದಾರ ಪಟ್ಟಿ, ಶಾಸನ ಬದ್ದ ಪುಸ್ತಕಗಳು, ಸ್ಪರ್ಧಿಸುತ್ತಿರುವ ಉಮೇದುವಾರರ ಪಟ್ಟಿ, ದಿನಚರಿ, ವರದಿ, ನಮೂನೆ,ಶಾಹಿ, ಕಂಪಾರ್ಟ್ಮೆಂಟ್ ಸೇರಿದಂತೆ ಇತರೆ ಸ್ಟೇಷನರಿ ಕಿಟ್‌ಗಳನ್ನು ಚೆಕ್ ಲೀಸ್ಟ್‌ನ ಕ್ರಮದಲ್ಲಿ ನೀಡಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

**ಊಟ ಹಾಗೂ ಬಸ್ ವ್ಯವಸ್ಥೆ:** ಮಸ್ಟರಿಂಗ್ ಕಾರ್ಯಕ್ಕೆ ನೇಮಿಸಿದ ಅಧಿಕಾರಿ ಸಿಬ್ಬಂದಿಗಳಿಗಾಗಿ ಊಟ ವ್ಯವಸ್ಥೆ ಮಾಡಲಾಗಿತ್ತು. ಊಟದಲ್ಲಿ ಪಾಯಸ, ಅನ್ನ ಸಂಬಾರ್, ಹಪ್ಪಳ, ಉಪ್ಪಿನಕಾಯಿ, ಮಜ್ಜಿಗೆ ನೀಡಲಾಯಿತು. ಸಿಬ್ಬಂದಿ ಮತಗಟ್ಟೆಗಳಿಗೆ ತೆರಳಲು ಅನುಕೂಲವಾಗುವಂತೆ 52 ಕೆ.ಎಸ್.ಆರ್.ಟಿ.ಸಿ ಬಸ್‌ಗಳನ್ನು ನಿಯೋಜಿಸಲಾಗಿದೆ.

### ಎರೆಡು ಬ್ಯಾಲೆಟ್ ಯನಿಟ್

ಈ ಬಾರಿ ಚುನಾವಣೆ ಕಣದಲ್ಲಿ 20 ಅಭ್ಯರ್ಥಿಗಳು ಇದ್ದಾರೆ. ಇದರೊಂದಿಗೆ 1 ನೋಟಾ ಕೂಡ ಸೇರಿದೆ. ಹಾಗಾಗಿ ಮತಗಟ್ಟೆ ಸಿಬ್ಬಂದಿ 2 ಬ್ಯಾಲೆಟ್ ಯುನಿಟ್, ಒಂದು ಕಂಟ್ರೋಲ್ ಯುನಿಟ್ ಹಾಗೂ ಒಂದು ವಿವಿಪ್ಯಾಟ್‌ನ್ನು ತಮ್ಮೊಂದಿಗೆ ತೆಗೆದುಕೊಂಡು ಮತಗಟ್ಟೆ ತೆರಳಿದ್ದಾರೆ. ಮತದಾನ ಪ್ರಕ್ರಿಯೆ ಮುಗಿದ ನಂತರ ಏ.26 ರಂದು ಸಂಜೆ ನಗರದ ಸರ್ಕಾರಿ ಕಲಾ ಕಾಲೇಜಿನ ಹೊಸ ಕಟ್ಟಡದ ಡಿ ಮಸ್ಟರಿಂಗ್ ನಡೆಯಲಿದೆ.

# ಹೊನಲು ಬೆಳಕಿನ ಕಬ್ಬಡ್ಡಿ ಪಂದ್ಯಾವಳಿ

• **ಉದಯವಾಹಿನಿ, ಮುದ್ದೇಬಿಹಾಳ**

ಪ್ರತಿವರ್ಷದಂತೆ ಈ ವರ್ಷವೂ ಸಹ ಇಂದಿರಾ ನಗರ ಜೈ ಹನುಮಾನ್ ಜಾತ್ರಾ ಕಮಿಟಿಯಿಂದ ಶ್ರೀಹನುಮಾನ್ ಜಾತ್ರಾ ಮಹೋತ್ಸವ ಹಿಂದೂ ಮುಸ್ಲಿಂ ಭಾವೈಕ್ಯತೆಯಿಂದ ವಿಜೃಂಭಣೆಯಿಂದ ಆಚರಿಸಿದರು ಎ 22 ಸೋಮವಾರ ಪಟ್ಟಣದ ಬಜಾರ ಹನುಮಾನ್ ಮಂದಿರದ ಕಳಸ ಮೆರವಣಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಭವ್ಯ ಮೆರವಣಿಗೆ ಮೂಲಕ ತರಲಾಯಿತು ಬಡಾವಣೆಯ ಸುಮಂಗಲಿಯರು ಕುಂಭ ಹೊತ್ತು ಸಕಲ ಮಂಗಲವಾಧ್ಯಗಳೊಂದಿಗೆ ಸಾಗಿದರು , ಮಂಗಳವಾರ ಹನುಮ ಜಯಂತಿಯಂದು ಹೋಮ ಹವನ ವಿಶೇಷ ಪೂಜೆ ರುದ್ರಾಭಿಷೇಕ ಮಾಡಲಾಯಿತು ಭಕ್ತರಿಗೆ ಅನ್ನಪ್ರಸಾದ, ರಾತ್ರಿ ನಗೆ ಹಬ್ಬ, ಸಾಮಾಜಿಕ ನಾಟಕ ಪ್ರದರ್ಶನ ಏರ್ಪಡಿಸಲಾಗಿತ್ತು

ಇಂದಿರಾ ನಗರ ಜೈ ಹನುಮಾನ್ ಕಮಿಟಿಯ ಗೌರವ ಅಧ್ಯಕ್ಷ ಪುರಸಭೆ ಸದಸ್ಯ ಶಿವು ಶಿವಪುರ, ಅಧ್ಯಕ್ಷ ರಾಮು ದಳವಾಯಿ, ಉಪಾಧ್ಯಕ್ಷ ಸಿದ್ದು ತಳ್ಳಳ್ಳಿ, ನಾರಾಯಣ ಮಿರಜಕರ, ಮಲಕಪ್ಪ ಬೋರಟ್ಟಿ, ಭೀಮಣ್ಣ ಕೋಳೂರ ,ಆಸೀಪ್ ಕುಂಟೋಜಿ, ಅಂಬರೀಶ ಉಪ್ಪಲದಿನ್ನಿ ಬುಡ್ಡಾ ನೀಡಗುಂದಿ, ಬಸವರಾಜ ಗುಂಡಕರಜಗಿ, ಮುರ್ತುಜಸಾಬ ಮುದ್ನಾಳ, ನಾಗೇಶ ಜಾಧವ, ಮಲ್ಲಣ್ಣ ತೇಲಂಗಿ, ಮಹಿಬೂಬ ಮುಲ್ಲಾ, ಮಹಿಬೂಬ ಪಡೆಕನೂರ ಸೇರಿದಂತೆ ಇಂದಿರಾ ನಗರ ಬಡಾವಣೆಯ ನಿವಾಸಿಗಳು ಭಾಗವಹಿಸಿದ್ದರು


ಉದಯವಾಹಿನಿ ಚಿತ್ರ

ಜಾತ್ರಾ ಕಮಟಿಯ ಸದಸ್ಯರನ್ನು ಬಡಾವಣೆಯ ಮುಸ್ಲಿಂ ಸನಾಜದ ಮುಖಂಡರು ಗೌರವಿಸಿ ಭಾವೈಕ್ಯತೆ ಮೆರೆದರು ಹೊನಲು ಬೆಳಕಿನ ಕಬಡ್ಡಿ; ಜಾತ್ರಾ ಅಂಗವಾಗಿ ಇಂದಿರಾ ನಗರ ಶಾಲೆಯಲ್ಲಿ ಏರ್ಪಡಿಸಲಾಗಿದ್ದ ಹೊನಲು ಬೆಳಕಿನ ಕಬಡ್ಡಿ ಪಂದ್ಯಾವಳಿ ಪ್ರಥಮ ನಗದು ಬಹುಮಾನ 21 ಸಾವಿರ ರೂ ಬಹುಮಾನ ಚಿಮ್ಮಲಗಿ ತಂಡ, ದ್ವಿತೀಯ 15 ಸಾವಿರ ನಗದು ಬೀದರಿ ತಂಡ, ಮೂರನೇ 10 ಸಾವಿರ ನಗದು ಬಹುಮಾನ ತೇಗ್ಗಿ ತಂಡ ನಾಲ್ಕನೇ 7 ಸಾವಿರ ರೂ ನಗದು ಬಹುಮಾನ ಬಂಗಾರಗುಂಡ ತಂಡ ಪಡೆಯಿತು ಎಲ್ಲಾ ವಿಜೇತ ತಂಡಗಳಿಗೆ ಟ್ರೋಫಿ ನೀಡಿ ಗೌರವಿಸಲಾಯಿತು

# ಜಮ್‌ವಾ ಇಪಿಐ ಸೆಂಟರ್ ಕಟ್ಟಡ ನಿರ್ಮಾಣಕ್ಕೆ ಶಂಕುಸ್ಥಾಪನೆ

• **ಉದಯವಾಹಿನಿ, ಮಂಗಳೂರು**

ಜೋಕಟ್ಟೆ ಏರಿಯಾ ಮುಸ್ಲಿಮ್ಸ್ ವೆಲ್ಫೇರ್ ಅಸೋಸಿಯೇಶನ್‌ನ ಗಲ್ಫ್ ಸೆಂಟ್ರಲ್ ಕಮಿಟಿಯ ವತಿಯಿಂದ ಜೋಕಟ್ಟೆಯಲ್ಲಿ ಸ್ಥಾಪಿಸಲು ಉದ್ದೇಶಿಸಲಾದ ಜಮ್‌ವಾ ಇಪಿಐ ಸೆಂಟರ್ ಕಟ್ಟಡ ನಿರ್ಮಾಣಕ್ಕೆ ಗುರುವಾರ ಚಾಲನೆ ನೀಡಲಾಯಿತು.ಜೋಕಟ್ಟೆಯ ಹಳೆ ಜುಮಾ ಮಸೀದಿಯ ಖತೀಬ್ ಯೂಸುಫ್ ಮಿಸ್ಬಾಹಿ, ಹೊಸ ಜುಮಾ ಮಸೀದಿಯ ಖತೀಬ್ ಅಬ್ದುಲ್ ರಹ್ಮಾನ್ ದಾರಿಮಿ, ಈದ್ಗಾ ಮಸೀದಿಯ ಖತೀಬ್ ಮುಹಮ್ಮದ್ ಶರೀಫ್ ಹನೀಫಿ ಶಂಕುಸ್ಥಾಪನೆಗೈದರು. ಬಳಿಕ ದುಆಗೈದು ಶುಭ ಹಾರೈಸಿದರು.

ಜಮ್‌ವಾ ಗೌರವಾಧ್ಯಕ್ಷ, ಉದ್ಯಮಿ ಝಕರಿಯಾ ಜೋಕಟ್ಟೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಬಳಿಕ ಮಾತನಾಡಿದ ಅವರು ಜೋಕಟ್ಟೆ ವಲಯದ ಮುಸ್ಲಿಂ ಸಮುದಾಯದ ಸರ್ವತೋಮುಖ ಅಭಿವೃದ್ಧಿಗೆ 20 ವರ್ಷದ ಹಿಂದೆ ಸ್ಥಾಪಿಸಲಾದ ಜಮ್‌ವಾ ಸಂಸ್ಥೆಯು ಇದೀಗ ಜೋಕಟ್ಟೆ ಆಸುಪಾಸಿನ


ಉದಯವಾಹಿನಿ ಚಿತ್ರ

ಕಳವಾರು, ಪೊರ್ಕೋಡಿ ಮತ್ತಿತರ ಪ್ರದೇಶದ ಜನರ ಅಭಿವೃದ್ಧಿಗೆ ಶ್ರಮಿಸುತ್ತಿವೆ. ಶಿಕ್ಷಣ, ಮದುವೆ, ಅನಾರೋಗ್ಯ ಪೀಡಿತರಿಗೆ ನೆರವು ನೀಡುತ್ತಿವೆ. ಇದೀಗ 3 ಕೋ.ರೂ. ವೆಚ್ಚದಲ್ಲಿ ಮಿನಿ ಹಾಲ್‌ನೊಂದಿಗೆ ವಸತಿ ಮತ್ತು ವಾಣಿಜ್ಯ ಸಮುಚ್ಚಯ ಇಪಿಐ ಸೆಂಟರ್ ನಿರ್ಮಿಸಲು ಉದ್ದೇಶಿಸಲಾಗಿದೆ. ಇದರಲ್ಲಿ ಬಂದ ವರಮಾನವನ್ನು ಜೋಕಟ್ಟೆ ಮತ್ತು ಆಸುಪಾಸಿನ ಜನರ ಕಲ್ಯಾಣಕ್ಕಾಗಿ ವ್ಯಯಿಸಲಾಗುತ್ತಿದೆ. ಜಮ್‌ವಾ ಪದಾಧಿಕಾರಿಗಳ, ಸದಸ್ಯರ ಸತತ ಪ್ರಯತ್ನದಿಂದ ಇದೆಲ್ಲಾ ಸಾಧ್ಯವಾಗುತ್ತಿದೆ. ಮುಂದೆಯೂ ಇನ್ನಷ್ಟು ಒಳ್ಳೆಯ ಯೋಜನೆಗಳನ್ನು ಹಮ್ಮಿಕೊಳ್ಳುವ ಉದ್ದೇಶವಿದೆ ಎಂದರು.

# ಮಲೇರಿಯಾ ರೋಗದಿಂದ ಭಯ ಬೇಡ ಎಚ್ಚರ: ನಾಗರಾಜ ಕಾಟ್ಟ

• **ಉದಯವಾಹಿನಿ, ಸಿಂಧನೂರು**

ಮಲೇರಿಯಾ ಸೊಳ್ಳೆಗಳಿಂದ ಹರಡುವ ಯಾತನೆಯಿಂದ ಕೂಡಿದ ಜ್ವರ- ಭಯಬೇಡ ಮಲೇರಿಯಾ ರೋಗ ನಮ್ಮ ಸಮಾಜದ ಜನರನ್ನು ಕಾಡುತ್ತಿರುವ ಒಂದು ಪ್ರಮುಖ ಸಾಂಕ್ರಾಮಿಕ ಇದನ್ನು ''ಛಳಿಜ್ವರ'' ರೋಗವೆಂದು ಎಲ್ಲರೂ ತಿಳಿದಿದ್ದಾರೆ.ಮಲೇರಿಯಾ ರೋಗವು''ಪ್ಲಾಸ್ಮೋಡಿಯಂ''ಎಂಬ ಪರಾವಲಂಬಿ ಸೂಕ್ಷ್ಮಾಣು ಜೀವಿಯಿಂದ ಉಂಟಾಗುತ್ತದೆ ಎಂದು ಹೇಳಿದರು.

ನಗರದ ಸರ್ಕಾರಿ ಆಸ್ಪತ್ರೆಯಲ್ಲಿ ಮಲೇರಿಯಾ ವಿರೋಧಿ ಮಾಸಾಚರಣೆ ಆಚರಿಸಿ ನಂತರ ಮಾತನಾಡಿದ ಮುಖ್ಯ ವೈದ್ಯಾಧಿಕಾರಿ ಡಾ ನಾಗರಾಜ ಕಟ್ಟಾ ಅವರು ಮಲೇರಿಯಾ ರೋಗವು ಪ್ಲಾಸ್ಮೋಡಿಯಂ ಎಂಬ ಪರಾವಲಂಬಿ ಸುಷ್ಮಾ ಜೀವಿಯಿಂದ ಉಂಟಾಗುತ್ತದೆ ಮತ್ತು ಸೋಂಕಿತ ಹೆಣ್ಣು ಅನಾಫಿಲಿಸ್ ಸೊಳ್ಳೆಗಳು ಒಬ್ಬರಿಂದ ಇನ್ನೊಬ್ಬರಿಗೆ ಹರಡುತ್ತವೆ.ಈ ರೋಗಾಣು


ಉದಯವಾಹಿನಿ ಚಿತ್ರ

ತನ್ನ ಜೀವಿತದ ಕೆಲ ಭಾಗಗಳನ್ನು ಮನುಷ್ಯನಲ್ಲೂ ಕಳೆಯುತ್ತದೆ. ರೋಗಲಕ್ಷಣಗಳು ಸಾಮಾನ್ಯವಾಗಿ ಮಲೇರಿಯಾ ಮೂರು ಹಂತದಲಕ್ಷಣಗಳನ್ನು ಹೊಂದಿದೆ ಎಂದು ಹೇಳಿದರು

- **ಚಳಿಯ ಹಂತ:** ಛಳಿಯ ಜೊತೆಯಲ್ಲಿ ನಡುಕ ಹಾಗೂ ತಲೆನೋವು ಇರುತ್ತದೆ. ಇದು ಸುಮಾರು 15 ನಿಮಿಷ ದಿಂದ 1 ಗಂಟೆಯ ಸಮಯ ಇರಬಹುದು.
- **ಬಿಸಿಯ/ಜ್ವರದ ಹಂತ:** ಜ್ವರ ತೀವ್ರವಾಗಿರುತ್ತದೆ.ವಿಪರೀತ ತಲೆನೋವು, ವಾಕರಿಕೆ,ವಾಂತಿಯಾಗುವಂತೆ ಅನಿಸುವುದು,ವಿಪರೀತ ಬಾಯಾರಿಕೆ ಅನಿಸುತ್ತದೆ.ಈ ಹಂತ 2ರಿಂದ 6 ಗಂಟೆಗಳ ಕಾಲ ಇರುತ್ತದೆ.
- **ಬೆವರಿಕೆಯ ಹಂತ:** ಜ್ವರ ಕಡಿಮೆಯಾಗುತ್ತದೆ ದೇಹವಿಡಿ ವಿಪರೀತ ಬೆವರುತ್ತದೆ. ಸಾಮಾನ್ಯವಾಗಿ ರೋಗಿಗೆ ಗಾಢ ನಿದ್ರೆ ಬರುತ್ತದೆ.ಎಚ್ಚರವಾದಾಗ ಬಳಲಿ ಸುಸ್ತಾದ ಅನುಭವ ಆಗುತ್ತದೆ.ಈ ಹಂತ 2 ರಿಂದ 4 ಗಂಟೆಗಳ ಕಾಲ ಇರುತ್ತದೆ. ಆದ್ದರಿಂದ ಮನೆಯ ಅಕ್ಕಪಕ್ಕದ ಮನೆಯಲ್ಲಿ ನೀರು ನಿಲ್ಲದಂತೆ ಸ್ವಚ್ಛತೆಯನ್ನು ಕಾಪಾಡಬೇಕು ಎಂದು ಹೇಳಿದರು.

# ಬರ ಪರಿಹಾರಕ್ಕೂ ಬರೆ ಎಳೆದು ಖಾಲಿ ಚೊಂಬು ಕೊಟ್ಟ ಮೋದಿ

• **ಉದಯವಾಹಿನಿ, ಬೆಳಗಾವಿ**

ಪ್ರಧಾನಿ ನರೇಂದ್ರ ಮೋದಿ ಕರ್ನಾಟಕದ ಜನತೆಗೆ ಅನ್ಯಾಯ ಮಾಡಿದ್ದಾರೆ. ಹೀಗಿರುವಾಗ ಯಾವ ಮುಖವಿಟ್ಟುಕೊಂಡು ಮತ ಕೇಳಲು ಬರುತ್ತಿದ್ದಾರೆ ಎಂದು ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸುರ್ಜೇವಾಲಾ ಪ್ರಶ್ನಿಸಿದ್ದಾರೆ.ಬೆಳಗಾವಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಸುರ್ಜೇವಾಲಾ, ಬಿಜೆಪಿ ಹೊಸ ಈಸ್ಟ್ ಇಂಡಿಯಾ ಕಂಪನಿ. ಪ್ರಧಾನಿ ನರೇಂದ್ರ ಮೋದಿ ಇದೇ ಈಸ್ಟ್ ಇಂಡಿಯಾ ಕಂಪನಿಯ ಪಾಲಿಸಿ ನಡೆಸುತ್ತಿದ್ದಾರೆ ಎಂದು ಕಿಡಿಕಾರಿದರು.

ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಸೋತಿದ್ದರಿಂದ ಪ್ರಧಾನಿ ಮೋದಿ, ಅಮಿತ್ ಶಾ ಕನ್ನಡಿಗರ ಮೇಲೆ ಸೇಡು ತೀರಿಸಿಕೊಳ್ಳುತ್ತಿದ್ದಾರೆ. ಬರ ಪರಿಹಾರ ಬಿಡುಗಡೆ ಮಾಡದೇ ಅನುದಾನ ಬಿಡುಗಡೆ ಮಾಡದೇ ಅನ್ಯಾಯ ಮಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.


ಉದಯವಾಹಿನಿ ಚಿತ್ರ

ರಾಜ್ಯಕ್ಕೆ ಖಾಲಿ ಚೊಂಬು ನೀಡಿರುವ ಪ್ರಧಾನಿ ನರೇಂದ್ರ ಮೋದಿ ಈಗ ಇಲ್ಲಿಗೆ ಬಂದು ಮತ ಕೇಳುವ ಹಕ್ಕು ಅವರಿಗಿಲ್ಲ. ಕಳೆದ ಡಿಸೆಂಬರ್ ನಲ್ಲಿ ಬರ ಪರಿಹಾರ ನೀಡುವಂತೆ ರಾಜ್ಯ ಕಾಂಗ್ರೆಸ್ ಸರಕಾರ ಮನವಿ ಮಾಡಿದರೂ ಈವರೆಗೂ ನಯಾ ಪೈಸೆ ಕೊಟ್ಟಿಲ್ಲ. ರಾಜ್ಯಕ್ಕೆ ನ್ಯಾಯಯುತವಾಗಿ ಕೊಡಬೇಕಾದ 18, 172 ಕೋಟಿ ರೂ.ಗಳನ್ನು ಬಿಡುಗಡೆ ಮಾಡಲು ನಿರ್ದೇಶಿಸುವಂತೆ ಕಾಂಗ್ರೆಸ್ ಸರ್ಕಾರ ಸುಪ್ರೀಂ ಕೋರ್ಟ್ ಮೊರೆ ಹೋಗುವ ಪರಿಸ್ಥಿತಿ ಎದುರಾಯಿತು.

> ಇದೇ ವೇಳೆ ಹುಬ್ಬಳ್ಳಿಯ ವಿದ್ಯಾರ್ಥಿನಿ ನೇಹಾ ಹತ್ಯೆ ಪ್ರಕರಣ ವಿಚಾರವಾಗಿ ಮಾತನಾಡಿದ ಸುರ್ಜೇವಾಲಾ, ಆರೋಪಿಯನ್ನು ಈಗಾಗಲೇ ಬಂಧಿಸಲಾಗಿದೆ. ರಾಜ್ಯ ಸರಕಾರ ಪ್ರಕರಣದ ತನಿಖೆಯನ್ನು ಸಿಐಡಿಗೆ ವಹಿಸಿದೆ. ವಿಶೇಷ ನ್ಯಾಯಾಲಯ ಸ್ಥಾಪಿಸುವ ಮೂಲಕ ತ್ವರಿತವಾಗಿ ಆಕೆಯ ಕುಟುಂಬಕ್ಕೆ ನ್ಯಾಯ ಕೊಡಿಸುವ ಕೆಲಸವಾಗುತ್ತಿದೆ. ಆದರೆ ಬಿಜೆಪಿಯವರು ಸಾವಿನಲ್ಲಿಯೂ ರಾಜಕೀಯ ಮಾಡುತ್ತಿದ್ದಾರೆ
> –ರಣದೀಪ್ ಸುರ್ಜೇವಾಲಾ

ಮೇಕೆದಾಟು ಯೋಜನೆ, ಕಳಸಾ ಬಂಡೂರಿ ಯೋಜನೆ ಅನುಷ್ಠಾನಕ್ಕೆ ಅನುಮತಿ ನೀಡುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಹಿಂದುಳಿದ ವರ್ಗಕ್ಕೆ ಹೆಚ್ಚಿನ ನೆರವು: ರವಿಶಂಕರ

• **ಉದಯವಾಹಿನಿ, ಮಂಗಳೂರು**

ಪಿಎಂ ವಿಶ್ವಕರ್ಮ ಯೋಜನೆಯಡಿ ವಿಶ್ವಕರ್ಮರು, ಮಡಿವಾಳರು, ಕ್ಷೌರಿಕರು ಸೇರಿದಂತೆ ಕುಲಕಸುಬು ನೆಚ್ಚಿಕೊಂಡಿರುವ 50 ಹಿಂದುಳಿದ ಸಮಾಜಗಳಿಗೆ ಆರ್ಥಿಕ ನೆರವನ್ನು ಕೇಂದ್ರ ಸರ್ಕಾರ ಒದಗಿಸಿದೆ. ಮೊಗವೀರರಿಗೆ ಮತ್ಸ್ಯ ಸಂಪದ ಯೋಜನೆಯಡಿ ಪ್ರಯೋಜನ ಸಿಕ್ಕಿದೆ' ಎಂದು ಬಿಜೆಪಿ ಮಂಗಳೂರು ದಕ್ಷಿಣ ಮಂಡಲದ ಚುನಾವಣಾ ಪ್ರಭಾರಿ ರವಿಶಂಕರ ಮಿಜಾರ್ ಹೇಳಿದರು.

ಜಿಲ್ಲೆಯಲ್ಲಿ ಪಿ.ಎಂ.ವಿಶ್ವಕರ್ಮ ಯೋಜನೆಯಿಂದ ಇದುವರೆಗೆ ಯಾವ ಫಲಾನುಭವಿಗೂ ಸಾಲ ಸಿಕ್ಕಿಲ್ಲ ಎಂಬ ಆರೋಪದ ಬಗ್ಗೆ ಪ್ರತಿಕ್ರಿಯಿಸಿದ ಅವರು, 'ಜಿಲ್ಲೆಯಲ್ಲಿ ಎಷ್ಟು ಮಂದಿಗೆ ಇದರ ಪ್ರಯೋಜನ ಸಿಕ್ಕಿದೆ ಎಂಬ ಮಾಹಿತಿ ಇಲ್ಲ' ಎಂದರು.

ಪ್ರಧಾನಿ ನರೇಂದ್ರ ಮೋದಿ ಅವರ ರೋಡ್ ಶೋ ಬಳಿಕ ಪಕ್ಷದ ಕಾರ್ಯಕರ್ತರ ಉತ್ಸಾಹ ಹೆಚ್ಚಾಗಿದೆ. ಸರ್ವವ್ಯಾಪಿ, ಸರ್ವಸ್ಪರ್ಶಿ ಎಂಬ ಧ್ಯೇಯವಾಕ್ಯದ ಮೂಲಕ ಪ್ರಧಾನಿಯವರು ಸರ್ಕಾರವನ್ನು ಜನರ ಬಳಿಗೆ ಕೊಂಡೊಯ್ದಿದ್ದಾರೆ' ಎಂದರು.



ಉದಯವಾಹಿನಿ ಚಿತ್ರ

> 2047ರ ವೇಳೆಗೆ ಭಾರತವನ್ನು ಜಗತ್ತಿನ ನಂ. 1 ರಾಷ್ಟ್ರವಾಗಿ ರೂಪಿಸುವ ಅಮೃತ ಕಾಲದಲ್ಲಿ ನಡೆಯುವ ಈ ಚುನಾವಣೆ ಅತ್ಯಂತ ಮಹತ್ವದ್ದು. ದೇಶ ಕಟ್ಟುವ ಸಲುವಾಗಿ ದಕ್ಷಿಣ ಕನ್ನಡದಲ್ಲಿ ಕ್ಯಾ. ಬ್ರಿಜೇಶ್ ಚೌಟ ಹಾಗೂ ಉಡುಪಿ-ಚಿಕ್ಕಮಗಳೂರು ಕ್ಷೇತ್ರದಲ್ಲಿ ಕೋಟ ಶ್ರೀನಿವಾಸ ಪೂಜಾರಿಯವರನ್ನು ಗೆಲ್ಲಿಸಬೇಕು
> –ರವಿಶಂಕರ ಮಿಜಾರ್
> ಚುನಾವಣಾ ಪ್ರಭಾರಿ

# ಮುಸ್ಲಿಮರ ಮೀಸಲಾತಿ ಮುಂದುವರೆಸುತ್ತೇವೆ ಎಂದು ಹೇಳಿದ್ದು ಬಿಜೆಪಿಯವರು

## ಶೇ. 4ರಷ್ಟು ಮೀಸಲಾತಿಯನ್ನು ಮುಂದುವರೆಸುತ್ತೇವೆ ಎಂದು ಸುಪ್ರೀಂ ಕೋರ್ಟ್‌ನಲ್ಲಿ ಹಿಂದಿನ ಬಿಜೆಪಿ ಸರ್ಕಾರವೇ ಹೇಳಿದೆ

• **ಉದಯವಾಹಿನಿ, ಬೀದರ್**

ಮುಸ್ಲಿಮರಿಗೆ ನೀಡಲಾಗಿರುವ ಶೇ 4ರಷ್ಟು ಮೀಸಲಾತಿಯನ್ನು ಮುಂದುವರೆಸುತ್ತೇವೆ ಎಂದು ಸುಪ್ರೀಂ ಕೋರ್ಟ್‌ನಲ್ಲಿ ಹಿಂದಿನ ಬಿಜೆಪಿ ಸರ್ಕಾರವೇ ಹೇಳಿದೆ. ಈಗಲೂ ಮುಸ್ಲಿಮರ ಮೀಸಲಾತಿ ಹಿಂದಿನಂತೆ ಮುಂದುವರೆದಿದೆ' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಕಾಂಗ್ರೆಸ್ ಪಕ್ಷವು ಎಸ್ಸಿ, ಎಸ್ಟಿಗಳ ಮೀಸಲಾತಿ ಮುಸ್ಲಿಮರಿಗೆ ಕೊಡಲು ಪ್ರಯತ್ನಿಸುತ್ತಿದೆ ಎಂದು ಬಿಜೆಪಿಯವರು ಆರೋಪಿಸಿರುವ ಕುರಿತು ನಗರದಲ್ಲಿ ಗುರುವಾರ ಪತ್ರಕರ್ತರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಹಿಂದೆ ಚಿನ್ನಪ್ಪ ರೆಡ್ಡಿ ಆಯೋಗವು ಮುಸ್ಲಿಮರಿಗೆ ಶೇ 4ರಷ್ಟು ಮೀಸಲಾತಿ ಕೊಡಬೇಕು ಎಂದು ಹೇಳಿತ್ತು. ಅದರಂತೆ ಸುಮಾರು 20 ವರ್ಷಗಳಿಂದ ಮುಸ್ಲಿಮರಿಗೆ ಶೇ 4ರಷ್ಟು ಮೀಸಲಾತಿ ಮುಂದುವರೆದಿದೆ. ಹಿಂದೆ ರಾಜ್ಯದಲ್ಲಿ ಬಸವರಾಜ ಬೊಮ್ಮಾಯಿ ನೇತೃತ್ವದ


ಉದಯವಾಹಿನಿ ಚಿತ್ರ

ಬಿಜೆಪಿ ಸರ್ಕಾರವು, ನಾವು ಮುಸ್ಲಿಮರ ಮೀಸಲಾತಿ ಮುಂದುವರೆಸುತ್ತೇವೆ ಎಂದು ಸುಪ್ರೀಂಕೋರ್ಟ್‌ನಲ್ಲಿ ಹೇಳಿದೆ ಎಂದರು. ನೇಹಾ ಹಿರೇಮಠ ಕೊಲೆಯನ್ನು ಈಗಾಗಲೇ ಖಂಡಿಸಿದ್ದೇನೆ. ಈಗಲೂ ಅದನ್ನು ಖಂಡಿಸುತ್ತೇನೆ. ಪ್ರಕರಣವನ್ನು ಈಗಾಗಲೇ ಸಿಐಡಿಗೆ ಒಪ್ಪಿಸಲಾಗಿದೆ. ವಿಶೇಷ ನ್ಯಾಯಾಲಯ ಸ್ಥಾಪನೆಗೆ ನಿರ್ಧರಿಸಲಾಗಿದೆ. ಆರೋಪಿಗೆ ಕಠಿಣ ಶಿಕ್ಷೆ ಕೊಡಿಸಬೇಕು.

ಈ ಸಂಬಂಧ ಪಬ್ಲಿಕ್ ಪ್ರಾಸಿಕ್ಯೂಟರ್ ಜೊತೆ ಮಾತನಾಡಿದ್ದೇನೆ. 'ಕ್ಯಾಪಿಟಲ್ ಇಂಪ್ರಿಸನ್‌ಮೆಂಟ್' ಅಂತ ಕಠಿಣ ಶಿಕ್ಷೆ ವಿಧಿಸಲು ಪ್ರಯತ್ನಿಸಬೇಕೆಂದು ಹೇಳಿದ್ದೇನೆ. ನಾನು ಅವರ ತಂದೆ ಜೊತೆಗೂ ಮಾತನಾಡಿದ್ದೇನೆ. ಸರ್ಕಾರ ಏನು ಕ್ರಮ ಕೈಗೊಂಡಿದೆ ಎಂಬುದನ್ನು ವಿವರಿಸಿದ್ದೇನೆ. ಸಿಐಡಿ ಕೂಡಲೇ ಚಾರ್ಜ್‌ಶೀಟ್ ಹಾಕಬೇಕು ಎಂದು ಹೇಳಿದರು. ಪರಿಸರ ಸಚಿವ ಈಶ್ವರ ಬಿ. ಖಂಡ್ರೆ, ಪೌರಾಡಳಿತ ಸಚಿವ ರಹೀಂ ಖಾನ್ , ಮಾಜಿ ಸಚಿವರಾದ ರಾಜಶೇಖರ ಪಾಟೀಲ ಹುಮನಾಬಾದ್, ಬಾಬುರಾವ ಚಿಂಚನಸೂರ್, ಗ್ಯಾರಂಟಿ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಅಮೃತರಾವ್ ಚಿಮಕೋಡೆ, ನಗರಸಭೆ ಅಧ್ಯಕ್ಷ ಮೊಹಮ್ಮದ್ ಗೌಸ್, ಮುಖಂಡರಾದ ಆನಂದ ದೇವಪ್ಪ, ಗೀತಾ ಪಂಡಿತರಾವ್ ಚಿದ್ರಿ, ದತ್ತು ಮೂಲಗೆ, ಪರಿಹಾರ ಮಲ್ಲಿಕಾರ್ಜುನ ಮತ್ತಿತರರು ಹಾಜರಿದ್ದರು.

> ಬಿಜೆಪಿಯವರು ಇದುವರೆಗೆ ಯಾವುದಾದರೂ ಒಂದು ಪ್ರಕರಣವನ್ನು ಸಿಬಿಐಗೆ ಕೊಟ್ಟಿದ್ದಾರೇನು? ಅವರು ಅಧಿಕಾರದಲ್ಲಿ ಇದ್ದಾಗ ಈ ಕೆಲಸ ಮಾಡಿದ್ರಾ? ಅವರಿಗೆ ಈಗ ಮಾತನಾಡುವ ಯಾವುದೇ ನೈತಿಕ ಹಕ್ಕಿಲ್ಲ. ಹಿಂದೆ ನಾನು ಮುಖ್ಯಮಂತ್ರಿ ಇದ್ದಾಗ ಅನೇಕ ಪ್ರಕರಣಗಳನ್ನು ಸಿಬಿಐಗೆ ವಹಿಸಿದ್ದೆ. ಈ ಕೊಲೆ ಪ್ರಕರಣದಲ್ಲಿ ಅವರು ರಾಜಕೀಯ ಮಾಡಬಾರದು. ನೇಹಾ ಕೊಲೆ ಆಗಿರುವುದು ಅನ್ಯಾಯ. ಅದನ್ನು ಖಂಡಿಸಿದ್ದೇನೆ. ಅದನ್ನು ರಾಜಕೀಯಕ್ಕೆ ಬಳಸಿಕೊಳ್ಳುವುದು ಸರಿಯಲ್ಲ. ತಪ್ಪು ಮಾಡಿದವರಿಗೆ ಘೋರ ಶಿಕ್ಷೆ ವಿಧಿಸಬೇಕೆಂದು ಸರ್ಕಾರದ ಕಡೆಯಿಂದ ಹೇಳಲಾಗಿದೆ ಎಂದು ಪ್ರತಿಕ್ರಿಯಿಸಿದರು.

### ರೂಪಾಯಿ ಮೌಲ್ಯ ಹೆಚ್ಚಾಗಿದೆಯಾ

ಸಂಪತ್ತು ಹಂಚಿಕೆ ಬಗ್ಗೆ ಸ್ಯಾಮ್ ಪಿತ್ರೋಡ ನೀಡಿರುವ ಹೇಳಿಕೆ ಕುರಿತು ಪ್ರಧಾನಿ ಮೋದಿ ಪ್ರತಿಕ್ರಿಯೆ ಬಗ್ಗೆ ಏನು ಹೇಳುವಿರಿ ಎಂದು ಪತ್ರಕರ್ತರು ಕೇಳಿದಾಗ, ಮೋದಿಯವರು ಹೇಳಿದ್ದೆಲ್ಲ ಜಾರಿಗೆ ತರುತ್ತಾರೇನು ಕಪ್ಪು ಹಣ ತಂದು ಪ್ರತಿಯೊಬ್ಬರಿಗೆ 15 ಲಕ್ಷ ಕೊಡುತ್ತೇನೆ ಎಂದು ಹೇಳಿದ್ದರು. ಅದನ್ನು ಕೊಟ್ರಾ, ಪ್ರತಿ ವರ್ಷ 2 ಕೋಟಿ ಉದ್ಯೋಗ ಸೃಷ್ಟಿಸುವುದಾಗಿ ಹೇಳಿದ್ದರು. ಉದ್ಯೋಗ ಕೊಟ್ರಾ, ರೈತರ ಆದಾಯ ದುಪ್ಪಟ್ಟು ಮಾಡುವುದಾಗಿ ಹೇಳಿದ್ದರು. ಆ ಕೆಲಸ ಮಾಡಿದ್ರಾ ರೂಪಾಯಿ ಮೌಲ್ಯ ಹೆಚ್ಚಿಸುವುದಾಗಿ ಹೇಳಿದ್ದರು. ರೂಪಾಯಿ ಮೌಲ್ಯ ಹೆಚ್ಚಾಗಿದೆಯಾ ಅಗತ್ಯ ವಸ್ತುಗಳ ಬೆಲೆ ಇಳಿಸುತ್ತೇನೆ ಎಂದು ಹೇಳಿದ್ದರು. ಅಗತ್ಯ ವಸ್ತುಗಳ ಬೆಲೆ ಇಳಿದಿದೆಯಾ? ಹೀಗೆ ಸಾಲು ಸಾಲು ಪ್ರಶ್ನೆಗಳನ್ನು ಹಾಕಿದರು.

# ಮಿನಿ ನ್ಯೂಸ್

## ನಾಳೆ ಮುದ್ದೇಬಿಹಾಳಕ್ಕೆ ಮಾಜಿ ಸಿಎಂ ಯಡಿಯೂರಪ್ಪಾಜಿ

• **ಉದಯವಾಹಿನಿ, ಮುದ್ದೇಬಿಹಾಳ**



ಮುದ್ದೇಬಿಹಾಳ ಪಟ್ಟಣಕ್ಕೆ ಏ. 27 ರಂದು ಬೆಳಿಗ್ಗೆ 11 ಗಂಟೆಗೆ ಮಾಜಿ ಮುಖ್ಯಮಂತ್ರಿ ಸನ್ಮಾನ್ಯ ಶ್ರೀ ಬಿ.ಎಸ್.ಯಡಿಯೂರಪ್ಪ ಅವರು ಆಗಮಿಸಲಿದ್ದಾರೆ. ವಿಜಯಪುರ ಲೋಕಸಭೆ ಮೀಸಲು ಕ್ಷೇತ್ರದ ಅಭ್ಯರ್ಥಿ, ಹಾಲಿ ಸಂಸದರು, ಮುತ್ಸದ್ದಿಗಳು ರಾಜಕೀಯ ನಾಯಕ ರಮೇಶ ಜಿಗಜಿಣಗಿ ಅವರ ಪರ ಬಹಿರಂಗ ಪ್ರಚಾರ ಸಭೆಯಲ್ಲಿ ಪಾಲ್ಗೊಂಡು ಸಾರ್ವಜನಿಕರನ್ನುದ್ದೇಶಿಸಿ ಮಾತನಾಡಲಿದ್ದಾರೆ. ಇವರೊಂದಿಗೆ ಪಕ್ಷದ ನಾಯಕರು, ಮಾಜಿ ಶಾಸಕರು, ಮಾಜಿ ಸಚಿವರು ಸೇರಿ ಹಲವರು ಪಾಲ್ಗೊಳ್ಳಲಿದ್ದಾರೆ. ಎಂದು ಬಿಜೆಪಿ ರಾಜ್ಯ ರೈತ ಮೋರ್ಚಾ ಅಧ್ಯಕ್ಷ ಮಾಜಿ ಶಾಸಕ ಎ.ಎಸ್ ಪಾಟೀಲ್ ನಡ ಹಳ್ಳಿ ಪತ್ರಿಕಾ ಹೇಳಿಕೆ ನೀಡಿದ್ದಾರೆ

ಮುದ್ದೇಬಿಹಾಳ ವಿಧಾನಸಭಾ ಮತಕ್ಷೇತ್ರದ ಮತದಾರ ಬಂಧುಗಳು, ಸಾರ್ವಜನಿಕರು, ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ವಿನಂತಿಸಿರುವ ಅವರು ಈ ಚುನಾವಣೆಯಲ್ಲಿ ಜಿಗಜಿಣಗಿ ಅವರನ್ನು ಗೆಲ್ಲಿಸುವ ಮೂಲಕ ದೇಶವನ್ನು ಸಮರ್ಥವಾಗಿ ರಕ್ಷಿಸುತ್ತಿರುವ, ಮುನ್ನಡೆಸುತ್ತಿರುವ ಜನಪ್ರೀಯ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರನ್ನು ಮತ್ತೊಮ್ಮೆ ಪ್ರಧಾನಿಯಾಗಿಸುವುದು ನಮ್ಮ ನಿಮ್ಮೆಲ್ಲರ ಗುರಿಯಾಗಿದೆ. ಎಂದು ತಿಳಿಸಿದ್ದಾರೆ

## ಬಿಎಸ್‌ವೈ ಸಭೆಗೆ ಚವ್ಹಾಣ್ ಗೈರು

• **ಉದಯವಾಹಿನಿ, ಬೀದರ್**

ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಅವರ ಸಭೆಗೆ ಔರಾದ್ ಕ್ಷೇತ್ರದ ಶಾಸಕ ಪ್ರಭು ಚವ್ಹಾಣ್ ಗೈರಾಗಿದ್ದಾರೆ.ಭಗವಂತ್ ಖೂಬಾ ಪರ ಯಡಿಯೂರಪ್ಪ ಪ್ರಚಾರಕ್ಕಾಗಿ ಬೀದರ್ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಔರಾದ್‌ಗೆ ಆಗಮಿಸಿದ್ದಾರೆ. ಆದರೆ ಬಿಎಸ್‌ವೈ ಬಂದರೂ ಪ್ರಭು ಚವ್ಹಾಣ್ ಪ್ರಚಾರದಿಂದ ದೂರ ಉಳಿದಿದ್ದಾರೆ.

ಚವ್ಹಾಣ್ ಈ ಹಿಂದೆ ಖೂಬಾಗೆ ಟಿಕೆಟ್ ನೀಡದಂತೆ ಹೇಳಿದ್ದರು. ಆದರೆ ಬಳಿಕ ಖೂಬಾಗೆ ಟಿಕೆಟ್ ನೀಡಿದ್ದಕ್ಕೆ ಚವ್ಹಾಣ್ ಮುನಿಸಿಕೊಂಡಿದ್ದರು. ಈಗಲೂ ಮುನಿಸು ಮುಂದುವರಿದಿದ್ದು, ಸ್ವಕ್ಷೇತ್ರದ ಬಿಜೆಪಿ ಸಮಾವೇಶಕ್ಕೆ ಚವ್ಹಾಣ್ ಗೈರಾಗಿದ್ದಾರೆ.

## ಕುಟುಂಬವನ್ನೇ ಸರ್ವನಾಶ ಮಾಡಿತು ಕುಡಿತದ ಚಟ

• **ಉದಯವಾಹಿನಿ, ದಾವಣಗೆರೆ**

ತಾಯಿ ಆತ್ಮಹತ್ಯೆ ಮಾಡಿಕೊಂಡ ಕೆಲವೇ ಗಂಟೆಯಲ್ಲಿ ಮಗನ ಕೈ ಯಿಂದ ತಂದೆಯ ಹತ್ಯೆ ನಡೆದ ಘಟನೆ ದಾವಣಗೆರೆಯ ಜಗಳೂರು ತಾಲ್ಲೂಕಿನ ಲಕ್ಕಿಂಪುರ ಗ್ರಾಮದಲ್ಲಿ ನಡೆದಿದೆ. ತಿಪ್ಪಮ್ಮ (52), ಅಂಜನಪ್ಪ (60) ಸಾವನ್ನಪ್ಪಿದ ದುರ್ದೈವಿಗಳು. ರಮೇಶ್ (30) ಎಂಬಾತನೇ ತಂದೆಯನ್ನು ಕೊಂದ ಆರೋಪಿ. ಅಂಜನಪ್ಪ ಕಟ್ಟಡ ಕೆಲಸ ಮಾಡುತ್ತಿದ್ದು ನಿತ್ಯ ಕುಡಿದು ಬಂದು ಪತ್ನಿಯ ಜೊತೆ ಜಗಳವಾಡುತ್ತಿದ್ದ, ಪತಿಯ ಕಿರು ಕುಳ ತಾಳಲಾರದೇ ಬುಧವಾರ (24) ತಡರಾತ್ರಿ ಮನೆಯಲ್ಲಿತಾಯಿ ತಿಪ್ಪಮ್ಮ ನೇಣಿಗೆ ಶರಣಾಗಿದ್ದಾಳೆ. ತಾಯಿ ಸಾವಿನ ಸುದ್ದಿ ಕೇಳಿ , ತಂದೆಯ ಕುಡಿತದ ಚಟದಿಂದಲೇ ತಾಯಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ರಮೇಶ್ ತಂದೆಯ ತಲೆ ಮೇಲೆ ಕಲ್ಲು ಎತ್ತಿ ಹಾಕಿ ಹತ್ಯೆ ಮಾಡಿದ್ದಾನೆ.

ಘಟನೆ ಬಗ್ಗೆ ಮಾಹಿತಿ ತಿಳಿದ ಜಗಳೂರು ಪೊಲೀಸರು ಸ್ಥಳಕ್ಕೆ ಆಗಮಿಸಿ ರಮೇಶ್‌ನನ್ನ ವಶಕ್ಕೆ ಪಡೆದಿದ್ದು, ಎರಡು ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದೆ. ಕುಡಿತದ ಚಟಕ್ಕೆ ಇಡೀ ಕುಟುಂಬ ಸರ್ವನಾಶವಾಗಿದೆ.

## ಮತ ಚಲಾಯಿಸುವ ಮುನ್ನವೇ ಉಸಿರು ಚೆಲ್ಲಿದ ವೃದ್ಧೆ

• **ಉದಯವಾಹಿನಿ, ಕೊಪ್ಪಳ**

ಹಿರಿಯ ನಾಗರಿಕರಿಗೆ ಮತದಾನ ಮಾಡಿಸಲೆಂದು ಚುನಾವಣಾ ಅದಿಕಾರಿಗಳು ಮನೆಗೆ ತೆರಳಿದ್ದಾಗಲೇ ದುರಂತ ಸಂಭವಿಸಿದ್ದು, ಮತದಾನ ಮಾಡಲು ಮುಂದಾಗಿದ್ದ ವೃದ್ಧೆ ಸಾವನ್ನಪ್ಪಿದ ಘಟನೆ ಕೊಪ್ಪಳ ತಾಲ್ಲೂಕಿನ ಹಲಗೇರಿ ಗ್ರಾಮದಲ್ಲಿ ನಡೆದಿದೆ.ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದ 95 ವರ್ಷದ ಪಾರ್ವತಮ್ಮ ಸಜ್ಜನ ಮತದಾನ ಮಾಡುವುದಕ್ಕೂ ಮುನ್ನವೇ ಮೃತಪಟ್ಟಿದ್ದಾರೆ.

ಮನೆಯಿಂದಲೇ ಮತದಾನ ಮಾಡಲೆಂದು ಪಾರ್ವತಮ್ಮ ಸಜ್ಜನ ಹೆಸ್ರರು ನೊಂದಾಯಿಸಿದ್ದರು. ಈ ಹಿನ್ನೆಲೆಯಲ್ಲಿ ಗುರುವಾರ ಚುನಾವಣಾ ಅಧಿಕಾರಿಗಳು ಮತಪಡೆಯಲು ಪಾರ್ವತಮ್ಮ ಅವರ ಮನೆಗೆ ತೆರಳಿದ್ದರು. ಅಧಿಕಾರಿಗಳು ಆಗಮಿಸಿದ್ದ ವೇಳೆಯೇ ಪಾರ್ವತಮ್ಮ ಕೊನೆಯುಸಿರೆಳೆದಿದ್ದಾರೆ.

## ಭಾವೈಕ್ಯದ ಬೆಟ್ಟದಲ್ಲಿ ಜಾತ್ರೆ ಸಂಭ್ರಮ

• **ಉದಯವಾಹಿನಿ, ವಾಡಿ**

ಸಮೀಪದ ಚಿತ್ತಾಪುರ ತಾಲ್ಲೂಕಿನ ಲಾಡ್ಲಾಪುರ ಹಾಜಿ ಸರ್ವರ್ ಬೆಟ್ಟ ಭಕ್ತಿಯ ಜತೆಗೆ ಧಾರ್ಮಿಕ ಸಮನ್ವಯತೆ, ಸರ್ವಧರ್ಮ ಸಹಬಾಳ್ವೆಯ ಸಂದೇಶ ಸಾರುತ್ತಿದೆ.ನೆತ್ತಿ ಸುಡುವ ಬಿಸಿಲಿನಲ್ಲೂ 600 ಅಡಿ ಎತ್ತರದ ಬೆಟ್ಟದ ಮೇಲಿರುವ ಹಾಜಿ ಸರ್ವರ್ ದರ್ಗಾಕ್ಕೆ ಹಿಂದೂ- ಮುಸ್ಲಿಮರು ಕುಟುಂಬ ಸಮೇತರಾಗಿ ಬರಿಗಾಲಲ್ಲಿ ತೆರಳಿ ದರ್ಶನ ಪಡೆಯುತ್ತಾರೆ. ಇಷ್ಟಾರ್ಥ ಸಿದ್ಧಿಯಾದ ಭಕ್ತರು ವರ್ಷಪೂರ್ತಿ ಇಲ್ಲಿ ಹರಕೆ ತೀರಿಸುತ್ತಾರೆ.

ಗುಡ್ಡದ ಮೇಲಿರುವ ದರ್ಗಾದಲ್ಲಿ ಹಿಂದೂಗಳು ಪೂಜಾರಿಗಳಾದರೆ, ಮುಸ್ಲಿಮರು ದರ್ಗಾದ ಪಕ್ಕ ಇರುವ ನಗಾರಿ ಕಟ್ಟೆಗೆ ಪೂಜಾರಿಗಳಾಗಿದ್ದಾರೆ ಎನ್ನುತ್ತಾರೆ ಗ್ರಾಮಸ್ಥರು. ಪ್ರತಿ ಗುರುವಾರ, ಅಮಾವಾಸ್ಯೆ ದಿನ ಭಕ್ತರು ಬರಿಗಾಲಲ್ಲಿ ಬೆಟ್ಟ ಹತ್ತಿ ಹರಕೆ ಸಲ್ಲಿಸುವುದು ವಾಡಿಕೆ. ದವನದ ಹುಣ್ಣಿಮೆ ನಂತರ ಬರುವ ಗುರುವಾರ ಜಾತ್ರೆಗೆ ಚಾಲನೆ ನೀಡಿ 5 ದಿನಗಳ ಕಾಲ (ಏ.25ರಿಂದ 29) ಅದ್ದೂರಿಯಾಗಿ ಆಚರಿಸಿಕೊಂಡು ಬರಲಾಗುತ್ತದೆ. ಕೆಲಸಕ್ಕಾಗಿ ನಗರ, ಪಟ್ಟಣಗಳಿಗೆ ಗುಳೆ ಹೋದ ಗ್ರಾಮಸ್ಥರು ಜಾತ್ರೆ ಸಂದರ್ಭದಲ್ಲಿ ಊರಿಗೆ ಆಗಮಿಸುತ್ತಾರೆ. ರಾಜ್ಯದ ಭಕ್ತರಷ್ಟೇ ಅಲ್ಲದೆ ಆಂಧ್ರಪ್ರದೇಶ, ತೆಲಂಗಾಣ, ಮಹಾರಾಷ್ಟ್ರ, ಗೋವಾ ರಾಜ್ಯಗಳ ಸಾವಿರಾರು ಜನ ಭಾಗಿಯಾಗುತ್ತಾರೆ. ಜಾತ್ರೆಗೆ ಬರುವ ಭಕ್ತರಿಗಾಗಿ ಕಲಬುರಗಿ, ಯಾದಗಿರಿ, ಚಿತ್ತಾಪುರದಿಂದ ಬಸ್‌ಗಳ ವ್ಯವಸ್ಥೆ ಇರುತ್ತದೆ.

ಬೆಟ್ಟಕ್ಕೆ ವಿದ್ಯುತ್ ಅಲಂಕಾರ ಮಾಡಲಾಗಿದ್ದು, ನೋಡುಗರ ಕಣ್ಮನ ಸೆಳೆಯುತ್ತಿದೆ. ಭಕ್ತರಿಗಾಗಿ ಕುಡಿಯುವ ನೀರು, ದಾಸೋಹ ವ್ಯವಸ್ಥೆ ಇರುತ್ತದೆ. ಗ್ರಾಮದಲ್ಲಿ ಶಾಂತಿಸಭೆ ನಡೆಸಿದ ಶಹಾಬಾದ್ ಡಿವೈಎಸ್ಪಿ ಶಂಕರಗೌಡ ಪಾಟೀಲ ಶಾಂತಿಯುತ ಆಚರಣೆಗೆ ಸಲಹೆ, ಸೂಚನೆ ನೀಡಿದ್ದಾರೆ.

# ಎಸ್‌ಸಿ, ಎಸ್‌ಟಿ, ಒಬಿಸಿ ಸಮುದಾಯಗಳ ಹಕ್ಕು ಕಸಿಯಲು ಕಾಂಗ್ರೆಸ್ ಯತ್ನ

## ಕರ್ನಾಟಕ ಕಾಂಗ್ರೆಸ್ ಸರ್ಕಾರವು ಈಗಾಗಲೇ ಎಸ್‌ಸಿ, ಎಸ್‌ಟಿ ಹಾಗೂ ಒಬಿಸಿ ಸಮುದಾಯದ ಹಕ್ಕುಗಳನ್ನು ರಹಸ್ಯವಾಗಿ ಕಸಿದಿದೆ: ಮೋದಿ

**ಆಗ್ರಾ:** ಕಾಂಗ್ರೆಸ್ ಪಕ್ಷವು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಇತರ ಹಿಂದುಳಿದ ವರ್ಗಗಳ ಹಕ್ಕುಗಳನ್ನು ಕಿತ್ತುಕೊಳ್ಳಲು ರಹಸ್ಯವಾಗಿ ಷಡ್ಯಂತ್ರ ರೂಪಿಸುತ್ತಿದೆ ಎಂದು ಪ್ರಧಾನಿ ಮೋದಿ ಆಪಾದಿಸಿದ್ದಾರೆ.

ಉತ್ತರ ಪ್ರದೇಶದ ಆಗ್ರಾ ನಗರದಲ್ಲಿ ಚುನಾವಣಾ ಸಮಾವೇಶ ಉದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಕರ್ನಾಟಕ ಕಾಂಗ್ರೆಸ್ ಸರ್ಕಾರವು ಈಗಾಗಲೇ ಎಸ್‌ಸಿ, ಎಸ್‌ಟಿ, ಒಬಿಸಿ ಸಮುದಾಯದ ಹಕ್ಕುಗಳನ್ನು ರಹಸ್ಯವಾಗಿ ಕಸಿದಿದೆ. ಇದೇ ತಂತ್ರವನ್ನು ದೇಶಾದ್ಯಂತ ಅಧಿಕಾರ ಸಿಕ್ಕ ಕಡೆಯಲ್ಲೆಲ್ಲಾ ಕಾಂಗ್ರೆಸ್ ಪಕ್ಷ ಅನುಸರಿಸಲಿದೆ ಎಂದು ಪ್ರಧಾನಿ ಮೋದಿ ಹೇಳಿದರು.

ಕರ್ನಾಟಕ ಕಾಂಗ್ರೆಸ್ ಸರ್ಕಾರವು ಕರ್ನಾಟಕ ರಾಜ್ಯದಲ್ಲಿ ಇರುವ ಮುಸ್ಲಿಂ ಸಮುದಾಯದ ಎಲ್ಲಾ ಜಾತಿಗಳ ಜನರನ್ನು ರಾತ್ರೋರಾತ್ರಿ ಒಬಿಸಿ ಪ್ರವರ್ಗಕ್ಕೆ ಸೇರ್ಪಡೆ ಮಾಡಿದೆ. ಈ ಕುರಿತಾದ ದಾಖಲೆ ಸಿದ್ದಪಡಿಸಿದೆ. ಹೀಗಾಗಿ, ಒಬಿಸಿ ಸಮುದಾಯಕ್ಕೆ ಮೀಸಲಾಗಿದ್ದ ಶೇ. 27 ರಷ್ಟು ಮೀಸಲಾತಿ ಲೂಟಿಯಾಗಿದ್ದು, ಇದೀಗ ಮುಸ್ಲಿಮರಿಗೂ ಕೊಡಬೇಕಿದೆ ಎಂದು ಪ್ರಧಾನಿ ಮೋದಿ ಹೇಳಿದರು.



- ಕರ್ನಾಟಕ ಕಾಂಗ್ರೆಸ್ ಸರ್ಕಾರವು ಈಗಾಗಲೇ ಎಸ್‌ಸಿ, ಎಸ್‌ಟಿ, ಒಬಿಸಿ ಸಮುದಾಯದ ಹಕ್ಕುಗಳನ್ನು ರಹಸ್ಯವಾಗಿ ಕಸಿದಿದೆ
- ಇದೇ ತಂತ್ರವನ್ನು ದೇಶಾದ್ಯಂತ ಅಧಿಕಾರ ಸಿಕ್ಕ ಕಡೆಯಲ್ಲೆಲ್ಲಾ ಕಾಂಗ್ರೆಸ್ ಪಕ್ಷ ಅನುಸರಿಸಲಿದೆ
- ಉತ್ತರ ಪ್ರದೇಶದ ಆಗ್ರಾದಲ್ಲಿ ಪ್ರಧಾನಿ ಮೋದಿ ವಾಗ್ದಾಳಿ

ಕರ್ನಾಟಕ ರಾಜ್ಯದಲ್ಲಿ ಒಬಿಸಿ ಸಮುದಾಯದ ಹಕ್ಕುಗಳನ್ನು ಕಸಿದುಕೊಂಡ ರೀತಿಯಲ್ಲೇ ಉತ್ತರ ಪ್ರದೇಶದಲ್ಲೂ ಇದೇ ಆಟ ಆಡುತ್ತಾರೆ ಎಂದು ಎಚ್ಚರಿಕೆ ನೀಡಿದ ಪ್ರಧಾನಿ ಮೋದಿ ರಾಷ್ಟ್ರ ಮಟ್ಟದಲ್ಲೂ ಅವಕಾಶ ಸಿಕ್ಕರೆ ಕಾಂಗ್ರೆಸ್ ಪಕ್ಷವು ಎಸ್‌ಸಿ, ಎಸ್‌ಟಿ, ಒಬಿಸಿ ಸಮುದಾಯದ ಹಕ್ಕುಗಳನ್ನು ರಹಸ್ಯವಾಗಿ ಕಸಿದುಕೊಳ್ಳಲು ಹಿಂಬಾಗಿಲ ಪ್ರಯತ್ನ ನಡೆಸಲಿದೆ ಎಂದು ಎಚ್ಚರಿಕೆ ನೀಡಿದರು. ಇನ್ನು ಉತ್ತರ ಪ್ರದೇಶದ ಸಮಾಜವಾದಿ ಪಕ್ಷವೂ ಕಾಂಗ್ರೆಸ್‌ಗೆ ಈ ವಿಚಾರದಲ್ಲಿ ಸಂಪೂರ್ಣ ಬೆಂಬಲ ನೀಡಲಿದೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

> ಕಾಂಗ್ರೆಸ್ ಪಕ್ಷ ಹಾಗೂ ಇಂಡಿ ಮೈತ್ರಿ ಕೂಟವು ಈ ರೀತಿಯ ಓಲೈಕೆ ರಾಜಕಾರಣವನ್ನು ಮಾಡುವ ಮೂಲಕ ದೇಶವನ್ನು ತುಂಡು ತುಂಡಾಗಿ ವಿಭಜಿಸಲಿದೆ ಎಂದು ಪ್ರಧಾನಿ ಮೋದಿ ಅವರು ಎಚ್ಚರಿಕೆ ನೀಡಿದ್ದಾರೆ. ಆದರೆ, ನಾವು ಓಲೈಕೆ ರಾಜಕಾರಣದ ಹಾದಿಯನ್ನು ಅನುಸರಿಸೋದಿಲ್ಲ
>
> -ಪ್ರಧಾನಿ ಮೋದಿ

ಪ್ರಧಾನಿ ಮೋದಿ ಎಚ್ಚರಿಕೆ

ಇನ್ನು ಕಾಂಗ್ರೆಸ್ ಪಕ್ಷ ಧರ್ಮಾಧಾರಿತ ಮೀಸಲಾತಿ ನೀಡಲು ಬಯಸುತ್ತಿದೆ. ಆದರೆ, ನ್ಯಾಯಾಲಯಗಳು ಹಲವು ಬಾರಿ ನಿರ್ಬಂಧ ವಿಧಿಸಿದರೂ ಕಾಂಗ್ರೆಸ್ ಪ್ರಯತ್ನಿಸುತ್ತಲೇ ಇದೆ ಎಂದು ಪ್ರಧಾನಿ ಮೋದಿ ಆರೋಪಿಸಿದ್ದಾರೆ.

ಕರ್ನಾಟಕ ರಾಜ್ಯವಿರಲಿ, ಆಂಧ್ರ ಪ್ರದೇಶವೇ ಇರಲಿ, ಕಾಂಗ್ರೆಸ್ ಪಕ್ಷ ಎಲ್ಲೆಡೆ ಧರ್ಮಾಧಾರಿತ ಮೀಸಲಾತಿಗೆ ತನ್ನ ಪ್ರಣಾಳಿಕೆಗಳಲ್ಲಿ ಆದ್ಯತೆ ನೀಡುತ್ತಿದೆ. ಆದರೆ, ಈ ದೇಶದ ಸಂವಿಧಾನ ಹಾಗೂ ನ್ಯಾಯಾಲಯಗಳು ಕಾಂಗ್ರೆಸ್ ಪಕ್ಷ ಈ ರೀತಿ ಮಾಡದಂತೆ ಪದೇ ಪದೇ ತಡೆಯುತ್ತಿವೆ. ಇಷ್ಟಾದರೂ ಕೂಡಾ ಕಾಂಗ್ರೆಸ್ ಪಕ್ಷ ಹೊಸ ಮಾರ್ಗ ಹುಡುಕಿದೆ. ಒಬಿಸಿ ಸಮುದಾಯಕ್ಕೆ ಸಿಗುತ್ತಿರುವ ಶೇ. 27 ರಷ್ಟು ಮೀಸಲಾತಿಯನ್ನು ಅವರಿಂದ ಕಿತ್ತುಕೊಂಡು ಧರ್ಮಾಧಾರಿತ ಮೀಸಲಾತಿ ನೀಡಲು ಕಾಂಗ್ರೆಸ್ ಮುಂದಾಗಿದೆ ಎಂದು ಪ್ರಧಾನಿ ಮೋದಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಜೈನ ಸಮುದಾಯದವರನ್ನು ಭೇಟಿಯಾದ ಅಮೆರಿಕ ರಾಜತಾಂತ್ರಿಕ

**ವಾಷಿಂಗ್ಟನ್:** ಅಮೆರಿಕದ ಹಿರಿಯ ರಾಜತಾಂತ್ರಿಕರೊಬ್ಬರು ಲಾಸ್ ಏಂಜಲೀಸ್‌ನಲ್ಲಿ ಜೈನ್ ಸಮುದಾಯದ ಸದಸ್ಯರೊಂದಿಗೆ ಸಭೆ ನಡೆಸಿದ್ದಾರೆ. ದಕ್ಷಿಣ ಮತ್ತು ಮಧ್ಯ ಏಷ್ಯಾದ ಸಹಾಯಕ ಕಾರ್ಯದರ್ಶಿ ಡೊನಾಲ್ಡ್ ಅವರು ದಕ್ಷಿಣ ಕ್ಯಾಲಿಫೋರ್ನಿಯಾ ಜೈನ ದೇವಸ್ಥಾನಕ್ಕೆ ಭೇಟಿ ನೀಡಿದರು, ಸ್ಥಳೀಯ ಜೈನ ಸಮುದಾಯದ ಸದಸ್ಯರೊಂದಿಗೆ ಸಭೆ ನಡೆಸಿದರು.

ಸಭೆಯಲ್ಲಿ ಲು ದಕ್ಷಿಣ ಕ್ಯಾಲಿಫೋರ್ನಿಯಾದ ಜೈನ್ ಸಮುದಾಯದೊಂದಿಗೆ ಸಂಪರ್ಕ ಸಾಧಿಸಲು ಅವಕಾಶಕ್ಕಾಗಿ ಕೃತಜ್ಞತೆಯನ್ನು ವ್ಯಕ್ತಪಡಿಸಿದ್ದಾರೆ, ವಿಶಾಲವಾದ ಲಾಸ್ ಏಂಜಲೀಸ್ ಪ್ರದೇಶಕ್ಕೆ ಅದರ ಮಹತ್ವದ ಕೊಡುಗೆಗಳನ್ನು ಅಂಗೀಕರಿಸಿದ್ದಾರೆ ಎಂದು ಮಾಧ್ಯಮ ಪ್ರಕಟಣೆ ತಿಳಿಸಿದೆ. ಅವರು ಯುನೈಟೆಡ್ ಸ್ಟೇಟ್ಸ್ ಮತ್ತು ಭಾರತದ ನಡುವಿನ ಸಂಬಂಧವನ್ನು ಬಲಪಡಿಸುವಲ್ಲಿ ಭಾರತೀಯ-ಅಮೆರಿಕನ್ನರ ಪ್ರಮುಖ ಪಾತ್ರವನ್ನು ಒತ್ತಿಹೇಳಿದರು,



ಲಾಸ್ ಏಂಜಲೀಸ್‌ಗೆ ಮಹತ್ವದ ಕೊಡುಗೆ

ಭಾರತೀಯ- ಅಮೆರಿಕನ್ನರು ಭಾರತದೊಂದಿಗಿನ ನಮ್ಮ ಬಲವಾದ ಸಂಬಂಧದ ಬೆನ್ನೆಲುಬಾಗಿದ್ದಾರೆ. ದಕ್ಷಿಣ ಕ್ಯಾಲಿಫೋರ್ನಿಯಾದ ಜೈನ ಸಮುದಾಯದೊಂದಿಗೆ ಸಂಪರ್ಕ ಸಾಧಿಸಲು ಮತ್ತು ಕಲಿಯಲು ಇದು ಅದ್ಭುತವಾಗಿದೆ ಎಂದಿದ್ದಾರೆ.

ಭೇಟಿಯ ಸಮಯದಲ್ಲಿ, ಷಾ, ವಾಧರ್ ಮತ್ತು ದೇವಾಲಯದ ಕಾರ್ಯನಿರ್ವಾಹಕ ತಂಡವು ಲುಗೆ ಜೈನ ಧರ್ಮ, ಅದರ ಆಹಾರ ಪದ್ಧತಿಗಳು, ಅಹಿಂಸೆಯ ತತ್ವಶಾಸ, ಭಗವಾನ್ ಮಹಾವೀರರ ಶಾಂತಿ, ಕರುಣೆ ಮತ್ತು ಅಹಿಂಸೆಯ ಸಂದೇಶ, ಜೈನ ಉಪವಾಸ ಸಂಪ್ರದಾಯಗಳ ಬಗ್ಗೆ ಅಮೂಲ್ಯವಾದ ಒಳನೋಟಗಳನ್ನು ಒದಗಿಸಿತು. ಸ್ಥಳೀಯವಾಗಿ ಲಾಸ್ ಏಂಜಲೀಸ್‌ನಲ್ಲಿ ಮತ್ತು ಅಮೆರಿಕದ ಇತರ ಭಾಗಗಳಲ್ಲಿ ಮತ್ತು ವಿದೇಶಗಳಲ್ಲಿ, ಭಾರತ ಮತ್ತು ನೈಜೀರಿಯಾದಂತಹ ಸ್ಥಳಗಳಲ್ಲಿ ವ್ಯಕ್ತಿಗಳನ್ನು ಬೆಂಬಲಿಸಲು ಜೈನ ಮತ್ತು ಜೈನ ದೇವಾಲಯದಿಂದ ಸಮುದಾಯದ ಪ್ರಭಾವ ಮತ್ತು ಲೋಕೋಪಕಾರ ಕಾರ್ಯವನ್ನು ನಡೆಸಲಾಯಿತು.

# ಒತ್ತೆಯಾಳುಗಳ ವಿಡಿಯೋ ಬಿಡುಗಡೆ ಮಾಡಿದ ಹಮಾಸ್

**ಜೆರೋಸಲೇಂ:** ಹಮಾಸ್ ಬುಧವಾರ ಒತ್ತೆಯಾಳುಗಳ ವಿಡಿಯೋವನ್ನು ಬಿಡುಗಡೆ ಮಾಡಿದ್ದು, ಇದರಲ್ಲಿ ಬಂಡುಕೋರರ ದಾಳಿಯಲ್ಲಿ ಅಪಹರಿಸಲಾದ ಚಿರಪರಿಚಿತ ಇಸ್ರೇಲಿ-ಅಮೆರಿಕನ್ ವ್ಯಕ್ತಿಯನ್ನು ತೋರಿಸಲಾಗಿದೆ. ಹಮಾಸ್‌ನ ಈ ದಾಳಿ ಗಾಜಾದಲ್ಲಿ ಕದನವನ್ನು ಭುಗಿಲೆಬ್ಬಿಸಿದೆ.




ಈ ವಿಡಿಯೋದಲ್ಲಿ ಒತ್ತೆಯಾಳು ಹೆರ್ಷ್ ಗೋಲ್ಡ್‌ಬರ್ಗ್‌ಪೊಲೀನ್ ಅವರು ಜೀವಂತವಾಗಿರುವುದು ಗೋಚರಿಸಿದೆ. ದಕ್ಷಿಣ ಇಸ್ರೇಲ್ ಮೇಲೆ ಕಳೆದ ಅಕ್ಟೋಬರ್ 7ರಂದು ಹಮಾಸ್ ದಾಳಿ ನಡೆಸಿದ ಬಳಿಕ ಬಿಡುಗಡೆಯಾಗಿರುವ ಒತ್ತೆಯಾಳುಗಳ ಮೊದಲವ ವಿಡಿಯೋ ಇದಾಗಿದೆ. ವಿಡಿಯೋ ಬಿಡುಗಡೆಯಾದ ಬಳಿಕ ಒತ್ತೆಯಾಳುಗಳ ಸುರಕ್ಷಿತ ಬಿಡುಗಡೆಗೆ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಹೊಸ ಪ್ರತಿಭಟನೆಗಳು ಭುಗಿಲೆದ್ದಿವೆ. ಹಮಾಸ್‌ನಿಂದ ಒತ್ತೆಯಾಳುಗಳಾಗಿರುವವರನ್ನು ಇಸ್ರೇಲ್ ಸರ್ಕಾರ ಪರಿತ್ಯಜಿಸುತ್ತಿದೆ ಎಂದು ಗೋಲ್ಡ್‌ಬರ್ಗ್ -ಪೊಲೀಸ್ ಆರೋಪಿಸಿದ್ದಾರೆ. ಇದಲ್ಲದೆ ಇಸ್ರೇಲ್ ನಡೆಸಿರುವ ಬಾಂಬ್ ದಾಳಿಯಲ್ಲಿ ಸುಮಾರು 70 ಜನರು ಹತರಾಗಿದ್ದಾರೆ ಎಂದೂ ಪ್ರತಿಪಾದಿಸಿದ್ದಾರೆ. ಈ ವಿಡಿಯೋ ಯಾವಾಗ ತಯಾರಾದದ್ದು ಎಂಬುದು ತಿಳಿದುಬಂದಿಲ್ಲ.

23 ವರ್ಷ ವಯಸ್ಸಿನ ಗೋಲ್ಡ್‌ಬರ್ಗ್ -ಪೊಲೀಸ್ ಅವರು ಹಮಾಸ್ ಹತ್ತಿರದ ಗಾಜಾದಿಂದ ಆಕ್ರಮ ಮಾಡಿದಾಗ ನೋವಾ ಬುಡಕಟ್ಟು ಸಂಗೀತೋತ್ಸವದಲ್ಲಿದ್ದರು. ವಿಡಿಯೋದಲ್ಲಿ ಗೋಲ್ಡ್‌ಬರ್ಗ್ ಪೊಲೀಸರ ಎಡಗೈನ ಒಂದು ಭಾಗ ಕಾಣುತ್ತಿಲ್ಲ. ನಿರಾಶ್ರಿತರ ಶಿಬಿರದ ಮೇಲೆ ದಾಳಿಕೋರರು ಗ್ರೆನೇಡ್ ಎಸೆದಾಗ ಈತ ತನ್ನ ಕೈ ಕಳೆದುಕೊಂಡರು ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

# ಕ್ಯಾಲಿಫೋರ್ನಿಯಾಗೂ ವಿಸ್ತರಿಸಿದ ಇಸ್ರೇಲ್ ವಿರುದ್ಧದ ಪ್ರತಿಭಟನೆ

**ನ್ಯೂಯಾರ್ಕ್:** ಅಮೆರಿಕದ ಶಿಕ್ಷಣ ಸಂಸ್ಥೆಗಳಲ್ಲಿ ಇಸ್ರೇಲ್ ವಿರುದ್ಧದ ಪ್ರತಿಭಟನೆಯಲ್ಲಿ ತೊಡಗುವ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚುತ್ತಲೇ ಸಾಗಿದೆ. ಇಸ್ರೇಲ್‌ನೊಂದಿಗಿನ ವಾಣಿಜ್ಯ ಸಂಬಂಧ ಸ್ಥಗಿತಗೊಳಿಸಿ ಅಥವಾ ಗಾಜಾದಲ್ಲಿ ಈಗ ನಡೆಯುತ್ತಿರುವ ಯುದ್ಧವನ್ನು ಬೆಂಬಲಿಸುವ ಯಾವುದೇ ಕಂಪನಿಯೊಂದಿಗೆ ವ್ಯಾಪಾರ ವಹಿವಾಟು ಮಾಡಬೇಡಿ ಎಂಬುದೇ ಈ ವಿದ್ಯಾರ್ಥಿಗಳ ಒಕ್ಕೊರಲ ಒತ್ತಾಯವಾಗಿದೆ.

ಪ್ಯಾಲೆಸ್ತೀನಿಯನ್ನರ ಕುರಿತು ಇಸ್ರೇಲ್ ಧೋರಣೆಯನ್ನು ಖಂಡಿಸಿ ಇಸ್ರೇಲ್ ವಿರುದ್ಧ ಬಹಿಷ್ಕಾರ, ಬಂಡವಾಳ ಹಿಂತೆಗೆತ ಮತ್ತು ಆರ್ಥಿಕ ದಿಗ್ಬಂಧನದಂತಹ ಕಠಿಣ ಕ್ರಮಗಳನ್ನು ಕೈಗೊಳ್ಳಬೇಕು ಎಂಬ ಬೇಡಿಕೆ ದಶಕಗಳಷ್ಟು ಹಿಂದಿನಿಂದಲೂ ಇದೆ. ಇಸ್ರೇಲ್-ಹಮಾಸ್ ನಡುವಿನ ಸಮರ ಆರು ತಿಂಗಳು ದಾಟಿದ್ದು ಗಾಜಾದಲ್ಲಿ ಜನರ ನರಳಾಟ ಕಂಡು ಕದನ ವಿರಾಮ ಘೋಷಿಸುವಂತೆ ಅಂತಾರಾಷ್ಟ್ರೀಯ ಸಮುದಾಯ ಕರೆ ನೀಡಿರುವ ಈ ಹೊತ್ತಿನಲ್ಲಿ ಇಸ್ರೇಲ್ ವಿರುದ್ಧದ ಪ್ರತಿಭಟನೆಗಳು ಮತ್ತೆ ಮುನ್ನೆಲೆಗೆ ಬಂದಿವೆ.



ಕಳೆದ ವಾರ ಕೊಲಂಬಿಯಾ ವಿಶ್ವವಿದ್ಯಾನಿಲಯದಲ್ಲಿ ಪ್ರತಿಭಟನಾನಿರತ 100 ಕ್ಕೂ ಅಧಿಕ ವಿದ್ಯಾರ್ಥಿಗಳ ಬಂಧನದಿಂದ ಪ್ರೇರಿತರಾಗಿ ಮಸಾಚ್ಯುಸೆಟ್ಸ್‌ನಿಂದ ಕ್ಯಾಲಿಫೋರ್ನಿಯಾವರೆಗಿನ ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ನೂರಾರು ಸಂಖ್ಯೆಯಲ್ಲಿ ಜಮಾಯಿಸುತ್ತಿದ್ದು ಟೆಂಟ್‌ಗಳನ್ನು ನಿರ್ಮಿಸಿಕೊಂಡು ಪ್ರತಿಭಟನೆ ನಡೆಸುತ್ತಿದ್ದಾರೆ.

# ಲೋಕಸಭೆ ಚುನಾವಣಾ ಪ್ರಚಾರ ಅಖಾಡಕ್ಕೆ ಕೇಜ್ರಿವಾಲ್ ಪತ್ನಿ ಸುನಿತಾ

**ನವದೆಹಲಿ:** ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಪತ್ನಿ ಸುನಿತಾ ಕೇಜ್ರಿವಾಲ್ ಅವರನ್ನು ಲೋಕಸಭೆ ಚುನಾವಣಾ ಪ್ರಚಾರ ಅಖಾಡಕ್ಕೆ ಇಳಿಸಲು ಆಮ್ ಆದ್ಮಿ ಪಕ್ಷ ನಿರ್ಧರಿಸಿದೆ. ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಈಗ ನ್ಯಾಯಾಂಗ ಬಂಧನಲ್ಲಿದ್ದಾರೆ. ಈ ಹಿನ್ನಲೆ ಕೇಜ್ರಿವಾಲ್ ಪತ್ನಿ ಸುನೀತಾ ಕೇಜ್ರಿವಾಲ್ ಅವರು ದೆಹಲಿಯಲ್ಲಿ ಆಪ್ ಅಭ್ಯರ್ಥಿಗಳ ಪರವಾಗಿ ನಾಳೆಯಿಂದ ಪ್ರಚಾರ ನಡೆಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ಸುನೀತಾ ಕೇಜ್ರಿವಾಲ್ ರಾಷ್ಟ್ರ ರಾಜಧಾನಿಯಲ್ಲಿ ಆಮ್ ಆದ್ಮಿ ಪಕ್ಷದ ಅಭ್ಯರ್ಥಿಗಳ ಪರ ಪ್ರಚಾರ ಮಾಡುತ್ತಿರುವುದು ಇದೇ ಮೊದಲು. ಇದಕ್ಕೂ ಮುನ್ನ ಅವರು ರಾಜಕೀಯವಾಗಿ ಎಲ್ಲೂ ಗುರುತಿಸಿಕೊಂಡವರಲ್ಲ.



**ವಿಪಕ್ಷಗಳ ಸಮಾವೇಶದಲ್ಲಿ ಭಾಗಿ**

ಕೇಜ್ರಿವಾಲ್ ಬಂಧನ ಖಂಡಿಸಿ ದೆಹಲಿಯಲ್ಲಿ ವಿಪಕ್ಷಗಳು ನಡೆಸಿದ ಸಮಾವೇಶದಲ್ಲಿ ಭಾಗಿಯಾಗಿ ಭಾಷಣ ಮಾಡಿದ್ದರು. ಇತ್ತೀಚೆಗೆ ಛತ್ತಿಸ್‌ಘಡದಲ್ಲಿ ನಡೆದ ಇಂಡಿಯಾ ಒಕ್ಕೂಟದ ಸಭೆಯಲ್ಲಿ ಅವರು ಪಕ್ಷವನ್ನು ಪ್ರತಿನಿಧಿಸಿದ್ದರು.

ಕೇಜ್ರಿವಾಲ್ ಅವರನ್ನು ಬಂಧಿಸಿದ ನಂತರ ಸುನೀತಾ ಕೇಜ್ರಿವಾಲ್ ಅವರು ವೀಡಿಯೊ ಸಂದೇಶಗಳು, ಪತ್ರಿಕಾಗೋಷ್ಠಿಗಳ ಮೂಲಕ ಮುನ್ನಲೆಗೆ ಬಂದಿದ್ದಾರೆ.

ಈ ನಡುವೆ ನ್ಯಾಯಾಂಗ ಬಂಧನದಲ್ಲಿರುವ ಅರವಿಂದ್ ಕೇಜ್ರಿವಾಲ್ ತಮ್ಮ ಬಂಧನವನ್ನ ಪ್ರಶ್ನಿಸಿ ಸುಪ್ರೀಂಕೋರ್ಟ್ ಮೆಟ್ಟಿಲೇರಿದ್ದು ಇಡಿ ಈಗ ಅಫಿಡವಿಟ್ ಸಲ್ಲಿಸಿದೆ. 9 ಬಾರಿ ಸಮನ್ಸ್ ನೀಡಿದ್ದರೂ ಅರವಿಂದ್ ಕೇಜ್ರಿವಾಲ್ ವಿಚಾರಣೆಗೆ ಸಹಕರಿಸಲಿಲ್ಲ, ವಿಚಾರಣೆಯಿಂದ ತಪ್ಪಿಸಿಕೊಳ್ಳುವ ಪ್ರಯತ್ನ ಮಾಡಿದರು ಈ ಕಾರಣಕ್ಕೆ ಅವರನ್ನು ಬಂಧಿಸುವ ಅನಿವಾರ್ಯತೆ ಸೃಷ್ಟಿಯಾಯಿತು ಎಂದು ಹೇಳಿದೆ. ಅಕ್ರಮ ಹಣ ವರ್ಗಾವಣೆಯ ಅಪರಾಧದಲ್ಲಿ ತಪ್ಪಿತಸ್ಥನೆಂದು ಸಾಬೀತುಪಡಿಸಲು ಜಾರಿನಿರ್ದೇಶನಾಲಯದ ಬಳಿ ಸಾಕ್ಷ್ಯಗಳಿದೆ.

# ಪ್ರಧಾನಿ ಮೋದಿ ಸಂವಿಧಾನ ಬದಲಿಸುವುದಿಲ್ಲ

**ಮುಂಬೈ:** ಸಂವಿಧಾನದ ಬಗ್ಗೆ ನಿರೂಪಣೆಗೆ ಬಂದಾಗ ವ್ಯಕ್ತಿಯ ಅಭಿಪ್ರಾಯ ಮುಖ್ಯವಲ್ಲ ಮತ್ತು ಶಾಸನ ಪುಸ್ತಕವನ್ನು ಬದಲಾಯಿಸುವುದಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಸ್ಪಷ್ಟವಾಗಿ ಹೇಳಿದ್ದಾರೆ ಎಂದು ಬಿಜೆಪಿ ರಾಜ್ಯಸಭಾ ಸದಸ್ಯ ಅಶೋಕ್ ಚವಾಣ್ ಹೇಳಿದ್ದಾರೆ.



ಸಂವಿಧಾನವನ್ನು ಬದಲಾಯಿಸುವ ಬಗ್ಗೆ ಮಾತನಾಡಿದ ಪಕ್ಷದ ಸಹೋದ್ಯೋಗಿ ಮತ್ತು ಹಾಲಿ ಸಂಸದರಿಗೆ ಕರ್ನಾಟಕದಲ್ಲಿ ತಮ್ಮ ಸ್ಥಾನದಿಂದ ಮರು ನಾಮನಿರ್ದೇಶನವನ್ನು ನಿರಾಕರಿಸಲಾಗಿದೆ ಎಂದು ಮಹಾರಾಷ್ಟ್ರದ ಮಾಜಿ ಮುಖ್ಯಮಂತ್ರಿ ತಿಳಿಸಿದ್ದಾರೆ. ನನ್ನ ಪಕ್ಷದ ಉನ್ನತ ನಾಯಕರು (ಪಿಎಂ) ಅದರ ಬಗ್ಗೆ (ಸಂವಿಧಾನ) ಏನು ಹೇಳುತ್ತಾರೆ ಎಂಬುದು ನಮಗೆ ಮುಖ್ಯವಾಗಿದೆ (ಈ ವಿಷಯದ ಬಗ್ಗೆ ವ್ಯಕ್ತಿಯ ಕಾಮೆಂಟ್‌ಗಳಿಗಿಂತ) ಎಂದು ಅವರು ಪ್ರತಿಪಾದಿಸಿದರು. ಫೆಬ್ರವರಿಯಲ್ಲಿ ಕಾಂಗ್ರೆಸ್ ತೊರೆದು ಬಿಜೆಪಿ ಸೇರಿದ ಚವಾಣ್ ಅವರು ತಮ್ಮ ತವರು ಜಿಲ್ಲೆ ನಾಂದೇಡ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಿದ್ದರು, ಅಲ್ಲಿ ನಾಳೆ ಮಹಾರಾಷ್ಟ್ರದ ಇತರ ಏಳು ಲೋಕಸಭಾ ಕ್ಷೇತ್ರಗಳೊಂದಿಗೆ ಮತದಾನ ನಡೆಯಲಿದೆ.

ದೇಶದ ಸಂವಿಧಾನ ಬದಲಾವಣೆ ತರುವುದಾಗಿ ಮಾತನಾಡಿದವರಿಗೆ ಲೋಕಸಭೆ ಚುನಾವಣೆಗೆ ಸ್ಪರ್ಧಿಸಲು ಬಿಜೆಪಿಯಿಂದ ಟಿಕೆಟ್ ಸಿಕ್ಕಿಲ್ಲ, ಕರ್ನಾಟಕದಲ್ಲಿ ನಡೆದಿದೆ ಎಂದು ನನಗನ್ನಿಸುತ್ತದೆ. ವ್ಯಕ್ತಿಯ ಅಭಿಪ್ರಾಯ ಮುಖ್ಯವಲ್ಲ. ನನ್ನ ಪಕ್ಷದ ವರಿಷ್ಠರು ಏನು ಹೇಳುತ್ತಾರೆ? ಇದು ನಮಗೆ ಹೆಚ್ಚು ಮುಖ್ಯವಾಗಿದೆ ಎಂದು ಅವರು ಹೇಳಿದರು. ಬಿಜೆಪಿಯ ಉತ್ತರ ಕನ್ನಡ ಲೋಕಸಭಾ ಸದಸ್ಯ ಅನಂತಕುಮಾರ್ ಹೆಗಡೆ ಸಂವಿಧಾನದ ಬಗ್ಗೆ ವಿವಾದಾತ್ಮಕ ಹೇಳಿಕೆಗಳನ್ನು ಚವಾಣ್ ಉಲ್ಲೇಖಿಸಿದ್ದಾರೆ.ನಮ್ಮ ಪಕ್ಷದ ಉನ್ನತ ನಾಯಕ ಮತ್ತು ಪ್ರಧಾನಿ ಮೋದಿ ಅವರು ಸಂವಿಧಾನದಲ್ಲಿ ಯಾವುದೇ ಬದಲಾವಣೆಗಳಿಲ್ಲ ಎಂದು ಸ್ಪಷ್ಟವಾಗಿ ತಿಳಿಸಿದ್ದಾರೆ. ಪ್ರಧಾನಿಯವರ ಹೇಳಿಕೆ ನಮಗೆ ನೀತಿ ವಿಷಯವಾಗಿದೆ ಎಂದು ಚವಾಣ್ ಒತ್ತಿ ಹೇಳಿದರು.

# 95 ಶತಕೋಟಿ ಡಾಲರ್ ನೆರವಿಗೆ ಸಂಸತ್ ಅನುಮೋದನೆ



**ವಾಷಿಂಗ್ಟನ್:** ಉಕ್ರೇನ್, ಇಸ್ರೇಲ್ ಮತ್ತು ತೈವಾನ್‌ಗೆ 95 ಶತಕೋಟಿ ಡಾಲರ್ ಯುದ್ಧನೆರವು ಒದಗಿಸುವ ಮಸೂದೆಗೆ ಅಮೆರಿಕದ ಸಂಸತ್ 79-18 ಮತಗಳಿಂದ ಅನುಮೋದನೆ ನೀಡಿದೆ. ವಿದೇಶದಲ್ಲಿ ನಡೆಯುವ ಯುದ್ಧಗಳಲ್ಲಿ ಅಮೆರಿಕ ಹೇಗೆ ತೊಡಗಿಸಿಕೊಳ್ಳಬೇಕು ಎಂಬ ಬಗ್ಗೆ ಹಲವು ತಿಂಗಳಿಂದ ಮುಂದುವರಿದ ಚರ್ಚೆಯ ಬಳಿಕ ಅಂತಿಮವಾಗಿ ಮಸೂದೆಯನ್ನು ಅಂಗೀಕರಿಸಿ ಸಹಿಗಾಗಿ ಅಧ್ಯಕ್ಷ ಜೋ ಬೈಡೆನ್ ಕಚೇರಿಗೆ ಕಳುಹಿಸಲಾಗಿದೆ ಎಂದು ಮೂಲಗಳು ಹೇಳಿವೆ. ಮಂಗಳವಾರ ಹೌಸ್ ಆಫ್ ರಿಪ್ರೆಸೆಂಟೆಟಿವ್ಸ್ (ಪ್ರತಿನಿಧಿಗಳ ಸಭೆ) ಈ ಮಸೂದೆಯನ್ನು 79 - 18 ಮತಗಳಿಂದ ಅಂಗೀಕರಿಸಿದೆ. ಮಸೂದೆಗೆ ಅಧ್ಯಕ್ಷ ಜೋ ಬೈಡೆನ್ ಸಹಿಗಾಗಿ ಶ್ವೇತಭವನಕ್ಕೆ ಕಳುಹಿಸಲಾಗುತ್ತದೆ.

# ಅಮೇಥಿಯಿಂದ ರಾಹುಲ್ ಗಾಂಧಿ ಸ್ಪರ್ಧೆ?



**ನವದೆಹಲಿ:** ಕಾಂಗ್ರೆಸ್ ನಾಯಕರಾದ ಪ್ರಿಯಾಂಕಾ ಗಾಂಧಿ ವಾದ್ರಾ ಮತ್ತು ರಾಹುಲ್ ಗಾಂಧಿ ಅವರು ಕ್ರಮವಾಗಿ ರಾಯ್ ಬರೇಲಿ ಮತ್ತು ಅಮೇಥಿಕ್ಷೇತ್ರಗಳಿಂದ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸಲಿದ್ದಾರೆ. ಮೂಲಗಳ ಪ್ರಕಾರ ಏಪ್ರಿಲ್ 26ರ ನಂತರ ಈ ಕುರಿತು ಅಂತಿಮ ನಿರ್ಧಾರ ತೆಗೆದುಕೊಳ್ಳಲಾಗುವುದು ಮತ್ತು ನಾಳೆ 2ನೇ ಹಂತದ ಚುನಾವಣೆ ಮುಗಿದ ನಂತರ ಮುಂದಿನ ವಾರ ನಾಮಪತ್ರ ಸಲ್ಲಿಸಬಹುದು ಎನ್ನಲಾಗಿದೆ.

ಎರಡನೇ ಹಂತದಲ್ಲಿ ರಾಹುಲ್ ಗಾಂಧಿ ಸ್ಪರ್ಧಿಸುತ್ತಿರುವ ವಯನಾಡಿನಲ್ಲಿ ಚುನಾವಣೆ ನಡೆಯುತ್ತಿದೆ.ಇನ್ನು ಅಮೇಥಿಯಲ್ಲಿ 2019ರ ಲೋಕಸಭೆ ಚುನಾವಣೆಯಲ್ಲಿ ಕೇಂದ್ರ ಸಚಿವೆ ಸ್ಮೃತಿ ಇರಾನಿ ವಿರುದ್ಧ ಸೋಲು ಅನುಭವಿಸಿದ್ದ ಕಾಂಗ್ರೆಸ್ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ ಅವರು ಮತ್ತೆ ಇರಾನಿ ವಿರುದ್ಧ ಕಣಕ್ಕಿಳಿಯಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ಉತ್ತರ ಪ್ರದೇಶದಲ್ಲಿ ಸಮಾಜವಾದಿ ಪಕ್ಷ ಮತ್ತು ಕಾಂಗ್ರೆಸ್ ನಡುವಿನ ಸೀಟು ಒಪ್ಪಂದದ ಪ್ರಕಾರ, ಚುನಾವಣಾ ನಿರ್ಣಾಯಕ ರಾಜ್ಯದಲ್ಲಿ ಕಾಂಗ್ರೆಸ್ 17 ಸ್ಥಾನಗಳಲ್ಲಿ ಮತ್ತು ಸಮಾಜವಾದಿ ಪಕ್ಷ ಉಳಿದ 63 ಸ್ಥಾನಗಳಲ್ಲಿ ಸ್ಪರ್ಧಿಸುತ್ತಿದೆ.

**ಚುನಾವಣಾ ರಾಜಕೀಯಕ್ಕೆ ಪದಾರ್ಪಣೆ**

ಸೋನಿಯಾ ಗಾಂಧಿ ಅವರು ಆರೋಗ್ಯ ಮತ್ತು ವಯಸ್ಸಿನ ಕಾರಣದಿಂದ ಈ ಬಾರಿ ಲೋಕಸಭೆ ಚುನಾವಣೆಗೆ ಸ್ಪರ್ಧಿಸುವುದಿಲ್ಲ ಎಂದು ಕಳೆದ ತಿಂಗಳು ಮತದಾರರಿಗೆ ತಿಳಿಸಿದ್ದಾರೆ. ಹೀಗಾಗಿ ಕಾಂಗ್ರೆಸ್ ಭದ್ರಕೋಟೆಯಾದ ರಾಯ್ ಬರೇಲಿಯಿಂದ ಪ್ರಿಯಾಂಕಾ ಗಾಂಧಿ ಅವರು ಚುನಾವಣಾ ರಾಜಕೀಯಕ್ಕೆ ಪದಾರ್ಪಣೆ ಮಾಡುವ ಸಾಧ್ಯತೆಯಿದೆ.

ಕಾಂಗ್ರೆಸ್ ತನ್ನ ಸಾಂಪ್ರದಾಯಿಕ ಭದ್ರಕೋಟೆಗಳಾದ ರಾಯ್ ಬರೇಲಿ ಮತ್ತು ಅಮೇಥಿಯ ಹೊರತಾಗಿ ವಾರಣಾಸಿ, ಘಾಜಿಯಾಬಾದ್ ಮತ್ತು ಕಾನ್ಪುರದಲ್ಲೂ ಸ್ಪರ್ಧಿಸುತ್ತಿದೆ. ಅಮೇಥಿ ಮತ್ತು ರಾಯ್ ಬರೇಲಿ ಲೋಕಸಭಾ ಕ್ಷೇತ್ರಗಳಿಗೆ ಮೇ 20 ರಂದು ಐದನೇ ಹಂತದಲ್ಲಿ ಮತದಾನ ನಡೆಯಲಿದೆ.

ರಾಯ್ ಬರೇಲಿ 1960 ರಿಂದ ಕಾಂಗ್ರೆಸ್ ಭದ್ರಕೋಟೆಯಾಗಿದ್ದು, ಫಿರೋಜ್ ಗಾಂಧಿ ಮತ್ತು ಇಂದಿರಾ ಗಾಂಧಿ ಇಬ್ಬರೂ ಈ ಕ್ಷೇತ್ರವನ್ನು ಪ್ರತಿನಿಧಿಸಿದ್ದರು. ನಂತರ 2006 ರಿಂದ ಕಾಂಗ್ರೆಸ್ ಮಾಜಿ ಅಧ್ಯಕ್ಷೆ ಸೋನಿಯಾ ಗಾಂಧಿ ಅವರು ಈ ಕ್ಷೇತ್ರದ ಸಂಸದರಾಗಿದ್ದಾರೆ. ಸೋನಿಯಾ ಗಾಂಧಿ ಅವರು ಇತ್ತೀಚಿಗೆ ರಾಜ್ಯಸಭೆಗೆ ಆಯ್ಕೆಯಾದ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಯಾಗಿರುವ ಪ್ರಿಯಾಂಕಾ ಗಾಂಧಿ ಅವರನ್ನು ತಮ್ಮ ತಾಯಿ ಕ್ಷೇತ್ರದಿಂದ ಕಣಕ್ಕಿಳಿಸುವ ಸಾಧ್ಯತೆ ಇದೆ.

# ಪಿತ್ರಾರ್ಜಿತ ಕಾನೂನು ರದ್ದುಗೊಳಿಸಿದ ರಾಜೀವ್ ಗಾಂಧಿ: ಮೋದಿ

## ಆಸ್ತಿ ಉಳಿಸಿಕೊಳ್ಳುವ ಸಲುವಾಗಿ ದಿವಂಗತ ರಾಜೀವ್ ಗಾಂಧಿ ಅವರು ಪಿತ್ರಾರ್ಜಿತ ಕಾನೂನು ರದ್ದು ಮಾಡಿದರು

**ಮೊರೆನಾ:** ಇಂದಿರಾ ಗಾಂಧಿ ಅವರ ಹತ್ಯೆ ಬಳಿಕ ಅವರಿಗೆ ಏರಿದ ಆಸ್ತಿಗಳು ಹಾಗೂ ಕುಟುಂಬದ ಸ್ವತ್ತು ಸರ್ಕಾರದ ವಶ ಆಗುತ್ತಿತ್ತು. ಇದನ್ನು ತಪ್ಪಿಸಿ ಆಸ್ತಿ ಉಳಿಸಿಕೊಳ್ಳುವ ಸಲುವಾಗಿ ಮಾಜಿ ಪ್ರಧಾನಿ ದಿವಂಗತ ರಾಜೀವ್ ಗಾಂಧಿ ಅವರು ಪಿತ್ರಾರ್ಜಿತ ಕಾನೂನು ರದ್ದು ಮಾಡಿದರು ಎಂದು ಪ್ರಧಾನಿ ಮೋದಿ ಆರೋಪಿಸಿದ್ದಾರೆ.

ಮಧ್ಯ ಪ್ರದೇಶ ರಾಜ್ಯದ ಮೊರೆನಾದಲ್ಲಿ ಚುನಾವಣಾ ಸಮಾವೇಶ ನಡೆಸಿದ ಪ್ರಧಾನಿ ಮೋದಿ, ಪಿತ್ರಾರ್ಜಿತ ಕಾನೂನು ಕುರಿತಾದ ಸತ್ಯಾಂಶಗಳು ನಿಜಕ್ಕೂ ಸತ್ಯ ದರ್ಶನ ಮಾಡಿಸುತ್ತವೆ. ಏಕೆಂದರೆ ಇಂದಿರಾ ಗಾಂಧಿ ಅವರು ಹತ್ಯೆಗೀಡಾದಾಗ ಅವರ ಮಕ್ಕಳಿಗೆ ಆಸ್ತಿ ಸೇರಬೇಕಿತ್ತು. ಆದರೆ, ಈ ಹಿಂದೆ ಪಿತ್ರಾರ್ಜಿತ ಆಸ್ತಿಗೆ ಸಂಬಂಧಿಸಿದಂತೆ ಕಾನೂನುಗಳು ಇದ್ದವು. ಮಕ್ಕಳ ಹೆಸರಿಗೆ ವರ್ಗಾಯಿಸುವಾಗ ಕೆಲವು ಭಾಗ ಸರ್ಕಾರದ ಪಾಲಾಗುತ್ತಿತ್ತು. ಹೀಗಾಗಿ ಕಾಂಗ್ರೆಸ್ ಪಕ್ಷ ಕಾನೂನು ರಚಿಸಿತು. ತಮ್ಮ ಆಸ್ತಿ ಸರ್ಕಾರದ ಪಾಲಾಗಬಾರದು, ತಾವೇ ಉಳಿಸಿಕೊಳ್ಳಬೇಕು ಅಂತಾ ಕಾನೂನು ರಚನೆ ಮಾಡಿತು. ಪಿತ್ರಾರ್ಜಿತ ಆಸ್ತಿಗೆ ಸಂಬಂಧಿಸಿದ ಕಾನೂನನ್ನೇ ರಾಜೀವ್ ಗಾಂಧಿ ರದ್ದು ಮಾಡಿದರು. ಇದಾದ ಬಳಿಕ 4 ತಲೆಮಾರುಗಳ ಕಾಲ ತಮ್ಮ ಆಸ್ತಿಯನ್ನು ಅನುಭವಿಸಿಕೊಂಡು ಬಂದಿರುವ ಕಾಂಗ್ರೆಸ್, ಇದೀಗ ನಿಮ್ಮ ಆಸ್ತಿಯನ್ನು ಕಿತ್ತುಕೊಳ್ಳಲು ಹೊರಟಿದೆ ಎಂದು ಪ್ರಧಾನಿ ಮೋದಿ ಆಪಾದಿಸಿದ್ದಾರೆ.



- ಈ ಹಿಂದೆ ಪಿತ್ರಾರ್ಜಿತ ಆಸ್ತಿಗೆ ಸಂಬಂಧಿಸಿದಂತೆ ಕಾನೂನುಗಳು ಇದ್ದವು
- ಮಕ್ಕಳ ಹೆಸರಿಗೆ ವರ್ಗಾಯಿಸುವಾಗ ಕೆಲವು ಭಾಗ ಸರ್ಕಾರದ ಪಾಲಾಗುತ್ತಿತ್ತು
- ಆಗ ಪಿತ್ರಾರ್ಜಿತ ಆಸ್ತಿಗೆ ಸಂಬಂಧಿಸಿದ ಕಾನೂನನ್ನೇ ರಾಜೀವ್ ಗಾಂಧಿ ರದ್ದು ಮಾಡಿದರು: ಪ್ರಧಾನಿ ಮೋದಿ

ಇದೇ ವೇಳೆ ಕರ್ನಾಟಕ ಸರ್ಕಾರ ಮುಸ್ಲಿಂ ಸಮುದಾಯವನ್ನು ಒಬಿಸಿ ಕೆಟಗರಿಯಡಿ ಸೇರ್ಪಡೆ ಮಾಡಲು ತೀರ್ಮಾನಿಸಿದೆ ಎಂದು ಆಪಾದಿಸಿರುವ ಪ್ರಧಾನಿ ಮೋದಿ, ಕಾಂಗ್ರೆಸ್ ಪಕ್ಷವು ಕೇಂದ್ರದಲ್ಲಿ ಅಧಿಕಾರಕ್ಕೆ ಬಂದರೆ ದೇಶಾದ್ಯಂತ ಇದೇ ಮಾದರಿ ಅನುಸರಿಸಲಿದೆ ಎಂದು ಕಿಡಿ ಕಾರಿದರು. ಕಾಂಗ್ರೆಸ್ ಪಕ್ಷವು ಕರ್ನಾಟಕದಲ್ಲಿ ಇರುವ ಮುಸ್ಲಿಂ ಸಮುದಾಯದ ಜನರನ್ನು ಒಬಿಸಿ ವರ್ಗದಲ್ಲಿ ಸೇರ್ಪಡೆ ಮಾಡುತ್ತಿದೆ. ಕಾಂಗ್ರೆಸ್ ಪಕ್ಷ ಈಗಾಗಲೇ ಒಬಿಸಿ ವರ್ಗದ ಅಡಿ ಹಲವು ಹೊಸ ಸಮುದಾಯಗಳನ್ನು ಸೇರ್ಪಡೆ ಮಾಡಿದೆ. ಈ ಸಮುದಾಯದವರಿಗೆ ಶಿಕ್ಷಣ ಹಾಗೂ ಸರ್ಕಾರಿ ಉದ್ಯೋಗದಲ್ಲಿ ಮೀಸಲು ನೀಡಲು ಈ ಕ್ರಮ ವಹಿಸಿದ್ದ ಕಾಂಗ್ರೆಸ್, ಇದೀಗ ರಹಸ್ಯವಾಗಿ ಅವರಿಂದ ಸೌಲಭ್ಯ ಕಿತ್ತುಕೊಳ್ಳಲು ಮುಂದಾಗಿದೆ ಎಂದು ಪ್ರಧಾನಿ ಮೋದಿ ಆಪಾದಿಸಿದ್ದಾರೆ. 2011ರಲ್ಲಿ ಕೇಂದ್ರದಲ್ಲಿ ಅಧಿಕಾರದಲ್ಲಿ ಇದ್ದ ಕಾಂಗ್ರೆಸ್ ಒಬಿಸಿ ಮೀಸಲಾತಿಯನ್ನು ಧರ್ಮದ ಆಧಾರದ ಮೇಲೆ ನೀಡುವುದು ಬೇಡ ಎಂದು ತೀರ್ಮಾನವಾಗಿತ್ತು ಎಂದೂ ಪ್ರಧಾನಿ ಮೋದಿ ಹೇಳಿದರು. 2011ರ ಡಿಸೆಂಬರ್ 19 ರಂದು ಕೇಂದ್ರ ಸಂಪುಟ ಸಭೆಯಲ್ಲಿ ಒಬಿಸಿ ಸಮುದಾಯಕ್ಕೆ ಹಾಲಿ ಇರುವ ಶೇ. 27 ರಷ್ಟು ಮೀಸಲಾತಿ ಪೈಕಿ ಕೆಲವು ನಿರ್ದಿಷ್ಟ ಸಮುದಾಯಕ್ಕೆ ಸೌಲಭ್ಯ ನೀಡಬೇಕು ಎಂದು ತೀರ್ಮಾನ ಮಾಡಲಾಗಿತ್ತು. ನಂತರ ಆಂಧ್ರ ಪ್ರದೇಶ ಹೈಕೋರ್ಟ್ ಕಾಂಗ್ರೆಸ್ ಪಕ್ಷದ ಈ ತೀರ್ಮಾನಕ್ಕೆ ತಡೆ ನೀಡಿತು. ಇಷ್ಟಾದರೂ ಕೂಡಾ ಕಾಂಗ್ರೆಸ್ ತನ್ನ ಪ್ರಣಾಳಿಕೆಯಲ್ಲಿ ಈ ವಿಚಾರ ಪ್ರಸ್ತಾಪಿಸಿತು. ಒಬಿಸಿ ಮೀಸಲಾತಿ ಅಡಿ ಧಾರ್ಮಿಕ ಅಲ್ಪಸಂಖ್ಯಾತರಿಗೂ ಮೀಸಲಾತಿ ಕೊಡೋದಾಗಿ ಹೇಳಿತು ಎಂದು ಪ್ರಧಾನಿ ಮೋದಿ ವಿವರಿಸಿದರು.

**ಕರ್ನಾಟಕ ಸರ್ಕಾರದ ವಿರುದ್ಧ ಎನ್‌ಸಿಬಿಸಿ ಕಿಡಿ**

ಬುಧವಾರವಷ್ಟೇ ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗವು ಕರ್ನಾಟಕ ಸರ್ಕಾರದ ತೀರ್ಮಾನವನ್ನು ಟೀಕಿಸಿತ್ತು. ಮುಸ್ಲಿಂ ಸಮುದಾಯವನ್ನು ಒಬಿಸಿ ವರ್ಗದ ಅಡಿ ತರುವ ಮೂಲಕ ಒಬಿಸಿ ಸಮುದಾಯಕ್ಕೆ ಸರ್ಕಾರ ಅನ್ಯಾಯ ಮಾಡುತ್ತಿದೆ ಎಂದು ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗ ಕಿಡಿ ಕಾರಿತ್ತು. ಕರ್ನಾಟಕ ರಾಜ್ಯದಲ್ಲಿ ಒಬಿಸಿ ಸಮುದಾಯಕ್ಕೆ ಮೀಸಲಾತಿ ನಿಡಿರುವ ಎರಡು ಪ್ರವರ್ಗಗಳ ಅಡಿ ಮುಸ್ಲಿಂ ಸಮುದಾಯದ 36 ಜಾತಿಗಳು ಮೀಸಲಾತಿ ಪಡೆಯುತ್ತಿವೆ. ಇಷ್ಟಾದರೂ ಮುಸ್ಲಿಮರಿಗೆ ಪ್ರತ್ಯೇಕವಾಗಿ ಶೇ. 4ರಷ್ಟು ಮೀಸಲಾತಿ ನೀಡಲಾಗಿದ ಎಂದು ಹೇಳಿತ್ತು. ಒಂದೆಡೆ ಒಬಿಸಿ ಮೀಸಲಾತಿಯ ಕೆಟಗರಿಗಳ ಅಡಿ ಶೇ. 4 ರಷ್ಟು ಮೀಸಲಾತಿ ಮುಸ್ಲಿಮರಿಗೆ ಸಿಗುತ್ತಿದೆ. ಇನ್ನೊಂದೆಡೆ ಕೆಟಗರಿ 1 ಹಾಗೂ ಕೆಟಗರಿ 11 ಅಡಿಯಲ್ಲೂ ಮೀಸಲಾತಿ ನೀಡಲಾಗುತ್ತಿದೆ. ಜೊತೆಯಲ್ಲೆ ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಒಬಿಸಿ ಸಮುದಾಯಕ್ಕೆ ಮೀಸಲಾಗಿರುವ ಶೇ. 32 ರಷ್ಟು ಸ್ಥಾನಗಳಲ್ಲೂ ಮುಸ್ಲಿಮರಿಗೆ ಮೀಸಲಾತಿ ಸಿಗುತ್ತಿದೆ ಎಂದು ಎನ್‌ಸಿಬಿಸಿ ತನ್ನ ಪ್ರಕಟಣೆಯಲ್ಲಿ ತಿಳಿಸಿದೆ. ಯಾವ ಆಧಾರದ ಮೇಲೆ ನೀವು ಹೀಗೆ ಮೀಸಲಾತಿ ನೀಡಿದ್ದೀರಿ ಎಂದು ನಾವು ಈಗಾಗಲೇ ಕರ್ನಾಟಕ ರಾಜ್ಯ ಸರ್ಕಾರವನ್ನು ಪ್ರಶ್ನೆ ಮಾಡಿದ್ದೇವೆ. ಆದರೆ, ಕರ್ನಾಟಕ ರಾಜ್ಯ ಸರ್ಕಾರ ಈ ಕುರಿತಾಗಿ ಈವರೆಗೂ ಯಾವುದೇ ಪ್ರತಿಕ್ರಿಯೆ ನೀಡಿಲ್ಲ ಎಂದು ಎನ್‌ಸಿಬಿಸಿ ತಿಳಿಸಿದೆ.

# ಮಿನಿ ನ್ಯೂಸ್

## ಇಬ್ಬರು ಮಾವೋವಾದಿಗಳ ಹತ್ಯೆ



**ಭುವನೇಶ್ವರ:** ಒಡಿಶಾದ ಬೌಧ್ ಜಿಲ್ಲಾಯಲ್ಲಿ ಕೆಂಪು ಬಂಡುಕೋರರು ಮತ್ತು ಭದ್ರತಾ ಪಡೆಗಳ ನಡುವೆ ಇಂದು ಮುಂಜಾನೆ ನಡೆದ ಗುಂಡಿನ ಕಾಳಗದಲ್ಲಿ ಕನಿಷ್ಠ ಇಬ್ಬರು ಮಾವೋವಾದಿಗಳು ಹತರಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಮಾವೋವಾದಿಗಳು ಮತ್ತು ಒಡಿಶಾದ ಗಣ್ಯ ವಿಶೇಷ ಕಾರ್ಯಾಚರಣೆ ಗುಂಪಿನ (ಎಸ್‌ಒಜಿ) ಸಿಬ್ಬಂದಿ ನಡುವೆ ಕಾಂಟಮಾಲ್ ಪೊಲೀಸ್ ಠಾಣೆ ವ್ಯಾಪ್ತಿಯ ಪರ್ಹೆಲ್ ಮೀಸಲು ಅರಣ್ಯದಲ್ಲಿ ಗುಂಡಿನ ಚಕಮಕಿ ನಡೆದಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಕಾರ್ಯಾಚರಣೆ ಸ್ಥಳದಿಂದ ಮಾವೋವಾದಿಗಳ ಎರಡು ಶವಗಳು, ಶಸಾಸಗಳು, ಗ್ರೆನೇಡ್‌ಗಳು ಮತ್ತು ಇತರ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅವರು ಹೇಳಿದರು.

## ತೆಲಂಗಾಣದಲ್ಲಿ ಭೀಕರ ರಸ್ತೆ ಅಪಘಾತ, ಆರು ಮಂದಿ ಸಾವು

**ಸೂರ್ಯಪೇಟ್:** ನಿಂತಿದ್ದ ಟ್ರಕ್‌ಗೆ ಹಿಂದಿನಿಂದ ಕಾರು ಡಿಕ್ಕಿ ಹೊಡೆದ ಪರಿಣಾಮ ಹೆಣ್ಣು ಮಗು ಸೇರಿದಂತೆ ಆರು ಮಂದಿ ಸಾವನ್ನಪ್ಪಿರುವ ಘಟನೆ ಜಿಲ್ಲೆಯ ಕೊಡಾದ ಪಟ್ಟಣದ ಬಳಿ ಅಪಘಾತ ಸಂಭವಿಸಿದೆ.

ಹೈದರಾಬಾದ್‌ನಿಂದ ಸುಮಾರು 180 ಕಿಮೀ ದೂರದಲ್ಲಿರುವ ಈ ಪಟ್ಟಣ ಸಮೀಪ ಇಂದು ಮುಂಜಾನೆ ಈ ದುರ್ಘಟನೆ ಸಂಭವಿಸಿದೆ. ಹೈದರಾಬಾದ್-ವಿಜಯವಾಡ ಹೆದ್ದಾರಿಯಲ್ಲಿ ದುರಸ್ತಿ ನಡೆಯುತ್ತಿದ್ದು ಬೇಜವಾಬ್ದಾರಿಯಾಗಿ ರಸ್ತೆಬದಿಯಲ್ಲಿ ಟ್ರಕ್ ನಿಲ್ಲಿಸಲಾಗಿತ್ತು ಎಂದು ಡಿಎಸ್‌ಪಿ ಶ್ರೀಧರ್ ರೆಡ್ಡಿ ತಿಳಿಸಿದ್ದಾರೆ.

ಕಾರಿನಲ್ಲಿ ಒಟ್ಟು 10 ಮಂದಿ ಇದ್ದರು 6 ಮಂದಿ ಸ್ಥಳದಲ್ಲೇ ಸಾವನ್ನಪ್ಪಿದ್ದು ನಾಲ್ವರು ಗಾಯಗೊಂಡಿದ್ದು ಅವರನ್ನು ಸರ್ಕಾರಿ ಆಸ್ಪತ್ರೆಗೆ ದಾಖಲು ಮಾಡಲಾಗಿದೆ ಕಾರಿನಲ್ಲಿದ್ದವರು ಹೈದರಾಬಾದ್‌ನಿಂದ ವಿಜಯವಾಡಕ್ಕೆ ತೆರಳುತ್ತಿದ್ದರು ಎಂದು ತಿಳಿದುಬಂದಿದ್ದು ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗಿದೆ.

## ಐಸ್ ಕ್ರೀಮ್ ಮಾರಾಟಗಾರನ ಹತ್ಯೆ

**ನವದೆಹಲಿ:** ಕಳೆದ ರಾತ್ರಿ ಇಲ್ಲಿನ ಇಂಡಿಯಾ ಗೇಟ್ ಬಳಿ ಐಸ್ ಕ್ರೀಮ್ ಮಾರಾಟಗಾರರೊಬ್ಬರನ್ನು ಚಾಕುವಿನಿಂದ ಇರಿದು ಹತ್ಯೆ ಮಾಡಲಾಗಿದೆ ಕೊಲೆಯಾದವನನ್ನು ಪ್ರಭಾಕರ್ (25) ಎಂದು ಗುರುತಿಸಲಾದೆ. ಉತ್ತರ ಪ್ರದೇಶದ ಇಟಾವಾ ಮೂಲದವನು ಎಂದು ಪೊಲೀಸರು ತಿಳಿಸಿದ್ದಾರೆ. ಘಟನೆಯು ಹಿಂದೆ ವೈಯಕ್ತಿಕ ದ್ವೇಷ ಇರಬಹುದೆಂದು ಎಂದು ಪೊಲೀಸರು ಶಂಕಿಸಿದ್ದು ಆರೋಪಿಯೊಬ್ಬನನ್ನು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪೊಲೀಸರ ಪ್ರಕಾರ, ಐಸ್ ಕ್ರೀಮ್ ಮಾರಾಟಗಾರನು ತನ್ನ ಟ್ರಾಲಿ ಬಳಿ ನಿಂತಿದ್ದಾಗ ವ್ಯಕ್ತಿಯೊಬ್ಬ ಏಕಾಏಕಿ ಆತನ ಮೇಲೆ ಹಲ್ಲೆನಡೆಸಿ ಚಾಕುವಿನಿಂದ ಇರಿದಿದ್ದಾನೆ ನಂತರ ಕುಸಿದುಬಿದ್ದ ನಂತರ ಅಲ್ಲಿದ್ದವರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಸ್ಥಳದಲ್ಲೇ ಪ್ರಭಾಕರ್ ಮೃತಪಟ್ಟಿದ್ದು ಪ್ರಾಥಮಿಕ ತನಿಖೆಯಲ್ಲಿ ಒಬ್ಬನನ್ನು ಬಂಧಿಸಲಾಗಿದೆ ಮುಂದಿನ ತನಿಖೆ ನಡೆಯುತ್ತಿದೆ ಎಂದರು.

## ಆಕಸ್ಮಿಕ ಗುಂಡು ಹಾರಿ ಜಿಲ್ಲಾ ಮೀಸಲು ಪಡೆ ಕಾನ್‌ಸ್ಟೇಬಲ್ ಸಾವು

**ರಾಯ್‌ಪುರ:** ಛತ್ತೀಸ್‌ಗಢದ ದಾಂತೇವಾಡ ಜಿಲ್ಲೆಯಲ್ಲಿ ಆಕಸ್ಮಿಕವಾಗಿ ಬಂದೂಕು ಗುಂಡು ಹಾರಿ ಜಿಲ್ಲಾ ಮೀಸಲು ಪಡೆ (ಡಿಆರ್‌ಜಿ) ಕಾನ್ಸ್‌ಟೇಬಲ್ ಒಬ್ಬರು ಸಾವನ್ನಪ್ಪಿದ್ದಾರೆ ಮತ್ತು ಮತ್ತೊಬ್ಬ ಪೊಲೀಸ್ ಪೇದೆ ಗಾಯಗೊಂಡಿರುವ ಘಟನೆ ಕಳೆದ ರಾತ್ರಿ ನಡೆದಿದೆ.

ಸುಮಾರು ರಾತ್ರಿ 11 ಗಂಟೆ ಸುಮಾರಿಗೆ ಈ ಘಟನೆ ನಡೆದಿದ್ದು, ರಾಜ್ಯ ಪೊಲೀಸ್‌ನ ಎರಡೂ ಘಟಕಗಳಾದ ಡಿಆರ್‌ಜಿ ಮತ್ತು ಬಸ್ತಾರ್ ಫೈಟರ್ನ ಜಂಟಿ ತಂಡವು ಬಾರ್ಸೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಕ್ಸಲ್ ವಿರೋಧಿ ಕಾರ್ಯಾಚರಣೆಯಲ್ಲಿ ತೊಡಗಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ದಂತೇವಾಡ-ನಾರಾಯಣಪುರ ಜಿಲ್ಲೆಗಳ ಗಡಿಯಲ್ಲಿರುವ ಹಂದವಾಡ ಮತ್ತು ಹಿತವಾಡ ಗ್ರಾಮಗಳಲ್ಲಿ ಶಸ್ತ್ರಸಜ್ಜಿತ ನಕ್ಸಲೀಯರು ಇರುವ ಬಗ್ಗೆ ಮಾಹಿತಿ ಪಡೆದ ಭದ್ರತಾ ಸಿಬ್ಬಂದಿ ಕಾರ್ಯಾಚರಣೆಯನ್ನು ಪ್ರಾರಂಭಿಸಿದ್ದಾರೆ.

## ಹೋಟೆಲ್‌ನಲ್ಲಿ ಭೀಕರ ಅಗ್ನಿ ಅವಘಡ; ಆರು ಮಂದಿ ಸಾವು, 20 ಜನರ ರಕ್ಷಣೆ



**ಪಾಟ್ನಾ:** ರಾಜಧಾನಿ ಪಾಟ್ನಾದ ಹೋಟೆಲ್ ಒಂದರಲ್ಲಿ ಭೀಕರ ಅಗ್ನಿ ದುರಂತ ಸಂಭವಿಸಿದ್ದು, 6 ಜನರು ಸಾವನ್ನಪ್ಪಿದ್ದಾರೆ. ಪಾಟ್ನಾ ರೈಲ್ವೆ ನಿಲ್ದಾಣದ ಬಳಿ ಇರುವ ಹೋಟೆಲ್ ಒಂದರಲ್ಲಿ ಅಗ್ನಿ ಆಕಸ್ಮಿಕ ಸಂಭವಿಸಿ ಈ ದುರಂತ ಸಂಭವಿಸಿದೆ. ಪಾಟ್ನಾ ಜಂಕ್ಷನ್ ರೈಲ್ವೆ ನಿಲ್ದಾಣದ ಸಮೀಪದಲ್ಲಿರುವ ಹೋಟೆಲ್‌ನಲ್ಲಿ ಅಗ್ನಿ ಅಪಘಾತ ನಡೆದಿದೆ. ರಕ್ಷಣಾ ಕಾರ್ಯಾಚರಣೆ ಮುಂದುವರೆದಿದ್ದು, 20ಕ್ಕೂ ಹೆಚ್ಚು ಜನರನ್ನು ಸುರಕ್ಷಿತವಾಗಿ ಹೊರಗೆ ಕರೆತರಲಾಗಿದೆ. ಅಗ್ನಿ ಅವಘಡದಿಂದಾಗಿ ಕಟ್ಟಡದ ಮುಂಭಾಗದಲ್ಲಿರುವ ಸೇತುವೆ ಮೇಲೆ ಭಾರಿ ಟ್ರಾಫಿಕ್ ಜಾಮ್ ಉಂಟಾಗಿದ್ದು, ಸ್ಟೇಷನ್ ರಸ್ತೆಯೂ ಸಂಪೂರ್ಣ ಬಂದ್ ಆಗಿತ್ತು.

ಬೆಂಕಿ ಕಾಣಿಸಿಕೊಂಡ ಸುಮಾರು ಒಂದೂವರೆ ಗಂಟೆಗಳ ನಂತರ ಮೃತದೇಹಗಳನ್ನು ಹೊ ರತೆಗೆಯಲಾಯಿತು. ಪಾಲ್ ಹೋಟೆಲ್‌ನಲ್ಲಿ ಬೆಂಕಿ ಅವಘಡದಲ್ಲಿ ಆರು ಮಂದಿ ಸಾವನ್ನಪ್ಪಿದ್ದಾರೆ ಎಂದು ಪಾಟ್ನಾ ಎಸ್‌ಪಿ ರಾಜೀವ್ ಮಿಶ್ರಾ ಖಚಿತಪಡಿಸಿದ್ದಾರೆ. ಸತ್ತವರಲ್ಲಿ ಮೂವರು ಮಹಿಳೆಯರು ಮತ್ತು ಮೂವರು ಪುರುಷರು ಸೇರಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ. ಅಡುಗೆ ಕೋಣೆಯಲ್ಲಿ ಕಾಣಿಸಿಕೊಂಡ ಬೆಂಕಿ ನಾಲ್ಕು ಅಂತಸ್ತಿನ ಕಟ್ಟಡವನ್ನು ಆವರಿಸಿದೆ ಎಂದು ಸ್ಥಳೀಯರು ಹೇಳಿದ್ದಾರೆ. ಸಿಲಿಂಡರ್ ಸ್ಫೋಟದಿಂದ ಅವಘಡ ಸಂಭವಿಸಿದೆ ಎಂದು ಹೇಳಲಾಗುತ್ತಿದೆ.

# ಹೈದರಾಬಾದ್ ವಿರುದ್ಧ ಆರ್‌ಸಿಬಿಗೆ ಭರ್ಜರಿ ಜಯ

## ಕೊನೆಗೂ ಗೆಲುವಿನ ನಗೆಬೀರಿದ ಬೆಂಗಳೂರು

ಐಪಿಎಲ್‌ನ 41ನೇ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಸನ್‌ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿ ಆಗಿದ್ದವು. ಟಾಸ್ ಗೆದ್ದ ಆರ್‌ಸಿಬಿ ನಾಯಕ ಫಾಫ್ ಡುಪ್ಲೇಸಿಸ್ ಮೊದಲು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿತು. ರಜತ್ ಪಾಟಿದಾರ್ ಮತ್ತು ಕ್ಯಾಮರೂನ್ ಗ್ರೀನ್ ಅಬ್ಬರದ ಬ್ಯಾಟಿಂಗ್ ಮೂಲಕ ನಿಗದಿತ 20 ಓರವ್‌ಗೆ




### ಮುಗ್ಗರಿಸಿದ ಹೈದರಾಬಾದ್

ಆರ್‌ಸಿಬಿ ನೀಡಿದ ಬೃಹತ್ ಟಾರ್ಗೆಟ್ ಬೆನ್ನಟ್ಟಿದ ಹೈದರಾಬಾದ್ ತಂಡಕ್ಕೆ ಆರಂಭಿಕ ಆಘಾತ ಎದುರಾಯಿತು. ತಂಡದ ಪ್ರಮುಖ ಆಟಗಾರನಾದ ಟ್ರಾವಿಸ್ ಹೆಡ್ ಕೇವಲ 1 ರನ್ ಗಳಿಸಿ ಔಟ್ ಆದರೆ, ಅಭಿಷೇಕ್ ಶರ್ಮಾ 31 ರನ್, ಅಡೇನ್ ಮಾರ್ಕಮ್ 7 ರನ್, ನಿತೀಶ್ ಕುಮಾರ್ ರೆಡ್ಡಿ 13 ರನ್, ಹೆನ್ರಿಚ್ ಕ್ಲಾಸಿನ್ 7 ರನ್, ಅಬ್ದುಲ್ ಸಮೀದ್ 10 ರನ್, ಪ್ಯಾಟ್ ಕಮೀನ್ಸ್ 31 ರನ್, ಭುವನೇಶ್ವರ್ ಕುಮಾರ್ 13 ರನ್ ಗಳಿಸಿದರು. ಈ ಮೂಲಕ ಕಳೆದ ಕಲೆ ಪಂದ್ಯಗಳ ಅಬ್ಬರದ ಬ್ಯಾಟಿಂಗ್ ಇಂದು ಹೈದರಾಬಾದ್ ತವರು ಮೈದಾನದಲ್ಲಿಯೇ ಕಂಡುಬರದ ಕಾರಣ ಖಖಊ ತಂಡ ಆರ್‌ಸಿಬಿ ವಿರುದ್ಧ ಹೀನಾಯವಾಗಿ ಸೋಲನ್ನಪ್ಪಿತು. ಇನ್ನು, ಆರ್‌ಸಿಬಿ ಪರ ವಿಲ್ ಜ್ಯಾಕ್ಸ್ 1 ವಿಕೆಟ್, ಯಶ್ ದಯಾಳ್ 1 ವಿಕೆಟ್, ಸ್ವಪ್ನಿಲ್ ಸಿಂಗ್ 2 ವಿಕೆಟ್, ಕರ್ಣ ಶರ್ಮಾ 2 ವಿಕೆಟ್, ಕ್ಯಾಮರೂನ್ ಗ್ರೀನ್ 2 ವಿಕೆಟ್ ಪಡೆಯುವ ಮೂಲಕ ಭರ್ಜರಿಯಾಗಿ ಬೌಲರ್ಸ್ ಕಂಬ್ಯಾಕ್ ಮಾಡಿದರು.

### ಅಬ್ಬರಿಸಿದ ಪಾಟಿದಾರ್ - ಗ್ರೀನ್

ಹೈದರಾಬಾದ್‌ನ ರಾಜೀವ್ ಗಾಂಧೀ ಸ್ಟೇಡಿಯಂನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಸನ್‌ರೈಸರ್ಸ್ ಹೈದರಾಬಾದ್ ನಡುವೆ ಪಂದ್ಯ ನಡೆಯಿತು. ಈ ಪಂದ್ಯದಲ್ಲಿ ನಾಯಕ ಫಾಫ್ ಡು ಪ್ಲೆಸಿಸ್ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಲು ನಿರ್ಧರಿಸಿದರು. ಮೊದಲು ಬೌಲಿಂಗ್ ಮಾಡುವ ಸವಾಲು ಹೈದರಾಬಾದ್ ತಂಡಕ್ಕಿತ್ತು. ಆರ್‌ಸಿಬಿ ಪರ ಬ್ಯಾಟಿಂಗ್ ಮಾಡುತ್ತಿದ್ದು, ಫಾಫ್ ಡು ಪ್ಲೆಸಿಸ್ 25 ರನ್, ವಿರಾಟ್ ಕೊಹ್ಲಿ 51 ರನ್, ರಜತ್ ಪಾಟಿದಾರ್ 50 ರನ್, ಕ್ಯಾಮರೂನ್ ಗ್ರೀನ್ 37 ರನ್, ದಿನೇಶ್ ಕಾರ್ತಿಕ್ 11 ರನ್ ಮತ್ತು ಸ್ವಪ್ನೀಲ್ ಸಿಂಗ್ 12 ರನ್ ಗಳಿಸಿದರು. ವಿರಾಟ್ ಕೊಹ್ಲಿ 43 ಎಸೆತಗಳಲ್ಲಿ 52 ರನ್ ಗಳಿಸಿದರೆ, ಪಾಟಿದಾರ್ 20 ಎಸೆತಗಳಲ್ಲಿ 50 ರನ್ ಗಳಿಸಿದರು. ಹೈದರಾಬಾದ್ ಪರ ಬೌಲಿಂಗ್‌ನಲ್ಲಿ ಜಯದೇವ್ ಉನದ್ಕತ್ 3 ವಿಕೆಟ್ ಕಬಳಿಸಿದರೆ, ನಟರಾಜನ್ 2 ವಿಕೆಟ್ ಮತ್ತು ಪ್ಯಾಟ್ ಕಮಿನ್ಸ್ 2 ವಿಕೆಟ್ ಮತ್ತು ಮಾರ್ಕಂಡ್ 2 ವಿಕೆಟ್ ಪಡೆದರು. ಜಯದೇವ್ ಉನದ್ಕತ್ ಅವರು ಆರ್‌ಸಿಬಿ ಸ್ಕೋರ್ ತಡೆಯಲು ಬೌಲಿಂಗ್‌ನಲ್ಲಿ ಹೆಚ್ಚಿನ ಕೊಡುಗೆ ನೀಡಿದರು. ಆರ್‌ಸಿಬಿ 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 206 ರನ್ ಗಳಿಸಿತು.



ರಾಯಲ್ ಚಾಲೆಂಜರ್ಸ್ ಬೆಂಗಳೂರು 206 ರನ್ ಗಳಿಸಿ ಹೈದರಾಬಾದ್ ಗೆಲುವಿಗೆ 207 ರನ್ ಟಾರ್ಗೆಟ್ ನೀಡಿತು. ಈ ಮೊತ್ತ ಬೆನ್ನಟ್ಟಿದ ಸನ್‌ರೈಸರ್ಸ್ ಹೈದರಾಬಾದ್ ತಂಡವು ನಿಗದಿತ 20 ಓವರ್‌ಗೆ 8 ವಿಕೆಟ್ ನಷ್ಟಕ್ಕೆ 171 ರನ್ ಗಳಿಸುವ ಮೂಲಕ 35 ರನ್ ಗಳಿಂದ ಸೋಲನ್ನಪ್ಪಿತು.

# ಪಂಜಾಬ್‌ಗೆ ಮಸ್ಟ್ ವಿನ್ ಗೇಮ್ ಕೆಕೆಆರ್ ಎದುರಾಳಿ



ಕೋಲ್ಕತ್ತಾ: ಪ್ಲೇ ಆಫ್ ರೇಸ್‌ನಲ್ಲಿ ಉಳಿದುಕೊಳ್ಳಬೇಕಾದರೆ ಗೆಲ್ಲಲೇ ಬೇಕಾದ ಪಂದ್ಯದಲ್ಲಿ ಪಂಜಾಬ್ ಕಿಂಗ್‌ತಂಡ ಕೆಕೆಆರ್ ತಂಡದ ಸವಾಲು ಎದುರಿಸಲಿದೆ. ಇತ್ತಂಡಗಳ ಈ ಮುಖಾಮುಖಿ ಶುಕ್ರವಾರ ಐತಿಹಾಸಿಕ ಈಡನ್ ಗಾರ್ಡನ್ಸ್ ಸ್ಟೇಡಿಯಂನಲ್ಲಿ ಸಾಗಲಿದೆ.

ಈಗಾಗಲೇ ಆಡಿದ 8 ಪಂದ್ಯಗಳಲ್ಲಿ ಕೇವಲ 2 ಪಂದ್ಯಗಳನ್ನು ಗೆದ್ದು 4 ಅಂಕ ಗಳಿಸಿ ಅಂಕಪಟ್ಟಿಯಲ್ಲಿ 9ನೇ ಸ್ಥಾನದಲ್ಲಿರುವ ಪಂಜಾಬ್‌ಗೆ ಪ್ಲೇ ಆಫ್ ರೇಸ್ ಪ್ರವೇಶಿಸಬೇಕಾದರೆ ಇದು ಮಸ್ಟ್ ವಿನ್ ಗೇಮ್ ಸೋತರೆ ಟೂರ್ನಿಯಿಂದ ಹೊರಬೀಳುವುದು ಖಚಿತ. ಕೆಕೆಆರ್ 7 ಪಂದ್ಯಗಳಲ್ಲಿ 5 ಪಂದ್ಯ ಗೆದ್ದು 10 ಅಂಕದೊಂದಿಗೆ ದ್ವಿತೀಯ ಸ್ಥಾನದಲ್ಲಿದೆ. ಪಂದ್ಯ ಸೋತರೂ ಕೂಡ ಯಾವುದೇ ಹಿನ್ನಡೆಯಾಗದು. ಗೆದ್ದರೆ 12 ಅಂಕ ಗಳಿಸಿ ಪ್ಲೇ ಆಫ್ ಸನಿಹಕ್ಕೆ ಬಂದು ನಿಲ್ಲಲಿದೆ.ಪಂಜಾಬ್ ತಂಡದಲ್ಲಿ ಅಂತಾರಾಷ್ಟ್ರೀಯ ಪಂದ್ಯಗಳನ್ನಾಡಿದ ಸ್ಟಾರ್ ಆಟಗಾರರ ಪಡೆಯೇ ಇದ್ದರೂ ಅದೃಷ್ಟ ಮಾತ್ರ ಕೈ ಹಿಡಿಯುತ್ತಿಲ್ಲ. ಗೆಲ್ಲುವ ಹಂತದವರೆಗೆ ಬಂದರೂ ಕೂಡ ಗೆಲುವು ಒಲಿಯುತ್ತಿಲ್ಲ. ಈ ಬಾರಿ ಆಡಿದ ಎಲ್ಲಾ ಪಂದ್ಯಗಳಲ್ಲಿಯೂ ಪಂಜಾಬ್ ತಂಡದ್ದು ಇದೇ ಕಥೆ. ಹೀಗಾಗಿ ಪಂಜಾಬ್‌ಗೆ ಈ ಪಂದ್ಯದಲ್ಲಿ ಅದೃಷ್ಟ ಕೈ ಹಿಡಿದರೆ ಮಾತ್ರ ಗೆಲುವು ಸಾಧ್ಯ ಎನ್ನಲಡ್ಡಿಯಿಲ್ಲ. ಕೆಕೆಆರ್ ತಂಡಕ್ಕೆ ಇರುವ ದೊಡ್ಡ ಚಿಂತೆಯೆಂದರೆ 24 ಕೋಟಿ ಒಡೆಯ ಮಿಚೆಲ್ ಸ್ಟಾರ್ ಅವರು ಈ ಮೊತ್ತಕ್ಕೆ ತಕ್ಕ ಪ್ರದರ್ಶನ ನೀಡುತ್ತಿಲ್ಲ. ಪ್ರತಿ ಪಂದ್ಯದಲ್ಲಿಯೂ ದುಬಾರಿಯಾಗುತ್ತಿದ್ದಾರೆ. ಅನಾನುಭವಿ ಬ್ಯಾಟರ್‌ಗಳು ಕೂಡ ಇವರ ಎಸೆತಗಳಿಗೆ ಸಿಕ್ಸರ್, ಬೌಂಡರಿ ಬಾರಿಸುತ್ತಿದ್ದಾರೆ. ಇದಕ್ಕೆ ಉತ್ತಮ ನಿದರ್ಶನವೆಂದರೆ, ಕಳೆದ ಆರ್‌ಸಿಬಿ ವಿರುದ್ಧದ ಪಂದ್ಯ ಸ್ಪಿನ್ ಬೌಲರ್ ಕರ್ಣ್ ಶರ್ಮ ಅವರು ಸತತವಾಗಿ ಸಿಕ್ಸರ್ ಮತ್ತು ಬೌಂಡರಿ ಚಚ್ಚಿದ್ದರು. ಸ್ಟಾರ್ಕ್ ಬೌಲಿಂಗ್‌ಲಯಕ್ಕೆ ಮರಳಿದರೆ ತಂಡಕ್ಕೆ ಯಾವುದೇ ಚಿಂತೆಯಿಲ್ಲ. ಕೆಕೆಆರ್ ಬ್ಯಾಟಿಂಗ್ ವಿಭಾಗದಲ್ಲಿ ಯಾವುದೇ ಕೊರತೆಯಿಲ್ಲ. ಫಿಲ್ ಸಾಲ್ಟ್, ಸುನೀಲ್ ನರೈನ್, ರಿಂಕು ಸಿಂಗ್, ಆಯಂಡ್ರೆ ರೆಸಲ್, ನಾಯಕ ಶ್ರೇಯಸ್ ಅಯ್ಯರ್ ಮತ್ತು ಆಂಗ್ಕ್ರಿಶ್ ರಘುವಂಶಿ ಉತ್ತಮ ಬ್ಯಾಟಿಂಗ್ ಫಾರ್ಮ್‌ನಲ್ಲಿದ್ದಾರೆ. ಯಾವುದೇ ಹಂತದಲ್ಲಿಯೂ ಸಿಡಿದು ನಿಂತು ಪಂದ್ಯದಗತಿಯನ್ನೇ ಬದಲಿಸಬಲ್ಲ ಸಾಮರ್ಥ್ಯ ಇವರಲ್ಲಿದೆ. ಗಾಯದಿಂದ ಚೇತರಿಕೆ ಕಂಡು ತಂಡ ಸೇರಿರುವ ನಿತೇಶ್ ರಾಣಾ ಈ ಪಂದ್ಯದಲ್ಲಿ ಕಣಕ್ಕಿಳಿಯುವ ಮೂಲಕ ಈ ಬಾರಿಯ ಟೂರ್ನಿಯಲ್ಲಿ ಮೊದಲ ಪಂದ್ಯ ಆಡುವ ನಿರೀಕ್ಷೆಯಲ್ಲಿದ್ದಾರೆ. ಸ್ಯಾಮ್ ಕರನ್ (ನಾಯಕ), ಪ್ರಭ್‌ಸಿಮ್ರಾನ್ ಸಿಂಗ್, ರಿಲೀ ರೋಸೊವ್, ಲಿಯಾಮ್ ಲಿವಿಂಗ್ ಸ್ಟೋನ್, ಶಶಾಂಕ್ ಸಿಂಗ್, ಜಿತೇಶ್ ಶರ್ಮಾ (ವಿಕೆ), ಅಶುತೋಷ್ ಶರ್ಮಾ, ಹರ್‌ಪ್ರೀತ್ ಬ್ರಾರ್, ಹರ್ಷಲ್ ಪಟೇಲ್, ಕಗಿಸೊ ರಬಾಡ, ಅರ್ಶ್‌ದೀಪ್ ಸಿಂಗ್.ಫಿಲಿಪ್ ಸಾಲ್ಟ್, ಸುನಿಲ್ ನರೈನ್, ಆಂಗ್ಕ್ರಿಶ್ ರಘುವಂಶಿ, ಶ್ರೇಯಸ್ ಅಯ್ಯರ್ (ನಾಯಕ), ವೆಂಕಟೇಶ್ ಅಯ್ಯರ್, ಆಂಡ್ರೆ ರಸೆಲ್, ರಿಂಕು ಸಿಂಗ್, ರಮಣದೀಪ್ ಸಿಂಗ್, ಮಿಚೆಲ್ ಸ್ಟಾರ್ಕ್, ವರುಣ್ ಚಕ್ರವರ್ತಿ, ಹರ್ಷಿತ್ ರಾಣಾ.

# ಹೆಣ್ಣು ಮಗುವಿನ ಸಮೇತ ಆಡಲು ಹೋಗುತ್ತಿದ್ದ ಮಹಿಳಾ ಕ್ರಿಕೆಟರ್ ನಿವೃತ್ತಿ

ಪಾಕಿಸ್ತಾನ ಮಹಿಳಾ ಕ್ರಿಕೆಟ್ ತಂಡದ ಅತ್ಯಂತ ಪ್ರತಿಭಾವಂತರಲ್ಲಿ ಒಬ್ಬರಾಗಿದ್ದ ಬಿಸ್ಮಾ ಮರೂಫ್ 17 ವರ್ಷಗಳ ವೃತ್ತಿಜೀವನದ ನಂತರ ಅಂತರರಾಷ್ಟ್ರೀಯ ಕ್ರಿಕೆಟ್‌ನಿಂದ ನಿವೃತ್ತಿ ಘೋಷಿಸಿದ್ದಾರೆ. ಏಕದಿನ ಮತ್ತು ಟಿ20 ಪಂದ್ಯಗಳಲ್ಲಿ ಪಾಕಿಸ್ತಾನದ ಪ್ರಮುಖ ರನ್ ಸ್ಕೋರರ್ ಆಗಿ ಮರೂಫ್ ತಮ್ಮ ವೃತ್ತಿಜೀವನವನ್ನು ಕೊನೆಗೊಳಿಸಿದ್ದಾರೆ. ಮದುವೆಯಾಗಿ ಪುಟಾಣಿ ಮಗು ಇದ್ದ ಹೊರತಾಗಿಯೂ ಕ್ರಿಕೆಟ್ ಆಟವನ್ನು ಮುಂದುವರಿಸಿದ್ದ ಅವರು ಪ್ರಶಂಸೆಗೆ ಪಾತ್ರರಾಗಿದ್ದರು. ಮಗುವಿನ ಸಮೇತವೇ ಅವರು ವಿದೇಶಗಳಿಗೆ ಆಡಲು ಹೋಗುವ ಮೂಲಕ ಜನಪ್ರಿಯತೆ ಗಳಿಸಿಕೊಂಡಿದ್ದರು.

ಮರೂಫ್ ಅವರ ಕ್ರಿಕೆಟ್ ಪ್ರಯಾಣವು 2006ರಲ್ಲಿ ಪ್ರಾರಂಭವಾಗಿದೆ. ಜೈಪುರದಲ್ಲಿ ಅವರು ಭಾರತ ತಂಡದ ವಿರುದ್ಧ ಪಾದಾರ್ಪಣೆ ಮಾಡಿದ್ದರು. ಅಂದಿನಿಂದ, ಅವರು ಕ್ರಿಕೆಟ್ ಇತಿಹಾಸದ ಪುಸ್ತಕಗಳಲ್ಲಿ ತಮ್ಮ ಹೆಸರನ್ನು ನೋಂದಾಯಿಸಿದ್ದಾರೆ. ಬಿಸ್ಮಾ 136 ಏಕದಿನ ಪಂದ್ಯಗಳಲ್ಲಿ 29.55 ಸರಾಸರಿಯಲ್ಲಿ 3369 ರನ್ ಗಳಿಸಿದ್ದಾರೆ, 21 ಅರ್ಧಶತಕಗಳು ಮತ್ತು 99 ಗರಿಷ್ಠ ಸ್ಕೋರ್. 140 ಟಿ20 ಪಂದ್ಯಗಳಲ್ಲಿ 27.55ರ ಸರಾಸರಿಯಲ್ಲಿ 12 ಅರ್ಧಶತಕಗಳು ಸೇರಿದಂತೆ 2893 ರನ್ ಗಳಿಸಿದ್ದಾರೆ. ಅವರು 96 ಪಂದ್ಯಗಳು, 62 ಟಿ 20 ಮತ್ತು 34 ಏಕದಿನ ಪಂದ್ಯಗಳನ್ನು ಆಡಿದ್ದಾರೆ. ಅವರು 32 ಏಕದಿನ ಪಂದ್ಯಗಳಲ್ಲಿ 16 ಗೆಲುವು ಮತ್ತು 27 ಟಿ 20 ಐ ಗೆಲುವುಗಳಿಗೆ ತಂಡವನ್ನು ಮುನ್ನಡೆಸಿದ್ದಾರೆ.




''ನಾನು ಹೆಚ್ಚು ಪ್ರೀತಿಸುವ ಆಟದಿಂದ ನಿವೃತ್ತಿ ಹೊಂದಲು ನಿರ್ಧರಿಸಿದ್ದೇನೆ. ಇದು ಸವಾಲುಗಳು, ಗೆಲುವುಗಳು ಮತ್ತು ಮರೆಯಲಾಗದ ನೆನಪುಗಳಿಂದ ತುಂಬಿದ ನಂಬಲಾಗದ ಪ್ರಯಾಣವಾಗಿದೆ. ಆರಂಭದಿಂದ ಇಂದಿನವರೆಗೆ ನನ್ನ ಕ್ರಿಕೆಟ್ ಪ್ರಯಾಣದುದ್ದಕ್ಕೂ ನನ್ನನ್ನು ಬೆಂಬಲಿಸಿದ ನನ್ನ ಕುಟುಂಬಕ್ಕೆ ನನ್ನ ಕೃತಜ್ಞತೆಯನ್ನು ವ್ಯಕ್ತಪಡಿಸಲು ಬಯಸುತ್ತೇನೆ, ''ಎಂದು ಅವರು ಏಪ್ರಿಲ್ 26 ರಂದು ಪಿಸಿಬಿ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

ತನ್ನ ಮೇಲೆ ನಂಬಿಕೆ ಇಟ್ಟಿದ್ದಕ್ಕಾಗಿ ಮತ್ತು ತಂಡವನ್ನು ಮುನ್ನಡೆಸುವ ಜವಾಬ್ದಾರಿಯನ್ನು ನೀಡಿದ್ದಕ್ಕಾಗಿ ಪಿಸಿಬಿಗೆ ಧನ್ಯವಾದ ಅರ್ಪಿಸಿದ್ದಾರೆ. ''ನನ್ನ ಮೇಲೆ ನಂಬಿಕೆ ಇಟ್ಟಿದ್ದಕ್ಕಾಗಿ ಮತ್ತು ನನ್ನ ಪ್ರತಿಭೆಯನ್ನು ಪ್ರದರ್ಶಿಸಲು ವೇದಿಕೆಯನ್ನು ಒದಗಿಸಿದ್ದಕ್ಕಾಗಿ ಪಾಕಿಸ್ತಾನ ಕ್ರಿಕೆಟ್ ಮಂಡಳಿಗೆ ನನ್ನ ಧನ್ಯವಾದಗಳನ್ನು ಅರ್ಪಿಸಲು ಬಯಸುತ್ತೇನೆ. ಪಿಸಿಬಿಯ ಬೆಂಬಲವು ಅಮೂಲ್ಯವಾಗಿದೆ, ವಿಶೇಷವಾಗಿ ನನಗಾಗಿ ಮೊದಲ ಪೋಷಕರ ನೀತಿಯನ್ನು ಜಾರಿಗೆ ತರುವಲ್ಲಿ, ಇದು ತಾಯಿಯಾಗಿರುವಾಗ ನನ್ನ ದೇಶವನ್ನು ಅತ್ಯುನ್ನತ ಮಟ್ಟದಲ್ಲಿ ಪ್ರತಿನಿಧಿಸಲು ನನಗೆ ಅನುವು ಮಾಡಿಕೊಟ್ಟಿತು.

''ಕೊನೆಯದಾಗಿ, ನನಗೆ ಕುಟುಂಬದಂತೆ ಆಗಿರುವ ನನ್ನ ಸಹ ಆಟಗಾರರಿಗೆ ನಾನು ಧನ್ಯವಾದ ಹೇಳಲು ಬಯಸುತ್ತೇನೆ.

# ಎಗ್ ಫ್ರೀಜ್ ಮಾಡಿ ಮಗು ಪ್ಲ್ಯಾನ್‌ನಲ್ಲಿದ್ದಾರೆ 'ಸೀತಾರಾಮಂ' ನಟಿ




ಬಾಲಿವುಡ್ ಬೆಡಗಿ ಮೃಣಾಲ್ ಠಾಕೂರ್ ತೆಲುಗಿನ ಬ್ಯಾಕ್ ಟು ಬ್ಯಾಕ್ ಸಿನಿಮಾ ಸಕ್ಸಸ್ ಖುಷಿಯಲ್ಲಿದ್ದಾರೆ. ಸದ್ಯ ಸಂದರ್ಶನವೊಂದರಲ್ಲಿ ಎಗ್ ಫ್ರೀಜ್ ಮಾಡಿ ಮಗು ಮಾಡಿಕೊಳ್ಳುವ ಪ್ಲ್ಯಾನ್‌ನಲ್ಲಿ ಇರೋದಾಗಿ ನಟಿ ಮಾತನಾಡಿದ್ದಾರೆ. ನಟಿಯ ಹೇಳಿಕೆ ಈಗ ಸೆನ್ಸೇಷನ್ ಕ್ರಿಯೇಟ್ ಮಾಡಿದೆ. ವೃತ್ತಿ ಜೀವನದಲ್ಲಿ ಬ್ಯುಸಿ ಇರುವುದರಿಂದ ಅನೇಕ ಸೆಲೆಬ್ರಿಟಿಗಳು ಮಗುವನ್ನು ಪಡೆಯಲು ತಡ ಮಾಡುತ್ತಾರೆ. ಆ ಸಂದರ್ಭದಲ್ಲಿ ಎಗ್ ಫ್ರೀಜಿಂಗ್ ತಂತ್ರಜ್ಞಾನದ ಮೊರೆ ಹೋಗುತ್ತಾರೆ. 'ಸೀತಾ ರಾಮಂ' ನಟಿ ಮೃಣಾಲ್ ಕೂಡ ರೀತಿಯ ಪ್ಲ್ಯಾನ್ ಮಾಡಿದ್ದಾರೆ. ಸಂದರ್ಶ ನದಲ್ಲಿ ತಮ್ಮ ಮದುವೆ ನಂತರದ ಯೋಚನೆಯ ಬಗ್ಗೆ ಬಾಯಿಬ್ಬಿಟ್ಟಿದ್ದಾರೆ. ಸಂಬಂಧಗಳು ಕಷ್ಟ. ನನ್ನ ಕೆಲಸದ ಸ್ವರೂಪ ಅವರಿಗೆ ಅರ್ಥ ಆಗಬೇಕು. ಕೂಡ ನನ್ನ ಎಗ್‌ಗಳನ್ನು ಫ್ರೀಜ್ ಮಾಡುವ ವಿಚಾರದ ಬಗ್ಗೆ ಆಲೋಚಿಸುತ್ತಿದ್ದೇನೆ ಎಂದು ಹೇಳಿದ್ದಾರೆ. ಒಂದೊಮ್ಮೆ ಶೀಘ್ರವೇ ಮದುವೆ ಆದರೂ ಸದ್ಯಕ್ಕಂತೂ ಮಗು ಪಡೆಯೋ ಆಲೋಚನೆ ತಮಗಿಲ್ಲ ಎಂಬುದನ್ನು ಅವರು ಪರೋಕ್ಷವಾಗಿ ಹೇಳಿದ್ದಾರೆ.ಈ ವೇಳೆ, ಟ್ರೋಲ್‌ಗಳ ಕುಟುಂಬ ನೀಡಿದ ಬೆಂಬಲದ ಬಗ್ಗೆಯೂ ಮೃಣಾಲ್ ಮಾತನಾಡಿದ್ದಾರೆ. ನಮ್ಮ ಕುಟುಂಬದವರನ್ನು ಬಿಟ್ಟು ಬೇರಾರೂ ಆ ಬಗ್ಗೆ ಕೇರ್ ಮಾಡುವುದಿಲ್ಲ ಎಂದಿದ್ದಾರೆ.ಸೀತಾರಾಮಂ, ಹಾಯ್ ನಾನಾ, ಫ್ಯಾಮಿಲಿ ಸ್ಟಾರ್ ಸಿನಿಮಾದ ನಂತರ ಬಾಲಿವುಡ್ ಖ್ಯಾತ ನಿರ್ದೇಶಕ ಕಮ್ ನಿರ್ಮಾಪಕ ಸಂಜಯ್ ಲೀಲಾ ಬನ್ಸಾಲಿ ಸಿನಿಮಾದಲ್ಲಿ ಹೀರೋಯಿನ್ ಆಗಿ ಆಯ್ಕೆ ಆಗಿದ್ದಾರೆ.

# 'ಕಲ್ಕಿ' ಸಿನಿಮಾದ ಕಲಾವಿದರ ಸಂಭಾವನೆಯೇ 250 ಕೋಟಿ ರೂಪಾಯಿ

ಬಹುಭಾಷೆಯಲ್ಲಿ ಮೂಡಿ ಬರುತ್ತಿರುವ ಕಲ್ಕಿ ಸಿನಿಮಾ ಒಂದಿಲ್ಲೊಂದು ಕಾರಣದಿಂದಾಗಿ ಸುದ್ದಿ ಆಗುತ್ತಲೇ ಇದೆ. ಈ ಬಾರಿ ಕಲಾವಿದರಿಗೆ ನೀಡಿರುವ ಸಂಭಾವನೆಯಿಂದಾಗಿ ಸಖತ್ ಸದ್ದು ಮಾಡುತ್ತಿದೆ. ಮೂಲಗಳ ಪ್ರಕಾರ ಕಲಾವಿದರಿಗಾಗಿಯೇ ಒಟ್ಟು 250 ಕೋಟಿ ರೂಪಾಯಿಗೂ ಅಧಿಕ ಖರ್ಚು ಮಾಡಿದ್ದಾರಂತೆ ನಿರ್ಮಾಪಕರು. ಅದರಲ್ಲಿ ಅತೀ ಹೆಚ್ಚು ಸಂಭಾವನೆ ಪಡೆದಿರೋದು ಚಿತ್ರ ನಾಯಕ ಪ್ರಭಾಸ್.

### ಹೆಚ್ಚು ಸಂಭಾವನೆ ಚಿತ್ರ

ಪ್ರಭಾಸ್ ಈ ಸಿನಿಮಾಗಾಗಿ ಬರೋಬ್ಬರಿ 150 ಕೋಟಿ ರೂಪಾಯಿ ಸಂಭಾವನೆ ಪಡೆದಿದ್ದಾರಂತೆ. ದೀಪಿಕಾ ಪಡುಕೋಣೆ, ಅಮಿತಾಭ್ ಬಚ್ಚನ್ ಮತ್ತು ಕಮಲ್ ಹಾಸನ್ ತಲಾ 20 ಕೋಟಿ ರೂಪಾಯಿ ಸಂಭಾವನೆ ಜೇಬಿಗಿಳಿಸಿಕೊಂಡಿದ್ದಾರೆ. ನಾಯಕಿ ದಿಶಾ ಪಟಾಣಿ 5 ಕೋಟಿ ರೂಪಾಯಿಗೆ ತೃಪ್ತಿ ಪಟ್ಟಿದ್ದಾರೆ. ಲಕ್ಷದಲ್ಲಿ ಸಂಭಾವನೆ ಪಡೆಯುವ ಅನೇಕ ನಟರೂ ಈ ಸಿನಿಮಾದಲ್ಲಿ ಇದ್ದಾರೆ. ನಾಗ್ ಅಶ್ವಿನ್ ನಿರ್ದೇಶನದಲ್ಲಿ ಮೂಡಿಬರುತ್ತಿರುವ ಬಹುಕೋಟಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಕಲ್ಕಿ ಸಿನಿಮಾ, ಈಗಾಗಲೇ ಶೂಟಿಂಗ್ ನಲ್ಲಿ ಬಿಜಿಯಾಗಿದೆ. ಈ ನಡುವೆ ಈಗ ಸೋಷಿಯಲ್ ಮೀಡಿಯಾದಲ್ಲಿ ಈ ಸಿನಿಮಾ ಟ್ರೆಂಡಿಂಗ್‌ನಲ್ಲಿಯೂ ಮುಂದುವರಿದಿದೆ. ಅದಕ್ಕೆ ಕಾರಣ ರಿಲೀಸ್ ಆದ ಅಮಿತಾಭ್ ಬಚ್ಚನ್ ಅವರ ಹೊಸ ಲುಕ್. ಹೌದು, ಕಳೆದ ವರ್ಷಅಮಿತಾಭ್ ಅವರ ಬರ್ತ್‌ಡೇ ದಿನದಂದು ಕಲ್ಕಿ ಚಿತ್ರದಲ್ಲಿನ ಅವರ ಲುಕ್ ಹೇಗಿರಲಿದೆ ಎಂಬ ಸಣ್ಣ ಝಲಕ್ ರಿಲೀಸ್ ಆಗಿತ್ತು. ಅದಾದ ಬಳಿಕ ಚಿತ್ರದಲ್ಲಿ ಅಮಿತಾಭ್ ಪಾತ್ರ ಹೇಗಿರಲಿದೆ ಎಂಬ ಕುತೂಹಲವೂ ಹೆಚ್ಚಾಗಿತ್ತು. ಇದೀಗ ಆ ಕೌತುಕವನ್ನು ತಣಿದಿದೆ. ಅಂದರೆ, ಕಲ್ಕಿ ಚಿತ್ರದಲ್ಲಿನ ಅಮಿತಾಭ್ ಬಚ್ಚನ್ ಪಾತ್ರದ ಝಲಕ್ ಹೊರಬಿದ್ದಿದೆ.

ತೆಲುಗು, ತಮಿಳು, ಕನ್ನಡ, ಮಲಯಾಳಂ ಮತ್ತು ಹಿಂದಿ ಭಾಷೆಯಲ್ಲಿ ಕಲ್ಕಿ ಚಿತ್ರ ನಿರ್ಮಾಣವಾಗುತ್ತಿದೆ.

ಈ ಚಿತ್ರದಲ್ಲಿ ಅಶ್ವತ್ಥಾಮನಾಗಿ ಅಮಿತಾಭ್ ಬಚ್ಚನ್ ಕಾಣಿಸಿಕೊಳ್ಳಲಿದ್ದಾರೆ. ಒಂದು ನಿಮಿಷದ ಝಲಕ್‌ನಲ್ಲಿ ಎಲ್ಲಾ ಭಾಷೆಯನ್ನೂ ಬೆರೆಸಿ ಟೀಸರ್ ಬಿಡುಗಡೆ ಮಾಡಲಾಗಿದೆ. ಪುಟಾಣಿಯೊಬ್ಬ ನೀವ್ಯಾರು, ನಿಮ್ಮ ಜತೆ ನಾನು ಯಾವ ಭಾಷೆಯಲ್ಲಿ ಮಾತನಾಡಲಿ ಎಂದೆಲ್ಲ ಪ್ರಶ್ನೆ ಮಾಡಿದ್ದಾನೆ. ಆಗ, ಈಗ ನನ್ನ ಸಮಯ ಬಂದಿದೆ. ನನ್ನ ಕೊನೆಯ ಯುದ್ಧಕ್ಕೆ ಸಮಯ ಬಂದಿದೆ. ನಾನು ದ್ರೋಣಾಚಾರ್ಯರ ಮಗ ಅಶ್ವತ್ಥಾಮ ಎಂದು ತಮ್ಮನ್ನು ಪರಿಚಯಿಸಿಕೊಂಡಿದ್ದಾರೆ ಅಮಿತಾಭ್ ಬಚ್ಚನ್. ಈ ಲುಕ್‌ಗೆ ಫ್ಯಾನ್ಸ್ ಫಿದಾ ಆಗಿದ್ದಾರೆ.



# ವಿಜಯ್ ದೇವರಕೊಂಡ ಚಿತ್ರದ ಜೊತೆ ಜೊತೆಗೆ ಒಟಿಟಿ ಬರಲಿದೆ ಟಿಲ್ಲು ಸ್ಕ್ವೇರ್

ಇದೇ ಮಾರ್ಚ್ 29ರಂದು ವಿಶ್ವದ್ಯಾಂತ ಬಿಡುಗಡೆ ಆಗಿ ಭಾರೀ ಹವಾ ಕ್ರಿಯೇಟ್ ಮಾಡಿದ್ದ ಸಿದ್ದು ಜೊನ್ನಲಗಡ್ಡ ಹಾಗೂ ಅನುಪಮಾ ಪರಮೇಶ್ವರ್ ಕಾಂಬಿನೇಷನ್ ನ ಟಿಲ್ಲು ಸ್ಕ್ವೇರ್ ಸಿನಿಮಾ ಏಪ್ರಿಲ್ 26ರಂದು ಒಟಿಟಿಗೆ ಬರಲಿದೆ. ಅಂದೇ ವಿಜಯ್ ದೇವರಕೊಂಡ ಅಭಿನಯದ ದಿ ಫ್ಯಾಮಿಲಿ ಸ್ಟಾರ್ ಕೂಡ ಒಟಿಟಿಯಲ್ಲಿ ಇರಲಿದೆ.

ನಾನಾ ಕಾರಣಗಳಿಂದಾಗಿ ಟಿಲ್ಲು ಸ್ಕ್ವೇರ್ ಸುದ್ದಿಯಲ್ಲಿತ್ತು. ಕನ್ನಡವೂ ಸೇರಿದಂತೆ ಹಲವಾರು ಚಿತ್ರಗಳಲ್ಲಿ ನಟಿಸಿರುವ ನಟಿ ಅನುಪಮಾ ಪರಮೇಶ್ವರನ್ ಟಿಲ್ಲು ಸ್ಕ್ವೇರ್ ಸಿನಿಮಾದಲ್ಲಿ ಹೊಸ ಬಗೆಯ ಪಾತ್ರ ಮಾಡಿದ್ದರು. ಸಿದ್ದು ಜೊನ್ನಲಗಡ್ಡ ಜೊತೆಯಾಗಿ ನಟಿಸಿರುವ ಅನುಪಮಾ ಅಭಿಮಾನಿಗಳಿಗೆ ಮತ್ತೇರಿಸುವಂತ ದೃಶ್ಯದಲ್ಲಿ ಕಾಣಿಸಿಕೊಂಡಿದ್ದರು.ಬೋಲ್ಡ್ ಪಾತ್ರಗಳಲ್ಲಿ ಮಾಡಲ್ಲ ಅಂತಿದ್ದ ಈ ನಟಿ ಟಿಲ್ಲು ಸ್ಕ್ವೇರ್ ಸಿನಿಮಾದಲ್ಲಿ ಬೋಲ್ಡ್ ಆಗಿ ನಟಿಸಿದ್ದರು. ಜೊತೆಗೆ ಲಿಪ್ ಲಾಕ್ ಕೂಡ ಮಾಡಿದ್ದರು. ಈ ಹಿಂದೆ ರೌಡಿ ಬಾಯ್ಸ್ ಸಿನಿಮಾದಲ್ಲಿ ಈ ರೀತಿಯ ದೃಶ್ಯಗಳಲ್ಲಿ ಕಾಣಿಸಿಕೊಂಡಿದ್ದರೂ, ಅಭಿಮಾನಿಗಳಿಗೆ ಅಷ್ಟೇನೂ ಅವು ಮತ್ತೇರಿಸಿರಲಿಲ್ಲ.

ಟಿಲ್ಲು ಸ್ಕ್ವೇರ್ ಸ್ವೀಕೆಲ್ ಸಿನಿಮಾ. ಈ ಹಿಂದೆ 2022ರಲ್ಲಿ ಬಿಡುಗಡೆಯಾಗಿದ್ದ ಡಿಜೆ ಟಿಲ್ಲು ಸಿನಿಮಾದ ಮುಂದುವರೆದ ಭಾಗ ಇದಾಗಿತ್ತು. ಟಿಲ್ಲು ಸ್ಕ್ವೇರ್ ಸಿನಿಮಾದ ಟ್ರೈಲರ್ ರಿಲೀಸ್ ಆಗಿ, ಅನುಪಮಾ ಅಚ್ಚರಿ ಎನ್ನುವಂತೆ ಬೋಲ್ಡ್ ಸ್ಟೆಪ್ ಇಟ್ಟಿದ್ದರು. ಈ ಸಿನಿಮಾವನ್ನು ಮಲ್ಲಿಕ್ ರಾಮ್ ನಿರ್ದೇಶನ ಮಾಡಿದ್ದು, ಸೂರ್ಯದೇವರ ನಾಗ್ ವಂಶಿ ನಿರ್ಮಾಣ ಮಾಡಿದ್ದಾರೆ.



ಸಿನಿ ವಾಹಿನಿ

# ಧನುಷ್ ಜೊತೆಗಿನ ಕುಬೇರ ಚಿತ್ರದಲ್ಲಿ ರಶ್ಮಿಕಾ ಮಂದಣ್ಣ ಲುಕ್ ರಿವೀಲ್

ಕೊಡಗಿನ ಬೆಡಗಿ ರಶ್ಮಿಕಾ ಮಂದಣ್ಣ 'ಪುಷ್ಪ 2' ಸೇರಿದಂತೆ ಹಲವು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ತಮಿಳಿನ ಸ್ಟಾರ್ ನಟ ಧನುಷ್‌ಗೆ ಜೋಡಿಯಾಗಿರುವ ರಶ್ಮಿಕಾ ಮಂದಣ್ಣ ಸದ್ಯ ಕುಬೇರ ಸಿನಿಮಾದ ಮೊದಲ ಹಂತದ ಶೂಟಿಂಗ್ ಮುಗಿಸಿದ್ದಾರೆ. ಚಿತ್ರದಲ್ಲಿ ಧನುಷ್ ಮತ್ತು ರಶ್ಮಿಕಾ ಪಾತ್ರದ ಲುಕ್ ಹೇಗಿರಲಿದೆ ಎಂಬುದು ಈಗ ರಿವೀಲ್ ಆಗಿದೆ. 'ಲವ್ ಸ್ಟೋರಿ' ಖ್ಯಾತಿಯ ಡೈರೆಕ್ಟರ್ ಶೇಖರ್ ಕುಬೇರ ಚಿತ್ರಕ್ಕೆ ನಿರ್ದೇಶನ ಮಾಡಿದ್ದಾರೆ. ಸದ್ಯ ಮೊದಲ ಹಂತದ ಶೂಟಿಂಗ್ ಮುಂಬೈನಲ್ಲಿ ಚಿತ್ರೀಕರಿಸಲಾಗಿತ್ತು. ಇದೀಗ ಚಿತ್ರದ ಫಸ್ಟ್ ಶೆಡ್ಯೂಲ್ ಮುಗಿಸಿದೆ ಚಿತ್ರತಂಡ. ಶೂಟಿಂಗ್ ಮುಗಿಸಿ ಹೊರಬರುವಾಗ ಪಾಪರಾಜಿಗಳ ಕಣ್ಣಿಗೆ ರಶ್ಮಿಕಾ ಮತ್ತು ಧನುಷ್ ಕಾಣಿಸಿಕೊಂಡಿದ್ದಾರೆ. ಧನುಷ್ ಕಂದು ಬಣ್ಣದ ಸೂಟ್‌ನಲ್ಲಿ ಕಾಣಿಸಿಕೊಂಡಿದ್ರೆ, ರಶ್ಮಿಕಾ ಸಿಂಪಲ್ ಚೂಡಿದಾರ್‌ನಲ್ಲಿ ಕಾಣಿಸಿಕೊಂಡಿದ್ದಾರೆ. ಕ್ಯಾಮರಾ ಕಾಣುತ್ತಿದ್ದಂತೆ ಮುದ್ದಾಗಿ ನಟಿ ಸ್ಮೈಲ್ ಮಾಡಿದ್ದಾರೆ. ಈ ಮೂಲಕ ಕುಬೇರ ಚಿತ್ರದಲ್ಲಿ ಇಬ್ಬರ ಲುಕ್ ಹೇಗಿರಲಿದೆ ಎಂಬುದು ರಿವೀಲ್ ಆಗಿದೆ. 'ಕುಬೇರ' ಸಿನಿಮಾ ತೆಲುಗು ಮತ್ತು ತಮಿಳಿನಲ್ಲಿ ಮೂಡಿ ಬರಲಿದೆ.



# ವಿಜಯ್ ಅಭಿಮಾನಿಗಳಿಗೆ ಶಾಕ್..1

ರಾಜಕೀಯ ಕಾರಣಕ್ಕಾಗಿ ತಮಿಳಿನ ಹೆಸರಾಂತ ನಟ ದಳಪತಿ ವಿಜಯ್ ಶೀಘ್ರದಲ್ಲೇ ಚಿತ್ರರಂಗ ತೊರೆಯಲಿದ್ದಾರೆ ಎನ್ನುವ ಗುಸುಗುಸು ಕೇಳಿ ಬರುತ್ತಿದೆ. ಕೈಯಲ್ಲಿರೋ ಪ್ರಾಜೆಕ್ಟ್ ಮುಗಿದ ತಕ್ಷಣವೇ ಅವರು ರಾಜಕಾರಣದಲ್ಲಿ ಸಕ್ರೀಯರಾಗಿ, ಮುಂದಿನ ಚುನಾವಣೆಗೆ ಸಿದ್ಧತೆ ಮಾಡಿಕೊಳ್ಳಲಿದ್ದಾರೆ ಎನ್ನುವುದು ಅವರ ಆಪ್ತರ ಮಾಹಿತಿ. ವಿಜಯ್ ಒಪ್ಪಿಕೊಂಡಂತೆ ಅವರ 69ನೇ ಸಿನಿಮಾವೇ ಕೊನೆಯ ಚಿತ್ರ ಎಂದು ಹೇಳಲಾಗುತ್ತಿದೆ.

ಈ ಸಿನಿಮಾವನ್ನು ವೆಟ್ರಿ ಮಾರನ್ ನಿರ್ದೇಶನ ಮಾಡಲಿದ್ದಾರೆ ಎಂದು ಘೋಷಣೆಯೂ ಆಗಿದೆ. ಆದರೆ, ಈ ವಿಚಾರದಲ್ಲಿ ವೆಟ್ರಿ ಮಾರನ್ ಶಾಕಿಂಗ್ ಸಂಗತಿಯೊಂದನ್ನು ಹೇಳಿಕೊಂಡಿದ್ದಾರೆ. ಈ ಮಾತು ವಿಜಯ್ ಅಭಿಮಾನಿಗಳಿಗೆ ಶಾಕ್ ನೀಡಿದೆ. ವೆಟ್ರಿಮಾರನ್ ಮತ್ತು ವಿಜಯ್ ಕಾಂಬಿನೇಷನ್ ಚಿತ್ರವೆಂದರೆ ಕಾಯುವಿಕೆ ಸಹಜ. ಮತ್ತೊಂದು ಅದ್ಭುತ ಸಿನಿಮಾ ತೆರೆಯ ಮೇಲೆ ಬರಲಿದೆ ಎಂದೇ ಅಭಿಮಾನಿಗಳ ಆಸೆ ಆಗಿತ್ತು. ಆದರೆ, ಈ ಸಿನಿಮಾ ತೆರೆ ಕಾಣೋದು ಅನುಮಾನ ಎಂದು ವೆಟ್ರಿ ಹೇಳಿಕೊಂಡಿದ್ದಾರೆ. ಈ ಮಾತು ಅಭಿಮಾನಿಗಳಲ್ಲಿ ನಿರಾಸೆ ತಂದಿದ್ದು ಸುಳ್ಳಲ್ಲ. ಯಾಕೆ ಅವರು ಹಾಗೆ ಹೇಳಿದರು ಎನ್ನುವುದನ್ನು ಮುಂದಿನ ದಿನಗಳಲ್ಲಿ ಅವರೇ ಸ್ಪಷ್ಟನೆ ನೀಡಬಹುದು. ವಿಜಯ್ 69ನೇ ಚಿತ್ರಕ್ಕೆ ಸಮಂತಾ ನಾಯಕಿಯಾಗಿ ನಟಿಸುತ್ತಾರೆ ಎಂದು ಹೇಳಲಾಗಿತ್ತು. ಈ ಚಿತ್ರಕ್ಕೆ ಖ್ಯಾತ ನಿರ್ಮಾಣ ಸಂಸ್ಥೆಯೊಂದು ನಿರ್ಮಾಣದ ಹೊಣೆ ಹೊತ್ತಿದೆ ಎನ್ನುವ ಸುದ್ದಿಯೂ ಇತ್ತು. ಆದರೆ, ಸಿನಿಮಾನೇ ಬರೋದಿಲ್ಲ ಎನ್ನುವ ಸುದ್ದಿ ಆಘಾತ ಮೂಡಿಸಿದೆ.




**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**